22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 148 | ನವದೆಹಲಿ | ಬೆಲೆ ₹10 | ನವಂಬರ್ 28, 2024 ಗುರುವಾರ

## ಒಳಪುಟಗಳಲ್ಲಿ

ದೆಹಲಿ ಕರ್ನಾಟಕ ಸಂಘದಲ್ಲಿ ವಿಜೃಂಭಣೆಯ ಕರ್ನಾಟಕ ರಾಜ್ಯೋತ್ಸವ ಸಂಭ್ರಮ

- ಪು.4

## ಪ್ರತಿಧ್ವನಿಸಿದ ಅದಾನಿ ಹಗರಣ, ಸಂಭಲ್ ಹಿಂಸಾಚಾರ: ಕಲಾಪ ಮುಂದೂಡಿಕೆ

**ನವದೆಹಲಿ, ನ.27: ಅದಾನಿ ಲಂಚ-ವಂಚನೆ ಪ್ರಕರಣ, ಉತ್ತರ ಪ್ರದೇಶದ ಸಂಭಲ್‌ನಲ್ಲಿ ಇತ್ತೀಚೆಗೆ ನಡೆದ ಹಿಂಸಾಚಾರ ಮತ್ತು ಇತರ ವಿಷಯಗಳ ಕುರಿತು ಚರ್ಚೆಗೆ ಆಗ್ರಹಿಸಿ ಪ್ರತಿಪಕ್ಷಗಳ ಸದಸ್ಯರ ಪ್ರತಿಭಟನೆ ಹಿನ್ನೆಲೆ, ಸಂಸತ್ತಿನ ಉಭಯ ಸದನಗಳ ಕಲಾಪಗಳು ಮುಂದೂಡಲಾಗಿದೆ.**



ಬುಧವಾರ ಲೋಕಸಭೆ ಕಲಾಪ ಆರಂಭಗೊಳ್ಳುತ್ತಿದ್ದಂತೆ ಕಾಂಗ್ರೆಸ್ ಸೇರಿದಂತೆ ಪ್ರತಿಪಕ್ಷಗಳ ಸದಸ್ಯರು ವಿವಿಧ ವಿಷಯಗಳ ಚರ್ಚೆಗೆ ಒತ್ತಾಯಿಸಿದರು. ಸದನದ ಬಾವಿಗಿಳಿದು ಪ್ರತಿಭಟಿಸಿದರು. ಈ ಹಿನ್ನೆಲೆ ಸ್ಪೀಕರ್ ಕಲಾಪವನ್ನು ಮಧ್ಯಾಹ್ನ 12 ಗಂಟೆಯವರೆಗೆ ಮುಂದೂಡಿದರು. ಬಳಿಕ ಪುನರಾರಂಭಗೊಂಡಾಗ ಪ್ರತಿಪಕ್ಷ ಸದಸ್ಯರು ಪ್ರತಿಭಟನೆ ಮುಂದುವರೆಸಿದರು. ಈ ಹಿನ್ನೆಲೆ ಸ್ಪೀಕರ್ ಕಲಾಪವನ್ನು ನಾಳೆಗೆ ಮುಂದೂಡಿದರು. ಪ್ರತಿಪಕ್ಷಗಳ ಪ್ರತಿಭಟನೆ ವೇಳೆ, ಸ್ಪೀಕರ್ ಓಂ ಬಿರ್ಲಾ ಅವರು ಪ್ರಶ್ನೋತ್ತರ ಅವಧಿಗೆ ಅವಕಾಶ ಕೊಡಿ. ನಂತರ ಪ್ರಸಕ್ತ ವಿಷಯಗಳ ಬಗ್ಗೆ ಚರ್ಚೆ ನಡೆಸಬಹುದು ಎಂದರು. ಆದರೆ, ಪ್ರತಿಪಕ್ಷ ಸದಸ್ಯರು ಮೊದಲು ಚರ್ಚೆಗೆ ಪಟ್ಟುಹಿಡಿದರು. ಗದ್ದಲದ ನಡುವೆ ಒಂದು ಪ್ರಶ್ನೆಯನ್ನು ಕೇಳಲಾಯಿತು. 6 ನಿಮಿಷಗಳ ಕಲಾಪದ ಬಳಿಕ, ಸದನವನ್ನು ಮುಂದೂಡಲಾಯಿತು.

**ರಾಜ್ಯಸಭೆ ಕಲಾಪ ನಾಳೆಗೆ ಮುಂದೂಡಿಕೆ:** ಪ್ರತಿಪಕ್ಷಗಳ ಸದಸ್ಯರು ಲೋಕಸಭೆಯಲ್ಲಿ ಎತ್ತಿದ ಪ್ರಶ್ನೆಗಳನ್ನೇ ರಾಜ್ಯಸಭೆಯಲ್ಲೂ ಪ್ರಸ್ತಾಪಿಸಿ ಚರ್ಚೆಗೆ ಪಟ್ಟು ಹಿಡಿದವು. ಈ ಹಿನ್ನೆಲೆ ಆರಂಭದಲ್ಲಿ ಬೆಳಿಗ್ಗೆ 11.30ರವರೆಗೆ ಕಲಾಪ ಮುಂದೂಡಲಾಯಿತು. ಕಲಾಪ ಪುನರಾರಂಭಗೊಂಡಾಗ ಪ್ರತಿಪಕ್ಷ ಸದಸ್ಯರು ಮತ್ತೆ ಪ್ರತಿಭಟಿಸಿದರು. ಈ ಹಿನ್ನೆಲೆ ರಾಜ್ಯಸಭೆಯ ಸಭಾಪತಿ ಜಗದೀಪ್ ಧನಕರ್ ಕಲಾಪವನ್ನು ಗುರುವಾರಕ್ಕೆ ಮುಂದೂಡಿದರು. ಕಲಾಪ ಆರಂಭಗೊಂಡಾಗ, ಪಟ್ಟಿ ಮಾಡಲಾದ ವಿಷಯಗಳನ್ನು ಸದನದಲ್ಲಿ ಮಂಡಿಸಿದ ಕೂಡಲೇ, ಅಧ್ಯಕ್ಷ ಜಗದೀಪ್ ಧನಕರ್ ಅವರು, ನಿಗದಿತ ಚರ್ಚೆಗಳನ್ನು ನಿಲ್ಲಿಸಿ ಅದಾನಿ ಸಮೂಹ, ಸಂಭಾಲ್ ಹಿಂಸಾಚಾರ ಮತ್ತು ದೆಹಲಿಯಲ್ಲಿ ಹೆಚ್ಚುತ್ತಿರುವ ಅಪರಾಧ ಘಟನೆಗಳಿಗೆ ಸಂಬಂಧಿಸಿದ ಸಮಸ್ಯೆಗಳ ಕುರಿತು ಚರ್ಚೆ ನಡೆಸುವಂತೆ ಕೋರಿ ನಿಯಮ 267 ರ ಅಡಿಯಲ್ಲಿ 18 ನೋಟಿಸ್‌ಗಳನ್ನು ಸ್ವೀಕರಿಸಲಾಗಿದೆ ಎಂದು ತಿಳಿಸಿದರು. ಆದರೆ, ಅವರು ನೋಟಿಸ್‌ಗಳನ್ನು ಸ್ವೀಕರಿಸಲಿಲ್ಲ. ಇದು ಕಾಂಗ್ರೆಸ್ ಸೇರಿದಂತೆ ಪ್ರತಿಪಕ್ಷಗಳ ಸದಸ್ಯರ ಪ್ರತಿಭಟನೆಗೆ ಕಾರಣವಾಯಿತು. ನಂತರ ಸಭಾಪತಿ ಕಲಾಪವನ್ನು ಮುಂದೂಡಿದರು.

## ರಾಜ್ಯದ ನೀರಾವರಿ ಯೋಜನೆಗೆ ಅನುಮತಿ ಕೋರಿದ ಡಿಸಿಎಂ



ನವದೆಹಲಿ, ನ.27: ರಾಜ್ಯದ ನೀರಾವರಿ ಯೋಜನೆಗಳಿಗೆ ಅನುಮತಿ ಕೊಡಿಸುವಂತೆ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದರು. ದೆಹಲಿಯಲ್ಲಿ ಪ್ರಹ್ಲಾದ್ ಜೋಷಿ ಅವರನ್ನು ಬುಧವಾರ ಭೇಟಿ ಮಾಡಿದ ಶಿವಕುಮಾರ್ ಅವರು ಜನ್ಮದಿನದ ಶುಭಾಶಯ ಕೋರಿ, ರಾಜ್ಯದ ಪ್ರಮುಖ ನೀರಾವರಿ ಯೋಜನೆಗಳ ಬಗ್ಗೆ ಚರ್ಚೆ ನಡೆಸಿದರು. ಮೇಕೆದಾಟು ಯೋಜನೆಯು ಸುಸ್ಥಿರ ಕುಡಿಯುವ ನೀರಿನ ಯೋಜನೆಯಾಗಿದ್ದು, ಈ ಯೋಜನೆ ಜಾರಿ ಅಗತ್ಯವಾಗಿದೆ. ಕೃಷ್ಣಾ ವಿವಾದಿತ ನೀರು ನ್ಯಾಯಾಧಿಕರಣ 2ರ ತೀರ್ಪಿನ ಅನ್ವಯ ನಮ್ಮ ಪಾಲಿನ ನೀರನ್ನು ಬಳಸಿಕೊಳ್ಳಲು ಗೇಜೆಟ್ ನೋಟಿಫಿಕೇಷನ್ ಹೊರಡಿಸಬೇಕು. ಇದರ ಜತೆಗೆ ಕೃಷ್ಣಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯಾಗಿ ಘೋಷಣೆ ಮಾಡಬೇಕು ಎಂದು ಮನವಿ ಮಾಡಿದರು. ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯಾಗಿ ಪರಿಗಣಿಸಿ ನೀರಾವರಿ ಸೌಲಭ್ಯ ಹೆಚ್ಚಿಸಿ ರೈತರಿಗೆ ನೀರು ಒದಗಿಸಿಕೊಡಬೇಕು. ಇನ್ನು ಮಹದಾಯಿ ಯೋಜನೆಗೆ ಅಗತ್ಯ ಅನುಮತಿ ಕೊಡಿಸಿ ಈ ಭಾಗದಲ್ಲಿರುವ ನೀರಿನ ಅಭಾವ ನೀಗಿಸಬೇಕಿದೆ. ಈ ಪ್ರಮುಖ ಯೋಜನೆಗಳ ಜಾರಿಗೆ ಕೇಂದ್ರ ಸರ್ಕಾರವು ರಾಜ್ಯಕ್ಕೆ ಅಗತ್ಯ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

## ಕಳಸಾ-ಬಂಡೂರಿ ಯೋಜನೆಗೆ ಅನುಮತಿ ನೀಡಿ: ಕೇಂದ್ರ ಸಚಿವರಿಗೆ ಡಿಸಿಎಂ ಮನವಿ

**ನವದೆಹಲಿ, ನ.27:** ಕಳಸಾ ಬಂಡೂರಿ ನಾಲೆ ಯೋಜನೆ ವಿಚಾರದಲ್ಲಿ ಕೇಂದ್ರ ಸಚಿವರು ಮಧ್ಯಪ್ರವೇಶ ಮಾಡಿ ಅಗತ್ಯವಿರುವ ಅರಣ್ಯ ಹಾಗೂ ವನ್ಯಜೀವಿ ಮಂಡಳಿ ಅನುಮತಿ ಕೊಡಿಸಬೇಕು ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಕೇಂದ್ರ ಅರಣ್ಯ ಸಚಿವ ಭೂಪೇಂದ್ರ ಯಾದವ್ ಅವರಿಗೆ ಮನವಿ ಮಾಡಿದ್ದಾರೆ.

ನವದೆಹಲಿಯಲ್ಲಿ ಕೇಂದ್ರ ಸಚಿವರನ್ನು ಬುಧವಾರ ಭೇಟಿಮಾಡಿದ ಜಲಸಂಪನ್ಮೂಲ ಸಚಿವರೂ ಆಗಿರುವ ಶಿವಕುಮಾರ್ ಅವರು ಈ ಬಗ್ಗೆ ಮನವಿ ಪತ್ರ ಸಲ್ಲಿಸಿದರು.

ದಿನಾಂಕ 09-10-2024ರಂದು ರಾಷ್ಟ್ರೀಯ ವನ್ಯಜೀವಿ ಮಂಡಳಿಯ ಸ್ಥಾಯಿ ಸಮಿತಿಯು ತನ್ನ 80ನೇ ಸಭೆಯಲ್ಲಿ ಕರ್ನಾಟಕದ ಅರ್ಜಿ ವಿಚಾರಣೆಯನ್ನು ಮುಂದೂಡಿ ಈ ವಿಚಾರವಾಗಿ ಇರುವ ಕಾನೂನು ಸಮಸ್ಯೆಗಳ ಬಗ್ಗೆ ಸ್ಪಷ್ಟನೆ ನೀಡುವಂತೆ ರಾಜ್ಯ ಸರ್ಕಾರಕ್ಕೆ ಸೂಚಿಸಿತ್ತು. ರಾಜ್ಯವು ದಿನಾಂಕ 10-10-2024 ಹಾಗೂ 16-10-2024 ದಿನಾಂಕದಂದು ಅಗತ್ಯ ಸ್ಪಷ್ಟನೆಯನ್ನು ಪತ್ರದ ಮೂಲಕ ಸಲ್ಲಿಕೆ ಮಾಡಲಾಗಿದೆ. ಕಳಸಾ ನಾಲೆ ಯೋಜನೆಗೆ ಕಾಳಿ ಹಾಗೂ ಸಹ್ಯಾದ್ರಿ ಹುಲಿ ಸಂರಕ್ಷಣಾ ಪ್ರದೇಶದಲ್ಲಿ 10.6852 ಹೆಕ್ಟೇರ್ ಅರಣ್ಯ ಭೂಮಿ ಅಗತ್ಯವಿದೆ. ಬೆಳಗಾವಿ ಜಿಲ್ಲೆಯ ಖಾನಾಪುರ ತಾಲ್ಲೂಕಿನ ಕಣಕುಂಬಿ ಸುತ್ತಲಿನ ಹಳ್ಳಿಗಳ ಪ್ರದೇಶವನ್ನು ಇದು ಹೊಂದಿದೆ. ಇದರಲ್ಲಿ ಜಾಕ್‌ವೆಲ್ ಸಹಿತ ಪಂಪ್‌ಹೌಸ್, ವಿದ್ಯುತ್ ಉಪಕೇಂದ್ರಗಳನ್ನು ನಿರ್ಮಾಣ ಮಾಡಲಾಗುವುದು.

**ಸ್ಥಾಯಿ ಸಮಿತಿಯ ಸಭೆ: ಚರ್ಚೆಯಾದ ಅಂಶಗಳು**



ನವದೆಹಲಿಯಲ್ಲಿ ಕರ್ನಾಟಕದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕೇಂದ್ರ ಅರಣ್ಯ ಸಚಿವ ಭೂಪೇಂದ್ರ ಯಾದವ್ ಅವರನ್ನು ಭೇಟಿ ಮಾಡಿದರು.

ಗೋವಾದ ವನ್ಯಜೀವಿ ಮಂಡಳಿ ಮುಖ್ಯಸ್ಥರು ವನ್ಯಜೀವಿ ಸಂರಕ್ಷಣಾ ಕಾಯ್ದೆ 1972 ಸೆಕ್ಷನ್ 29 ಅನ್ನು ಪ್ರಸ್ತಾಪಿಸಿ ಈ ಯೋಜನೆ ಕಾಮಗಾರಿಗೆ ಆಕ್ಷೇಪ ವ್ಯಕ್ತಪಡಿಸಿದ್ದರು. ಇದಕ್ಕೆ ಪ್ರತಿಯಾಗಿ ಕರ್ನಾಟಕ ರಾಜ್ಯವು ಸುಪ್ರೀಂ ಕೋರ್ಟ್ ಮುಂದೆ ಸೂಕ್ತ ದಾಖಲೆಗಳನ್ನು ಮಂಡಿಸಿದೆ.

ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರ ತಜ್ಞರ ಸಮಿತಿ ರಚಿಸಿತ್ತು. ಈ ತಂಡ ಯೋಜನೆ ಕಾಮಗಾರಿ ಸ್ಥಳಕ್ಕೆ ಭೇಟಿನೀಡಿ ತನ್ನ ವರದಿ ಸಲ್ಲಿಸಿದೆ. ಈ ವರದಿಯಲ್ಲಿ ಪ್ರಾಧಿಕಾರವು ಮಹದಾಯಿ ನೀರು ವಿವಾದ ನ್ಯಾಯಾಧೀಕರಣ ತೀರ್ಪಿನ ಬಗ್ಗೆ ಗೋವಾ, ಮಹಾರಾಷ್ಟ್ರ ಹಾಗೂ ಕರ್ನಾಟಕ ನಡುವಣ ಕಾನೂನು ಸಮರ ಸುಪ್ರೀಂ ಕೋರ್ಟ್‌ನಲ್ಲಿದೆ ಎಂದು ತಿಳಿಸಿತ್ತು.

ಈ ಎಲ್ಲಾ ವಿಚಾರವಾಗಿ ಕರ್ನಾಟಕ ಸರ್ಕಾರದ ಅರಣ್ಯ ಮತ್ತು ಪರಿಸರ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು ಸ್ಪಷ್ಟನೆ ನೀಡಿದ್ದು, ಸುಪ್ರೀಂ ಕೋರ್ಟ್ ಈ ಯೋಜನೆ ಜಾರಿ ವಿಚಾರದಲ್ಲಿ ಕರ್ನಾಟಕ ರಾಜ್ಯಕ್ಕೆ ಯಾವುದೇ ಆಕ್ಷೇಪ ವ್ಯಕ್ತಪಡಿಸಿಲ್ಲ. ಇದರ ಜತೆಗೆ ಕಾನೂನು ಪ್ರಕಾರವಾಗಿ ಕೇಂದ್ರ ಸರ್ಕಾರದ ಎಲ್ಲಾ ಅನುಮತಿಗಳು ಸಿಕ್ಕ ನಂತರವಷ್ಟೇ ಈ ಯೋಜನೆ ಕಾಮಗಾರಿ ಕೈಗೊಳ್ಳಲು ನಿರ್ಧರಿಸಿದೆ ಎಂದು ತಿಳಿಸಿದರು.

ಈ ಯೋಜನೆಯು ಅಭಯಾರಣ್ಯದ ಭಾಗವಲ್ಲದಿದ್ದರೂ ಹುಲಿ ಕಾರಿಡಾರ್ ಪ್ರದೇಶ ವ್ಯಾಪ್ತಿಯಲ್ಲಿ ಬರುತ್ತದೆ. ಈ ಯೋಜನೆಯಲ್ಲಿ ನಿರ್ಮಿಸಲಾಗುವ ಜಲ ಮೂಲಗಳು ವನ್ಯಜೀವಿಗೆ ಅಗತ್ಯ ನೀರು ಪೂರೈಸಲಿದೆ. ಹೀಗಾಗಿ ಈ ಯೋಜನೆಗೆ ಅನುಮತಿ ನೀಡಬೇಕು ಎಂದು ಕರ್ನಾಟಕದ ವನ್ಯಜೀವಿ ಸಂರಕ್ಷಣಾ ಮಂಡಳಿಯು ಸ್ಥಾಯಿ ಸಮಿತಿಗೆ ಮಾಹಿತಿ ನೀಡಿತು.


ಈ ಎಲ್ಲಾ ವಿಚಾರಗಳ ಬಗ್ಗೆ ಚರ್ಚೆ ನಡೆಸಿದ ಬಳಿಕ ಸ್ಥಾಯಿ ಸಮಿತಿಯು ಕಾನೂನು ವಿಚಾರಗಳ ಬಗ್ಗೆ ಸ್ಪಷ್ಟನೆ ಕೋರಿತ್ತು. ಜತೆಗೆ ಪ್ರಾಧಿಕಾರದ ಅಭಿಪ್ರಾಯ ಸಲ್ಲಿಕೆಗೆ ಸೂಚಿಸಿತ್ತು. ಸ್ಥಾಯಿ ಸಮಿತಿಯ ಈ ಎಲ್ಲ ಮಾರ್ಗದರ್ಶನವನ್ನು ಕರ್ನಾಟಕ ರಾಜ್ಯ ಪಾಲಿಸಿದೆ. ಆದರೂ ಈ ಯೋಜನೆಗೆ ಅನುಮತಿ ನೀಡುವುದು ವಿಳಂಬವಾಗುತ್ತಿದೆ.

ಹೀಗಾಗಿ, ಕೇಂದ್ರ ಅರಣ್ಯ ಸಚಿವರಾದ ತಾವು ಈ ವಿಚಾರದಲ್ಲಿ ಮಧ್ಯಪ್ರವೇಶ ಮಾಡಿ ಕರ್ನಾಟಕದ ಲಿಖಿತ ಮನವಿ ಬಗ್ಗೆ ಪ್ರಾಧಿಕಾರದ ಅಭಿಪ್ರಾಯವನ್ನು ಪರಿಶೀಲಿಸಿ ಆದಷ್ಟು ಬೇಗ ಯೋಜನೆಗೆ ಅನುಮತಿ ನೀಡಬೇಕು. ಕಳಸಾ ಯೋಜನೆಗೆ ಅಗತ್ಯವಿರುವ ಅನುಮತಿ ನೀಡಲು ಪ್ರಾದೇಶಿಕ ಅಧಿಕಾರ ಸಮಿತಿ, ಸಮಗ್ರ ಪ್ರಾದೇಶಿಕ ಕಚೇರಿ, ಪರಿಸರ ಮತ್ತು ಅರಣ್ಯ ಇಲಾಖೆಯು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಲಾಗಿದೆ.

ಕರ್ನಾಟಕ ರಾಜ್ಯವು ಕಳಸಾ ನಾಲೆ ಯೋಜನೆಗೆ ಅಗತ್ಯವಿರುವ ಅರಣ್ಯ ಪ್ರದೇಶ ಭೂಮಿಯ ಪ್ರಮಾಣವನ್ನು 258 ಹೆಕ್ಟೇರ್ ಪ್ರದೇಶದಿಂದ ಕೇವಲ 26.9255 ಹೆಕ್ಟೇರ್ ಪ್ರದೇಶಕ್ಕೆ ಇಳಿಸಿದೆ.

ಬಂಡೂರಿ ನಾಲೆ ಯೋಜನೆಗೆ ಅಗತ್ಯವಿರುವ ಅರಣ್ಯ ಪ್ರದೇಶ ಭೂಮಿಯನ್ನು 243 ಹೆಕ್ಟೇರ್‌ನಿಂದ ಕೇವಲ 28.4427 ಹೆಕ್ಟೇರ್ ಪ್ರದೇಶಗಳಿಗೆ ಇಳಿಸಿದೆ. ಆಮೂಲಕ ಪರಿಸರ ಸಂರಕ್ಷಣೆಯಲ್ಲಿ ರಾಜ್ಯ ತನ್ನ ಬದ್ಧತೆ ಪ್ರದರ್ಶಿಸಿದೆ. ರಾಜ್ಯದ ಹಿತಾಸಕ್ತಿ ಕಾಪಾಡಲು ಕೇಂದ್ರ ಸರ್ಕಾರವು ವಿಳಂಬ ಮಾಡದೇ ಈ ಯೋಜನೆಗೆ ಅನುಮತಿ ನೀಡಬೇಕು ಎಂದು ಪತ್ರದಲ್ಲಿ ಮನವಿ ಮಾಡಲಾಗಿದೆ.

## ಅಮೆರಿಕ ಮಧ್ಯಸ್ಥಿಕೆಯಲ್ಲಿ ಇಸ್ರೇಲ್-ಹಿಜ್ಬುಲ್ಲಾ ನಡುವೆ ಕದನ ವಿರಾಮ ಘೋಷಣೆ



**ಟೆಲ್ ಅವಿವ್, ನ.27:** 2023ರ ಅಕ್ಟೋಬರ್‌ನಿಂದ ನಡೆಯುತ್ತಿರುವ ಇಸ್ರೇಲ್-ಲೆಬನಾನ್ ಯುದ್ಧದ ನಡುವೆ ಮಹತ್ವದ ಬೆಳವಣಿಗೆಯೊಂದು ನಡೆದಿದೆ. ಇಸ್ರೇಲ್‌ನ ಭದ್ರತಾ ಸಂಪುಟ 10-1 ಮತಗಳಿಂದ ಅಮೆರಿಕ ಮತ್ತು ಫ್ರಾನ್ಸ್ ಮಧ್ಯಸ್ಥಿಕೆಯಲ್ಲಿ ಕದನ ವಿರಾಮ ಒಪ್ಪಂದವನ್ನು ಅನುಮೋದಿಸಿದೆ. ಭಾರತೀಯ ಕಾಲಮಾನದ ಪ್ರಕಾರ ಗುರುವಾರ ಬೆಳಗ್ಗೆ 7:30 ರಿಂದ ಕದನ ವಿರಾಮ ಜಾರಿಗೆ ಬರಲಿದೆ. ಕದನ ವಿರಾಮ ಒಪ್ಪಂದದ ನಂತರ, ಅಮೆರಿಕ ಅಧ್ಯಕ್ಷ ಜೋ ಬೈಡನ್ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಮತ್ತು ಲೆಬನಾನ್‌ನ ಪ್ರಧಾನಿ ನಜೀಬ್ ಮಿಕಾಟಿ ಶಾಂತಿ ಸುವ್ಯವಸ್ಥೆ ಸ್ಥಾಪಿಸುವ ಕುರಿತು ಮಾತುಕತೆ ಆಡಿದ್ದಾರೆ.

ಇದು 13 ತಿಂಗಳಿನಿಂದ ನಡೆಯುತ್ತಿರುವ ಸಂಘರ್ಷವನ್ನು ಕೊನೆಗೊಳಿಸಲು ದಾರಿ ಮಾಡಿಕೊಟ್ಟಿದೆ ಎಂದು ಇಸ್ರೇಲಿ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಕಚೇರಿ ಮಂಗಳವಾರ ಪ್ರಕಟಿಸಿದೆ. ಆದ್ರೆ ಗಾಝಾದಲ್ಲಿ ಹೋರಾಟ ಮುಂದುವರಿಯುತ್ತದೆ ಎಂದು ಹೇಳಿದೆ. ಇಸ್ರೇಲ್‌ನ ಅನುಮೋದನೆಯ ನಂತರ, ಫ್ರೆಂಚ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಮತ್ತು ಅವರ US ಅಧ್ಯಕ್ಷ ಜೋ ಬಿಡೆನ್ ಜಂಟಿ ಹೇಳಿಕೆಯನ್ನು ನೀಡಿದರು. ಈ ಸಂಘರ್ಷವು ಹಿಂಸಾಚಾರದ ಮತ್ತೊಂದು ಚಕ್ರವಾಗೋದನ್ನು ತಡೆಯಲು ನಿರ್ಧರಿಸಿದ್ದೇವೆ. ಲೆಬನಾನ್‌ನ ಸಶಸ್ತ್ರ ಪಡೆಗಳನ್ನು ನವೀಕರಿಸಲು ಹಾಗೂ ಆರ್ಥಿಕ ಅಭಿವೃದ್ಧಿಯನ್ನು ಬೆಂಬಲಿಸುವ ಪ್ರಯತ್ನಕ್ಕಾಗಿ ಉಭಯ ರಾಷ್ಟ್ರಗಳು ಬದ್ಧವಾಗಿರಬೇಕು ಎಂದು ಹೇಳಿದ್ದಾರೆ.

ಜೋ ಬೈಡನ್ ಮಾತನಾಡಿ, 60 ದಿನಗಳ ಕದನ ವಿರಾಮ ಅವಧಿಯಲ್ಲಿ ಇಸ್ರೇಲ್ ಕ್ರಮೇಣ ತನ್ನ ಪಡೆಗಳನ್ನು ಹಿಂತೆಗೆದುಕೊಳ್ಳುತ್ತದೆ. ಇದೇ ವೇಳೆ ಲೆಬನಾನ್ ಇಸ್ರೇಲ್ ಗಡಿಯಲ್ಲಿರುವ ತನ್ನ ಸೇನೆಯನ್ನು ನಿಯಂತ್ರಿಸುತ್ತದೆ ಎಂದು ಭಾವಿಸುತ್ತೇವೆ. ಕದನ ವಿರಾಮ ಒಪ್ಪಂದದ ಪ್ರಕಾರ ಇಸ್ರೇಲಿ ಪಡೆಗಳು ದಕ್ಷಿಣ ಲೆಬನಾನ್ನಿಂದ ತನ್ನ ಸೇನೆಯನ್ನು ಹಿಂತೆಗೆದುಕೊಳ್ಳಬೇಕು. ಆ ಪ್ರದೇಶದಲ್ಲಿ ಲೆಬನಾನ್ ತನ್ನ ಸೇನೆಯನ್ನು ನಿಯೋಜಿಸಬೇಕು. ಹಿಜ್ಬುಲ್ಲಾ ಮತ್ತು ಇತರ ಯಾವುದೇ ಭಯೋತ್ಪಾದಕ ಸಂಘಟನೆಗಳು ಇಸ್ರೇಲ್‌ನ ಭದ್ರತೆಗೆ ಬೆದರಿಕೆ ಹಾಕಲು ಅನುಮತಿಸುವುದಿಲ್ಲ ಎಂದು ಹೇಳಿದ್ದಾರೆ. ಲೆಬನಾನಿನ ವಿದೇಶಾಂಗ ಸಚಿವ ಅಬ್ದುಲ್ಲಾಬೌ ಹಬೀಬ್ ಮಾತನಾಡಿ, ಇಸ್ರೇಲಿ ಪಡೆಗಳು ತನ್ನ ಸೇನೆಯನ್ನು ಹಿಂತೆಗೆದುಕೊಳ್ಳುತ್ತಿದ್ದಂತೆ, ದಕ್ಷಿಣ ಲೆಬನಾನ್‌ನಲ್ಲಿ ಕನಿಷ್ಠ 5,000 ಸೈನಿಕರನ್ನು ನಿಯೋಜಿಸಲು ತಮ್ಮ ಸೈನ್ಯವು ಸಿದ್ಧವಾಗಿದೆ. ಜೊತೆಗೆ ಇಸ್ರೇಲ್ ದಾಳಿಗಳಿಂದ ನಾಶವಾದ ಮೂಲಸೌಕರ್ಯಗಳನ್ನು ಮರುನಿರ್ಮಾಣ ಮಾಡುವಲ್ಲಿ ಅಮೆರಿಕ ಪಾತ್ರ ವಹಿಸುತ್ತದೆ ಎಂದಿದ್ದಾರೆ. ಕಳೆದ ವರ್ಷ ಅಕ್ಟೋಬರ್ 7ರಂದು ಹಮಾಸ್ ಉಗ್ರರು ಇಸ್ರೇಲ್ ಮೇಲೆ ರಾಕೆಟ್ ದಾಳಿ ನಡೆಸಿದ ನಂತರ ಯುದ್ಧ ಶುರುವಾಗಿತ್ತು. ಈವರೆಗೆ ಯುದ್ಧದಲ್ಲಿ ಲೆಬನಾನ್‌ನಲ್ಲಿ 3,800 ಜನರು ಹತ್ಯೆಗೀಡಾಗಿದ್ದಾರೆ, 16,000 ಮಂದಿ ಗಾಯಗೊಂಡಿದ್ದಾರೆ. ಒಟ್ಟಾರೆ ಎರಡೂ ರಾಷ್ಟ್ರಗಳಿಂದ 43 ಸಾವಿರ ಮಂದಿ ಸಾವನ್ನಪ್ಪಿದ್ದಾರೆ ಎಂದು ವರದಿಯಾಗಿದೆ.



ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ ಮತ್ತು ಇಂಡಿಯಾ ಮೈತ್ರಿಕೂಟದ ಸಂಸದೀಯ ನಾಯಕರು, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ದೆಹಲಿಯ ಗೃಹಕಚೇರಿಯಲ್ಲಿ ಆಯೋಜಿಸಲಾಗಿದ್ದ ಸಭೆಯಲ್ಲಿ ಭಾಗವಹಿಸಿದ್ದರು.

## ಭಾರತ ಬಹುತ್ವದ ದೇಶ: ನಾವೆಲ್ಲಾ ಮೂಲತಃ ಮಾನವರು: ಸಿ.ಎಂ.ಸಿದ್ದರಾಮಯ್ಯ ಬಣ್ಣನೆ

- ಸರ್ವಧರ್ಮಸಮನ್ವಯ ಭಾರತ ಮಣ್ಣಿನ ಗುಣ. ನಮ್ಮ ಪರಂಪರೆ
- ಜಾತಿ-ಧರ್ಮದ ಹೆಸರಲ್ಲಿ ಮನುಷ್ಯರನ್ನು ವಿಭಜಿಸುವವರು ಧರ್ಮದ್ರೋಹಿಗಳು
- ಮನುಷ್ಯ ದ್ವೇಷಿ ಇಂಥಾ ಧರ್ಮದ್ರೋಹಿಗಳ ಬಗ್ಗೆ ಎಚ್ಚರ ಇರಲಿ
- ಶಿಕ್ಷಣಕ್ಕೆ ಕ್ರೈಸ್ತ ಧರ್ಮಗುರುಗಳ ಪಾತ್ರ ದೊಡ್ಡದು ಎಂದ ಸಿಎಂ



**ಬಳ್ಳಾರಿ, ನ.27:** ಮನುಷ್ಯ ದ್ವೇಷಿ ಧರ್ಮದ್ರೋಹಿಗಳ ಬಗ್ಗೆ ಎಚ್ಚರ ಇರಲಿ. ಭಾರತ ಬಹುತ್ವದ ದೇಶ. ಸರ್ವಧರ್ಮ ಸಮನ್ವಯ ಭಾರತ ಮಣ್ಣಿನ ಗುಣ. ಇದನ್ನು ಕಾಪಾಡುವುದೇ ಪ್ರತಿಯೊಬ್ಬ ಭಾರತೀಯರ ಕರ್ತವ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರೆ ನೀಡಿದರು. ಬಳ್ಳಾರಿ ಧರ್ಮಕ್ಷೇತ್ರದ ಅಮೃತ ಮಹೋತ್ಸವ ವನ್ನು ಉದ್ಘಾಟಿಸಿ, ಬಡ ಕುಟುಂಬಗಳಿಗೆ ಧರ್ಮ ಸಂಸ್ಥೆ ನೀಡಿದ ಉಚಿತ ಮನೆಗಳನ್ನು ಹಸ್ತಾಂತರಿಸಿ ಮಾತನಾಡಿದರು. ಯಾವ ಧರ್ಮವೂ ದ್ವೇಷವನ್ನು ಬೋಧನೆ ಮಾಡುವುದಿಲ್ಲ. ಪ್ರೀತಿ, ಮಾನವೀಯತೆ ಎಲ್ಲ ಧರ್ಮಗಳ ಸಾರ ಎಂದರು.

ಧರ್ಮದ ಅರ್ಥ ಬಹಳ ಸರಳ. ಬಸವಣ್ಣನವರು ಹೇಳಿರುವಂತೆ ದಯೆಯೇ ಧರ್ಮದ ಮೂಲ. ದ್ವೇಷ-ಅಸೂಯೆ ಇದ್ದ ಕಡೆ ಧರ್ಮ ಇರುವುದಿಲ್ಲ. ದ್ವೇಷದಿಂದ ಸಮಾಜ ಛಿದ್ರವಾಗುತ್ತದೆ ಎಂದರು. ನಮ್ಮ ಧರ್ಮವನ್ನು ಪಾಲಿಸೋಣ. ಎಲ್ಲ ಧರ್ಮಗಳನ್ನೂ ಸಹಿಸಿಕೊಳ್ಳುವ ಸಹಿಷ್ಣುತೆ ಬೆಳೆಸಿಕೊಳ್ಳಿ ಎನ್ನುವುದೇ ನಮ್ಮ ಸಂವಿಧಾನದ ಮಹಾನ್ ಮೌಲ್ಯ. ಇದನ್ನು ಪಾಲಿಸುವುದೇ ನಾವು ಸ್ವಾಮಿ ವಿವೇಕಾನಂದರಿಗೆ, ಸಂವಿಧಾನಕ್ಕೆ ನೀಡುವ ಮಹೋನ್ನತ ಗೌರವ ಎಂದರು.

(2ನೇ ಪುಟಕ್ಕೆ)

## ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಜೊತೆ ಬಿ.ವೈ.ವಿಜಯೇಂದ್ರ ಸೇರಿದಂತೆ ಸಂಸದರ ನಿಯೋಗ ಭೇಟಿ



**ನವದೆಹಲಿ, ನ.27:** ನವದೆಹಲಿಯಲ್ಲಿ ಸಂಸದ ಬಿ.ವೈ.ರಾಘವೇಂದ್ರ, ವಿಶ್ವೇಶ್ವರ ಹೆಗಡೆ ರೈತರ ಪ್ರತಿನಿಧಿಗಳಾದ ಎಚ್.ಎಸ್. ಮಂಜಪ್ಪ ಸೊರಬ ಹಾಗೂ ಟಿ.ಎಸ್.ಎಸ್. ಅಧ್ಯಕ್ಷರು ಗೋಪಾಲಕೃಷ್ಣ ವೈದ್ಯ ಇವರ ನಿಯೋಗವು ಬುಧವಾರ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರನ್ನು ಭೇಟಿಮಾಡಿ ಅಡಿಕೆ ಬೆಳೆಗಾರರು ಪ್ರಸ್ತುತ ಎದುರುಸತ್ತಿರುವ ಸಮಸ್ಯೆಗಳ ಬಗ್ಗೆ ಕೃಷಿ ಸಚಿವರ ಮನವರಿಕೆಮಾಡಲಾಯಿತು. ಅಡಿಕೆ ಅಕ್ರಮ ಆಮದು ಬರುವ ಅಡಿಕೆಯನ್ನು ತಡೆಯಬೇಕು ಮತ್ತು ಎಫ್.ಎಸ್. ಎಸ್.ಐ. ಅವರು ಈಗ ನಿರ್ದಿಷ್ಟಪಡಿಸಿದ ತೇವಾಂಶ ಪ್ರಮಾಣ 7% ರಿಂದ 11%ಗೆ ಏರಿಸುವಂತೆ ಮನವಿಯನ್ನು ನೀಡಲಾಯಿತು. ಹಾಗೂ ಮೈಲುತುತ್ತದ ಮೇಲೆ ಮೈಲುತುತ್ತದ ಮೇಲೆ ಈಗ ವಿದಿಸುತ್ತಿರುವ ಜಿ.ಎಸ್.ಟಿ.ಯನ್ನು 18% ಇಂದ 5% ಇಳಿಸಲು ಮನವಿ ಸಲ್ಲಿಸಲಾಯಿತು.

ಅಡಿಕೆ ಕೃಷಿಕರು ಎದುರಿಸುತ್ತಿರುವ ಇನ್ನಿತರ ಸಮಸ್ಯೆಗಳ ಕುರಿತು ಕೃಷಿ ಸಚಿವರಿಗೆ ತಿಳಿಸಲಾಯಿತು.

ಈ ಸಂದರ್ಭ ಕೃಷಿ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿ ಅಡಿಕೆ ಬೆಳೆಗಾರರು ಎದುರುಸುತ್ತಿರುವ ಸಮಸ್ಯೆಗಳ ಪರಿಹಾರಕ್ಕಾಗಿ ತೀವ್ರ ಗಮನ ಹರಿಸುವುದಾಗಿ ಭರವಸೆ ನೀಡಿದರು. ನಿಯೋಗದಲ್ಲಿ ಯು.ಟಿ.ರಾಮಪ್ಪ, ಅನಿಲ ಒಡೆಯರ್, ಮಲ್ಲಿಕಾರ್ಜುನ ಸಾಗರ, ಟಿ.ಎಸ್.ಎಸ್. ನಿರ್ದೇಶಕರಾದ ನರಸಿಂಹ ಹೆಗಡೆ, ಪ್ರಕಾಶ ಹೆಗಡೆ ಹುಳಗೋಳ ಹಾಗೂ ಟಿ.ಎಸ್.ಎಸ್.ನ ಪ್ರಧಾನ ವ್ಯವಸ್ಥಾಪಕ ಗಿರೀಶ ಹೆಗಡೆ ಜೊತೆಯಲ್ಲಿದ್ದರು.

## ನಿತ್ಯ ಪಂಚಾಂಗ 28.11.2024 ಗುರುವಾರ



ಶ್ರೀ ಕ್ರೋಧಿ ನಾಮ ಸಂವತ್ಸರ,
ದಕ್ಷಿಣಾಯನ–ಶರದ್ ಋತು,
ಚಾಂದ್ರಮಾನ,
ಆಶ್ವಯುಜ ಕಾರ್ತಿಕ ಬಹುಳ

ತ್ರಯೋದಶಿ, ಚಿತ್ತ ನಕ್ಷತ್ರ,
ಪ್ರದೋಷ್, ಶೃಂಗೇರಿ ಮಹಾಪ್ರದೋಷ್,
ಶರವು-ಕೋಟ ಮಹಾಲಿಂಗೇಶ್ವರ ದೀಪ,
ಸಂತ ಜ್ಞಾನೇಶ್ವರ್ ಪುನ್ಯದಿನ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |



ಬಳ್ಳಾರಿ ಸಂಸದ ಇ.ತುಕಾರಾಂ ಅವರು ಬುಧವಾರ ನವದೆಹಲಿಯ ಕರ್ನಾಟಕ ಭವನದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿದರು. ಮತ್ತೊಬ್ಬ ಸಂಸದ ಶ್ರೇಯಸ್ ಪಟೇಲ್ ಜೊತೆಯಲ್ಲಿದ್ದರು.



ಹಾಸನ ಸಂಸದ ಶ್ರೇಯಸ್ ಪಟೇಲ್ ಅವರು ಬುಧವಾರ ನವದೆಹಲಿಯ ಕರ್ನಾಟಕ ಭವನದಲ್ಲಿ ಸಹಕಾರ ಸಚಿವ ಕೆ.ಎನ್.ರಾಜಣ್ಣ ಅವರನ್ನು ಭೇಟಿ ಮಾಡಿ ಹಾಸನದಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿಗಳ ಕುರಿತು ಚರ್ಚೆ ನಡೆಸಿದರು.


# ಜೈವಿಕ ತಂತ್ರಜ್ಞಾನ ಕ್ಷೇತ್ರಕ್ಕೆ ಭಾರತ ಜೊತೆ ಸ್ವಿಜರ್ಲೆಂಡ್ ಸಹಭಾಗಿತ್ವ

**ಬೆಂಗಳೂರು, ನ, 27:** ಬಯೋಟೆಕ್ ಕ್ಷೇತ್ರದಲ್ಲಿ ಪ್ರಾಬಲ್ಯ ಮೆರೆಯಲು ಭಾರತ ಮತ್ತು ಸ್ವಿಜರ್ಲೆಂಡ್ ಸಹಭಾಗಿತ್ವಕ್ಕೆ ಮುಂದಾಗಿದೆ. ನಾವಿನ್ಯತೆಯಲ್ಲಿ ಪ್ರವರ್ಧಮಾನದಲ್ಲಿರುವ ಅನಾಬಿಯೋ ಟೆಕ್ನಾಲಜೀಸ್ ಕಂಪನಿ, ಸೂಕ್ಷ್ಮಜೀವಿ ಸಂಶೋಧನೆ ಮತ್ತು ರೋಗನಿರ್ಣಯದಲ್ಲಿ ಮುಂಚೂಣಿಯಲ್ಲಿರುವ ಜುರಿಚ್ ಮೂಲದ ಮೈಕ್ರೋಬ್ ಇನ್ವೆಸ್ಟಿಗೇಷನ್ಸ್ ಸ್ವಿಜರ್ಲೆಂಡ್‌ನ್ನು ಸ್ವಾಧೀನಪಡಿಸಿಕೊಳ್ಳುವ ನಿರ್ಣಯ ಕೈಗೊಳ್ಳಲಾಗಿದೆ. ಬೆಂಗಳೂರಿನ ಐಟಿ, ಜೈವಿಕ ತಂತ್ರಜ್ಞಾನ ಮತ್ತು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ನೇತೃತ್ವದಲ್ಲಿ ನಡೆದ ಸಮಾರಂಭದಲ್ಲಿ ಈ ಒಪ್ಪಂದಕ್ಕೆ ಸಹಿ ಹಾಕಲಾಗಿದೆ. ಸಮಾರಂಭದಲ್ಲಿ ಮಾತನಾಡಿದ ಸಚಿವ ಪ್ರಿಯಾಂಕ್ ಖರ್ಗೆ, ಈ ಮಹತ್ವದ ನಿರ್ಣಯ ಕರ್ನಾಟಕದ ಜೈವಿಕ ತಂತ್ರಜ್ಞಾನದ ಅಭಿವೃದ್ಧಿಗೆ ಸಾಕ್ಷಿಯಾಗಿದೆ ಎಂದು ತಿಳಿಸಿದರು. ಬಯೋಟೆಕ್ ಸಂಶೋಧನೆಯನ್ನು ಮುಂದುವರೆಸುವಲ್ಲಿ ಮತ್ತು ಜಾಗತಿಕ ಸವಾಲುಗಳನ್ನು ಎದುರಿಸುವಲ್ಲಿ ಭಾರತ ಮತ್ತು ಸ್ವಿಜರ್ಲೆಂಡ್ ನಡುವಣ ಸಹಯೋಗ ನಿರ್ಣಾಯಕ ಪಾತ್ರ ವಹಿಸಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಮೊದಲನೇ ಪುಟದಿಂದ

# ಭಾರತ ಬಹುತ್ವದ ದೇಶ

ನಾನು ಯಾವುದೇ ಒಂದು ಧರ್ಮವನ್ನು ಓಲೈಸುವುದಿಲ್ಲ. ನಾನು ಹಿಂದುಗಳನ್ನು ಪ್ರೀತಿಸುವಂತೆಯೇ ಕ್ರೈಸ್ತ, ಮುಸ್ಲಿಂ, ಜೈನ, ಬೌದ್ಧ ಧರ್ಮದವರೆಲ್ಲರನ್ನೂ ಪ್ರೀತಿಸುತ್ತೇನೆ ಎಂದು ವಿವರಿಸಿದರು. ಹಿಂದುಳಿದವರು, ಅಲ್ಪಸಂಖ್ಯಾತರು, ಶೂದ್ರರು, ದಲಿತರು ಮತ್ತು ಇಡೀ ಮಹಿಳಾ ಕುಲವನ್ನು ಈ ಜಾತಿ ವ್ಯವಸ್ಥೆ ಶಿಕ್ಷಣದಿಂದ ವಂಚಿತರನ್ನಾಗಿ ಮಾಡಿತ್ತು. ಆದರೆ, ನಮ್ಮ ಸಂವಿಧಾನ ಇವರೆಲ್ಲರನ್ನೂ ಜಾತಿ ಸಂಕೋಲೆಯಿಂದ ಬಿಡುಗಡೆಗೊಳಿಸಿ ಶಿಕ್ಷಣ ಒದಗಿಸಿತು ಎಂದರು. ನಾನು ವೀರಮಕ್ಕಳ ಕುಣಿತಕ್ಕೆ ಸೇರಿ ಶಿಕ್ಷಣದಿಂದ ವಂಚಿತನಾಗಿದ್ದೆ. ಆದರೆ ನಮ್ಮ ಸಂವಿಧಾನ ಮತ್ತು ಒಬ್ಬ ಗುರುಗಳ ಕಾರಣದಿಂದ ನಾನು ನೇರವಾಗಿ ಐದನೇ ತರಗತಿಯಿಂದ ಶಿಕ್ಷಣ ಪಡೆದೆ. ಪರಿಣಾಮ ನಾನು ಎರಡೆರಡು ಬಾರಿ ಮುಖ್ಯಮಂತ್ರಿ ಆದೆ ಎಂದರು. ಬಸವಣ್ಣನವರು 850 ವರ್ಷಗಳ ಹಿಂದೆ ಇವನಾರವ ಎನ್ನಬೇಡಿ, ಇವ ನಮ್ಮವ ಎನ್ನಿ ಎಂದು ಜಾತಿ ವ್ಯವಸ್ಥೆಯನ್ನು ಧಿಕ್ಕರಿಸಿದ್ದರು. ಆದರೆ, ಇವತ್ತಿಗೂ ಜಾತಿ ಹೋಗಿಲ್ಲ ಎಂದರು. ಕ್ರೈಸ್ತ ಧರ್ಮ ಗುರುಗಳು, ಕ್ರೈಸ್ತ ಸಂಸ್ಥೆಗಳು ಎಲ್ಲಾ ಧರ್ಮದ, ಎಲ್ಲಾ ಜಾತಿಯ ಬಡವರಿಗೂ ಶಿಕ್ಷಣ ಕೊಡುತ್ತಿದ್ದಾರೆ. ಇದು ಸಮಾಜಕ್ಕೆ ಬಹಳ ದೊಡ್ಡ ಕೊಡುಗೆ. ವೈಚಾರಿಕ ಮತ್ತು ವೈಜ್ಞಾನಿಕ ಶಿಕ್ಷಣ ಸಿಕ್ಕಾಗ ಮಾತ್ರ ಶಿಕ್ಷಣದ ಉದ್ದೇಶ ಈಡೇರುತ್ತದೆ ಎಂದರು. ದೇವ ಒಂದೇ ನಾಮ ಹಲವು ಎನ್ನುವುದು ಎಲ್ಲರ ನಂಬಿಕೆ. ಕಾಲೇ ಕಂಬ, ದೇಹವೇ ದೇಗುಲ, ಶಿರವೇ ಹೊನ್ನ ಕಲಶ ಎಂದು ಬಸವಾದಿ ಶರಣರು ಹೇಳಿದ್ದು ಈ ಕಾರಣಕ್ಕಾಗಿಯೇ ಎನ್ನುತ್ತಾ, ದೇವರಿಲ್ಲದ ಜಾಗವೇ ಇಲ್ಲ ಎನ್ನುವ ಸಂದೇಶವನ್ನು ಸಾರಿದ ಕನಕದಾಸರ ಬಾಳೆಹಣ್ಣಿನ ಕತೆಯನ್ನು ವಿವರಿಸಿದರು. ಅಂಬೇಡ್ಕರ್ ಅವರು ಸಂವಿಧಾನ ಅಂಗೀಕಾರ ಸಭೆಯಲ್ಲಿ ಮಾಡಿದ ಭಾಷಣವನ್ನು ಪ್ರತಿಯೊಬ್ಬರೂ ಓದಿಕೊಳ್ಳಬೇಕು. ಸಂವಿಧಾನದ ಹಕ್ಕು ಮತ್ತು ಕರ್ತವ್ಯಗಳನ್ನು ಪ್ರತಿಯೊಬ್ಬರೂ ಪಾಲಿಸಬೇಕು ಎಂದು ಕರೆ ನೀಡಿದರು. ಕ್ರೈಸ್ತ ಧರ್ಮದ ಮಹಾನ್ ಧರ್ಮಗುರು ಪೀಟರ್ ಮಚಾಡೋ, ಸಚಿವರಾದ ಕೆ.ಜೆ.ಜಾರ್ಜ್, ಕೆಕೆಆರ್ ಡಿಬಿ ಅಧ್ಯಕ್ಷರಾದ ಅಜಯ್ ಸಿಂಗ್, ಶಸಕರಾದ ಭರತ್ ರೆಡ್ಡಿ, ನಾಗೇಂದ್ರ, ಅನ್ನಪೂರ್ಣ ತುಕಾರಾಮ್ ಸೇರಿ ಹಲವು ಮುಖಂಡರು ಉಪಸ್ಥಿತರಿದ್ದರು.



ಕರ್ನಾಟಕ ರಾಜ್ಯ ಅರಣ್ಯ ಅಭಿವೃದ್ಧಿ ನಿಗಮದಿಂದ ಸರ್ಕಾರಕ್ಕೆ ಲಾಭಾಂಶ ಹೆಚ್ಚಳವಾಗಿದೆ.ಈ ನಿಟ್ಟಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಕರ್ನಾಟಕ ರಾಜ್ಯ ಅರಣ್ಯ ಅಭಿವೃದ್ಧಿ ನಿಗಮದಿಂದ ಸರ್ಕಾರಕ್ಕೆ ಸಲ್ಲಿಸಲಾದ 9 ಕೋಟಿ ರೂಪಾಯಿ ಲಾಭಾಂಶದ ಚೆಕ್ಕನ್ನು, ಹಾಗೂ 2 ಕೋಟಿ ರೂಪಾಯಿ ಮೊತ್ತದ ಸಿಎಂ ಪರಿಹಾರ ನಿಧಿ ಚೆಕ್ ಸ್ವೀಕರಿಸಿದರು.ಈ ಸಂದರ್ಭದಲ್ಲಿ ಅರಣ್ಯ ಸಚಿವ ಈಶ್ವರ್ ಖಂಡ್ರೆ, ಕರ್ನಾಟಕ ರಾಜ್ಯ ಅರಣ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಸವರಾಜ ನೀಲಪ್ಪ ಶಿವಣ್ಣನವರ, ವ್ಯವಸ್ಥಾಪಕ ನಿರ್ದೇಶಕ ಮಹೇಶ್ ಶಿರೂರು ಮತ್ತಿತರರು ಉಪಸ್ಥಿತರಿದ್ದರು.

# ಸಂಪುಟ ಪುನರ್ರಚನೆ: ವರಿಷ್ಠರ ಭೇಟಿಗೆ ದೆಹಲಿ ಸೇರಿದ ಡಿಸಿಎಂ

**ನವದೆಹಲಿ, ನ.27:** ಬೈ ಎಲೆಕ್ಷನ್ ಗೆದ್ದ ಖುಷಿಯಲ್ಲಿರುವ ಸಿಎಂ ಸಿದ್ದರಾಮಯ್ಯಗೆ ಸಂಪುಟ ಪುನರ್ ರಚನೆಯ ತಲೆನೋವು ಶುರುವಾಗಿದೆ. ಉಪಚುನಾವಣೆಯ ಫಲಿತಾಂಶದ ಬೆನ್ನಲ್ಲೇ ಸಂಪುಟ ಪುನರ್‌ರಚನೆಯ ಚರ್ಚೆ ಜೋರಾಗಿದೆ. ಇನ್ನು ಈ ಸಂಬಂಧ ಡಿಕೆ ಶಿವಕುಮಾರ್ ಸುಳಿವು ಕೂಡ ನೀಡಿದ್ದಾರೆ. ಹಲವು ಕಾರ್ಯಕ್ರಮಗಳ ಸಲುವಾಗಿ ಈಗಾಗಲೇ ರಾಜಧಾನಿ ದಿಲ್ಲಿ ತಲುಪಿರುವ ಡಿಸಿಎಂ ಡಿಕೆಶಿ ಇವತ್ತು ಹೈ ಕಮಾಂಡ್ ಜತೆ ಸುದೀರ್ಘ ಚರ್ಚೆ ನಡೆಸುವ ಸಾಧ್ಯತೆ ಇದೆ. ಕಳೆದ 15 ದಿನಗಳಿಂದ ಚರ್ಚೆ ಜೋರಾಗಿದ್ದು, ಸಂಕ್ರಾಂತಿಗೆ ಸಂಪುಟ ಸಂಕ್ರಮಣ ಆಗುವ ಸಾಧ್ಯತೆ ಇದೆ. ಡಿಸಿಎಂ ಡಿಕೆಶಿ ಮಹತ್ವದ ಮಾತುಕತೆ ನಡೆಸಲಿದ್ದಾರೆ.

ಸಿಎಂ ಸಂಪುಟಕ್ಕೆ ಯಾರು ಇನ್ ಯಾರು ಔಟ್ ಎಂಬ ಚರ್ಚೆ ನಡುವೆ ಡಿಸಿಎಂ ಡಿಕೆಶಿ ದಿಲ್ಲಿಯಲ್ಲಿ ಮೊಕ್ಕಾಂ ಹೂಡಿದ್ದು, ಕೈ ಹೈ ಕಮಾಂಡ್ ಜತೆ ಮಹತ್ವದ ಚರ್ಚೆ ನಡೆಸಲಿದ್ದಾರೆ. ಹಲವು ಹಿರಿಯ ಶಾಸಕರು ಈಗಾಗ್ಲೇ ಮಂತ್ರಿಗಿರಿಗೆ ಟವಲ್ ಹಾಕಿದ್ದಾರೆ. ಹೊಸ ಯುವ ಶಾಸಕರು ಸಹ ಲಾಬಿ ಮಾಡಿದ್ದು, ಪ್ರಸ್ತುತ ಇರುವ ಯಾರಿಗೆ ಕೊಕ್ ಅನ್ನೋದೇ ಕುತೂಹಲವಾಗಿದೆ. ಈಗಾಗಲೇ ಕೆಲ ಸಚಿವರ ಕಾರ್ಯವೈಖರಿಯ ಬಗ್ಗೆ ಹೈಕಮಾಂಡ್‌ಗೂ ದೂರು ಹೋಗಿದೆ. ಕೆಲ ಸಚಿವರು ವಿಧಾನಸೌಧಕ್ಕೆ ಬರುತ್ತಿಲ್ಲ, ಸರಿಯಾದ ರೀತಿಯಲ್ಲೂ ಕೆಲಸ ಮಾಡುತ್ತಿಲ್ಲ ಎಂದು ಎಐಸಿಸಿ ನಾಯಕರಿಗೆ ಕಂಪ್ಲೆಂಟ್ ಮಾಡಿದ್ದಾರೆ. ಇದೆಲ್ಲವನ್ನು ಗಮನದಲ್ಲಿಟ್ಟುಕೊಂಡು ಹೈ ಕಮಾಂಡ್ ತೀರ್ಮಾನ ಮಾಡಲಿದೆ. ಆಡಳಿತಕ್ಕೆ ಮತ್ತಷ್ಟು ಚುರುಕು ಮುಟ್ಟಿಸುವುದು, ಎಲ್ಲರಿಗೂ ಅವಕಾಶ ಸಿಗಬೇಕು ಎನ್ನುವ ಕಾರಣ, ಸ್ಥಳೀಯರ ಮಟ್ಟದಲ್ಲಿ ಕಾರ್ಯಕರ್ತರು, ಶಾಸಕರ ಸಂಪರ್ಕ, ಜಿಲ್ಲೆಗಳಲ್ಲಿ ಪಕ್ಷ ಸಂಘಟನೆಗೆ ಮತ್ತಷ್ಟು ಬಲ ತುಂಬುವುದು, ಗ್ಯಾರಂಟಿಗಳ ಸಮರ್ಪಕ ಅನುಷ್ಠಾನಗೊಳಿಸುವುದನ್ನು ಗಮನದಲ್ಲಿಟ್ಟಿಕೊಂಡು ಸಂಪುಟ ಪುನರ್‌ರಚನೆ ಮಾಡಲಾಗುತ್ತಿದೆ.

# ಚಳಿಗಾಲದ ಅಧಿವೇಶನದ ಬಳಿಕ ಸಂಪುಟ ಪುನರ್ ರಚನೆ ಸಾಧ್ಯತೆ: ಸತೀಶ್ ಜಾರಕಿಹೊಳಿ ಸ್ಪಷ್ಟನೆ



**ಬೆಂಗಳೂರು, ನ.27:** ಶೀಘ್ರದಲ್ಲಿಯೇ ರಾಜ್ಯ ಸಚಿವ ಸಂಪುಟ ಪುನಾರಚನೆಯಾಗಲಿದೆ ಎಂಬ ಬಗ್ಗೆ ರಾಜಕೀಯ ವಲಯದಲ್ಲಿ ಭಾರಿ ಚರ್ಚೆ ನಡೆಯುತ್ತಿದೆ. ಬೆಳಗಾವಿಯ ಚಳಿಗಾಲದ ಅಧಿವೇಶನದ ಬಳಿಕ ಸಚಿವ ಸಂಪುಟ ಪುನಾರಚನೆಯಾಗುವ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿದೆ.

ಈ ಬಗ್ಗೆ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ನೀಡಿರುವ ಪ್ರತಿಕ್ರಿಯೆ ಇನ್ನಷ್ಟು ಪುಷ್ಠಿ ನೀಡುವಂತಿದೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ಸತೀಶ್ ಜಾರಕಿಹೊಳಿ, ಸಚಿವ ಸಂಪುಟ ಪುನಾರಚನೆ ಬಗ್ಗೆ ಮಾತು ಕೇಳಿಬರುತ್ತಿವೆ. ಕೆಲವರ ಖಾತೆ ಬದಲಾವಣೆ ಬಗ್ಗೆಯೂ ಚರ್ಚೆಯಿದೆ. ಆದರೆ ಯಾವಾಗ ಮಾಡುತ್ತಾರೆ ಎಂದು ಗೊತ್ತಿಲ್ಲ ಎಂದು ಹೇಳಿದ್ದಾರೆ.

ಸಂಪುಟ ಪುನಾರಚನೆ ಮಾಡಲೂಬಹುದು. ಮಾಡದೆಯೂ ಇರಬಹುದು. ನನಗಂತೂ 2 ವರ್ಷಕ್ಕೆ ಸ್ಥಾನ ಬದಲಾವಣೆ ಎಂದು ಯಾರೂ ಹೇಳಿಲ್ಲ. ಎಲ್ಲವೂ ಹೈಕಮಾಂಡ್ ನಿರ್ಧಾರಕ್ಕೆ ಬಿಟ್ಟಿದ್ದು. ದೆಹಲಿಯಿಂದ ಪಟ್ಟಿ ಬಂದರೆ ಎಲ್ಲರೂ ಬದಲಾಗಬೇಕು. ಪಟ್ಟಿಯಲ್ಲಿ ಹೆಸರು ಬಂದರೆ ಮನೆ ಖಾಲಿ ಮಾಡ್ಕೊಂಡು ಹೋಗಬೇಕು. ದೆಹಲಿ ನಾಯಕರ ತೀರ್ಮಾನವೇ ಎಲ್ಲದಕ್ಕೂ ಅಂತಿಮ ಎಂದು ತಿಳಿಸಿದ್ದಾರೆ.

ಇದೇ ವೇಳೆ ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕಾಗಿ ಲಾಭಿ ವಿಚಾರವಾಗಿ ಪ್ರತಿಕ್ರಿಯಿಸಿದ ಸಚಿವರು, ಯಾವುದೇ ಲಾಭಿಯಿಲ್ಲ. ಕೆಪಿಸಿಸಿ ಅಧ್ಯಕ್ಷ ಸ್ಥಾನದ ಆಯ್ಕೆ ಅಷ್ಟು ಸುಲಭದ ಮಾತಲ್ಲ, ಅದನ್ನು ನಿಭಾಯಿಸುವುದೂ ಸುಲಭವಲ್ಲ. ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಬಗ್ಗೆ ಯಾವುದೇ ಚರ್ಚೆಯಾಗಿಲ್ಲ ಎಂದು ಹೇಳಿದ್ದಾರೆ.

**ಸಚಿವ ಸಂಪುಟ ಪುನರ್ ರಚನೆ ವಿಚಾರ ಸಂಪೂರ್ಣವಾಗಿ ಮುಖ್ಯಮಂತ್ರಿಗಳಿಗೆ ಬಿಟ್ಟಿರುವುದು ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ ಅವರು ಹೇಳಿದರು. ಸದಾಶಿವನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿಗಳು ಕೆಪಿಸಿಸಿ ಅಧ್ಯಕ್ಷರೊಂದಿಗೆ ಸಮಾಲೋಚನೆ ಮಾಡಿಕೊಂಡು ಮಾಡುವ ಪದ್ಧತಿ ಇದೆ. ಹೈಕಮಾಂಡ್ ಜೊತೆ ಚರ್ಚೆ ಮಾಡಿ, ಅವರಿಬ್ಬರೂ ಯಾವ ತೀರ್ಮಾನ ತೆಗೆದುಕೊಳ್ಳುತ್ತಾರೆ ಎಂಬುದು ನನಗೆ ಗೊತ್ತಿಲ್ಲ ಎಂದು ಸ್ಪಷ್ಟಪಡಿಸಿದರು.**

# ಸರಿಯಾಗಿ ನಡೆಯದ ಮೇಲ್ಮನೆ ಕಲಾಪ ಪರಿಷತ್ ಸಭಾಪತಿ ಹೊರಟ್ಟಿ ಬೇಸರ



**ಬೆಂಗಳೂರು, ನ.27:** ನಾನು ಪರಿಷತ್‌ಗೆ ಬಂದಾಗ 9.30ಕ್ಕೆ ಕಲಾಪ ಶುರುವಾಗುತ್ತಿತ್ತು, ರಾತ್ರಿ 8ಕ್ಕೆ ಮುಗಿಯುತ್ತಿತ್ತು. ಈಗ ವಿಧಾನ ಪರಿಷತ್ ಗೌರವ ಕಡಿಮೆ ಆಗುತ್ತಿದೆ. ಕಲಾಪಗಳು ಸರಿಯಾಗಿ ನಡೆಯುತ್ತಿಲ್ಲ. ನಮ್ಮ ದೇಶದಲ್ಲಿ ಎಲ್ಲಿಯವರೆಗೆ ದುಡ್ಡು ಕೊಟ್ಟು ಮತ ಹಾಕಿಸಿಕೊಳ್ಳೋರು, ಮತ ಹಾಕೋರು ಇರುತ್ತಾರೋ ಅಲ್ಲಿಯವರೆಗೂ ಪ್ರಜಾಪ್ರಭುತ್ವ ಸರಿ ಆಗಲ್ಲ. ಇದೆಲ್ಲವನ್ನೂ ಕಾಲವೇ ಸುಧಾರಣೆ ಮಾಡಬೇಕು ಎಂದು ವಿಧಾನ ಪರಿಷತ್ ಸದಸ್ಯರ ಆಯ್ಕೆ ವ್ಯವಸ್ಥೆ ಬಗ್ಗೆ ಬಸವರಾಜ ಹೊರಟ್ಟಿ ಬೇಸರ ಹೊರಹಾಕಿದ್ದಾರೆ. ಕಲಾಪದಲ್ಲಿ ಭಾಗಿಯಾದ ಎಲ್ಲಾ ಶಾಸಕರ ಬಗ್ಗೆ ನನಗೆ ಮಾಹಿತಿ ಗೊತ್ತಿದೆ. ಅವರು ಏನು ಚರ್ಚೆ ಮಾಡಿದ್ದಾರೆ ಎಂಬುದು ನನಗೆ ಗೊತ್ತಿದೆ.

ಎಲ್ಲರಿಗೂ ಗಾಡ್‌ಫಾದರ್ ಇದ್ದಾರೆ. ಆದರೆ, ನನಗೆ ಯಾರೂ ಇಲ್ಲ. ರಾಜಕೀಯಕ್ಕೆ ನನ್ನನ್ನು ಯಾರೂ ಕರೆತಂದಿಲ್ಲ. ನಾನೇ ನನ್ನ ಸ್ವಂತಶಕ್ತಿಯಿಂದ ರಾಜಕೀಯಕ್ಕೆ ಬಂದಿದ್ದೇನೆ ಎಂದು ಬೆಂಗಳೂರಿನಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದ್ದಾರೆ. ರಾಜಕೀಯಕ್ಕೆ ಬಂದಮೇಲೆ ಗಾಡ್‌ಫಾದರ್ ಶುರುವಾದರು. ಈಗೀಗ ವಿಧಾನಪರಿಷತ್ ಗೌರವ ಕಡಿಮೆ ಆಗುತ್ತಿದೆ. ಕಲಾಪಗಳು ಸರಿಯಾಗಿ ನಡೆಯುತ್ತಿಲ್ಲ. ಎಲ್ಲದ್ದಕ್ಕೂ ಬಾವಿಗೆ ಬಂದು ಇಳಿದು ಧಿಕ್ಕಾರ ಕೂಗುವ ಅಭ್ಯಾಸ ಶುರುವಾಗಿದೆ. ನಾವೆಲ್ಲ ಅಜೆಂಡಾ ಇಟ್ಟುಕೊಂಡು ಓದಿಕೊಂಡು ಬರುತ್ತಿದ್ದೆವು. ಈಗ ಪ್ರಶ್ನೆ ಕೇಳಿ ಎರಡು ನಿಮಿಷಕ್ಕೆ ಹೊರಗೆ ಹೋಗುತ್ತಾರೆ ಎಂದು ಹೊರಟ್ಟಿ ಹೇಳಿದ್ದಾರೆ.

ಬೆಂಗಳೂರಿನಲ್ಲಿ ವಿಧಾನಸೌಧದಲ್ಲಿ ನಡೆದ ನಿವೃತ್ತ ವಿಧಾನ ಪರಿಷತ್ತು ಶಾಸಕರ ಬೀಳ್ಕೊಡುಗೆ ಸಮಾರಂಭದಲ್ಲಿ ಬಸವರಾಜ ಹೊರಟ್ಟಿ ಬೇಸರ ಹೊರಹಾಕಿದ್ದಾರೆ.

ಏ.2023ರಿಂದ ಅ.2024ರ ಅವಧಿಯಲ್ಲಿ ನಿವೃತ್ತರಾಗಿರುವ ವಿಧಾನ ಪರಿಷತ್ತಿನ ಶಾಸಕರಿಗೆ ಬೀಳ್ಕೊಡುಗೆ ಸಮಾರಂಭ ನಡೆಯಿತು. ಈಗ ವಿಧಾನ ಪರಿಷತ್ ಅಂದ್ರೆ ಪುರಸಭೆ ಆಗಿದೆ. ನನಗೆ ಇದರ ಬಗ್ಗೆ ಸಾಕಷ್ಟು ನೋವು ಆಗಿದೆ. ರಾಜಕೀಯ ಪುಡಾರಿಗಳು ಯಾರು ಇರ್ತಾರೋ ಅವರನ್ನು ತಂದು ತಂದು ವಿಧಾನ ಪರಿಷತ್‌ಗೆ ಹಾಕ್ತಾರೆ. ಪರಿಷತ್ ನಿರಾಶ್ರಿತರ ಕೇಂದ್ರದ ರೀತಿ ಆಗಿದೆ. ಕಲಾಪಗಳು ಕಾಲಕ್ಕೆ ಸರಿಯಾಗಿ ನಡೆಯಲ್ಲ. ಶಿಕ್ಷಕರ ಮತದಾರ ಕ್ಷೇತ್ರದಿಂದಲೂ ದುಡ್ಡು ತಿಂದು ವೋಟ್ ಹಾಕಿಕೊಂಡು ಬಂದಿದ್ದಾರೆ. ಶಿಕ್ಷಕರು ಸಹ ದುಡ್ಡು ತೆಗೆದುಕೊಂಡು ಮತ ಹಾಕ್ತಾ ಇದ್ದಾರೆ. ಹಾಗಾದರೆ, ರಾಜಕೀಯ ಎಲ್ಲಿಗೆ ಬರುತ್ತಿದೆ ಎಂದು ಹೊರಟ್ಟಿ ಆಕ್ರೋಶ ಹೊರಹಾಕಿದ್ದಾರೆ.



ಕಲಬುರಗಿಯ (ಕರ್ನಾಟಕ) ಶಿಲ್ಪಕಲಾವಿದ ವಿಶ್ವೇಶ್ವರಯ್ಯ ಭೋವಿ ಅವರು ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಮತ್ತು ಮಾಜಿ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ ಅವರನ್ನು ಬುಧವಾರ ನವದೆಹಲಿಯ ಕರ್ನಾಟಕ ಭವನದಲ್ಲಿ ಭೇಟಿಮಾಡಿ ಪೋಲೋಸ್ಟೋನ್‌ನಿಂದ ಕೆತ್ತಿದ ಮೋದಿ ಪ್ರತಿಮೆಯನ್ನು ಅರ್ಪಿಸಿದರು. ಮತ್ತೊಬ್ಬ ಕಲಾವಿದ ಶ್ರೀಮಂತ್ ಓಕಳಿ ಕೂಡ ಜೊತೆಯಲ್ಲಿದ್ದರು.

# ಬಗರ್‌ಹುಕುಂ ಅರ್ಜಿ: ಏಕಪಕ್ಷೀಯ ನಿರ್ಣಯ ಸ್ಪಷ್ಟನೆಗೆ ಮಾಜಿ ಸಚಿವ ಸುನಿಲ್‌ಕುಮಾರ್ ಆಗ್ರಹ

ಬೆಂಗಳೂರು, ನ.27: ಅಕ್ರಮ– ಸಕ್ರಮ ( ಬಗರ್ ಹುಕುಂ ) ಸಮಿತಿಯ ಅವಗಾಹನೆಗೆ ತರದೇ ಕಂದಾಯ ಇಲಾಖೆ ಅಧಿಕಾರಿಗಳು ಲಕ್ಷಾಂತರ ಅರ್ಜಿ ತಿರಸ್ಕರಿಸಿರುವುದು ಸರ್ಕಾರದ ರೈತ ವಿರೋಧಿ ಕ್ರಮ ಎಂದು ಮಾಜಿ ಸಚಿವ ವಿ.ಸುನಿಲ್‌ಕುಮಾರ್ ಆರೋಪಿಸಿದ್ದಾರೆ. ಮಲೆನಾಡು, ಕರಾವಳಿ ಭಾಗಗಳು ಸೇರಿದಂತೆ ರಾಜ್ಯದ ಬಹುತೇಕ ಎಲ್ಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸರ್ಕಾರ ಶಾಸಕರ ಅಧ್ಯಕ್ಷತೆಯಲ್ಲಿ ಈ ಸಮಿತಿ ರಚನೆ ಮಾಡಲಾಗಿದೆ. ಅರ್ಜಿಯ ಅಂಗೀಕಾರ ಅಥವಾ ತಿರಸ್ಕಾರ ಈ ಸಮಿತಿಯಲ್ಲೇ ಆಗಬೇಕು. ಆದರೆ ಅಧಿಕಾರಿಗಳು ಈ ವಿಚಾರವನ್ನು ಸಭೆಯಲ್ಲಿ ಚರ್ಚಿಸದೇ ಏಕಪಕ್ಷೀಯವಾಗಿ ನಿರಾಕರಿಸುತ್ತಿರುವುದು ಸಂವಿಧಾನ ಬಾಹಿರ ಎಂದು ಆರೋಪಿಸಿದ್ದಾರೆ. ಕಂದಾಯ ಸಚಿವ ಕೃಷ್ಣ ಬೈರೇಗೌಡರು ಬಗರ್‌ಹುಕುಂ ವಿಚಾರ ಇತ್ಯರ್ಥಗೊಳಿಸಲು ಬದ್ಧ ಎಂದು ಹೇಳಿಕೆ ಕೊಟ್ಟಿದ್ದಾರೆ. ಆದರೆ ಸಚಿವರ ಸೂಚನೆಯ ಮೇರೆಗೆ ಅರ್ಜಿ ಕೈ ಬಿಡಲಾಗಿದೆ ಎಂದು ಅಧಿಕಾರಿಗಳು ಸಬೂಬು ನೀಡುತ್ತಿದ್ದಾರೆ. ಒಂದು ಲಕ್ಷಕ್ಕೂ ಮೇಲ್ಪಟ್ಟು ಅರ್ಜಿ ಕೈ ಬಿಡುವಂತೆ ಗುರಿ ನಿಗದಿ ಮಾಡಲಾಗಿದೆ ಎಂಬ ಮಾತುಗಳು ಕೇಳು ಬಂದಿದೆ. ಸರ್ಕಾರ ಈ ಬಗ್ಗೆ ತಕ್ಷಣ ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದ್ದಾರೆ. ಹಲವು ವರ್ಷಗಳಿಂದ ಈ ಜಾಗದಲ್ಲಿ ಕೃಷಿ ಚಟುವಟಿಕೆ ನಡೆಸುತ್ತಿರುವ ರೈತರು ಇದರಿಂದ ಕಂಗಾಲಾಗಿದ್ದಾರೆ. ಅರ್ಜಿ ತಿರಸ್ಕರಿಸುವಾಗ ಅಧಿಕಾರಿಗಳು ರೈತರ ಹೇಳಿಕೆಯನ್ನೂ ದಾಖಲಿಸಿಕೊಳ್ಳುತ್ತಿಲ್ಲ. ಇಂಥ ಏಕಪಕ್ಷೀಯ ನಡವಳಿಕೆ ತಕ್ಷಣ ನಿಲ್ಲಿಸಿ ರೈತರಿಗೆ ನ್ಯಾಯ ನೀಡಬೇಕು. ಇಲ್ಲವಾದರೆ ತೀವ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.

# ದೆಹಲಿ ಕನ್ನಡ ಹಿರಿಯ ಮಾಧ್ಯಮಿಕ ಶಾಲೆಯಲ್ಲಿ ರಾಷ್ಟ್ರೀಯ ಕಾನೂನು ದಿನಾಚರಣೆ

**ನವದೆಹಲಿ, ನ.27:** ದೆಹಲಿ ಕನ್ನಡ ಹಿರಿಯ ಮಾಧ್ಯಮಿಕ ಶಾಲೆಯಲ್ಲಿ ಸಂವಿಧಾನ ದಿನವನ್ನು ಆಚರಿಸಲಾಯಿತು. ಸಂವಿಧಾನ ದಿನವನ್ನು ರಾಷ್ಟ್ರೀಯ ಕಾನೂನು ದಿನ' ಎಂದು ಕರೆಯುತ್ತಾರೆ. 1949 ನವೆಂಬರ್ 26ರಂದು ಸಂವಿಧಾನ ಅಂಗೀಕರಿಸಿದ ನೆನಪಿಗಾಗಿ ಪ್ರತಿವರ್ಷ ನವೆಂಬರ್ 26ರಂದು ಸಂವಿಧಾನ ದಿನ ಎಂದು ಆಚರಿಸಲಾಗುತ್ತಿದೆ. ನಮ್ಮ ಸಂವಿಧಾನ ಶಾಶ್ವತ ಮೌಲ್ಯಗಳನ್ನು ಪ್ರತಿಪಾದಿಸುತ್ತದೆ.




ಅದು ನಮ್ಮ ಮಾರ್ಗದರ್ಶಿ ತತ್ವಗಳಾಗಿ ಕಾರ್ಯನಿರ್ವಹಿಸುತ್ತದೆ. ಸಂವಿಧಾನ ಕೇವಲ ವಕೀಲರ ದಾಖಲೆಯಲ್ಲ ಅದರ ಚೈತನ್ಯ ಸದಾ ಬಾಳಿನ ಚೈತನ್ಯವಾಗಿದೆ" ಎಂದ ಡಾ. ಅಂಬೇಡ್ಕರ್ ಅವರ ಮಾತನ್ನು ನೆನಪಿಸಲಾಯಿತು.

ಶಾಲಾ ಪ್ರಾಂಶುಪಾಲರು, ಉಪ ಪ್ರಾಂಶುಪಾಲೆ ಮತ್ತು ಎಲ್ಲಾ ಶಿಕ್ಷಕ ವೃಂದದವರು – ನಾವೆಲ್ಲರೂ ಪ್ರಜಾಪ್ರಭುತ್ವ ರಾಷ್ಟ್ರದ ಮೂಲ ಮೌಲ್ಯಗಳಿಗೆ ಬದ್ಧರಾಗಿದ್ದೇವೆ ಮತ್ತು ನಮ್ಮ ಸಂವಿಧಾನದಲ್ಲಿ ಪ್ರತಿಪಾದಿಸಿರುವ ನ್ಯಾಯ ಸ್ವಾತಂತ್ರ್ಯ ಮತ್ತು ಸಮಾನತೆ ಮತ್ತು ಭ್ರಾತೃತ್ವ ತತ್ವಗಳನ್ನು ಗೌರವಿಸುವ ಪ್ರತಿಜ್ಞೆಯನ್ನು ಪುನರುಚ್ಚರಿಸಿದರು.

ರಾಜ್ಯಶಾಸ್ತ್ರ ಉಪನ್ಯಾಸಕ ನಾಗರಾಜ ಎಂ. ಅವರು ಪ್ರತಿಜ್ಞಾ ವಿಧಿಯನ್ನು ಬೋಧಿಸುವುದರೊಂದಿಗೆ, ಸಂವಿಧಾನ ರಚನಾ ಸಭೆ ನಡೆದು ಬಂದ ನಡಾವಳಿಗಳು, ಸಂವಿಧಾನ ರಚನೆಯಲ್ಲಿ ಕೊಡುಗೆ ನೀಡಿದ ಪ್ರಮುಖ ವ್ಯಕ್ತಿಗಳ ಬಗ್ಗೆ ಹಾಗೂ ಸಂವಿಧಾನ ದಿನದ ಮಹತ್ವದ ಬಗ್ಗೆ ಪ್ರಾಸ್ತಾವಿಕವಾಗಿ ಮಾತನಾಡಿದರು.


ಶಾಲಾ ಪ್ರಾಂಶುಪಾಲ ಪ್ರಶಾಂತ್ ಕುಮಾರ್ ಅವರು ಮಾತನಾಡಿ ಶಾಲೆಯಲ್ಲಿ ಪ್ರತಿವರ್ಷವೂ ಸಂವಿಧಾನ ದಿನವನ್ನು ಅತ್ಯಂತ ಉತ್ಸುಕತೆಯಿಂದ ಆಚರಿಸಿಕೊಂಡು ಬರುತ್ತಿದ್ದೇವೆ.

ಸಂವಿಧಾನ ಆಶಯಗಳನ್ನು ನಾವೆಲ್ಲರೂ ನಮ್ಮೊಳಗೆ ಅಂಗೀಕರಿಸಿ ರಾಷ್ಟ್ರದ ಏಕತೆಗೆ ಬದ್ಧರಾಗಿರಬೇಕು. ಸಂವಿಧಾನ ಮೌಲ್ಯಗಳಾದ ಜಾತ್ಯತೀತತೆ, ಪ್ರಜಾಪ್ರಭುತ್ವ, ಸಾರ್ವಭೌಮತ್ವ, ಸಮಾನತೆ, ಸ್ವಾತಂತ್ರ್ಯ, ಸಾಮಾಜಿಕ ನ್ಯಾಯವನ್ನು ಎತ್ತಿ ಹಿಡಿಯಲು ನಾವೆಲ್ಲರೂ ಒಟ್ಟಿಗೆ ಶ್ರಮಿಸಬೇಕು ಎಂದರು.

ಸಂವಿಧಾನ ದಿನವನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಆಚರಿಸಲು, ಮಕ್ಕಳಲ್ಲಿ ಸಂವಿಧಾನ ಪ್ರಜ್ಞೆ ಮೂಡಿಸಲು ಮತ್ತು ಸಂವಿಧಾನವನ್ನು ನಮಗೆ ನೀಡಿದ ಮಹನೀಯರಿಗೆ ಗೌರವ ಸಲ್ಲಿಸಲು ಶಾಲೆಯ ಹಿರಿಯ ಮತ್ತು ಕಿರಿಯ ವಿಭಾಗದ ವಿದ್ಯಾರ್ಥಿಗಳಿಗೆ ಭಾರತೀಯ ಸಂವಿಧಾನ ಮತ್ತು ನಾಗರಿಕ ಕರ್ತವ್ಯಗಳ ಬಗ್ಗೆ ರಸಪ್ರಶ್ನೆ, ಪ್ರಬಂಧ ಬರವಣಿಗೆ ಮತ್ತು ವಿಚಾರ ಸಂಕಿರಣವನ್ನು ಆಯೋಜಿಸಲು ನಿರ್ಧರಿಸಿದೆ ಎಂದು ತಿಳಿಸಿದರು. ಶಾಲಾ ಉಪ ಪ್ರಾಂಶುಪಾಲೆ ಪ್ರೇಮಲತಾ ಬಿ. ಉಪಸ್ಥಿತರಿದ್ದರು. ನಾಗರಾಜ ಎಂ. ಕಾರ್ಯಕ್ರಮ ನಿರೂಪಿಸಿದರು.

# ಕಬ್ಬು ಅರೆಯುವುದನ್ನು ನಿಲ್ಲಿಸಿದ ಮೈಶುಗರ್ ಕಾರ್ಖಾನೆ: ಆತಂಕದಲ್ಲಿ ರೈತರು

**ಮಂಡ್ಯ, ನ.27:** ಕರ್ನಾಟಕದ ಸರ್ಕಾರಿ ಸಾಮ್ಯದ ಏಕೈಕ ಸಕ್ಕರೆ ಕಾರ್ಖಾನೆ, ಮಂಡ್ಯದ ಮೈ ಶುಗರ್ ಈ ವರ್ಷದ ಕಬ್ಬು ಅರೆಯುವುದನ್ನು ಬಂದ್ ಮಾಡಿದ್ದು, ಇದರ ಪರಿಣಾಮವಾಗಿ ಕೃಷಿ ಸಚಿವ ಚಲುವರಾಯಸ್ವಾಮಿ ತವರು ಜಿಲ್ಲೆಯಲ್ಲೇ ಅನ್ನದಾತರು ಸಂಕಷ್ಟಕ್ಕೆ ಸಿಲುಕುವಂತಾಗಿದೆ. ಮಂಡ್ಯದ ಮೈಶುಗರ್ ಸಕ್ಕರೆ ಕಾರ್ಖಾನೆ ಪ್ರಸಕ್ತ ವರ್ಷದಲ್ಲಿ ಆಗಸ್ಟ್‌ನಿಂದ ಕಬ್ಬು ಅರೆಯುವಿಕೆಯನ್ನು ಪ್ರಾರಂಭ ಮಾಡಿತ್ತು. ಪ್ರಾರಂಭದಲ್ಲಿ ಬರದ ನೆಪನೊಡ್ಡಿ, 2 ಲಕ್ಷದ 5 ಮೆಟ್ರಿಕ್ ಟನ್ ಕಬ್ಬು ಅರೆಯುವ ಗುರಿ



ನಿಗದಿಪಡಿಸಿತ್ತು. ಇದಕ್ಕಾಗಿ ತನ್ನ ವ್ಯಾಪ್ತಿ ಕಬ್ಬು ಬೆಳೆಗಾರರ ಜೊತೆ ಒಪ್ಪಂದ ಕೂಡ ಮಾಡಿಕೊಂಡಿತ್ತು. ಅದರಂತೆ ನವೆಂಬರ್ ಅಂತ್ಯಕ್ಕೆ 2 ಲಕ್ಷದ 01 ಟನ್ ಅನ್ನ ಕಬ್ಬನ್ನು ಅರೆಯಿಸಲಾಗಿದೆ. ಆದರೆ ಇನ್ನಷ್ಟು ಕಬ್ಬು ಬಾಕಿ ಇರುವಾಗಲೇ ಕಬ್ಬು ಅರೆಯುವುದನ್ನು ಪ್ರಸಕ್ತ ವರ್ಷಕ್ಕೆ ಬಂದ್ ಮಾಡಿದೆ. ಒಪ್ಪಂದದಂತೆ ಕಾರ್ಖಾನೆ ಈ ಬಾರಿ ಕಬ್ಬು ಅರೆಯಲಾಗಿದೆ. ಜೊತೆಗೆ ವಿದ್ಯುತ್ ಉತ್ಪಾದನೆಯಿಂದ ಐದು ಕೋಟಿ ರೂಪಾಯಿ ಲಾಭವನ್ನು ಕೂಡ ಮಾಡಿದೆ. ಆದರೆ ಮೈ ಶುಗರ್ ವ್ಯಾಪ್ತಿಯಲ್ಲಿ ಸಾವಿರಾರು ಹೆಕ್ಟೇರ್ ಪ್ರದೇಶದಲ್ಲಿ ಕಬ್ಬು ಕಟಾವು ಆಗಿಲ್ಲ. ಈಗಾಗಲೇ ಕಬ್ಬಿನಲ್ಲಿ ಸೂಲಂಗಿ ಕೂಡ ಬಂದಿದೆ. ಕಬ್ಬು ತೂಕವನ್ನು ಕಳೆದುಕೊಳ್ಳುತ್ತಿದೆ ಹೀಗಾಗಿ ರೈತರ ಪಾಡು ಶೋಚನೀಯವಾಗಿದೆ. ಒಪ್ಪಂದದ ಪ್ರಕಾರ, ಬೇರೆ ಕಾರ್ಖಾನೆಗಳಿಗೂ ಕೂಡ ಕಬ್ಬನ್ನು ಸರಬರಾಜು ಮಾಡದ ಪರಿಸ್ಥಿತಿಯಲ್ಲಿ ರೈತರು ಇದ್ದಾರೆ. ಸರ್ಕಾರವೇ ಇಂತಿಷ್ಟು ವ್ಯಾಪ್ತಿ ಮಾಡಿ, ಇಲ್ಲಿನ ಕಬ್ಬನ್ನು ಖಾಸಗಿ ಕಾರ್ಖಾನೆಗಳು ಪಡೆಯದಂತೆ ಆದೇಶ ಕೂಡ ಮಾಡಿತ್ತು. ಹೀಗಾಗಿ ಕಾರ್ಖಾನೆ ಬಂದ್ ಆಗಿ, ಕಬ್ಬು ಸರಬರಾಜು ಆಗದೇ ಇರುವುದು ಜಿಲ್ಲೆಯ ಕಬ್ಬು ಬೆಳೆಗಾರರನ್ನ ಸಂಕಷ್ಟಕ್ಕೆ ಸಿಲುಕುವಂತೆ ಮಾಡಿದೆ. ಇನ್ನು ಉಳಿದ ಕಬ್ಬನ್ನು ಆಲೆಮನೆಗಳಿಗೆ ಸರಬರಾಜು ಮಾಡೋಣ ಅಂದರೆ ಕಡಿಮೆ ಬೆಲೆಗೆ ಖರೀದಿ ಮಾಡುತ್ತಿದ್ದಾರೆ. ಖಾಸಗಿ ಕಾರ್ಖಾನೆಗಳು ಕೂಡ ತನ್ನ ವ್ಯಾಪ್ತಿಯ ಕಬ್ಬನ್ನ ಬಿಟ್ಟು ಬೇರೆ ಕಬ್ಬನ್ನು ಪಡೆದುಕೊಳ್ಳುತ್ತಿಲ್ಲ. ಹೀಗಾಗಿ ಸಾಲ ಸೋಲ ಮಾಡಿ ಕಬ್ಬು ಬೆಳೆದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಮೈಶುಗರ್ ಸಕ್ಕರೆ ಕಾರ್ಖಾನೆ ಪ್ರಸಕ್ತ ವರ್ಷದ ಕಬ್ಬು ಅರೆಯುವಿಕೆಯನ್ನು ಸ್ಥಗಿತ ಮಾಡಿರುವುದು ಜಿಲ್ಲೆಯ ಕಬ್ಬು ಬೆಳೆಗಾರರನ್ನು ಸಂಕಷ್ಟಕ್ಕೆ ಸಿಲುಕಿದೆ. ಈ ನಿಟ್ಟಿನಲ್ಲಿ ಸರ್ಕಾರ ಸೂಕ್ತ ಕ್ರಮವಹಿಸಬೇಕಿದೆ.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

## ಧರ್ಮಸ್ಥಳ ಲಕ್ಷದೀಪೋತ್ಸವ: ಜ್ಞಾನ, ವಿಜ್ಞಾನ ಮತ್ತು ಸುಜ್ಞಾನದ ತ್ರಿವೇಣಿ ಸಂಗಮ



**ಮುಂಬಯಿ, ನ.27–** ಉಜಿರೆ ನಾಡಿನ ಪವಿತ್ರ ಕ್ಷೇತ್ರ ಹಾಗೂ ಸರ್ವಧರ್ಮ ಸಮನ್ವಯ ಕೇಂದ್ರವಾದ ಧರ್ಮಸ್ಥಳದಲ್ಲಿ ಈಗ ಕಾರ್ತಿಕ ಮಾಸದ ಲಕ್ಷದೀಪೋತ್ಸವದ ಸಂಭ್ರಮ, ಸಡಗರ. ದೇವಸ್ಥಾನ, ಬೀಡು, ವಸತಿಛತ್ರಗಳು, ಬಾಹುಬಲಿಬೆಟ್ಟ, ಪ್ರವೇಶದ್ವಾರ ಮೊದಲಾದ ಎಲ್ಲಾ ಕಟ್ಟಡಗಳನ್ನು ಆಕರ್ಷಕ ವಿನ್ಯಾಸದ ವಿದ್ಯುದ್ದೀಪಗಳಿಂದ ಅಲಂಕರಿಸಲಾಗಿದೆ. ನಾಡಿ ನೆಲ್ಲೆಡೆಯಿಂದ ಪ್ರತಿದಿನ ಸಹಸ್ರಾರು ಭಕ್ತಾದಿಗಳು ಹಾಗೂ ಪ್ರವಾಸಿಗರು ಬರುತ್ತಿದ್ದು, ದೇವರ ದರ್ಶನದ ಬಳಿಕ ಮಂಜೂಷಾ ವಸ್ತುಸಂಗ್ರಹಾಲಯ, ಕಾರ್‌ಮ್ಯೂಸಿಯಂ, ಲಲಿತೋದ್ಯಾನ, ರತ್ನಗಿರಿ (ಬಾಹುಬಲಿಬೆಟ್ಟ) ವೀಕ್ಷಿಸಿ ಸುಂದರ ಪ್ರಾಕೃತಿಕ ಪರಿಸರದ ಸೊಗಡನ್ನು ಸವಿಯುವುದರೊಂದಿಗೆ ತಮ್ಮ ಜ್ಞಾನಕ್ಷಿತಿಜವನ್ನು ವಿಸ್ತರಿಸಿಕೊಳ್ಳುತ್ತಿದ್ದಾರೆ.

ಇದೇ ಸಂದರ್ಭದಲ್ಲಿ ಪ್ರೇಕ್ಷಕರನ್ನು ಸೆಳೆಯುವ ವಸ್ತುಪ್ರದರ್ಶನ, ಪ್ರೌಢಶಾಲಾ ವಠಾರದಲ್ಲಿ ಆಯೋಜಿಸಿರುವ ರಾಜ್ಯಮಟ್ಟದ ವಸ್ತುಪ್ರದರ್ಶನದಲ್ಲಿ ಮುನ್ನೂರಕ್ಕೂ ಮಿಕ್ಕಿ ಮಳಿಗೆಗಳಿದ್ದು, ಪ್ರೇಕ್ಷಕರ ಕಣ್ಮನ ಸೆಳೆಯುತ್ತಿವೆ.

ಪುಸ್ತಕ ಮಳಿಗೆಗಳು, ಕೃಷಿ, ವಿಜ್ಞಾನ, ಕಲೆ, ಸಂಸ್ಕೃತಿ ಹಾಗೂ ಗ್ರಾಮೀಣ ಕರಕುಶಲ ಕಲೆಗಳಿಗೆ ಸಂಬಂಧಪಟ್ಟ ಮಳಿಗೆಗಳು ಪ್ರೇಕ್ಷಕರ ಗಮನ ಸೆಳೆಯುತ್ತಿವೆ. ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮಳಿಗೆ, ಪುಸ್ತಕದ ಮಳಿಗೆಗಳು, ಮಡಿಕೆ ತಯಾರಿ, ಹಾಳೆತಟ್ಟೆಗಳ ಮಳಿಗೆ, ಸ್ವ–ಉದ್ಯೋಗ ತರಬೇತಿ ಸಂಸ್ಥೆಯ ಮಳಿಗೆ, 'ಸಿರಿ' ಗ್ರಾಮೋದ್ಯೋಗ ಸಂಸ್ಥೆಯ ಮಳಿಗೆ ಪ್ರೇಕ್ಷಕರ ಕಣ್ಮನ ಸೆಳೆಯುತ್ತವೆ.

ಕರ್ನಾಟಕ ಬ್ಯಾಂಕ್, ಕೆನರಾ ಬ್ಯಾಂಕ್, ಜೀವವಿಮೆ, ಸರ್ಕಾರದ ವಿವಿಧ ಇಲಾಖೆಗಳ ಮಳಿಗೆಗಳು ಸಾರ್ವಜನಿಕರಿಗೆ ಉಪಯುಕ್ತ ಮಾಹಿತಿ, ಮಾರ್ಗದರ್ಶನ ನೀಡುತ್ತಿವೆ. ಕೆ.ಎಸ್.ಆರ್.ಟಿ.ಸಿ. ರಾಜ್ಯದ ವಿವಿಧ ಊರುಗಳಿಂದ ಧರ್ಮಸ್ಥಳಕ್ಕೆ ವಿಶೇಷ ಬಸ್ ಸೌಲಭ್ಯ ಕಲ್ಪಿಸಿದೆ. ಹಲವಾರು ಮಂದಿ ಭಕ್ತರು ಪಾದಯಾತ್ರೆಯಲ್ಲಿ, ಸೈಕಲ್ ಮೂಲಕ ಧರ್ಮಸ್ಥಳಕ್ಕೆ ಬರುತ್ತಿದ್ದಾರೆ. ಭಕ್ತರು ತಾವು ಬೆಳೆದ ತರಕಾರಿ, ಹಣ್ಣುಹಂಪಲು, ಅಕ್ಕಿ, ದವಸಧಾನ್ಯಗಳನ್ನು ಕೂಡಾ ಕಾಣಿಕೆಯಾಗಿ ಅರ್ಪಿಸುತ್ತಿದ್ದಾರೆ. ಎಲ್ಲೆಲ್ಲೂ ಸೊಬಗಿದೆ, ಸೊಗಸಿದೆ. ಶಿಸ್ತು, ಸ್ವಚ್ಛತೆ, ದಕ್ಷತೆ ಹಾಗೂ ದೇವಳ ಸಿಬ್ಬಂದಿ ಮತ್ತು ಸ್ವಯಂಸೇವಕರ ನಗುಮೊಗದ ಸೇವೆ ಭಕ್ತರ ಪ್ರಶಂಸೆಗೆ ಪಾತ್ರವಾಗಿದೆ.

ಇಂದು ಗುರುವಾರ ಅಮೃತವರ್ಷಿಣಿ ಸಭಾಭವನದಲ್ಲಿ ಸಂಜೆ ಗಂಟೆ 5.30 ರಿಂದ ಲಲಿತಕಲಾ ಗೋಷ್ಠಿ ನಡೆಯುತ್ತದೆ. ನಾಳೆ ಶುಕ್ರವಾರ ಸಂಜೆ 5 ಗಂಟೆಗೆ ಸರ್ವಧರ್ಮ ಸಮ್ಮೇಳನದ 92ನೆ ಅಧಿವೇಶನವನ್ನು ಗೃಹಸಚಿವ ಡಾ. ಜಿ.ಪರಮೇಶ್ವರ ಉದ್ಘಾಟಿಸುವರು. ಬೆಂಗಳೂರಿನ ಕೈಲಾಸಾಶ್ರಮದ ಜಯೇಂದ್ರಪುರಿ ಸ್ವಾಮೀಜಿ ಅಧ್ಯಕ್ಷತೆ ವಹಿಸುವರು. ಬೆಂಗಳೂರಿನ ಡಾ. ಜಿ.ಬಿ. ಹರೀಶ್, ಡಾ. ಜೋಸೆಫ್, ಎನ್.ಎಂ. ಮತ್ತು ವಿಜಯಪುರದ ಮೆಹತಾಬ್ ಇಬ್ರಾಹಿಂಸಾಬ್ ಕಾಗವಾಡ ಧಾರ್ಮಿಕ ಉಪನ್ಯಾಸ ನೀಡುವರು.



ಲೋಕಸಭೆಯ ಮೊದಲ ಸ್ಪೀಕರ್ ಗಣೇಶ್ ವಾಸುದೇವ್ ಮಾವಲಂಕರ್ ಅವರ ಜನ್ಮದಿನದ ಅಂಗವಾಗಿ ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ ಅವರು ಬುಧವಾರ ನವದೆಹಲಿಯ ಸಂವಿಧಾನ ಸದನದ ಸೆಂಟ್ರಲ್ ಹಾಲ್‌ನಲ್ಲಿ ಪುಷ್ಪನಮನ ಸಲ್ಲಿಸಿದರು.

## ಸನಾತನ ಧರ್ಮ ಸಂರಕ್ಷಣಾ ಮಂಡಳಿ ಸ್ಥಾಪನೆ ಅರ್ಜಿ ತಿರಸ್ಕಾರ




**ನವದೆಹಲಿ, ನ.27–** ಹಿಂದೂ ಧರ್ಮದ ರಕ್ಷಣೆಗಾಗಿ ವಕ್ಫ್ ಬೋರ್ಡ್ ರೀತಿ 'ಸನಾತನ ಧರ್ಮ ಸಂರಕ್ಷಣಾ ಮಂಡಳಿ' ಸ್ಥಾಪಿಸುವಂತೆ ಕೋರಿ ಸಲ್ಲಿಸಲಾಗಿದ್ದ ಅರ್ಜಿಯನ್ನು ದೆಹಲಿ ಹೈಕೋರ್ಟ್ ಬುಧವಾರ (ನ.27) ತಿರಸ್ಕರಿಸಿದೆ.

ಪ್ರಕರಣ ನೀತಿ ನಿರೂಪಣೆ ವ್ಯಾಪ್ತಿಗೆ ಒಳಪಡುವುದರಿಂದ ನ್ಯಾಯಾಲಯ ಮಧ್ಯಪ್ರವೇಶಿಸಲಾಗದು ಎಂದು ಮುಖ್ಯ ನ್ಯಾಯಮೂರ್ತಿ ಮನಮೋಹನ್ ಮತ್ತು ನ್ಯಾ. ತುಷಾರ್ ರಾವ್ ಗೆಡೆಲಾ ಅವರಿದ್ದ ಪೀಠ ತಿಳಿಸಿದೆ. ಈ ವಿಚಾರವಾಗಿ ನ್ಯಾಯಾಲಯ ಏನೂ ಮಾಡಲು ಸಾಧ್ಯವಿಲ್ಲ ಎಂದ ನ್ಯಾ.ಮನಮೋಹನ್ ಅವರು, ಸೂಕ್ತ ಕ್ರಮಕ್ಕಾಗಿ ಸರ್ಕಾರಕ್ಕೆ ಮನವಿ ಸಲ್ಲಿಸಲು ಅರ್ಜಿದಾರರಿಗೆ ಅವಕಾಶ ವಿದೆ ಎಂದಿದ್ದಾರೆ.

ಸನಾತನ ಧರ್ಮದ ಅನುಯಾಯಿಗಳ ಮೇಲೆ ಇತರ ಧರ್ಮದ ಅನುಯಾಯಿಗಳು ಹಲ್ಲೆ ನಡೆಸುತ್ತಿದ್ದಾರೆ. ಸನಾತನ ಧರ್ಮದ ಹಕ್ಕುಗಳು ಮತ್ತು ಆಚಾರಗಳ ರಕ್ಷಣೆಗೆ ಯಾವುದೇ ಧಾರ್ಮಿಕ ಸಂಸ್ಥೆ ಇಲ್ಲ. ಅಂತಹ ಸಂಸ್ಥೆ ರಚಿಸುವಂತೆ ಸನಾತನ ಹಿಂದೂ ಸೇವಾ ಸಂಘ ಟ್ರಸ್ಟ್ ಕೋರಿತ್ತು. ಸರ್ಕಾರಕ್ಕೆ ಈ ಸಂಬಂಧ ಪತ್ರ ಬರೆದಿದ್ದರೂ ಪ್ರತಿಕ್ರಿಯೆ ದೊರೆಯದ ಕಾರಣ ನ್ಯಾಯಾಲಯದ ಮೊರೆ ಹೋಗಿರು ವುದಾಗಿ ಸಂಘ ಹೇಳಿದೆ ಎಂದು ಲೈವ್ ಲಾ ವರದಿ ಮಾಡಿದೆ.

## ತಾಲೂಕು ಮಟ್ಟದ ಆಸ್ಪತ್ರೆಗಳಲ್ಲಿ ವಿಶೇಷ ನವಜಾತ ಶಿಶುಗಳ ಆರೈಕೆ ಕೇಂದ್ರ: ದಿನೇಶ್ ಗುಂಡೂರಾವ್ ಭರವಸೆ

**ಬೆಂಗಳೂರು, ನ.27–** ಶಿಶು ಮರಣ ಪ್ರಮಾಣವನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ತಾಲೂಕು ಮಟ್ಟದ ಆಸ್ಪತ್ರೆಗಳಲ್ಲಿಯೇ ವಿಶೇಷ ನವಜಾತ ಶಿಶುಗಳ ಆರೈಕೆ ಘಟಕ ವ್ಯವಸ್ಥೆ ಮಾಡುವುದಾಗಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಶಿವಮೊಗ್ಗದಲ್ಲಿ ಬುಧವಾರ ಜಿಲ್ಲಾ ಆರೋಗ್ಯ ಇಲಾಖೆ ಪ್ರಗತಿ ಪರಿಶೀಲನೆ ನಡೆಸಿದ ಸಚಿವರು, ತಾಯಿ ಮಗುವಿನ ಆರೋಗ್ಯಕ್ಕೆ ಹೆಚ್ಚಿನ ಗಮನ ಹರಿಸಲಾಗುತ್ತಿದ್ದು, ಶಿಶು ಮರಣ ಪ್ರಮಾಣವನ್ನ ಕಡಿಮೆ ಮಾಡುವತ್ತ ವಿಶೇಷ ಕಾಳಜಿ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಜಿಲ್ಲಾ ಮಟ್ಟದ ವೈದ್ಯಕೀಯ ಕಾಲೇಜು ಆಸ್ಪತ್ರೆಗಳಲ್ಲಿ ಮಾತ್ರ ವಿಶೇಷ ನವಜಾತಾ ಆರೈಕೆ ಘಟಕಗಳು ಇವೆ. ತಾಲೂಕು ಮಟ್ಟದ ಎಂ.ಸಿ.ಎಚ್ ಆಸ್ಪತ್ರೆಗಳಿಂದ ಮಕ್ಕಳನ್ನ ಜಿಲ್ಲಾ ಮಟ್ಟದ ಆಸ್ಪತ್ರೆಗೆ ಸಾಗಿಸುವಾಗ ಸಾಕಷ್ಟು ತೊಂದರೆ ಎದುರಾಗುತ್ತದೆ. ಹೀಗಾಗಿ ತಾಲೂಕು ಮಟ್ಟದಲ್ಲಿರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆಗಳಲ್ಲೇ SNCU ವ್ಯವಸ್ಥೆ ಕಲ್ಪಿಸುವುದು ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ರಾಜ್ಯಾದ್ಯಂತ ಹೆಚ್ಚು ಹೆರಿಗೆಗಳಾಗುವ ಎಂಸಿಎಚ್ ಆಸ್ಪತ್ರೆಗಳ ಪಟ್ಟಿ ತಯಾರಿಸಿ, ಎಲ್ಲೆಲ್ಲಿ ಘಟಕಗ ಗಳ ಅಗತ್ಯವಿದೆ ಎಂಬುದರ ಬಗ್ಗೆ ಪ್ರಸ್ತಾವನೆ ಸಲ್ಲಿಸುವಂತೆ ಆರೋಗ್ಯ ಇಲಾಖೆ ಆಯುಕ್ತರಿಗೆ ಸೂಚಿಸಿರುವುದಾಗಿ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಖಾಸಗಿ ಆಸ್ಪತ್ರೆಗಳಲ್ಲಿ ಶೇ 70 ರಷ್ಟು ಸಿಸೇರಿಯನ್ ಹೆರಿಗಳಾಗುತ್ತಿವೆ. ಇದು ಸರಿಯಲ್ಲ. ಸಿಸೇರಿಯನ್ ಗಳಿಂದ ತಾಯಿ, ಮಗು ಇಬ್ಬರ ಆರೋಗ್ಯದ ಮೇಲೂ ಪರಿಣಾಮ ಬೀರುತ್ತದೆ. ಸಿಸೇರಿಯನ್ ಪ್ರಮಾಣ ಶೇ.20ರಷ್ಟಿರಬೇಕು. ಆದರೆ ಖಾಸಗಿ ಆಸ್ಪತ್ರೆಗಳಲ್ಲಿ ಶೇ 70 ರಷ್ಟು ಸಿಸೇರಿಯನ್ ಗಳು ಆಗುತ್ತಿದ್ದು, ಸರ್ಕಾರಿ ಆಸ್ಪತ್ರೆಗಳಲ್ಲಿ ಈ ಪ್ರಮಾಣ ಶೇ 35 ರಷ್ಟಿದೆ. ಇದನ್ನ ಒಪ್ಪಿಕೊಳ್ಳಲು ಸಾಧ್ಯವಿಲ್ಲ. ಸಿಸೇರಿಯನ್ ಗಳನ್ನ ಕನಿಷ್ಠ ಶೇ 50 ಕ್ಕಿಂತ ಕೆಳಗೆ ತರಲೇಬೇಕು. ಈ ನಿಟ್ಟಿನಲ್ಲಿ ಖಾಸಗಿ ಆಸ್ಪತ್ರೆಗಳಿಗೆ ಕಟ್ಟುನಿಟ್ಟಾಗಿ ಎಚ್ಚರಿಕೆ ನೀಡಿ ನಿ ಗ ಾ ವಹಿಸುವಂತೆ ಜಿಲ್ಲಾಧಿಕಾರಿ ಗಳು ಹಾಗೂ ಆರೋಗ್ಯ ಅಧಿಕಾರಿಗಳಿಗೆ ಸಚಿವ ದಿನೇಶ್ ಗುಂಡೂರಾವ್ ಸೂಚನೆ ನೀಡಿದರು.



ಕುರುಡುಮುಕ್ತ ಶಿವಮೊಗ್ಗ ಕಾರ್ಯಕ್ರಮಕ್ಕೆ ಆರೋಗ್ಯ ಇಲಾಖೆಯಿಂದ ಎಲ್ಲ ರೀತಿಯ ಸಹಕಾರ ನೀಡುವಂತೆ ಸಭೆಯಲ್ಲಿ ಸೂಚನೆ ನೀಡಿದ ಸಚಿವರು, ಕಣ್ಣಿನ ತಪಾಸಣೆ, ಪೊರೆ ಶಸ್ತ್ರಚಿಕಿತ್ಸೆ ಸೇರಿದಂತೆ ಉಚಿತ ಕನ್ನಡಕ ನೀಡುವ ಆಶಾಕಿರಣ ಯೋಜನೆಯ ಸಂಯೋಜನೆಯೊಂದಿಗೆ ಜಿಲ್ಲೆಯಲ್ಲಿ ಕಾರ್ಯಕ್ರಮ ಜಾರಿಗೊಳಿಸುವಂತೆ ಅಧಿಕಾರಿಗಳಿಗೆ ಸಲಹೆ ನೀಡಿದರು. ಶಿವಮೊಗ್ಗ ಜಿಲ್ಲೆಯ ಸಾಗರ, ಹೊಸನಗರ ಹಾಗೂ ಶಿವಮೊಗ್ಗ ಗ್ರಾಮೀಣ ಪ್ರದೇಶಗಳಿಗೆ ಮೂರು ಸಂಚಾರಿ ಮೊಬೈಲ್ ಕ್ಲಿನಿಕ್‌ಗಳನ್ನು ಜನವರಿ ತಿಂಗಳೊಳಗೆ ನೀಡುವ ಭರವಸೆ ನೀಡಿದರು. ಸಾಗರ ಹಾಗೂ ಭದ್ರಾವತಿ ತಾಲೂಕು ಆಸ್ಪತ್ರೆಗಳನ್ನ ಮೇಲ್ದರ್ಜೆಗೆ ಏರಿಸಿ ಹೆಚ್ಚಿನ ಉಪಯುಕ್ತ ಚಿಕಿತ್ಸೆಗಳ ಸೇವೆಯನ್ನ ಒದಗಿಸಲಾಗುವುದು. ಭದ್ರಾವತಿಯಲ್ಲಿ ನೂತನ ಎಂ.ಸಿ.ಎಚ್ ಆಸ್ಪತ್ರೆ ನಿರ್ಮಾಣ ಮಾಡುವ ನಿಟ್ಟಿನಲ್ಲಿ ಸ್ಥಳ ಪರಿಶೀಲನೆ ನಡೆಸಲಾಗಿದೆ. ತಾಲೂಕು ಮಟ್ಟದ ಆಸ್ಪತ್ರೆಗಳನ್ನ ಮೇಲ್ದರ್ಜೆಗೆ ಏರಿಸಲು ಸರ್ಕಾರ ಹೆಚ್ಚಿನ ಒತ್ತು ನೀಡಲಿದೆ ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಕೆಎಫ್.ಡಿ ಹಾಗೂ ಸಾಂಕ್ರಾಮಿಕ ರೋಗಗಳ ಬಗ್ಗೆ ಮುಂಜಾಗ್ರತೆ ವಹಿಸಬೇಕು. ಕೆಎಫ್ಡಿ ವಾಕ್ಸಿನ್‌ಗೆ ಸಂಬಂಧಪಟ್ಟಂತೆ ಹೈದರಾಬಾದ್ ಮೂಲದ ಕಂಪನಿಗೆ ಔಷಧಿ ಕಂಡುಹಿಡಿಯಲು ಚರ್ಚೆ ನಡೆಯುತ್ತಿದೆ. 2026ಕ್ಕೆ ಲಸಿಕೆ ಸಿಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ನಕಲಿ ವೈದ್ಯರ ತಡೆಗೆ ಹೆಚ್ಚಿನ ಗಮನ ಹರಿಸಿ, ಚಂದ್ರಗುತ್ತಿ ಹಾಗೂ ಕೋಣಂದೂರು ಆಸ್ಪತ್ರೆಗೆ ಸಿಬ್ಬಂದಿ ಅನುಮೋದನೆ ಅಗತ್ಯ ಕ್ರಮ ವಹಿಸಲಾಗುವುದು. ಅಲ್ಲದೇ ಇಲಾಖೆಯಲ್ಲಿ ಖಾಲಿ ಇರುವ ವೈದ್ಯರು, ಸ್ಟಾಫ್ ನರ್ಸ್ ಹಾಗೂ ಸಿಬ್ಬಂದಿಗಳ ಕೊರತೆ ಸರಿಪಡಿಸಲು ಕ್ರಮವಹಿಸಲಾಗುತ್ತಿದೆ. ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೇವೆ ಒದಗಿಸಿ ಎಂದು ಪ್ರಗತಿ ಪರಿಶೀಲನಾ ಸಭೆಯಲ್ಲಿ ಆರೋಗ್ಯ ಅಧಿಕಾರಿಗಳಿಗೆ ಸಚಿವ ದಿನೇಶ್ ಗುಂಡೂರಾವ್ ಸೂಚಿಸಿದರು. ಜಿಲ್ಲೆಯ ಹಂದಿಗೋಡು ಕಾಯಿಲೆ ಬಗ್ಗೆ ವೈಜ್ಞಾನಿಕ ಸಂಶೋಧನೆ ನಡೆಸುವ ಅಗತ್ಯವಿದೆ. ಇಲ್ಲಿಯ ವರೆಗೆ ಸಂಶೋಧನೆಯಲ್ಲಿ ಕಾಯಿಲೆಗೆ ತಿಳಿದು ಬಂದಿರುವ ಅಂಶಗಳ ವರದಿ ಸಲ್ಲಿಸಲು ಆರೋಗ್ಯ ಸಚಿವರು ಇಲಾಖೆಯ ಆಯುಕ್ತರಿಗೆ ಸೂಚನೆ ನೀಡಿದರು.

## ಅದಾನಿ ತಮ್ಮ ಮೇಲಿನ ಆರೋಪ ಒಪ್ಪಿಕೊಳ್ಳಲ್ಲ, ಕೇಂದ್ರ ಸರ್ಕಾರವೇ ರಕ್ಷಿಸುತ್ತಿದೆ: ರಾಹುಲ್ ಕಿಡಿ

**ನವದೆಹಲಿ, ನ.27–** ಉದ್ಯಮಿ ಗೌತಮ್ ಅದಾನಿ ಅವರು ಎಂದಿಗೂ ತಮ್ಮ ಮೇಲಿನ ಆರೋಪಗಳನ್ನು ಒಪ್ಪಿಕೊಳ್ಳಲ್ಲ. ನ್ಯಾಯಯುತವಾಗಿ ಅವರು ಜೈಲಿನಲ್ಲಿರಬೇಕು, ಆದ್ರೆ ಕೇಂದ್ರ ಸರ್ಕಾರವೇ ಅವರನ್ನು ರಕ್ಷಿಸುತ್ತಿದೆ ಎಂದು ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಕಿಡಿಕಾರಿದ್ದಾರೆ.


ಉದ್ಯಮಿ ಗೌತಮ್ ಅದಾನಿ ಮತ್ತು ಅವರ ಸೋದರಳಿಯ ಸಾಗರ್ ಅದಾನಿ ಸೇರಿದಂತೆ ಇತರ ಏಳು ಅಧಿಕಾರಿಗಳು ಸೌರಶಕ್ತಿಯ ಒಪ್ಪಂದಗಳನ್ನು ಪಡೆಯಲು ಭಾರತೀಯ ಸರ್ಕಾರಿ ಅಧಿಕಾರಿಗಳಿಗೆ 265 ದಶಲಕ್ಷ ಡಾಲರ್‌ಗೂ (ಅಂದಾಜು 2238 ಕೋಟಿ ರೂ.) ಹೆಚ್ಚು ಲಂಚದ ಭರವಸೆ ನೀಡಿದ್ದಾರೆ ಎಂಬ ಆರೋಪವನ್ನು ಅದಾನಿ ಸಮೂಹ ತಳ್ಳಿಹಾಕಿದ ನಂತರ ರಾಹುಲ್ ಗಾಂಧಿ ಪ್ರತಿಕ್ರಿಯೆ ನೀಡಿದ್ದಾರೆ. ಅದಾನಿ ಆರೋಪಗಳನ್ನು ಒಪ್ಪಿಕೊಳ್ಳುತ್ತಾರೆ ಎಂದು ನೀವು ಭಾವಿಸುತ್ತೀರಾ ನಿಸ್ಸಂಶಯವಾಗಿ ಅವರು ಆರೋಪಗಳನ್ನು ನಿರಾಕರಿಸುತ್ತಾರೆ. ಹಾಗಾಗಿ ನಾವು ಹೇಳಿದಂತೆ ಅವರನ್ನು ಬಂಧಿಸಬೇಕು ಎಂದು ಆಗ್ರಹಿಸಿದ್ದಾರೆ.



ಸಣ್ಣ ಸಣ್ಣ ಆರೋಪದಲ್ಲಿ ನೂರಾರು ಜನರನ್ನು ಬಂಧಿಸಲಾ ಗುತ್ತಿದೆ. ಆದರೆ ಅಮೆರಿಕದಲ್ಲಿ ಸಾವಿರಾರು ಕೋಟಿ ರೂ.ಗಳ ಆರೋಪ ಹೊರಿಸಲ್ಪಟ್ಟಿದೆ. ನ್ಯಾಯಯುತವಾಗಿ ಅವರು ಜೈಲಿನಲ್ಲಿರಬೇಕು, ಆದ್ರೆ ಕೇಂದ್ರ ಸರ್ಕಾರವೇ ಅವರನ್ನು ರಕ್ಷಿಸುತ್ತಿದೆ ಎಂದು ದೂರಿದ್ದಾರೆ.

ಈ ಸಭೆಯಲ್ಲಿ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಕೂಡ ಉಪಸ್ಥಿತರಿದ್ದರು. ಸಂಸತ್ ಅಧಿವೇಶನದಲ್ಲಿ ಪ್ರಸ್ತಾಪಿಸಬೇಕಾದ ವಿಷಯಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

## ಸಂಭಲ್ ಹಿಂಸಾಚಾರ: ಕಲ್ಲುತೂರಾಟ ನಡೆಸಿದ ದುಷ್ಕರ್ಮಿಗಳ ಪೋಸ್ಟರ್ ಪ್ರದರ್ಶನಕ್ಕೆ ಸಜ್ಜು



**ಲಖನೌ, ನ.27–** ಉತ್ತರ ಪ್ರದೇಶ ಸರ್ಕಾರವು ಸಂಭಲ್ ಹಿಂಸಾಚಾರದಲ್ಲಿ ಭಾಗಿಯಾಗಿರುವ ಪ್ರತಿಭಟನಾಕಾರರಿಂದ ಸಾರ್ವಜನಿಕ ಆಸ್ತಿಗೆ ಆಗಿರುವ ಹಾನಿಯ ವೆಚ್ಚವನ್ನು ಸಂಗ್ರಹಿಸಲು ಮತ್ತು ಪ್ರಮುಖ ಸಾರ್ವಜನಿಕ ಸ್ಥಳಗಳಲ್ಲಿ 'ಕಲ್ಲು ತೂರಾಟಗಾರರ ಭಿತ್ತಿಪತ್ರಗಳನ್ನು ಪ್ರದರ್ಶಿಸಿಲು ಯೋಜಿಸುತ್ತಿದೆ ಎಂದು ವರದಿಯಾಗಿದೆ.

ಭಾನುವಾರ (ನ. 24) ಸಂಭಲ್‌ನ ಕೋಟ್ ಗಾರ್ವಿ ಪ್ರದೇಶದ ಶಾಹಿ ಜಾಮಾ ಮಸೀದಿಯ ಸಮೀಕ್ಷೆ ವೇಳೆ ನಡೆದ ಘರ್ಷಣೆಯಲ್ಲಿ ನಾಲ್ವರು ಸಾವನ್ನಪ್ಪಿದ್ದು, ಪೊಲೀಸ್ ಸಿಬ್ಬಂದಿ ಸೇರಿದಂತೆ ಹಲವರಿಗೆ ಗಾಯ ಗಳಾಗಿವೆ. ಮಸೀದಿಯ ಸ್ಥಳದಲ್ಲಿ ಈ ಹಿಂದೆ ಹರಿಹರ ದೇವಾಲಯ ಇತ್ತು ಎಂಬ ಅರ್ಜಿಯ ನಂತರ ಸಮೀಕ್ಷೆ ನಡೆಸಲು ನ್ಯಾಯಾಲಯ ಆದೇಶಿಸಿತ್ತು.

ಸಂಭಲ್‌ನಲ್ಲಿ ಹಿಂಸಾಚಾರದಲ್ಲಿ ಭಾಗಿಯಾದ ವ್ಯಕ್ತಿಗಳ ವಿರುದ್ಧ ಉತ್ತರ ಪ್ರದೇಶ ಸರ್ಕಾರವು ದೃಢವಾದ ನಿಲುವನ್ನು ತೆಗೆದುಕೊಳ್ಳುತ್ತಿದೆ. ಕಲ್ಲು ತೂರಾಟಗಾರರು ಮತ್ತು ದುಷ್ಕರ್ಮಿಗಳ ಪೋಸ್ಟರ್ ಗಳನ್ನು ಸಾರ್ವಜನಿಕವಾಗಿ ಪ್ರದರ್ಶಿಸಲಾಗುತ್ತದೆ. ಅವರಿಂದಲೇ ಹಾನಿಯ ಪಾವತಿಗೆ ಪ್ರಯತ್ನಿಸಲಾಗುತ್ತದೆ. ಆರೋಪಿಗಳ ಬಂಧನಕ್ಕೆ ಕಾರಣವಾಗುವ ಮಾಹಿತಿ ನೀಡುವವರಿಗೆ ಬಹುಮಾನವನ್ನೂ ನೀಡಲಾಗುತ್ತದೆ ಎಂದು ಸರ್ಕಾರಿ ಅಧಿಕಾರಿಯೊಬ್ಬರು ಹೇಳಿದ್ದಾಗಿ ವರದಿಯಾಗಿದೆ.

ಈ ಹಿಂದೆ 2020ರಲ್ಲಿ ಸಿಎಎ ವಿರೋಧಿ ಪ್ರತಿಭಟನೆ ನಡೆದಾಗ, ರಾಜ್ಯ ರಾಜಧಾನಿ ಸೇರಿದಂತೆ ಹಲವೆಡೆಗಳಲ್ಲಿ ಪ್ರತಿಭಟನಾಕಾರರ ಪೋಸ್ಟರ್‌ಗಳನ್ನು ಸಾರ್ವಜನಿಕ ಸ್ಥಳಗಳಲ್ಲಿ ಹಾಕಲಾಗಿತ್ತು. ನಂತರ ನ್ಯಾಯಾಲಯದ ಆದೇಶದ ಹಿನ್ನೆಲೆ ಅವುಗಳನ್ನು ತೆರವುಗೊಳಿಸಲಾಗಿತ್ತು. ಸಂಭಲ್ ಹಿಂಸಾಚಾರಕ್ಕೆ ಸಂಬಂಧಿಸಿದಂತೆ, ಇದುವರೆಗೆ ಪೊಲೀಸರು 25 ಮಂದಿಯನ್ನು ಬಂಧಿಸಿದ್ದು, ಏಳು ಎಫ್‌ಐಆರ್‌ಗಳನ್ನು ದಾಖಲಿಸಿದ್ದಾರೆ. ಸಂಭಲ್‌ನ ಸಮಾಜವಾದಿ ಪಕ್ಷದ ಸಂಸದ ಝಿಯಾ–ಉರ್–ರೆಹಮಾನ್ ಬಾರ್ಕ್, ಪಕ್ಷದ ಸ್ಥಳೀಯ ಶಾಸಕ ಇಕ್ಬಾಲ್ ಮೆಹಮೂದ್ ಅವರ ಪುತ್ರ ಸೊಹೇಲ್ ಇಕ್ಬಾಲ್ ಸೇರಿದಂತೆ 2,750 ಕ್ಕೂ ಹೆಚ್ಚು ಅಪರಿಚಿತ ಶಂಕಿತರನ್ನು ಆರೋಪಿಗಳನ್ನಾಗಿ ಮಾಡಲಾಗಿದೆ.

ಮ್ಯಾಜಿಸ್ಟ್ರೇಟ್ ವಿಚಾರಣೆ ನಡೆಯುತ್ತಿದೆ ಮತ್ತು ಪರಿಸ್ಥಿತಿ ಈಗ ನಿಯಂತ್ರಣದಲ್ಲಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಕೃಷ್ಣ ಕುಮಾರ್ ವಿಷ್ಣೋಯ್ ಸೋಮವಾರ ಹೇಳಿದ್ದಾರೆ. ಅಶಾಂತಿಗೆ ಕಾರಣರಾದವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು' ಎಂದಿದ್ದಾರೆ.

## ಉಪಮುಖ್ಯಮಂತ್ರಿ ಹುದ್ದೆ ಒಪ್ಪದ ಶಿಂಧೆ

**ಮುಂಬೈ, ನ.27–** ಮಹಾರಾಷ್ಟ್ರದ ನೂತನ ಮುಖ್ಯಮಂತ್ರಿಯ ಕುರಿತ ಕುತೂಹಲ ಮುಂದುವರಿದಿರುವ ಮಧ್ಯೆ, ಏಕನಾಥ್ ಶಿಂಧೆ ಅವರು ಉಪಮುಖ್ಯಮಂತ್ರಿ ಹುದ್ದೆಯನ್ನು ಎಂದಿಗೂ ಒಪ್ಪಿಕೊಳ್ಳುವುದಿಲ್ಲ ಎಂದು ಶಿವಸೇನೆ ಬುಧವಾರ ಹೇಳಿದೆ.

ನವೆಂಬರ್ 20 ರಂದು ನಡೆದ ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯಲ್ಲಿ ಆಡಳಿತಾರೂಢ ಮಹಾಯುತಿಯ ಅಬ್ಬರದ ಗೆಲುವಿಗೆ ಏಕನಾಥ್ ಶಿಂಧೆ ಕಾರಣ ಎಂದು ಶಿಂಧೆ ಸೇನಾ ನಾಯಕರೊಬ್ಬರು ಹೇಳಿದ್ದಾರೆ. ?ಏಕನಾಥ್ ಶಿಂಧೆ ಅವರ ಹೆಸರಿನಲ್ಲಿ ವಿಧಾನಸಭೆ ಚುನಾವಣೆಯನ್ನು ಎದುರಿಸಲಾಗಿದೆ. ಅವರು ಮುಖ್ಯಮಂತ್ರಿಯಾಗಿ ಮರಳಲು ಅರ್ಹರು. ಅವರು ಉಪಮುಖ್ಯಮಂತ್ರಿ ಸ್ಥಾನವನ್ನು ಒಪ್ಪಿಕೊಳ್ಳುವುದಿಲ್ಲ? ಎಂದು ಶಿವಸೇನೆ ನಾಯಕ ಸಂಜಯ್ ಶಿರ್ಸಾತ್ ತಿಳಿಸಿದ್ದಾರೆ ಎಂದು ?ಇಂಡಿಯಾ ಟುಡೇ? ವರದಿ ಮಾಡಿದೆ. ಶಿಂಧೆ ಅವರನ್ನು ಮುಖ್ಯಮಂತ್ರಿ ಮಾಡಬೇಕೆಂಬ ನಮ್ಮ ಬೇಡಿಕೆಯನ್ನು ಬಿಜೆಪಿ ಈಡೇರಿಸಿದರೆ, ಜನರಿಗೆ ಒಳ್ಳೆಯ ಸಂದೇಶ ಹೋಗುತ್ತದೆ. ಶಿಂಧೆ ಮುಖ್ಯಮಂತ್ರಿಯಾದರೆ ಮುಂದಿನ ಚುನಾವಣೆಗಳು ನಮಗೆ ಲಾಭದಾಯಕ. ಶಿಂಧೆ ಸೇನೆ, ಬಿಜೆಪಿ ಮತ್ತು ಅಜಿತ್ ಪವಾರ್ ನೇತೃತ್ವದ ಎನ್ಸಿಪಿ ಒಳಗೊಂಡಿರುವ ಮಹಾಯುತಿ ಒಕ್ಕೂಟವು ಮಹಾರಾಷ್ಟ್ರದಲ್ಲಿ 288 ವಿಧಾನಸಭಾ ಸ್ಥಾನಗಳಲ್ಲಿ 230 ಸ್ಥಾನಗಳನ್ನು ಗೆಲ್ಲುವ ಮೂಲಕ ಅಧಿಕಾರವನ್ನು ಉಳಿಸಿಕೊಂಡಿದೆ. ಬಿಜೆಪಿ 132 ಸ್ಥಾನಗಳನ್ನು, ಶಿವಸೇನೆ 57 ಮತ್ತು ಎನ್ಸಿಪಿ 41 ಸ್ಥಾನಗಳನ್ನು ಗೆದ್ದುಕೊಂಡಿತು. ಪ್ರತಿಪಕ್ಷ ಮಹಾ ವಿಕಾಸ್ ಅಘಾಡಿ (ಎಂವಿಎ) ಕೇವಲ 46 ಸ್ಥಾನಗಳನ್ನು ಗಳಿಸಿತು. ಶಿವಸೇನೆ (ಯುಬಿಟಿ) 20, ಕಾಂಗ್ರೆಸ್ 10 ಮತ್ತು ಶರದ್ ಪವಾರ್ ನೇತೃತ್ವದ ಎನ್ಸಿಪಿ 10 ಸ್ಥಾನಗಳನ್ನು ಪಡೆದುಕೊಂಡಿತು. ಫಲಿತಾಂಶದ ನಂತರ, ಫಡ್ನವೀಸ್ ಮುಖ್ಯಮಂತ್ರಿಯಾಗಲು ಬಿಜೆಪಿ ಬ್ಯಾಟಿಂಗ್ ನಡೆಸಿತು. ಆದರೆ, ಅಜಿತ್ ಪವಾರ್ ಅವರ ಎನ್ಸಿಪಿ ಕೂಡ ತಮ್ಮ ನಾಯಕನಿಗೆ ಅಗ್ರಸ್ಥಾನವನ್ನು ಆಕ್ರಮಿಸಲು ಬೇರೂರಿದೆ. ಫಡ್ನವಿಸ್ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡರೆ ಶಿಂಧೆ ಅವರು ಕೇಂದ್ರಕ್ಕೆ ವರ್ಗಾವಣೆಯಾಗಬಹುದು ಎಂಬ ಕೇಂದ್ರ ಸಚಿವ ರಾಮ್ ಅಠಾವಳೆ ಅವರ ಸಲಹೆಗೆ ಸಂಜಯ್ ಶಿರ್ಸಾತ್, ?ನಾವು ಅವರನ್ನು (ಅಠವಳೆ) ಗಂಭೀರವಾಗಿ ಪರಿಗಣಿಸುವುದಿಲ್ಲ? ಎಂದು ಹೇಳಿದರು.



**ಸರ್ಕಾರ ರಚನೆಗೆ ಸಮಯ ತೆಗೆದುಕೊಳ್ಳುತ್ತಿರುವುದು ಇದೇ ಮೊದಲಲ್ಲ, ಕರ್ನಾಟಕದಲ್ಲಿಯೂ ಕಾಂಗ್ರೆಸ್ ಮುಖ್ಯಮಂತ್ರಿಯನ್ನು ಹೆಸರಿಸಲು ಸಮಯ ತೆಗೆದುಕೊಂಡಿತು. ಅಂತಿಮ ನಿರ್ಧಾರವು ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರದ್ದಾಗಿದೆ ಎಂದು ಹೇಳಿದರು.**

ಅವರು ಕೇಂದ್ರ ಸಚಿವರಾಗಿದ್ದಾರೆ, ಕೇಂದ್ರದಲ್ಲಿ ರಾಜಕೀಯ ಮಾಡಲಿ; ಮಹಾರಾಷ್ಟ್ರದ ರಾಜಕೀಯವನ್ನು ನಮಗೆ ಬಿಟ್ಟುಬಿಡಿ ಎಂದು ಅವರು ಒತ್ತಿ ಹೇಳಿದರು. ಪಕ್ಷದ ಮೂಲಗಳ ಪ್ರಕಾರ, ಹೊಸ ಮಹಾರಾಷ್ಟ್ರ ಸರ್ಕಾರದಲ್ಲಿ ಖಾತೆಗಳ ಹಂಚಿಕೆ ಅಂತಿಮಗೊಳ್ಳುವವರೆಗೆ ತನ್ನ ಮುಖ್ಯಮಂತ್ರಿ ಅಭ್ಯರ್ಥಿಯನ್ನು ಘೋಷಿಸಲು ಆತುರಪಡುವುದಿಲ್ಲ ಎಂದು ಬಿಜೆಪಿ ಹೇಳಿದೆ. ಮುಖ್ಯಮಂತ್ರಿ ಸ್ಥಾನಕ್ಕೆ ಅಭ್ಯರ್ಥಿಯನ್ನು ಹೆಸರಿಸಲು ಕೇಂದ್ರ ನಾಯಕತ್ವವು ಯಾವುದೇ ಆತುರವಿಲ್ಲ.

## ದಿನದಿನಕ್ಕೂ ಎಲ್ಲೆಲ್ಲೂ ಭ್ರಷ್ಟಾಚಾರ ಹೆಮ್ಮರವಾಗಿ ಬೆಳೆಯುತ್ತಿದೆ: ನ್ಯಾ.ಸಂತೋಷ್ ಹೆಗ್ಡೆ ಬೇಸರ

**ಬೆಂಗಳೂರು, ನ.27–** –ದೇಶದಲ್ಲಿ ಎಲ್ಲೆಡೆ ಭ್ರಷ್ಟಾಚಾರ ಮಿತಿ ಮೀರಿದೆ. ಏನೇ ಮಾಡಿದ್ರೂ ಇದರ ಸದ್ದು ಅಡಗಿಸಲು ಸಾಧ್ಯವೇ ಆಗ್ತಿಲ್ಲ. ಭ್ರಷ್ಟಾಚಾರ ಮುಕ್ತ ಸಮಾಜ ಕಾಣೋದಂತೂ ಕನಸಿನ ಮಾತು ಎಂಬಂತಾಗಿದೆ. ಭ್ರಷ್ಟಾಚಾರ ತಡೆಗೆ ಹಲವು ಇಲಾಖೆಗಳು ಕೆಲಸ ಮಾಡ್ತಿದ್ರೂ ಇದಕ್ಕೆ ಕೊನೆಯೇ ಇಲ್ಲ. ಇನ್ನು ಈ ವಿಚಾರವಾಗಿ ಸುಪ್ರೀಂಕೋರ್ಟ್ ನಿವೃತ್ತ ನ್ಯಾ.ಎನ್.ಸಂತೋಷ್ ಹೆಗ್ಡೆ ಮಹತ್ವದ ಸಲಹೆ ಕೊಟ್ಟಿದ್ದಾರೆ. ರಾಜ್ಯದಲ್ಲಿ ಹಾಗೂ ದೇಶದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿರುವ ಅವರು ಬೇಸರ ವ್ಯಕ್ತಪಡಿಸಿದ್ದಾರೆ.

ಇನ್ನು ಭ್ರಷ್ಟಾಚಾರ ತಡೆಯಬೇಕು ಎಂದರೆ ದೇಶದಲ್ಲಿ ಚೀನಾದಲ್ಲಿರುವ ಶಿಕ್ಷೆಯ ಪದ್ಧತಿ ಜಾರಿಯಾಗಬೇಕು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ. ಈ ರೀತಿ ನಡೆದರೆ ಮಾತ್ರವೇ ಇಲ್ಲಿನ ಭ್ರಷ್ಟಾಚಾರವನ್ನು ಕಿತ್ತೊಗೆಯಲು ಸಾಧ್ಯ. ಭ್ರಷ್ಟಾಚಾರ ದಿನದಿಂದ ದಿನಕ್ಕೆ ಹೆಮ್ಮರವಾಗಿ ಬೆಳೆಯುತ್ತಿದೆ. ಸದ್ಯ ನಮ್ಮಲ್ಲಿರುವ ವಿಚಾರಣೆ ಪದ್ಧತಿ ಹಾಗೂ ಶಿಕ್ಷೆಗಳಿಗೆ ಯಾವುದೇ ಬೆಲೆ ಇಲ್ಲ ಎನ್ನುವಂತಾಗಿದೆ. ಭ್ರಷ್ಟಾಚಾರಿಗಳಿಗೆ ಗಲ್ಲು ಶಿಕ್ಷೆಯಂತಹ ಕಠಿಣ ಶಿಕ್ಷೆ ನೀಡಿದರೆ ಮಾತ್ರವೇ ದೇಶದಲ್ಲಿ ಭ್ರಷ್ಟಾಚಾರ ನಿರ್ಮೂಲನೆ ಆಗಲಿದೆ. ಭ್ರಷ್ಟಾಚಾರ ಮಾಡುವವರಿಗೆ ಶಿಕ್ಷೆಯ ಮೇಲೆ ಭಯವೇ ಇಲ್ಲ. ಮಹಾತ್ಮ ಗಾಂಧಿ ಅವರೇ ಜೈಲಿಗೆ ಹೋಗಿ ಬಂದಿದ್ದಾರೆ, ನಾವು ಹೋಗುವುದರಲ್ಲಿ ತಪ್ಪೇನು ಎನ್ನುವ ಭಾವನೆ ರಾಜಕಾರಣಿಗಳಲ್ಲಿದೆ. ಇದು ಅತ್ಯಂತ ನೋವಿನ ಸಂಗತಿ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ಮನುಷ್ಯರಿಗೆ ಆಸೆ ಇರಬೇಕು, ಆದರೆ ಅದನ್ನು ತೀರಾ ಕೆಟ್ಟಹಂತಕ್ಕೆ ತೆಗೆದುಕೊಂಡು ಹೋಗಿದ್ದಾರೆ. ಉದಾಹರಣೆಗೆ ರಾಜ್ಯದಲ್ಲಿ ಮುಡಾ ಹಗರಣದ ಬಗ್ಗೆ ಖುದ್ದು ಉಚ್ಚ ನ್ಯಾಯಾಲಯವೇ ನಿರ್ದೇಶನ ನೀಡಿದ್ದರೂ ಮೊಂಡುತನ ಎಂಬುದು ನಿಂತಿಲ್ಲ. ಭ್ರಷ್ಟಾಚಾರದಿಂದ ಶ್ರೀಮಂತಿಕೆ ಬರಬಹುದು.

ಆದ್ರೆ, ನೆಮ್ಮದಿಯ ಬದುಕು ಸಿಗಲು ಸಾಧ್ಯವೇ ಇಲ್ಲ ಎಂದು ಸಿಎಂ ಸಿದ್ದರಾಮಯ್ಯ ಅವರ ಮುಡಾ ಕೇಸ್ ಅನ್ನು ಪ್ರಸ್ತಾಪಿಸಿದ್ದಾರೆ. ನಾನು ಈಗಾಗಲೇ ಸಾವಿರಾರು ಕಾಲೇಜುಗಳಿಗೆ ಭೇಟಿ ನೀಡಿದ್ದೇನೆ. ಅಲ್ಲಿನ ಯುವಜನರಲ್ಲಿ ಭ್ರಷ್ಟಾಚಾರ ನಿರ್ಮೂಲನೆ ಮಾಡುವ ಕುರಿತಾಗಿ ಅವರಲ್ಲಿ ಜಾಗೃತಿ ಮೂಡಿಸಿದ್ದೇನೆ. ಇದರಿಂದ ಸ್ವಲ್ಪಮಟ್ಟಿಗಾದರೂ ಸಮಾಜದಲ್ಲಿ ಬದಲಾವಣೆ ಆಗಬಹುದು.ಈ ವಿಚಾರದಲ್ಲಿ ಕ್ರಾಂತಿಕಾರಿ ಬದಲಾವಣೆ ಆಗಿದ್ದೇ ಆದಲ್ಲಿ, ದೇಶವೇ ಛಿದ್ರಗೊಳ್ಳುತ್ತೆ. ಹಾಗಾಗಿ ಯುವಜನರ ಭಾವನೆಗಳಲ್ಲಿ ಬದಲಾವಣೆ ತರಬೇಕೆಂದು ಈ ಪ್ರಯತ್ನ ನಡೆಸಿದ್ದೇನೆ. ಆದರೆ ಮುಂದಿನ ಭವಿಷ್ಯ ಜನರ ಕೈಯಲ್ಲೇ ಇದೆ, ಭ್ರಷ್ಟ ರಾಜಕಾರಣಿಗಳ ಬಗ್ಗೆಯೂ ಬೇಸರ ವ್ಯಕ್ತಪಡಿಸಿದ್ದಾರೆ. ಎಲ್ಲೆಡೆ ಮಿತಿಮೀರಿರುವ ಭ್ರಷ್ಟಾಚಾರ ನಿರ್ಮೂಲನೆ ಆದರೆ ಮಾತ್ರ ದೇಶ ಉಳಿಯುತ್ತದೆ ಎಂದು ಅವರು ಸಂದೇಶ ರವಾನಿಸಿದ್ದಾರೆ.



# ಕರ್ಫ್ಯೂ ವಿಸ್ತರಣೆ; ಅನಿರ್ದಿಷ್ಟಾವಧಿಗೆ ಶಾಲೆ-ಕಾಲೇಜು ಬಂದ್

**ಇಂಫಾಲ್, ನ.28 :** ಬುಧವಾರ ಕರ್ಫ್ಯೂ ವಿಸ್ತರಣೆಯೊಂದಿಗೆ ಶಾಲಾ-ಕಾಲೇಜುಗಳ ರಜೆಯನ್ನು ಅನಿರ್ದಿಷ್ಟ ಅವಧಿಯವರೆಗೆ ಮುಂದುವರಿಸಲಾಗಿದೆ ಎಂದು ಮಣಿಪುರ ಸರಕಾರವು ಘೋಷಿಸಿದೆ. ಪಶ್ಚಿಮ ಮತ್ತು ಪೂರ್ವ ಇಂಫಾಲಗಳ ಜಿಲ್ಲೆಗಳಾದ ಬಿಷ್ಣುಪುರ್, ತೌಬಲ್, ಕಾಕ್ಚಿಂಗ್ ಮತ್ತು ಜಿರಿಬಾಮ್ ಗಳ ಶಿಕ್ಷಣ ಸಂಸ್ಥೆಗಳಿಗೆ ಮುಂದಿನ ಆದೇಶ ಬರುವವರೆಗೂ ರಜೆ ಘೋಷಿಸಲಾಗಿದೆ.




ಮಣಿಪುರ ಮತ್ತು ಅಸ್ಸಾಂನ ಜಿರಿ ಮತ್ತು ಬರಾಕ್ ನದಿಗಳಿಂದ ಜಿರಿಬಾಮ್ನಲ್ಲಿ ಮೂವರು ಮಹಿಳೆಯರು ಮತ್ತು ಮೂವರು ಮಕ್ಕಳ ಮೃತದೇಹಗಳನ್ನು ವಶಪಡಿಸಿಕೊಂಡ ನಂತರ ಈ ಜಿಲ್ಲೆಗಳಲ್ಲಿ ನವೆಂಬರ್ 16 ರಿಂದ ಶಾಲೆಗಳು ಮತ್ತು ಕಾಲೇಜುಗಳನ್ನು ಮುಚ್ಚಲಾಗಿತ್ತು.

ಶಿಕ್ಷಣ ಇಲಾಖೆ ಹೊರಡಿಸಿದ ಆದೇಶದಲ್ಲಿ, ಕಣಿವೆ ಜಿಲ್ಲೆಗಳಲ್ಲಿರುವ ರಾಜ್ಯ ಸರ್ಕಾರಿ ಮತ್ತು ಸರ್ಕಾರಿ ಅನುದಾನಿತ, ಖಾಸಗಿ ಮತ್ತು ಕೇಂದ್ರೀಯ ಶಾಲೆಗಳ ಎಲ್ಲಾ ಶಾಲೆಗಳು ನ. 27 ರಿಂದ ಮುಂದಿನ ಆದೇಶದವರೆಗೆ ಮುಚ್ಚಲ್ಪಡುತ್ತವೆ ಎಂದು ಹೇಳಿದೆ.

ಕರ್ಫ್ಯೂ ವಿಧಿಸಿರುವ ಜಿಲ್ಲೆಗಳಲ್ಲಿರುವ ಸರ್ಕಾರಿ ಶಿಕ್ಷಣ ಸಂಸ್ಥೆಗಳು, ಉನ್ನತ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಅಡಿಯಲ್ಲಿರುವ ಸರ್ಕಾರಿ ಅನುದಾನಿತ ಕಾಲೇಜುಗಳು, ರಾಜ್ಯ ವಿಶ್ವವಿದ್ಯಾಲಯಗಳು ಸೇರಿದಂತೆ ಮುಂದಿನ ಆದೇಶದವರೆಗೆ ಮುಚ್ಚಲಾಗುವುದು ಎಂದು ಪ್ರತ್ಯೇಕ ಆದೇಶದಲ್ಲಿ ತಿಳಿಸಲಾಗಿದೆ.

ಏತನ್ಮಧ್ಯೆ, ಎಲ್ಲಾ ಐದು ಕಣಿವೆ ಜಿಲ್ಲೆಗಳಲ್ಲಿ ಮತ್ತು ಜಿರಿಬಾಮ್ನಲ್ಲಿ ಕರ್ಫ್ಯೂ ಅನ್ನು ಬೆಳಿಗ್ಗೆ 5 ರಿಂದ ಮಧ್ಯಾಹ್ನ 12 ರವರೆಗೆ ಸಡಿಲಿಸಿ, ಅಗತ್ಯ ವಸ್ತುಗಳು ಮತ್ತು ಔಷಧಿಗಳನ್ನು ಖರೀದಿಸಲು ಅನುವು ಮಾಡಿಕೊಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳು ಹೊರಡಿಸಿದ ಆದೇಶದಲ್ಲಿ ತಿಳಿಸಿದ್ದಾರೆ.



ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಬುಧವಾರ ನವದೆಹಲಿಯಲ್ಲಿ ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೇನ್ ಭೇಟಿಯಾಗಿದ್ದರು.

# ಲಖೀಂಪುರ ಖೇರಿ ಹಿಂಸಾಚಾರ ಪ್ರಕರಣ: ಪ್ರತಿಕ್ರಿಯೆ ನೀಡುವಂತೆ ಆಶಿಶ್ ಮಿಶ್ರಾಗೆ ಸೂಚನೆ

**ಲಕನೌ, ನ. 27:** 2021ರ ಲಖೀಂಪುರ ಖೇರಿ ಹಿಂಸಾಚಾರದ ಪ್ರಕರಣದಲ್ಲಿ ಸಾಕ್ಷಿಗಳಿಗೆ ಬೆದರಿಕೆ ಹಾಕಲಾಗುತ್ತಿದೆ ಎಂಬ ಆರೋಪಕ್ಕೆ ಪ್ರತಿಕ್ರಿಯಿಸುವಂತೆ ಕೇಂದ್ರ ಸರ್ಕಾರದ ಮಾಜಿ ಸಚಿವ ಅಜಯ್ ಮಿಶ್ರಾ ಅವರ ಪುತ್ರ ಆಶಿಶ್ ಮಿಶ್ರಾ ಅವರಿಗೆ ಸುಪ್ರೀಂ ಕೋರ್ಟ್ ಬುಧವಾರ ಸೂಚಿಸಿದೆ. ನ್ಯಾಯಮೂರ್ತಿಗಳಾದ ಸೂರ್ಯ ಕಾಂತ್ ಮತ್ತು ಉಜ್ಜಲ್ ಭುಯಾನ್ ಅವರ ಪೀಠವು ಮಿಶ್ರಾ ಅವರ ಪರವಾಗಿ ಹಾಜರಿದ್ದ ಹಿರಿಯ ವಕೀಲ ಸಿದ್ಧಾರ್ಥ್ ದವೆ ಅವರು ಆರೋಪಗಳನ್ನು ನಿರಾಕರಿಸಿದ ನಂತರ ತಮ್ಮ ನಿಲುವನ್ನು ಸ್ಪಷ್ಟಪಡಿಸುವ ಅಫಿಡವಿಟ್ ಸಲ್ಲಿಸುವಂತೆ ಕೇಳಿದ್ದಾರೆ.

ಆರಂಭದಲ್ಲಿ, ಪ್ರಕರಣದ ದೂರುದಾರರೊಬ್ಬರ ಪರವಾಗಿ ಹಾಜರಾದ ವಕೀಲರು ನ್ಯಾಯಾಲಯಕ್ಕೆ ಈ ಬಗ್ಗೆ ತಿಳಿಸಿದ್ದು, ಮಿಶ್ರಾ ಅವರು ಸಾಕ್ಷಿಗಳಿಗೆ ಬೆದರಿಕೆ ಹಾಕಿದ್ದಾರೆ ಎಂದು ಅವರು ಅರ್ಜಿ ಸಲ್ಲಿಸಿದ್ದಾರೆ. ಮಿಶ್ರ ಪರ ವಕೀಲ ದವೆ ಈ ಆರೋಪಗಳನ್ನು ನಿರಾಕರಿಸಿದ್ದು, ಇದು ಅಂತ್ಯವಿಲ್ಲದ ಪ್ರಕ್ರಿಯೆ ಎಂದು ಹೇಳಿದ್ದಾರೆ.ಈ ಬಗ್ಗೆ ನಾಲ್ಕು ವಾರಗಳಲ್ಲಿ ಆರೋಪಗಳನ್ನು ನಿರಾಕರಿಸಿ ಅಫಿಡವಿಟ್ ಸಲ್ಲಿಸುವಂತೆ ಮಿಶ್ರಾ ಅವರಿಗೆ ಸುಪ್ರೀಂ ಕೋರ್ಟ್ ಹೇಳಿತು. ಜುಲೈ 22 ರಂದು, ನ್ಯಾಯಾಲಯವು ಆಶಿಶ್ ಮಿಶ್ರಾಗೆ ಜಾಮೀನು ನೀಡಿದ್ದು, ದೆಹಲಿ ಅಥವಾ ಲಕ್ನೋಗೆ ಅವರು ಸಂಚಾರ ಮಾಡದಂತೆ ನಿರ್ಬಂಧಿಸಿದೆ. ಫೆಬ್ರವರಿಯಲ್ಲಿ ಸುಪ್ರೀಂ ಕೋರ್ಟ್ ಆಶಿಶ್ ಮಿಶ್ರಾ ಅವರ ಮಧ್ಯಂತರ ಜಾಮೀನನ್ನು ವಿಸ್ತರಿಸಿತ್ತು. ಲಖಿಂಪುರ ಖೇರಿ ಹಿಂಸಾಚಾರದ

ಕಳೆದ ವರ್ಷ ಜನವರಿ 25 ರಂದು, ಘೋರ ಘಟನೆಯ ಪ್ರಕರಣದಲ್ಲಿ ಆಶಿಶ್ ಮಿಶ್ರಾ ಅವರಿಗೆ ಸುಪ್ರೀಂ ಕೋರ್ಟ್ ಮಧ್ಯಂತರ ಜಾಮೀನು ನೀಡಿತ್ತು. ಈ ಪ್ರಕರಣದಲ್ಲಿ ನಾಲ್ವರು ರೈತರಾದ ಗುರುವಿಂದರ್ ಸಿಂಗ್, ಕಮಲ್‌ಜಿತ್ ಸಿಂಗ್, ಗುರುಪ್ರೀತ್ ಸಿಂಗ್ ಮತ್ತು ವಿಚಿತ್ರಾ ಸಿಂಗ್ ಅವರಿಗೆ ಜಾಮೀನು ಮಂಜೂರು ಮಾಡಿದ್ದು, ವಿಚಾರಣೆಯನ್ನು ತ್ವರಿತಗೊಳಿಸುವಂತೆ ವಿಚಾರಣಾ ನ್ಯಾಯಾಲಯಕ್ಕೆ ಸೂಚಿಸಿದೆ.

ಅಕ್ಟೋಬರ್ 3, 2021 ರಂದು ಸಂಭವಿಸಿದ ಈ ದುರ್ಘಟನೆಯಲ್ಲಿ ಉತ್ತರ ಪ್ರದೇಶದ ಲಖಿಂಪುರ ಖೇರಿ ಜಿಲ್ಲೆಯ ಟಿಕುನಿಯಾದಲ್ಲಿ ನಾಲ್ವರು ರೈತರು ಸೇರಿದಂತೆ ಎಂಟು ಜನರು ಕೊಲ್ಲಲ್ಪಟ್ಟರು. ಉಪಮುಖ್ಯಮಂತ್ರಿ ಕೇಶವ್ ಪ್ರಸಾದ್ ಮೌರ್ಯ ಅವರ ಭೇಟಿಯನ್ನು ವಿರೋಧಿಸಿ ರೈತರು ಪ್ರತಿಭಟನೆ ನಡೆಸುತ್ತಿದ್ದಾಗ ಈ ಹಿಂಸಾಚಾರ ಭುಗಿಲೆದ್ದಿತ್ತು. ಸ್ಪೋರ್ಟ್ಸ್ ಯುಟಿಲಿಟಿ ವಾಹನವನ್ನು ಹರಿಸಿ ನಾಲ್ವರು ರೈತರನ್ನು ಹತ್ಯೆ ಮಾಡಲಾಗಿತ್ತು. ಈ ಘಟನೆಯಿಂದ ಉದ್ರಿಕ್ತಗೊಂಡ ರೈತರ ಗುಂಪು ಒಬ್ಬ ಚಾಲಕ ಮತ್ತು ಇಬ್ಬರು ಬಿಜೆಪಿ ಕಾರ್ಯಕರ್ತರನ್ನು ಹೊಡೆದು ಕೊಂದಿದ್ದಾರೆ ಎಂದು ಆರೋಪಿಸಲಾಗಿದೆ. ಹಿಂಸಾಚಾರದಲ್ಲಿ ಒಬ್ಬ ಪತ್ರಕರ್ತನೂ ಸಾವನ್ನಪ್ಪಿದ್ದಾರೆ.

ಕಳೆದ ವರ್ಷ ಜನವರಿ 25 ರಂದು ಸುಪ್ರೀಂ ಕೋರ್ಟ್ ಮಧ್ಯಂತರ ಜಾಮೀನಿನ ಅವಧಿಯಲ್ಲಿ ಆಶಿಶ್ ಮಿಶ್ರಾ ಉತ್ತರ ಪ್ರದೇಶ ಅಥವಾ ದೆಹಲಿಯಲ್ಲಿ ಉಳಿಯಬಾರದು ಎಂದು ಹೇಳಿತ್ತು. ಪ್ರಕರಣದಲ್ಲಿ ಸಾಕ್ಷಿಗಳ ಮೇಲೆ ಯಾವುದೇ ಪ್ರಭಾವ ಬೀರುವುದನ್ನು ತಪ್ಪಿಸುವ ಉದ್ದೇಶದಿಂದ ಇದನ್ನು ಮಾಡಲಾಗಿತ್ತು. ನಂತರ, ಸೆಪ್ಟೆಂಬರ್ 26 ರಂದು, ಅವರು ತಮ್ಮ ಅನಾರೋಗ್ಯ ಪೀಡಿತ ತಾಯಿಯನ್ನು ನೋಡಿಕೊಳ್ಳಲು ಮತ್ತು ಅವರ ಮಗಳ ಚಿಕಿತ್ಸೆಗಾಗಿ ದೆಹಲಿಗೆ ಭೇಟಿ ನೀಡಲು ಮತ್ತು ಉಳಿಯಲು ಅನುವು ಮಾಡಿಕೊಡಲು ಅವರ ನೀಡಿದ್ದ ಜಾಮೀನಿನ ಷರತ್ತುಗಳನ್ನು ಸುಪ್ರೀಂ ಕೋರ್ಟ್ ಸಡಿಲಗೊಳಿಸಿತ್ತು.

# ದೆಹಲಿ ಕರ್ನಾಟಕ ಸಂಘದಲ್ಲಿ ವಿಜೃಂಭಣೆಯ ಕರ್ನಾಟಕ ರಾಜ್ಯೋತ್ಸವ ಸಂಭ್ರಮ

**ನವದೆಹಲಿ ನ.27 :** ಇಲ್ಲಿನ ಆರ್. ಕೆ. ಪುರಂ ಸೆಕ್ಟರ್ 12 ರಲ್ಲಿರುವ ದೆಹಲಿ ಕರ್ನಾಟಕ ಸಂಘವು 69ನೇ ಕರ್ನಾಟಕ ರಾಜ್ಯೋತ್ಸವ ಸಂಭ್ರಮ ಕಾರ್ಯಕ್ರಮವನ್ನು ದಿನಾಂಕ 24.11.2024 ರಂದು ಆಯೋಜಿಸಿತ್ತು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ರಾಜ್ಯಸಭಾ ಸಂಸದೆ ಡಾ. ಸುಧಾಮೂರ್ತಿ ಹಾಗೂ ವಿಶೇಷ ಅತಿಥಿಗಳಾಗಿ ಭಾರತ ಸರ್ಕಾರದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಜಂಟಿ ಕಾರ್ಯದರ್ಶಿಗಳಾದ ಡಾ. ಕೆ.ಜೆ. ಶ್ರೀನಿವಾಸ್ ಅವರು ಆಗಮಿಸಿದ್ದರು. ಸಂಘಕ್ಕೆ ಮತ್ತು ಕನ್ನಡಿಗರಿಗೆ ಮಾಡಿದ ಸೇವೆಯನ್ನು ಗುರುತಿಸಿ ಇಲ್ಲಿನ ಹಿರಿಯ ಕನ್ನಡಿಗರಿಗೆ ಮತ್ತು ಸಾಧಕರಿಗೆ ಪ್ರತಿವರ್ಷ ಸಂಘದಿಂದ ರಾಜ್ಯೋತ್ಸವ ಸಂಧರ್ಭದಲ್ಲಿ ಪ್ರದಾನ ಮಾಡುವ 'ವಿಶಿಷ್ಟ ಕನ್ನಡಿಗ' ಪ್ರಶಸ್ತಿಗೆ ಈ ಬಾರಿ ಭಾಜನರಾದ ಸರವು ಕೃಷ್ಣಭಟ್, ಡಾ. ಕೆ.ಎಸ್. ಸೋಮಶೇಖರ್, ಶ್ರೀ ಬಸ್ತಿ ದಿನೇಶ್ ಶೆಣೈ ಹಾಗೂ ರಾಜೇಶ್ವರಿ ಭಟ್ ಅವರು ಉಪಸ್ಥಿತರಿದ್ದರು. ಸಮಾರಂಭದ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ಸಿ.ಎಂ. ನಾಗರಾಜ ಅವರು ವಹಿಸಿದ್ದರು, ಪ್ರಧಾನ ಕಾರ್ಯದರ್ಶಿ ರಾಧಾಕೃಷ್ಣ ಅವರು ವೇದಿಕೆ ಮೇಲಿದ್ದರು. ಕಾರ್ಯಕ್ರಮದ ನಿರೂಪಣೆಯನ್ನು ಸಂಘದ ಉಪಾಧ್ಯಕ್ಷೆ ಪೂಜಾ ಪಿ. ರಾವ್ ನಡೆಸಿದರು.

ಸಂಘದ ಉಪಾಧ್ಯಕ್ಷ ವಸಂತ ಶೆಟ್ಟಿ ಬೆಳ್ಳಾರೆ ಅವರು ಎಲ್ಲರನ್ನು ಆತ್ಮೀಯವಾಗಿ ಸ್ವಾಗತಿಸಿದರು. ಕಾರ್ಯಕಾರಿ ಸಮಿತಿಯ ಮಹಿಳಾ ಪದಾಧಿಕಾರಿಗಳು ಮತ್ತು ಸದಸ್ಯೆಯರು ನಾಡಗೀತೆಗೆ ಧ್ವನಿಯಾದರು, ಸಭಿಕರು ಮತ್ತು ಗಣ್ಯರು ಎದ್ದು ನಿಂತು ತಾಯಿ ಭುವನೇಶ್ವರಿಗೆ ನಮಿಸಿದರು. ಸಭಾ ಕಾರ್ಯಕ್ರಮವು ಅತಿಥಿ ಗಣ್ಯರಿಂದ ದೀಪ ಪ್ರಜ್ವಲನೆಯೊಂದಿಗೆ ಪ್ರಾರಂಭಗೊಂಡಿತು.

ವಿಶಿಷ್ಟ ಕನ್ನಡಿಗ ಪ್ರಶಸ್ತಿಯನ್ನು ಅತಿಥಿಗಳಿಂದ ನಾಲ್ಕೂ ಸಾಧಕರಿಗೆ ಪ್ರದಾನ ಮಾಡಿ ಗೌರವಿಸಲಾಯಿತು. ಶ್ರೀ ಸರವು ಕೃಷ್ಣಭಟ್, ಡಾ. ಕೆ.ಎಸ್. ಸೋಮಶೇಖರ್, ಬಸ್ತಿ ದಿನೇಶ್ ಶೆಣೈ ಹಾಗೂ ರಾಜೇಶ್ವರಿ ಭಟ್ ಅವರ ಪರಿಚಯವನ್ನು ಕ್ರಮವಾಗಿ ಸಂಘದ ಕಾರ್ಯಕಾರಿ ಸಮಿತಿ ಸದಸ್ಯರಾದ ಮಾಲಿನಿ ಪ್ರಹ್ಲಾದ, ಜಂಟಿ ಕಾರ್ಯದರ್ಶಿ ನಾರಾಯಣ ಬಿ. ಸದಸ್ಯ ಕೆ.ಎಸ್.ಮೂರ್ತಿ ಮತ್ತು ಉಪಾಧ್ಯಕ್ಷರು ವಸಂತ್ ಶೆಟ್ಟಿ ಬೆಳ್ಳಾರೆ ಅವರು ಮಾಡಿಕೊಟ್ಟರು.

ಪ್ರಶಸ್ತಿ ಸ್ವೀಕರಿಸಿ ಮೊದಲು ಮಾತನಾಡಿದ ಸರವು ಕೃಷ್ಣ ಭಟ್ ಅವರು ಕೊಡುಗೆ ಕೊಡುಗೈ ಎಂಬ ಪದಕ್ಕೆ ಭಾಷ್ಯ ಬರೆದಂತಹ ನಮ್ಮ ಹಿರಿಯರು, ಜನರ ಬದುಕಿಗೆ ಬಾಳಿಗೆ ಕಲೆಗೆ ಸಂಸ್ಕೃತಿಗೆ ಕೊಡುಗೆಯನ್ನು ನೀಡಿದಂತಹ ಡಾ. ಸುಧಾಮೂರ್ತಿ ಅವರನ್ನು ಸಂಭೋದಿಸುತ್ತಾ, ದೆಹಲಿ ಕರ್ನಾಟಕ ಸಂಘ ನನ್ನ ಮನೆ ಎಂದು ತಿಳಿದುಕೊಂಡಿದ್ದೇನೆ. ಆ ದೃಷ್ಟಿಯಿಂದ ಮನೆಯಿಂದ ನೀಡಿದಂತಹ ಆಶೀರ್ವಾದ ಸನ್ಮಾನ ಏನಿದ್ದರೂ ಕೂಡ ಅದು ಯಾವಾಗಲೂ ನೆನಪಾಗಿ ಉಳಿಯುವಂತದ್ದು ಆ ದೃಷ್ಟಿಯಿಂದ ನನಗಿದು ಧನ್ಯತೆಯ ನೆನಪನ್ನು ಮಾಡಿಕೊಡುತ್ತಿದೆ ಧನ್ಯತೆಯನ್ನು ತಂದಿದೆ ಎಂದರು. ಸಂಸ್ಥೆಯೊಂದು ಬೆಳೆಯಬೇಕು ಎಂದಾದರೆ ನಿಧಿ, ನಿಯತ್ತು, ನಿರ್ವಹಣೆ ಈ ಮೂರು ವಿಷಯಗಳು ಬಹಳ ಮುಖ್ಯವಾಗುತ್ತವೆ. ಈ ಮೂರನ್ನು ದೆಹಲಿ ಕರ್ನಾಟಕ ಸಂಘ ಈ 75 ವರ್ಷಗಳ ಇತಿಹಾಸದಲ್ಲಿ ಉಳಿಸಿಕೊಂಡು ಬಂದಿದೆ. ಇಂದು ನಿಯತ್ತು, ನಿಧಿ ಜೊತೆಗೆ ನಿರ್ವಹಣೆ ಸಿ.ಎಂ.ನಾಗರಾಜ ಅವರ ಅಧ್ಯಕ್ಷತೆಯಲ್ಲಿ ಬಹಳ ಜೋರಾಗಿ ನಡೆಯುತ್ತಿದೆ. ಆ ದೃಷ್ಟಿಯಿಂದ ಇಂದು ಸಂಘ ಪರಿಪೂರ್ಣ ಸಂಸ್ಥೆಯಾಗಿ ಬೆಳೆಯುವುದಕ್ಕೆ ಬೇಕಾದ ಎಲ್ಲಾ ನಿಧಿ ಇದೆ, ಜನಪ್ರತಿನಿಧಿ ಇದೆ, ಧನ ನಿಧಿ, ಕನ್ನಡದ ಮನಸುಗಳಿವೆ. ಹಾಗಾಗಿ ನಮ್ಮ ದೆಹಲಿ ಕರ್ನಾಟಕ ಸಂಘ ರಾಷ್ಟ್ರದಲ್ಲಿ ಮಾತ್ರವಲ್ಲದೇ ಪ್ರಪಂಚದಲ್ಲಿಯೇ ಮೇರು ಕನ್ನಡ ಸಂಘವಾಗಿ ಬೆಳೆಯುವುದರಲ್ಲಿ ಯಾವುದೇ ಸಂದೇಹ ಸಂಶಯವು ಇಲ್ಲ ಎಂದರು. ಪ್ರಾರಂಭದಲ್ಲಿ ನಿಯತ್ತಿನಲ್ಲಿ ಇದು ಒಂದು ಚಿಕ್ಕ ಸಂಘವಾಗಿ ಬೆಳೆದರೂ ಕೂಡ ಪ್ರಸ್ತುತ ಸಿ.ಎಂ. ನಾಗರಾಜ ಅವರ ಅಧ್ಯಕ್ಷತೆಯಲ್ಲಿ ನಿರ್ವಹಣೆಗೆ ಬೇಕಾದ ನಿಧಿ ಸಂಗ್ರಹವು ಸಾಕಷ್ಟು ಆಗಿದೆ. 75ನೇ ವರ್ಷದ ಹಬ್ಬವಾಗಿದೆ. ಇತಿಹಾಸದಲ್ಲಿ ಎಂದೂ ಕಂಡರಿಯದಂತಹಒಂದು ಅಮೃತ ಮಹೋತ್ಸವದ ಕಾರ್ಯಕ್ರಮವನ್ನು ನಾವು ನೋಡಿದ್ದೇವೆ. ಅದು ನಮ್ಮ ಬದುಕಿನಲ್ಲಿ ಎಂದೂ ಮರೆಯಲಾಗದಂತಹ ಸತ್ಯ. ಸಿ. ಎಂ. ನಾಗರಾಜರ ಅಧ್ಯಕ್ಷತೆಯಲ್ಲಿ ಸಂಘ ಇನ್ನೂ ಬೆಳೆಯಲಿ. ಈಗ ಕಾರ್ಯಕಾರಿ ಸಮಿತಿಯಲ್ಲಿ ವಸಂತ ಶೆಟ್ಟಿ ಬೆಳ್ಳಾರೆ, ಡಾ. ವೆಂಕಟಾಚಲ ಹೆಗಡೆ ಅವರಂತಹ ಅನುಭವಿ ಹಿರಿಯರಿದ್ದಾರೆ, ಅವರ ಮಾರ್ಗದರ್ಶನದೊಂದಿಗೆ ಮುಂದುವರಿಯಬೇಕು, ನಿಧಿ, ನಿಯತ್ತು ನಿರ್ವಹಣೆ ಜೊತೆಗೆ ಬಹಳ ಅಗತ್ಯವಾದ ಮುಂದಿನ ಕೆಲಸವಾದ ರಕ್ಷಣೆಯನ್ನು ಮಾಡಬೇಕಾದದ್ದು ಮುಖ್ಯ. ಸಂಘ ದೊಡ್ಡದಾಗಿ ಬೆಳೆದಾಗ ಅದನ್ನು ಕಾಪಾಡಿಕೊಂಡು ಬರಬೇಕಾಗಿದ್ದುದು ನಿರ್ವಹಣೆ ಈ ಸ್ಥಿತಿಯಲ್ಲಿ ನಿಮ್ಮೆಲ್ಲರ ಸಹಕಾರ ಇರಲಿ ಸಂಘ ಬೆಳೆಯುತ್ತಾ ಹೋಗಲಿ ಎಂದು



ಆಶಿಸಿದರು.

ಪ್ರಶಸ್ತಿ ಸ್ವೀಕರಿಸಿದ ಮತ್ತೋರ್ವ ಡಾ. ಕೆ.ಎಸ್. ಸೋಮಶೇಖರ್ ಅವರು ಮಾತನಾಡಿದ ಅವರು, ಈ ವಿಶಿಷ್ಟ ಕನ್ನಡಿಗ ಪ್ರಶಸ್ತಿಗೆ ತಮ್ಮನ್ನು ಆಯ್ಕೆ ಮಾಡಿದ್ದಕ್ಕೆ ಧನ್ಯವಾದಗಳನ್ನು ತಿಳಿಸಿದರು. ಡಾ.ಸುಧಾಮೂರ್ತಿ ಅವರ ಕುರಿತು ಮಾತನಾಡಿದ ಸೋಮಶೇಖರ್ ಅವರುಈ ಹಿಂದೆ ಕೇವಲ ನಮಗೆ ಬೆಂಗಳೂರಿನಲ್ಲಿ ಮಾತ್ರ ಸಿಗುತ್ತಿದ್ದರು, ಅವರ ಕುರಿತಾಗಿ ಪೇಪರ್ ಅಲ್ಲಿ ಓದುವುದು ಟಿವಿಯಲ್ಲಿ ನೋಡುವ ಪ್ರಸಂಗ ಇತ್ತು. ಈಗ ರಾಜ್ಯಸಭಾ ಸದಸ್ಯರಾದ ನಂತರ ಅವರು ಬೆಂಗಳೂರಿಗಿಂತ ದೆಹಲಿಯಲ್ಲೇ ಜಾಸ್ತಿ ಇರಬೇಕಾಗಿದೆ. ಈ ದೆಹಲಿಯಲ್ಲಿ ಬಹಳಷ್ಟು ಸಂಸದರು ಇದ್ದಾರೆ ಇನ್ನೂ ತುಂಬಾ ಮುಖ್ಯ ವ್ಯಕ್ತಿಗಳಿದ್ದಾರೆ, ಆದರೆ ಸುಧಾ ಮೂರ್ತಿ ಅವರು ಕನ್ನಡಿಗರಾಗಿ ಗುರುತಿಸಿಕೊಂಡಿರುವುದು ನಮಗೆ ಅತ್ಯಂತ ಹೆಮ್ಮೆಯ ವಿಷಯವಾಗಿದೆ. ಈ ಘನ ಸರ್ಕಾರ ಅವರನ್ನು ಗುರುತಿಸಿ ರಾಜ್ಯಸಭಾ ಸದಸ್ಯರನ್ನಾಗಿ ಮಾಡಿದ್ದು ಗೌರವಯುತವಾದ ಕೆಲಸ. ರಾಜ್ಯ ಸಭಾ ಸದಸ್ಯರಾದ ಆರು ತಿಂಗಳಲ್ಲೇ ಹೆಚ್ಚು ಕಡಿಮೆ ಅವರು ದೆಹಲಿ ಕನ್ನಡತಿ ಆಗಿಬಿಟ್ಟಿದ್ದಾರೆ. ಮುಂದಿನ ಐದು ವರ್ಷದಲ್ಲಿ ಪೂರ್ತಿ ದೆಹಲಿ ಕನ್ನಡತಿಯಾಗಿ ಅವರ ಸೇವೆ ದೆಹಲಿ ಕನ್ನಡಿಗರಿಗೆ ಮತ್ತು ದೆಹಲಿ ಸುತ್ತಮುತ್ತಲಿನ ಕನ್ನಡ ಸಂಘ ಸಂಸ್ಥೆಗಳಿಗೆ ಸಿಗಲಿ ಎಂದು ಅವರಿಗೆ ಧನ್ಯವಾದಗಳನ್ನು ತಿಳಿಸಿದರು. ಹಾಗೇನೇ, ತಾವು 31 ವರ್ಷಗಳ ಹಿಂದೆ ಇದೇ ದಿನ ದೆಹಲಿಗೆ ಬಂದಿದ್ದನ್ನು ನೆನಪಿಸಿಕೊಂಡು, ಇಲ್ಲಿನ ಸಂಸತ್ ಭವನದಲ್ಲಿ ಮತ್ತು ವಿವಿಧ ಕೇಂದ್ರ ಮಂತ್ರಿಗಳೊಂದಿಗೆ ಕಾರ್ಯನಿರ್ವಹಿಸಿದ ಅನುಭವಗಳನ್ನು ಹಂಚಿಕೊಂಡರು ಹಾಗೂ ಆಗಿನ ಕಾಲದಲ್ಲಿ ಬೆಂಗಳೂರಿನಿಂದ ದೆಹಲಿಗೆ ಬರಲು ಇದ್ದ ರೈಲ್ವೆ ಮತ್ತು ವಿಮಾನಯಾನ ಸಮಸ್ಯೆ ಸಂಕಷ್ಟ ಗಳ ಬಗ್ಗೆ ತಿಳಿಸಿದರು, ತಮಗೆ ಇಂದು ಪ್ರಶಸ್ತಿ ನೀಡಿ ಗೌರವಿಸಿದ್ದಕ್ಕೆ ಸಂಘದ ಅಧ್ಯಕ್ಷರು, ಪದಾಧಿಕಾರಿಗಳು ಮತ್ತು ದೆಹಲಿ ಕನ್ನಡಿಗರಿಗೆ ಕೃತಜ್ಞತೆ ಸಲ್ಲಿಸಿದರು.

ವಿಶಿಷ್ಟ ಕನ್ನಡಿಗ ಪ್ರಶಸ್ತಿಯನ್ನು ಸ್ವೀಕರಿಸಿದ ಬಸ್ತಿ ದಿನೇಶ್ ಶೆಣೈ ಅವರು ಮಾತನಾಡಿದ ಅವರು, ಮೊದಲಿಗೆ 27 ವರ್ಷಗಳ ಹಿಂದೆ ದೆಹಲಿಗೆ ಬಂದು ವೃತ್ತಿ ಜೀವನವನ್ನು ಪ್ರಾರಂಭ ಮಾಡಿದ್ದಾಗ ದೆಹಲಿ ಕರ್ನಾಟಕ ಸಂಘದಲ್ಲಿ ಫೋಟೋಗ್ರಾಫರ್ ಆಗಿ ಕೆಲಸ ಮಾಡಿದ್ದನ್ನು ಸ್ಮರಿಸುತ್ತಾ ಭಾವುಕರಾದರು. ಅದೇ ಸಂಘದಿಂದ ಇಂದು ಸನ್ಮಾನವನ್ನು ಸ್ವೀಕರಿಸುತ್ತಿರುವುದು ನನ್ನ ಸೌಭಾಗ್ಯ ಎಂದು ತಿಳಿಸುತ್ತಾ ತಮ್ಮನ್ನು ಗುರುತಿಸಿ ಅಭಿನಂದಿಸಿದ್ದಕ್ಕಾಗಿ ಕೃತಜ್ಞತೆಯನ್ನು ಅರ್ಪಿಸಿದರು.

ಸಂಘದ ಕಾರ್ಯಕ್ರಮಗಳ ಛಾಯಾಗ್ರಹಣಕ್ಕಾಗಿ ಪ್ರತಿ ಒಂದು ಫೋಟೋಕ್ಕೆ 20 ರೂಪಾಯಿ ನೀಡುತ್ತಿದ್ದ ಕಾಲ ದಿಂದ ಹಿಡಿದು ರಾಷ್ಟ್ರಪತಿಗಳಿಂದ ರಾಷ್ಟ್ರೀಯ ಚಲನ ಚಿತ್ರ ಪ್ರಶಸ್ತಿ ಪಡೆಯುವವರೆಗಿನ ತಮ್ಮ ಪಯಣದಲ್ಲಿ ಸಾಕಿ ಸಲಹಿದೆ ನಮ್ಮ ಈ ಕರ್ನಾಟಕ ಸಂಘ, ಅದೇ ಸಂಘದಿಂದ ನಾನು ಸನ್ಮಾನವನ್ನು ತೆಗೆದುಕೊಳ್ಳುವ ಯೋಗ ಬಂದಿರುವುದು ನನ್ನ ಸೌಭಾಗ್ಯ, ಇದಕ್ಕೆ ನಾನು ಅಧ್ಯಕ್ಷರು ಮತ್ತು ಪದಾಧಿಕಾರಿಗಳಿಗೆ ಕೃತಜ್ಞನಾಗಿದ್ದೇನೆ, ಮುಂದೆಯೂ ಸಂಘದ ಜೊತೆ ಇರುತ್ತೇನೆ ಎಂದರು.

ಇನ್ನೋರ್ವ ಪ್ರಶಸ್ತಿ ಪುರಸ್ಕೃತರಾದ ರಾಜೇಶ್ವರಿ ಭಟ್ ಅವರು ಮಾತನಾಡಿದ ಅವರು, ಬುಧವಾರ ನನ್ನ ಜೀವನದ ಸ್ವರ್ಣಕ್ಷಣಗಳಲ್ಲಿ ಒಂದು ಎಂದು ನಾನು ಅಭಿಮಾನದಿಂದ ಹೇಳಬಯಸುತ್ತೇನೆ. ಈ ದಿನ ನೀವು ನನ್ನನ್ನು ಪ್ರೀತಿಯಿಂದ ಕರೆದು ಪ್ರಶಸ್ತಿ ನೀಡಿ ಗೌರವಿಸಿ ಸನ್ಮಾನ ನೀಡಿದಾಗ ನನ್ನಿಂದ ಇನ್ನಷ್ಟು ಸಾಧನೆಯನ್ನು ನಾವು ನಿರೀಕ್ಷಿಸುತ್ತಿದ್ದೇವೆ ಎಂದು ಆದೇಶಿಸಿದಂತೆ ನನಗೆ ತೋರುತ್ತದೆ. ಒಬ್ಬ ಕಲಾವಿದೆಯಾಗಿ ನನಗೆ ಹಲವಾರು ಕಡೆಯಿಂದ ಪ್ರಶಸ್ತಿಗಳು ಸಿಕ್ಕಿವೆ. ಮಲಯಾಳಂ ತಮಿಳ್ ತೆಲುಗು ಒಡಿಸ್ಸಾ ಬಂಗಾಳಿ ಮುಂತಾದ ಬೇರೆ ಭಾಷೆಯ ಸಂಘಗಳು ನನ್ನನ್ನು ಸನ್ಮಾನಿಸಿದೆ. ಕಾಸರಗೋಡು ಮಂಗಳೂರು ಬೆಂಗಳೂರು ಬೆಳಗಾವಿ ಹಾಸನ ಮೊದಲಾದಡೆಗಳೆಲ್ಲ ನನಗೆ ಗೌರವ ದೊರಕಿದೆ. ಆದರೆ ಈ ದಿನ ದೊರಕಿದ ಈ ಗೌರವ ನನ್ನ ಜೀವನದ ವಿಶೇಷವಾದ ಗೌರವ ಎಂದು ನುಡಿದರು. ಕಳೆದ 28 ವರ್ಷಗಳಿಂದಲೂ ದೆಹಲಿಯಲ್ಲಿದ್ದೇನೆ. ಇಲ್ಲಿದ್ದು ದೆಹಲಿಯವಳೇ ಆಗಿಬಿಟ್ಟಿದ್ದೇನೆ. ನಮ್ಮವರೇ ನನ್ನನ್ನು ಕರೆದು ನನ್ನನ್ನು ಮನೆ ಮಗಳು ಎಂದು ಅಭಿಮಾನದಿಂದ ಸ್ವೀಕರಿಸಿ ನೀನು ಏನೋ ಸಾಧನೆಯನ್ನು ಮಾಡಿದ್ದಿ ಎಂದು ಬೆನ್ನು ತಟ್ಟಿ ಹೇಳುವಾಗ ನನಗೆ ನಿಜವಾಗಿಯೂ ಎವರೆಸ್ಟ್ ಶಿಖರವನ್ನು ಏರಿದಂತೆ ಭಾಸವಾಗುತ್ತಿದೆ ಎಂದು ನುಡಿದರು. ನಮ್ಮವರೇ ನನ್ನನ್ನು ಬೆನ್ನು ತಟ್ಟಿ ಪ್ರೋತ್ಸಾಹಿಸಿದ ಈ ಶುಭ ವೇಳೆಯಲ್ಲಿ ಅದಕ್ಕೆ ಕಾರಣರಾದ ದೆಹಲಿ ಕರ್ನಾಟಕ ಸಂಘದ ಅಧ್ಯಕ್ಷರಾದ ಶ್ರೀ ಸಿಎಂ ನಾಗರಾಜ ನನ್ನ ಸ್ನೇಹಿತೆ ಶ್ರೀಮತಿ ಪೂಜಾ ರಾವ್ ಮತ್ತೆ ಎಲ್ಲಾ ನನ್ನ ಕಾರ್ಯಕರ್ತರಿಗೆ ನನ್ನ ವಂದನೆಗಳನ್ನು ಸಲ್ಲಿಸುತ್ತೇನೆ ಎಂದರು.

ಮುಖ್ಯ ಅತಿಥಿಗಳಾಗಿ ಉಪಸ್ಥಿತರಿದ್ದ ಡಾ.ಕೆ.ಜೆ.ಶ್ರೀನಿವಾಸ್ ಅವರು ಮಾತನಾಡಿದ ಅವರು, ಕಳೆದ ವರ್ಷ ತಾವು ವೆಸ್ಟ್ ಇಂಡೀಸ್‌ನ ರಾಯಭಾರಿಯಾಗಿ ಕಾರ್ಯ ನಿರ್ವಹಿಸಿದ ನಂತರ ಭಾರತಕ್ಕೆ ಮರಳಿ ಬಂದಾಗ ಶ್ರೀ ಸಿ.ಎಂ. ನಾಗರಾಜ ಅವರು ಕಾರ್ಯಕ್ರಮವೊಂದಕ್ಕೆ ಅತಿಥಿಗಳಾಗಿ ಆಹ್ವಾನಿಸಿದ್ದರು, ಅಂದಿನಿಂದ ನೀವು ಕರೆದಾಗಲ್ಲೆ ಕರ್ನಾಟಕ ಸಂಘದ ಕಾರ್ಯಕ್ರಮಗಳಲ್ಲಿ ನಿಮ್ಮೆಲ್ಲರ ಜೊತೆ ಬೆರೆತು ಕಂಪು ಇಂಪನ್ನು ಸವಿಯಲು ಬರತ್ತಾ ಇರುತ್ತೇನೆ. ಇವತ್ತಿನ ದಿವಸ ವಿಶಿಷ್ಟ ಕನ್ನಡಿಗರಿಗೆ ಸನ್ಮಾನ ಏರ್ಪಡಿಸಿ ದಿಗ್ಗಜರಿಗೆ ಸನ್ಮಾನ ಮಾಡಿ ದೆಹಲಿ ಕರ್ನಾಟಕ ಸಂಘ ತನ್ನನ್ನು ತಾನು ಗೌರವಿಸಿಕೊಂಡಿದೆ ಎಂದರು. ಕನ್ನಡಕ್ಕಾಗಿ ತಮ್ಮಿಂದ ಆಗುವ ಎಲ್ಲಾ ಸಹಾಯವನ್ನು ಮಾಡುವುದಾಗಿ ಹೇಳುತ್ತಾ ತಮ್ಮನ್ನು ಈ ಒಂದು ವಿಶೇಷ ಸಂದರ್ಭದಲ್ಲಿ ಆಹ್ವಾನಿಸಿದ್ದಕ್ಕಾಗಿ ಕೃತಜ್ಞತೆಗಳನ್ನು ಸಲ್ಲಿಸಿದರು.

ಮುಖ್ಯ ಅತಿಥಿ ಡಾ. ಸುಧಾಮೂರ್ತಿ ಅವರು ಮಾತನಾಡಿದ ಅವರು, ನಾನು ಸಂಘದ ಅಧ್ಯಕ್ಷ ಸಿಎಂ ನಾಗರಾಜ ಅವರ ಬಳಿ ಹೇಳಿದ್ದೇನೆ ಈ ದಿನ ಸುಂದರ ಸಾಂಸ್ಕೃತಿಕ ಕಾರ್ಯಕ್ರಮಗಳಿರುವುದರಿಂದ ನಾನು ಹೆಚ್ಚು ಮಾತನಾಡಲು ಬಯಸುವುದಿಲ್ಲ. ಮುಂದೊಂದು ದಿನ ದೆಹಲಿ ಕರ್ನಾಟಕ ಸಂಘದ ಎಲ್ಲಾ ಮಹಿಳೆಯರನ್ನು ಕರೆಯಿರಿ, ನಾನು ಅವರ ಜೊತೆ ಮಾತಾಡಬೇಕು.

ಹೆಣ್ಣುಮಕ್ಕಳ ಪ್ರಾಬ್ಲಮ್ ಹೆಣ್ಣು ಮಕ್ಕಳೇ ಅರ್ಥಮಾಡಿಕೊಳ್ಳಬೇಕು ಅವರೊಂದಿಗೆ ಪ್ರಶ್ನೆ ಉತ್ತರ ನಡೆಸೋಣ ಎಂದರು. ಮಹಾಭಾರತದ ಶ್ಲೋಕದ ಬಗ್ಗೆ ಉಲ್ಲೇಖಿಸುತ್ತಾ ಅರ್ಜುನನಿಗೆ ಸ್ನೇಹಿತ ಕೇಳುತ್ತಾನೆ ಏನು ಅರ್ಜುನ ನೀನು ಇಷ್ಟು ಫೇಮಸ್ ಇದ್ದೀಯ ಎಂದು, ರೂಪ ಇದೆ, ವಿದ್ಯೆ ಇದೆ, ಹಣ ಇದೆ ಸುಂದರ ಪತ್ನಿಯರಿದ್ದಾರೆ,ಆತ್ಮೀಯರಿದ್ದಾರೆ ಆದರೂ ನೀನು ಬಡವರಾದ ಗುರು ದ್ರೋಣ ಅವರ ಜೊತೆ ಕೂತ್ಕೋತಿಯಲ್ಲ ಯಾಕೆ ಎಂದಾಗ ನಾ ರಾಜಂ ನಾ ಯವ್ವನಮ್ ನಾಭೋಗಂ, ನಾ ಕನಕಂ ಜೀವನದಲ್ಲಿ ರಾಜ ಭೋಗ ಯವ್ವನ ಮುಂತಾದವು ಕೊನೆತನಕ ಇರುವುದಿಲ್ಲ.

ನಮ್ಮ ಜನರು ನಮಗೆ ಕೊಡುವ ಒಂದು ಪ್ರೀತಿ ಅದು ಮನಸ್ಸಿನಲ್ಲಿ ಸ್ಥಿರವಾಗಿರುತ್ತದೆ, ನಾನು ಅವರ ಕಾಲಿನ ಬಳಿ ಯಾಕೆ ಕುತ್ಕೊಂಡಿದ್ದೀನಿ ಅಂದರೆ ನನ್ನ ಗುರು ದ್ರೋಣರು ನನ್ನನ್ನು ಸಾಕಿ ಸಲುಹಿ ವಿದ್ಯೆಯನ್ನು ನೀಡಿದವರು. ಅವರ ಕಡೆಯಿಂದ ಒಂದು ಮಾತು ಬಂದರೆ ಅದನ್ನು ನಾನು ಪ್ರಶಸ್ತಿ ಅಂದುಕೋತೀನಿ. ರಾಜನಿಗಿಂತ ಯವ್ವನಕ್ಕಿಂತ ಸಂಪತ್ತಿಗಿಂತ ನಾನು ಅದನ್ನು ಹೆಚ್ಚು ಬೆಲೆಬಾಳುವುದೆಂದು ಭಾವಿಸುತ್ತೇನೆ, ಹಾಗೆಯೇ ದೆಹಲಿ ಕನ್ನಡಿಗರಿಗೆ ಇಲ್ಲಿನ ಜನರು ಕೊಟ್ಟಂತ ಪ್ರಶಸ್ತಿಯ ಬೆಲೆ ಹೆಚ್ಚು, ಇತರ ಪ್ರಶಸ್ತಿಗಳು ಎಷ್ಟೇ ಸಿಕ್ಕಿರಬಹುದು, ಆದರೆ ದೆಹಲಿ ಕನ್ನಡಿಗರು ದೆಹಲಿ ಕನ್ನಡಿಗರಿಗೆ ಕೊಟ್ಟ ಪ್ರಶಸ್ತಿಯನ್ನು ಯಾವಾಗಲೂ ನೆನಪಿನಲ್ಲಿಟ್ಟುಕೊಳ್ಳುತ್ತಾರೆ ಎಂದರು. ತಾಯಿದ್ದರೆ ತವರು ಎಂದರು.

ಇನ್ನೊಂದು ಶ್ಲೋಕವನ್ನು ಕುರಿತು ಮಾತನಾಡುತ್ತ, ಒಂದು ಅಕ್ಷರವನ್ನು ತಗೊಂಡ್ರೆ ಅದರಿಂದ ಒಂದು ಮಂತ್ರ ಪ್ರಾರಂಭವಾಗಬಹುದು, ಯಾವುದೇ ಒಂದು ಎಲೆ ತಗೊಂಡರೆ ಅದು ತರಕಾರಿ ಆಗಬಹುದು, ಅದು ಔಷಧಿ ಆಗಬಹುದು, ಯಾವುದೇ ಒಂದು ಸ್ವರ ತಗೊಂಡ್ರೆ ಅದು ಸಂಗೀತವಾಗಬಹುದು ಜೀವನದಲ್ಲಿ ಯಾವುದೂ ವೇಸ್ಟ್ ಅಲ್ಲ, ಎಲ್ಲದರಲ್ಲೂ ಒಂದೊಂದು ಇರುತ್ತೆ, ಎಲ್ಲದಕ್ಕಿಂತ ಕಷ್ಟವಾಗಿರುವುದೇನೆಂದರೆ ಯೋಜನಾ ತತ್ವ ದುರ್ಲಭಃ ಯಾರು ನಿರ್ವಹಣೆಯನ್ನು ಮಾಡುತ್ತಾರೆ ಅಂತವರನ್ನು ಹುಡುಕಿಕೊಂಡು ಬರಬೇಕಾಗುತ್ತದೆ, ಅದಕ್ಕೆ ನಾಗರಾಜ ಅವರಿಗೆ ಯೋಜನಾ ತತ್ವ ದುರ್ಲಭ ದುಡ್ಡಿರಬಹುದು, ಈ ಕಾರ್ಯಕ್ರಮಕ್ಕೆ ಇಷ್ಟೊಂದು ಕನ್ನಡಿಗರನ್ನು ಕಲೆ ಹಾಕುವುದು ಸಾಮಾನ್ಯದ ಕೆಲಸವಲ್ಲ ಎಂದರು. ದೆಹಲಿ ಪೋಲಿಸ್ ಕನ್ನಡಿಗರ ಕಲ್ಯಾಣ ಸಮಿತಿಯ ಸದಸ್ಯೆಯರು ಪ್ರಸ್ತುತಪಡಿಸಿದ ಸಮೂಹ ನೃತ್ಯದ ಬಗ್ಗೆ ಡಾ ಸುಧಾ ಮೂರ್ತಿಯವರು ಮೆಚ್ಚುಗೆ ವ್ಯಕ್ತಪಡಿಸುತ್ತಾ ಇಷ್ಟು ಸುಂದರವಾಗಿ ನೃತ್ಯ ನಿರ್ದೇಶನವನ್ನು ಬೆಂಗಳೂರಿನಲ್ಲಿಯೂ ನೋಡಲು ಸಿಗಲ್ಲ ಎಂದರು. ನಿಮ್ಮೆಲ್ಲರ ಉತ್ಸಾಹವನ್ನು ನೋಡಿ ನವೆಂಬರ್ ನಲ್ಲಿ ಕನ್ನಡ ರಾಜ್ಯೋತ್ಸವವನ್ನು ಇಲ್ಲೇ ಬಂದು ಮಾಡಬೇಕು ಎಂದುತಮಗೆ ಅನಿಸುತ್ತಾ ಇದೆ . ನನ್ನ ಕೈಯಿಂದ ಏನು ಸಾಧ್ಯ ಇದೆ ಅದನ್ನು ನನ್ನ ಬಿಡುವಿನ ವೇಳೆ ಬಂದು ಮಾಡಿಕೊಡ್ತೀನಿ ಎಂದರು. ನೀವೆಲ್ಲಾ ತಾಯಿ ನಾಡಿನಿಂದ ಇಲ್ಲಿಗೆ ಬಂದು ಬೇರಿನಿಂದ ಮರ ದೂರ ಆದಂತೆ ಇದೇ ಮಕ್ಕಳಿಗೆ ಒಂದು ಬೇರನ್ನು ಕೊಡ್ತಾ ಇದ್ದೀರಿ, ಬೇರಿನಿಂದ ಆಚೆಗೆ ಬಂದಾಗ ಬೇರಿನ ಮಹತ್ವ ಗೊತ್ತಾಗುತ್ತದೆ, ಮಕ್ಕಳಿಗೆ ಕನ್ನಡವನ್ನು ಮಾತನಾಡಿಸುವುದಕ್ಕೆ ಕಲಿಸಿ, ಕನ್ನಡವನ್ನು ಹೇಳಿ ಕೊಡಿ, ಬೆಂಗಳೂರಿಗರಾಗಬೇಡಿ ಎಂದರು. ಕನ್ನಡದಲ್ಲಿ ಸಂಭಾಷಣೆ ಮಾಡಿ, ಆಗ ಕನ್ನಡಕ್ಕೆ ಎಷ್ಟು ಮಹತ್ವ ಇದೆ ಎಂದು ಅರಿವಾಗುತ್ತದೆ, ಎಲ್ಲರಿಗೂ ಅಭಿನಂದನೆಗಳು ಎಂದರು.

ಅಧ್ಯಕ್ಷ ಸಿ.ಎಂ. ನಾಗರಾಜ ಅವರು ಮಾತನಾಡಿದ ಅವರು, 69 ನೇ ಕನ್ನಡ ರಾಜ್ಯೋತ್ಸವ ಅಂಗವಾಗಿ ದೆಹಲಿ ಕರ್ನಾಟಕ ಸಂಘದಲ್ಲಿ ಪ್ರತೀ ವಾರ ರಾಜ್ಯೋತ್ಸವ ಕಾರ್ಯಕ್ರಮ ನಡೆಸಿದ್ದು, ವಿಶೇಷವಾದ ಇವತ್ತಿನ ಈ ಕಾರ್ಯಕ್ರಮದಲ್ಲಿ ಪದ್ಮಭೂಷಣ ಡಾ. ಸುಧಾಮೂರ್ತಿ ಅವರು ದೆಹಲಿ ಕರ್ನಾಟಕ ಸಂಘಕ್ಕೆ ಬಂದಿರುವುದು ನಮ್ಮ ಸೌಭಾಗ್ಯ. ಇಂದು ಸರಿ ಸುಮಾರು ಸಂಜೆ ನಾಲ್ಕು ಗಂಟೆಗೆ ಆರಂಭವಾಗಿ ಸತತ ನಾಲ್ಕು ಗಂಟೆಗಳ ಕಾಲ ನಡೆದಿರುವ

ಈ ಕಾರ್ಯಕ್ರಮದಲ್ಲಿ ಸಭಾಂಗಣ ಕಿಕ್ಕಿರಿದು ತುಂಬಿದೆ. ಈ ಸಮಾರಂಭದಲ್ಲಿ ಕನ್ನಡಿಗರಿಗೆ ವಿಶೇಷವಾದ ಸೇವೆ ಸಲ್ಲಿಸಿರುವ ದೆಹಲಿ ಕನ್ನಡಿಗರನ್ನು ಗುರುತಿಸಿ ವಿಶಿಷ್ಟ ಕನ್ನಡಿಗ ಪ್ರಶಸ್ತಿ ನೀಡಿದ್ದೇವೆ, ಹಾಗೇನೇ, 57 ಕನ್ನಡಿಗರ ಮಕ್ಕಳಿಗೆ ಮತ್ತು 7 ಸಂಘದ ಸಿಬ್ಬಂದಿ ಮಕ್ಕಳಿಗೆ ಅವಶ್ಯಕತೆ ಆಧಾರದ ಮೇಲೆ ಹಾಗು 17 ಮಕ್ಕಳಿಗೆ ಅರ್ಹತೆ ಆಧಾರದ ಮೇಲೆ ಒಟ್ಟಾರೆ 81 ಮಕ್ಕಳಿಗೆ ಈ ಬಾರಿ ವಿದ್ಯಾರ್ಥಿ ವೇತನ ವಿತರಣೆ ಮಾಡ್ತಾ ಇದ್ದೇವೆ. ಮುಖ್ಯ ಅತಿಥಿಗಳಾಗಿ ಬಂದಿರುವ ಡಾ. ಸುಧಾಮೂರ್ತಿ ಅಮ್ಮನವರು ಈ ಹಿಂದೆ ನಮ್ಮ 50000 ಪುಸ್ತಕಗಳಿರುವ ಗ್ರಂಥಾಲಯಕ್ಕೆ 10 ಲಕ್ಷ ರೂಪಾಯಿ ಹಾಗೂ ಇತ್ತೀಚೆಗೆ ನೀಡಿದ 60 ಲಕ್ಷ ರೂಪಾಯಿ ಧೇಣಿಗೆ ಸೇರಿ, ಒಟ್ಟು 70 ಲಕ್ಷ ರೂಪಾಯಿಗಳನ್ನು ನಮ್ಮ ಸಂಘಕ್ಕೆ ಕೊಡುಗೆಯಾಗಿ ನೀಡಿದ್ದಾರೆ. ನಮ್ಮ ಸಭಾಂಗಣ ಇಂದು ತುಂಬಿ ತುಳುಕಿದೆ. ಹಲವು ಕನ್ನಡಿಗರು ನಿಂತು ಕಾರ್ಯಕ್ರಮ ನೋಡುವಂತಹ ಪರಿಸ್ಥಿತಿ ಇದೆ, ಹಾಗಾಗಿ ಬರುವ ದಿನಗಳಲ್ಲಿ ನೋಯ್ಡಾದಲ್ಲಿ ಅಥವಾ ಗುರುಗ್ರಾಮದಲ್ಲಿ ತಮ್ಮ ಉನ್ನತ ಶಿಕ್ಷಣಕ್ಕೆ ನಾಡಿನಿಂದ ಬರುವ ಮಕ್ಕಳಗೆ ಅಥವಾ ಇಲ್ಲಿನ ಮಕ್ಕಳಿಗೆ, ಯುಪಿಎಸ್‌ಸಿ ಪರೀಕ್ಷೆಗಳಿಗಾಗಿ ಬರುವ ಮಕ್ಕಳಿಗೆ ಲೈಬ್ರರಿ ಹಾಗೂ ಉಳಿದುಕೊಳ್ಳಲು ವಸತಿ, ದಾಸೋಹ ವ್ಯವಸ್ಥೆ ಹಾಗು ದೊಡ್ಡ ಸಭಾಂಗಣ ನಿರ್ಮಾಣವನ್ನು ಮಾಡಲು ಬೇಕಾದ ಜಾಗವನ್ನು ಪಡೆಯುವ ನಿಟ್ಟಿನಲ್ಲಿ ಪ್ರಯತ್ನ ಮಾಡ್ತಾ ಇದ್ದೇನೆ. ಇದಕ್ಕೆ ಎಲ್ಲರ ಸಹಕಾರವಿರಲಿ, ಇಂದಿನ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸ್ಥಳೀಯ ಸಂಘ ಸಂಸ್ಥೆಗಳು ಭಾಗವಹಿಸಿ ಸುಮಾರು 20 ತಂಡಗಳ 130 ಕ್ಕೂ ಹೆಚ್ಚು ಕಲಾವಿದರು ವೈವಿಧ್ಯಮಯ ನಾನಾ ಪ್ರಕಾರದ ನೃತ್ಯ ಪ್ರದರ್ಶನ ನಿಮ್ಮ ಮುಂಧೆ ನೀಡ್ತಾ ಇದ್ದಾರೆ, ಬರುವ ದಿನಗಳಲ್ಲಿ ಸಂಘದಲ್ಲಿ ಆಹಾರ ಮೇಳ ಮುಂತಾದ ಕಾರ್ಯಕ್ರಮಗಳ ಆಯೋಜನೆಯಾಗಲಿದೆ, ಈ ಎಲ್ಲಾ ಕಾರ್ಯಕ್ರಮಗಳಿಗೆ ಇದೇ ರೀತಿಯಲ್ಲಿ ತಾವೆಲ್ಲಾ ಬನ್ನಿ, ನಾವೆಲ್ಲಾ ಸೇರಿ ಕನ್ನಡವನ್ನು ಕಟ್ಟೋಣ, ಗಟ್ಟಿ ಮಾಡೋಣ, ಕನ್ನಡವನ್ನು ಬೆಳೆಸೋಣ, ರಾಷ್ಟ್ರ ರಾಜಧಾನಿಯಲ್ಲಿ ಬೆಂಗಳೂರಿಗಿಂತಲೂ ಜಾಸ್ತಿ ಕನ್ನಡ ಕಾರ್ಯಕ್ರಮ ಮಾಡೋಣ, ಅಮೃತ ಮಹೋತ್ಸವ ಕಾರ್ಯಕ್ರಮ ಸಂದರ್ಭದಲ್ಲಿ ಮಾನ್ಯ ಪ್ರಧಾನಮಂತ್ರಿಯವರು ಹೇಳಿದಂತೆ ಮುಂದಿನ 25 ವರ್ಷಗಳಲ್ಲಿ ವಿಶೇಷವಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳೋಣ, ಡಾ. ಸುಧಾ ಮೂರ್ತಿ ಅಮ್ಮನವರ ಆಶೀರ್ವಾದ ಸದಾ ನಮ್ಮ ಮೇಲೆ ಇರಲಿ, ಎಲ್ಲರಿಗೂ ಕರ್ನಾಟಕ ರಾಜ್ಯೋತ್ಸವದ ಶುಭಾಶಯಗಳು, ಜೈ ಹಿಂದ್ ಜೈ ಕರ್ನಾಟಕ ಎಂದು ಹೇಳಿ ತಮ್ಮ ಅಧ್ಯಕ್ಷೀಯ ಭಾಷಣ ಮುಗಿಸಿದರು.



ಕರ್ನಾಟಕ ರಾಜ್ಯೋತ್ಸವದ ಕಾರ್ಯಕ್ರಮದ ಇನ್ನೊಂದು ವಿಶೇಷತೆ ಏನೆಂದರೆ ವಿದ್ಯಾರ್ಥಿ ವೇತನ ವಿತರಣೆ. ಈ ಕಾರ್ಯಕ್ರಮವನ್ನು ಕಾರ್ಯಕಾರಿ ಸಮಿತಿಯ ಸದಸ್ಯರಾದ ಕೆ.ಎಸ್. ಮೂರ್ತಿ ಅವರು ನಡೆಸಿಕೊಟ್ಟರು. ಒಟ್ಟು ರೂ. 7,22,000/- ಮೊತ್ತದ ವಿದ್ಯಾರ್ಥಿ ವೇತನವನ್ನು ಅರ್ಹತೆ ಮತ್ತು ಅವಶ್ಯಕತೆಯ ಆಧಾರದ ಮೇಲೆ ಅರ್ಹರಾದ 81 ವಿದ್ಯಾರ್ಥಿಗಳಿಗೆ ನೀಡಲಾಯಿತು. ರಾಜ್ಯಸಭಾ ಸಂಸದರಾದ ಡಾ. ಸುಧಾಮೂರ್ತಿ ಅವರು ಅರ್ಹತೆ ಆಧಾರದ ಮೇಲೆ ಆಯ್ಕೆಯಾದ ಇಲ್ಲಿನ 17 ಪ್ರತಿಭಾವಂತ ಕನ್ನಡಿಗರ ಮಕ್ಕಳಿಗೆ ವಿದ್ಯಾರ್ಥಿ ವೇತನ ಮತ್ತು ಪ್ರಶಸ್ತಿಪತ್ರಗಳನ್ನು ವೇದಿಕೆ ಮೇಲೆ ನೀಡಿ ಗೌರವಿಸಿದರು.

ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಸ್ಥಳೀಯ ಕಲಾವಿದರು ಹಾಗೂ ಸಂಘ ಸಂಸ್ಥೆಗಳ 20 ತಂಡಗಳ 130 ಕ್ಕೂ ಹೆಚ್ಚು ಕಲಾವಿದರುಗಳಿಂದ ಸಮೂಹ ನೃತ್ಯ ಕಾರ್ಯಕ್ರಮ ಅತ್ಯಂತ ಸುಂದರವಾಗಿ ಮೂಡಿ ಬಂತು. ಈ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಅತ್ಯಂತ ಅಚ್ಚುಕಟ್ಟು ಹಾಗು ಶಿಸ್ತುಬದ್ಧವಾಗಿ ಕಾರ್ಯಕಾರಿ ಸಮಿತಿಯ ಜಂಟಿ ಕಾರ್ಯದರ್ಶಿ ಅಶ್ವಿನಿ ಬಿ.ಎಸ್., ಶುಭಾ ದೇವಿಪ್ರಸಾದ್ ಮತ್ತು ಜಯಶ್ರಿ ಬಸವರಾಜು, ಪ್ರಭಾಕರ ಮಡ್ಡಿತೋಟ್, ಖಜಾಂಚಿ ಅಧಿಕಾರಿ ಆಶಾಲತಾ ಎಂ. ಹಾಗೂ ಸಭಾ ಕಾರ್ಯಕ್ರಮವನ್ನು ಉಪಾಧ್ಯಕ್ಷೆ ಪೂಜಾ ಪಿ. ರಾವ್ ಅವರು ನೆರವೇರಿಸಿಕೊಟ್ಟರು. ಮುಖ್ಯ ಅತಿಥಿಗಳಾದ ಡಾ. ಸುಧಾ ಮೂರ್ತಿ ಅವರಿಗೆ ಹಾಗೂ ವಿಶೇಷ ಅತಿಥಿಗಳಾದ ಡಾ. ಕೆ.ಜೆ. ಶ್ರೀನಿವಾಸ್ ಅವರಿಗೆ ದೆಹಲಿ ಕರ್ನಾಟಕ ಸಂಘದಿಂದ ಗೌರವ ಸಮರ್ಪಣೆ ನೀಡಲಾಯಿತು. ಕೊನೆಯಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ರಾಧಾಕೃಷ್ಣ ಅವರು ವಂದನಾರ್ಪಣೆ ಸಲ್ಲಿಸಿದರು. ನಾಡಿನ ಮತ್ತು ಹೊರನಾಡಿನ ಸಮಸ್ತ ಕನ್ನಡಿಗರಿಗೆ ದೆಹಲಿ ಕರ್ನಾಟಕ ಸಂಘದಿಂದ 69 ನೇ ಕರ್ನಾಟಕ ರಾಜ್ಯೋತ್ಸವದ ಶುಭಾಶಯಗಳು.

## ಮುಸ್ಲಿಮರಿಗೆ ಮತದಾನದ ಹಕ್ಕು ಕೊಡಬಾರದು ಎಂದ ಶ್ರೀಗಳ ವಿರುದ್ಧ ಪರಂ ಗರಂ



**ಬೆಂಗಳೂರು, ನ.27 :** ಮುಸ್ಲಿಮರಿಗೆ ಮತದಾನದ ಹಕ್ಕು ತೆಗೆಯಬೇಕು ಎಂಬ ಚಂದ್ರಶೇಖರ್ ಸ್ವಾಮೀಜಿ ಹೇಳಿಕೆ ವಿಚಾರಕ್ಕೆ ಸಂಬಂಧಪಟ್ಟಂತೆ ಗೃಹ ಸಚಿವ ಜಿ ಪರಮೇಶ್ವರ್ ಪ್ರತಿಕ್ರಿಯಿಸಿದ್ದು, ಸಂವಿಧಾನದಲ್ಲಿ ಪ್ರತಿಯೊಂದು ಸಮುದಾಯ ಧರ್ಮಗಳಿಗೆ ಸಮಾನ ಅವಕಾಶ ಮತ್ತು ಹಕ್ಕು ಇರುತ್ತೆ ಎಂದು ಹೇಳಿದರು. ಈ ಬಗ್ಗೆ ಮಾತನಾಡಿದ ಅವರು, ಸಂವಿಧಾನದಲ್ಲಿ ಪ್ರತಿಯೊಂದು ಸಮುದಾಯ ಧರ್ಮಗಳಿಗೆ ಸಮಾನ ಅವಕಾಶ ಮತ್ತು ಹಕ್ಕು ಇರುತ್ತೆ. ಈ ಬಗ್ಗೆ ಸಂವಿಧಾನದಲ್ಲಿ ಸ್ಪಷ್ಟವಾಗಿ ಉಲ್ಲೇಖಿಸಲಾಗಿದೆ. ಆದರೆ ಅವರು ಅದನ್ನು ಸರಿಯಾಗಿ ನೋಡಿಕೊಂಡಿಲ್ಲ ಅನಿಸುತ್ತದೆ. ಸಂವಿಧಾನದ ಬಗ್ಗೆ ಯಾರೂ ವಿರೋಧವಾಗಿ ಮಾತನಾಡಬಾರದು ಎಂದು ಹೇಳಿದರು. ಇದೇ ವೇಳೆ ಗ್ಯಾರಂಟಿ ಕಡಿಮೆ ಮಾಡುವ ಬಗ್ಗೆ ಶಾಸಕ ಗವಿಯಪ್ಪ ಹೇಳಿಕೆ ವಿಚಾರದ ಬಗ್ಗೆ ಮಾತನಾಡಿದ್ದು, ಅವರರ ಅಭಿಪ್ರಾಯವನ್ನು ಹೇಳುತ್ತಾರೆ, ಸರ್ಕಾರ ಮತ್ತು ಪಕ್ಷ ನಿರ್ಧಾರ ತೆಗೆದುಕೊಂಡಿದೆ, ಚುನಾವಣೆ ಪ್ರಣಾಳಿಕೆಯಲ್ಲೇ ಹೇಳಿದ್ದೇವೆ ಎಂದು ಪರಮೇಶ್ವರ್ ಹೇಳಿದರು. ಅಲ್ಲದೇ ಜನ ಗ್ಯಾರಂಟಿಗಳನ್ನು ನಂಬಿಕೊಂಡು ಮತ ಹಾಕಿದ್ದಾರೆ, ಈಗ ಇದನ್ನು ಕಡಿಮೆ ಮಾಡಿದರೆ ಜನರಿಗೆ ಏನೆಂದು ಉತ್ತರ ಕೊಡೋದು, ಅವರವರ ಕ್ಷೇತ್ರಕ್ಕೆ ಅವರು ಅನುದಾನ ಕೇಳಲಿ ಅದರಲ್ಲಿ ಯಾವುದೇ ತಪ್ಪಿಲ್ಲ ಎಂದರು. ಈಗ ನಾನು ಕೂಡ ಅಭಿವೃದ್ಧಿಗೆ ಅನುದಾನ ಕೇಳೇನೆ ಅದು ತಪ್ಪಾ, ಸರ್ಕಾರ ಅನುದಾನವನ್ನು ಕೊಡುತ್ತಿದೆ, ಹಾಗೆಯೇ ಕಾರ್ಯಕ್ರಮಗಳು ಆಗುತ್ತಾ ಇದೆ, ಹಿಂದಿನ ಸರ್ಕಾರ ಹಲವಾರು ಕೆಲಸಗಳನ್ನು ಬಿಟ್ಟು ಹೋಗಿದೆ, ಅದನ್ನು ಪೂರ್ಣ ಮಾಡಬೇಕು. ಹೀಗಾಗಿ ಸ್ವಲ್ಪ ತಡವಾಗುತ್ತಿದೆ ಎಂದು ಪರಮೇಶ್ವರ್ ಹೇಳಿದರು.

## ಪಂಚಮಸಾಲಿ ಸಮಾಜಕ್ಕೆ ಕೇಂದ್ರ ಸರ್ಕಾರದ ಒಬಿಸಿ ಮೀಸಲಾತಿಗೆ ಒತ್ತಾಯಿಸಿ ಡಿ. 10ರಂದು ಹೋರಾಟ



**ಬೆಂಗಳೂರು, ನ.27 :** ಪಂಚಮಸಾಲಿ ಸಮಾಜಕ್ಕೆ ಪ್ರವರ್ಗ–2ಎ ಮೀಸಲಾತಿ ಮತ್ತು ಲಿಂಗಾಯತ ಉಪ ಸಮಾಜಗಳಿಗೆ ಕೇಂದ್ರ ಸರ್ಕಾರದ ಒಬಿಸಿ ಮೀಸಲಾತಿಗೆ ಒತ್ತಾಯಿಸಿ ಡಿ.10 ರಂದು ಬೆಳಗಾವಿಯ ಸುವರ್ಣ ಸೌಧಕ್ಕೆ ಮುತ್ತಿಗೆ ಹೋರಾಟದಲ್ಲಿ ಸಚಿವೆ ಲಕ್ಷ್ಮೀಹೆಬ್ಬಾಳ್ಕರ್, ವಿಜಯಾನಂದ ಕಾಶಪ್ಪನವರ್, ಅರವಿಂದ್ ಬೆಲ್ಲದ್, ಯತ್ನಾಳ್ ಇತರರು ಪಾಲ್ಗೊಳ್ಳುವರು ಎಂದು ಕೂಡಲ ಸಂಗಮದ ಲಿಂಗಾಯತ ಪಂಚಮಸಾಲಿ ಜಗದ್ಗುರು ಶ್ರೀಬಸವ ಜಯಮೃತ್ಯುಂಜಯ ಸ್ವಾಮೀಜಿ ತಿಳಿಸಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮಾಜದ ಮೀಸಲಾತಿ ಹೋರಾಟ ಪ್ರಾರಂಭಿಸಿ, ಎಲ್ಲ ಹಂತದಲ್ಲೂ ಪಾಲ್ಗೊಂಡವರು. ಹಾಗಾಗಿ ಡಿ.10ರ ಬೆಳಗಾವಿಯ ಹೋರಾಟದಲ್ಲೂ ಪಾಲ್ಗೊಳ್ಳಲಿದ್ದಾರೆ ಎಂದರು. ಮೀಸಲಾತಿ ಹೋರಾಟದ ಸಂದರ್ಭದಲ್ಲಿ ಕಾಂಗ್ರೆಸ್ನಲ್ಲಿದ್ದಂತಹವರು ಬಿಜೆಪಿಯ ವಿರುದ್ಧ ಮಾತನಾಡುತ್ತಿದ್ದರು. ಈಗ ಅವರು ಸರ್ಕಾರಕ್ಕೆ ಮುಜುಗರ ಆಗಬಾರದು ಎಂದು ಹಿಂದಿನಂತೆ ಮಾತನಾಡುತ್ತಿಲ್ಲ. ಆದರೆ, ಹೋರಾಟ ನಿಲ್ಲಿಸಿಲ್ಲ. ಸರ್ಕಾರದ ಮೇಲೆ ಒತ್ತಡ ಹಾಕುವ ಕೆಲಸ ಮಾಡುತ್ತಿದ್ದಾರೆ. ಕಾಶಪ್ಪನವರ್ ಡಿ. 1 ರಂದು ಬೆಂಗಳೂರಲ್ಲಿ ಸಭೆ ನಡೆಸುವುದಾಗಿ ಹೇಳಿದ್ದಾರೆ. ಸರ್ಕಾರದ ಪರ ಏನೇ ಮಾಡಿದರೂ, ಮಾತನಾಡಿದರೂ ಎಲ್ಲರೂ ಡಿ.10ರ ಹೋರಾಟದಲ್ಲಿ ಭಾಗವಹಿಸುವರು ಎಂಬ ವಿಶ್ವಾಸ ತಮಗಿದೆ ಎಂದರು.ಮಾಜಿ ಶಾಸಕ ಎಚ್.ಎಸ್. ಶಿವಶಂಕರ್ ಮಾತನಾಡಿದ ಅವರು, ಡಿ.10ರ ಬೆಳಗಾವಿ ಹೋರಾಟದಲ್ಲಿ ತಾವು ಭಾಗವಹಿಸುವುದಿಲ್ಲ.

ಡಿ. 1 ರಂದು ಬೆಂಗಳೂರಲ್ಲಿ ಸಭೆ ನಡೆಸುವುದಾಗಿ ವಿಜಯಾನಂದ ಕಾಶಪ್ಪನವರ್ ಹೇಳಿದ್ದಾರೆ. ಅವರು ಎಲ್ಲಿಯೇ ಸಭೆ ಮಾಡಲಿ. ಬೆಳಗಾವಿ ಹೋರಾಟಕ್ಕೆ ಬನ್ನಿ ಎಂದು ಆಹ್ವಾನಿಸಿದರು.ಮೀಸಲಾತಿ ಹೋರಾಟದ ಸಂದರ್ಭದಲ್ಲಿ ಕಾಂಗ್ರೆಸ್ನವರು ಬಿಜೆಪಿ ವಿರುದ್ಧ ಮುಗಿ ಬೀಳುತ್ತಿದ್ದರು. ಈಗಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪಂಚಮಸಾಲಿ ಮೀಸಲಾತಿ ವಿಚಾರದಲ್ಲಿ ಸ್ವಲ್ಪವೂ ಸಕರಾತ್ಮಕವಾದ ಹೆಜ್ಜೆ ಇಡುತ್ತಿಲ್ಲ. ಪಂಚಮಸಾಲಿ ಸಮಾಜಕ್ಕೆ ಮೀಸಲಾತಿ ಕೊಡಲು ಒಂದು ಕಣ್ಣಿಗೆ ಸುಣ್ಣ, ಇನ್ನೊಂದು ಕಣ್ಣಿಗೆ ಬೆಣ್ಣೆ, ಮೀನಾಮೇಷ, ದ್ವೇಷ, ತಾರತಮ್ಯ ಏಕೆ ಎಂದು ಪ್ರಶ್ನಿಸಿದರು.

### ಜಯಮೃತ್ಯುಂಜಯ ಸ್ವಾಮೀಜಿ ಕರೆ ನೀಡಿರುವ ಹೋರಾಟಕ್ಕೆ ಲಕ್ಷ್ಮಿ ಹೆಬ್ಬಾಳ್ಕರ್ ಅಸಮಾಧಾನ



**ಪಂಚಮಸಾಲಿ ಸಮುದಾಯಕ್ಕೆ 2ಎ ಮೀಸಲಾತಿಗೆ ಆಗ್ರಹಿಸಿ ಡಿ.10ರಂದು ಬೆಳಗಾವಿಯ ಸುವರ್ಣಸೌಧ ಮುತ್ತಿಗೆಗೆ ಜಯಮೃತ್ಯುಂಜಯ ಸ್ವಾಮೀಜಿ ಕರೆ ನೀಡಿರುವ ಹೋರಾಟಕ್ಕೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು ಅಸಮಾಧಾನ ಹೊರಹಾಕಿದ್ದಾರೆ. ಈ ಕುರಿತು ಪ್ರತಿಕ್ರಿಯೆ ನೀಡಿದ ಅವರು, ನಾವು ಸರ್ಕಾರದಲ್ಲಿದ್ದರೂ ಸಮುದಾಯಕ್ಕೋಸ್ಕರ ಹೋರಾಟದಲ್ಲಿ ಭಾಗಿಯಾಗಿದ್ವಿ. ಆದರೆ ಸ್ವಾಮೀಜಿ ಅವರು ಅಧಿವೇಶನದ ವೇಳೆ ಸರ್ಕಾರಕ್ಕೆ ಮುಜುಗರ ತರುವಂತೆ ಹೋರಾಟ ಮಾಡಬಾರದು. ಸ್ವಾಮೀಜಿಗಳಿಗೆ ನಾವು ಗೌರವ ಕೊಡುತ್ತೇವೆ. ಆದರೆ ಸರ್ಕಾರಕ್ಕೆ ತೀರಾ ಮುಜುಗರ ತುರವುದು ಬೇಡ. ಯಾವುದೇ ಸರ್ಕಾರವಿರಲಿ ನಾವು ಸಮಾಜದ ಪರವಾಗಿ ಹೋರಾಟ ಮಾಡಿದ್ದೇವೆ. ನಾವು ಪಂಚಮಸಾಲಿ ಸಮಾಜಕ್ಕಾಗಿಯೇ ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಮಾತನಾಡಿದ್ದೇವೆ. ಸ್ವಾಮೀಜಿ ಅವರ ಹೋರಾಟ ಮರ್ಯಾದೆ ಹದ್ದಿನಲ್ಲಿರಲಿ ಎಂದು ಹೇಳಿದ್ದಾರೆ.**

## ಯಾರಿಂದಲೂ ಪಕ್ಷ ಮುಗಿಸಲು ಸಾಧ್ಯವಿಲ್ಲ, ಜೆಡಿಎಸ್ ಮಾರಾಟಕ್ಕಿಲ್ಲ: ರೇವಣ್ಣ



**ಬೆಂಗಳೂರು, ನ.27 :** ರಾಜಕೀಯವಾಗಿ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು ಹಾಗೂ ಹೆಚ್.ಡಿ. ಕುಮಾರಸ್ವಾಮಿ ಏಳು ಬೀಳುಗಳನ್ನು ನೋಡಿದ್ದಾರೆ. ಯಾರಿಂದಲೂ ಪಕ್ಷ ಮುಗಿಸಲು ಸಾಧ್ಯವಿಲ್ಲ, ಜೆಡಿಎಸ್ ಪಕ್ಷ ಮಾರಾಟಕ್ಕಿಲ್ಲ ಎಂದು ಮಾಜಿ ಸಚಿವ ಹೆಚ್.ಡಿ.ರೇವಣ್ಣ ತಿರುಗೇಟು ನೀಡಿದ್ದಾರೆ. ವಿಧಾನಸೌಧದಲ್ಲಿ ಇಂದು ಸುದ್ದಿಗಾರರ ಜೊತೆ ಮಾತನಾಡಿದ ಅವರು, ಅಂದು ಪ್ರಧಾನಿಯವರ ಮಾತು ಕೇಳಿದ್ದರೆ ಹಾಗೂ 2007 ರಲ್ಲಿ ಕುಮಾರಸ್ವಾಮಿ ಹಾಗೂ ಯಡಿಯೂರಪ್ಪನವರು ಒಟ್ಟಾಗಿ ಹೋಗಿದ್ದರೆ ಇಂದು ಕಾಂಗ್ರೆಸ್ ಇರುತ್ತಿರಲಿಲ್ಲ ಎಂದು ಹೇಳಿದರು. ಚನ್ನಪಟ್ಟಣ ಕ್ಷೇತ್ರದ ಉಪಚುನಾವಣೆಯಲ್ಲಿ ಜೆಡಿಎಸ್ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಸೋತಿರಬಹುದು. ಮುಂದೆ ಒಳ್ಳೆ ಸ್ಥಾನಕ್ಕೆ ಹೋಗುವ ಅವಕಾಶವಿದೆ. ಇಲ್ಲಿಗೆ ಅವರ ರಾಜಕೀಯ ಮುಗಿದು ಹೋಗುವುದಿಲ್ಲ ಎಂದರು ಹೇಳಿದರು.

ಮೈತ್ರಿ ಸರ್ಕಾರವಿದ್ದಾಗ ವಿಮಾನದಲ್ಲಿ ಶಾಸಕರನ್ನು ಕರೆದುಕೊಂಡು ಹೋಗಿ ರಾಜೀನಾಮೆ ಕೊಡಿಸಿದವರು ಯೋಗೇಶ್ವರ್, ಕುಮಾರಸ್ವಾಮಿ ಚನ್ನಪಟ್ಟಣ ಹಾಗೂ ರಾಮನಗರ ಜಿಲ್ಲೆಗೆ ಮಾಡಿರುವ ಅಭಿವೃದ್ಧಿ ಕೆಲಸಗಳ ಬಗ್ಗೆ ಪ್ರಚಾರ ಪಡೆಯಲಿಲ್ಲ. ಕಾಂಗ್ರೆಸ್ ಎಂಥಾ ಸ್ಥಿತಿ ಬಂದಿದೆ. ಯೋಗೇಶ್ವರ್ ಕೈ ಕಾಲು ಕಟ್ಟಿ ಕರೆದುಕೊಂಡು ಹೋದರು. ಅವರಿಗೆ ಉಜ್ವಲ ಭವಿಷ್ಯ ಕೊಡಲಿ. ಕಷ್ಟದ ಸಮಯದಲ್ಲಿ ಕೈ ಹಿಡಿದಿದ್ದಾರೆ, ಅವರನ್ನ ಮಂತ್ರಿ ಮಾಡಿಸಲಿ ಎಂದು ವ್ಯಂಗ್ಯವಾಡಿದರು. 2017–18 ರಲ್ಲಿ ಕಾಂಗ್ರೆಸ್ ಸರ್ಕಾರದವರು ಶಾಸಕ ಜಿ.ಟಿ.ದೇವೇಗೌಡರನ್ನು ಬಂಧಿಸಲು ಯೋಜನೆ ರೂಪಿಸಿದ್ದರು. ಪೊಲೀಸ್ ಅಧಿಕಾರಿಗಳಿಂದ ಮಾಹಿತಿ ತಿಳಿದಾಗ, ಹೆಚ್.ಡಿ.ಕುಮಾರಸ್ವಾಮಿ ಅವರ ಗಮನಕ್ಕೆ ತಂದು ಎಲ್ಲವನ್ನೂ ಸರಿಪಡಿಸಲಾಯಿತು. ಜಿ.ಟಿ. ದೇವಗೌಡರು ಏನು ಮಾಡಿದ್ದಾರೆ. ಹುಣಸೂರಿನಿಂದ ಮಗನನ್ನ ಗೆಲ್ಲಿಸಿದ್ದಾರೆ. ಜಿ.ಟಿ.ದೇವೇಗೌಡರನ್ನು ಸರಿಪಡಿಸುವುದು ನಮಗೆ ಗೊತ್ತಿದೆ ಎಂದು ಹೇಳಿದರು.

**ಭಿನ್ನಾಭಿಪ್ರಾಯ ಇಲ್ಲ :** ನನ್ನ ಹಾಗೂ ಕುಮಾರಸ್ವಾಮಿ ಅವರ ನಡುವೆ ಭಿನ್ನಾಭಿಪ್ರಾಯ ಏದೆ ಎಂಬುದರಲ್ಲಿ ಹುರುಳಿಲ್ಲ. ನಾನು ಬದುಕಿರುವವರೆಗೂ ಹಾಗೂ ನನ್ನ ಮಕ್ಕಳಿಗೂ ಕುಮಾರಸ್ವಾಮಿ ಹಾಗೂ ಹೆಚ್.ಡಿ.ದೇವೇಗೌಡರು ನಾಯಕರು. ಕುಮಾರಸ್ವಾಮಿ ಜೀವನದಲ್ಲಿ ನೋವು ತಿಂದಿರುವಷ್ಟು ರಾಜಕಾರಣಿ ಯಾರೂ ಇಲ್ಲ ಎಂದರು. 2004 ರಲ್ಲಿ ಕಾಂಗ್ರೆಸ್ – ಜೆಡಿಎಸ್ ಮೈತ್ರಿ ಸರ್ಕಾರ ರಚನೆಯಾದ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಕಾಂಗ್ರೆಸ್ –ಜೆಡಿಎಸ್ ಮೈತ್ರಿ ಸರ್ಕಾರ ಇದ್ದಾಗ ಬುಧುವಾರ ರಾಜೀನಾಮೆ ನೀಡಿ, ನಾಳೆ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿ ಎಂದು ಭರವಸೆ ನೀಡಿದ್ದರು. ಅಂದು ಅವರ ಮಾತನ್ನು ಪರಿಗಣಿಸಲಿಲ್ಲ. ನನಗೂ ಒಬ್ಬ ನಾಯಕರು ಉಪ ಮುಖ್ಯಮಂತ್ರಿಯಾಗುವ ಆಫರ್ ನ್ನು ಕೊಟ್ಟಿದ್ದರು. ಆದರೆ ನಾನು ಅಧಿಕಾರಕ್ಕಾಗಿ ಆಸೆ ಬೀಳಲಿಲ್ಲ ಎಂದರು. ಹಾಸನದಲ್ಲಿ ಕಾಂಗ್ರೆಸ್ ಗ್ಯಾರಂಟಿ ಸಮಾವೇಶ ನಡೆಸಿ ಶಕ್ತಿ ಪ್ರದರ್ಶನ ಬೇಕಾದರೆ ಮಾಡಿಕೊಳ್ಳಲಿ. 1989 ರಲ್ಲಿ ದೇವೇಗೌಡರು ಸೋತಾಗ ನಾವು ಶಕ್ತಿ ಪ್ರದರ್ಶನ ಮಾಡಲಿಲ್ಲ.

ನಾವು ಜನರಿಗೆ ಕೈ ಮುಗಿಯುತ್ತೇವೆ. ಅಧಿಕಾರ ಕೊಟ್ಟರೆ ಕೆಲಸ ಮಾಡುತ್ತೇವೆ. ಇಲ್ಲದಿದ್ದರೆ ಮನೆಯಲ್ಲಿ ಇರುತ್ತೇವೆ ಎಂದು ಹೇಳಿದರು. ಬಿಜೆಪಿ ನಡೆಸುವ ಹೋರಾಟಗಳಿಗೆ ನಮ್ಮ ಬೆಂಬಲವಿದೆ. ನಾವು ಒಟ್ಟಾಗಿ ಹೋರಾಟ ಮಾಡುತ್ತೇವೆ ಎಂದ ರೇವಣ್ಣ, ಅಲ್ಪಸಂಖ್ಯಾತರಿಗೆ ಮೀಸಲಾತಿ ಕೊಟ್ಟವರು ದೇವೇಗೌಡರು. ಎಲ್ಲರಿಗೂ ನ್ಯಾಯ ಕೊಡಲು ಜೆಡಿಎಸ್ ಪಕ್ಷ ಬದ್ಧವಾಗಿದೆ. ಆದರೆ, ಕಾಂಗ್ರೆಸ್ ಎಲ್ಲರನ್ನು ಒಟ್ಟಾಗಿ ತೆಗೆದುಕೊಂಡು ಹೋಗುವ ಕೆಲಸ ಮಾಡದೆ ಮತ ಬ್ಯಾಂಕ್ ರಾಜಕಾರಣ ಮಾಡುತ್ತಾ ಸಮಾಜವನ್ನು ಒಡೆಯುವ ಕೆಲಸ ಮಾಡುತ್ತಿದೆ ಎಂದು ಆರೋಪಿಸಿದರು.

## ಸಚಿವರ ಸೂಚನೆಗೂ ಅಧಿಕಾರಿಗಳು ಬೆಲೆ ಕೊಟ್ಟಿಲ್ಲ: ಸಚಿವ ಸೋಮಣ್ಣ ಆಕ್ರೋಶ



**ಬೆಂಗಳೂರು, ನ.27 :** ಬೆಂಗಳೂರು ನಗರಕ್ಕೆ ಸಂಪರ್ಕ ಕಲ್ಪಿಸುವ ಪ್ರಮುಖವಾದ ಹೆದ್ದಾರಿಯ ಕಾಮಗಾರಿ ಸ್ಥಗಿತಗೊಂಡಿದೆ. ಕಾಮಗಾರಿ ಆರಂಭಿಸಿ ಎಂಬ ಸಚಿವರ ಸೂಚನೆಗೂ ಸಹ ಅಧಿಕಾರಿಗಳು ಬೆಲೆ ಕೊಟ್ಟಿಲ್ಲ. ಈ ಕಾಮಗಾರಿ ಆರಂಭವಾಗದ ಕಾರಣ ಹೆದ್ದಾರಿಯಲ್ಲಿ ಸಂಚಾರ ದಟ್ಟಣೆ ಉಂಟಾಗುತ್ತಿದೆ. ಅಲ್ಲದೇ ರಸ್ತೆ ಅಪಘಾತಗಳ ಸಂಖ್ಯೆಯೂ ಹೆಚ್ಚಾಗುತ್ತಿದ್ದು, ವಾಹನ ಸವಾರರ ಆತಂಕಕ್ಕೆ ಕಾರಣವಾಗಿದೆ. ನೆಲಮಂಗಲ–ತುಮಕೂರು ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿ 48ರ 10 ಪಥದ ರಸ್ತೆ ಕಾಮಗಾರಿ ಆರಂಭವಾಗಿಲ್ಲ. ನವೆಂಬರ್ 12ರಂದು ತುಮಕೂರು ಸಂಸದ, ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ರಸ್ತೆಯನ್ನು ಪರಿಶೀಲಿಸಿದ್ದರು.

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ತಕ್ಷಣ ಕಾಮಗಾರಿ ಆರಂಭಿಸಲು ಸೂಚಿಸಿದ್ದರು. ನಾಳೆಯೇ ಕಾಮಗಾರಿ ಆರಂಭಿಸುತ್ತೇವೆ ಎಂದು ಅಧಿಕಾರಿಗಳು ಹೇಳಿ 14 ದಿನಗಳು ಕಳೆದರೂ ಯಾವುದೇ ಕೆಲಸ ಪ್ರಾರಂಭವಾಗಿಲ್ಲ. ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿಗಳಿಗೆ ಗುತ್ತಿಗೆದಾರರು ಸೇರಿ ಇತರರ ಜೊತೆ ಚರ್ಚಿಸಿ ಕಾಮಗಾರಿ ಆರಂಭಿಸಬೇಕು ಎಂದು ಸಚಿವ ವಿ. ಸೋಮಣ್ಣ ಸೂಚಿಸಿದ್ದರು. ಕಾಮಗಾರಿ ಪ್ರಾರಂಭದ ಭರವಸೆ ನೀಡಿದ್ದ ಅಧಿಕಾರಿಗಳು ಅದನ್ನು ಮರೆತು ಹೋಗಿದ್ದಾರೆ.

**ರಸ್ತೆ ಅಪಘಾತ ಹೆಚ್ಚಳ:** ಕಳೆದ ವರ್ಷ ಈ 44.04 ಕಿ. ಮೀ. ಮಾರ್ಗದಲ್ಲಿ 400 ರಸ್ತೆ ಅಪಘಾತ ನಡೆದಿದ್ದು, 150 ಜನರು ಸಾವನ್ನಪ್ಪಿದ್ದಾರೆ. 17 ಫ್ಲೈ ಓವರ್ ಮತ್ತು ಅಂಡರ್ ಪಾಸ್ ಕೆಲಸಗಳು ನಡೆಯಬೇಕಿದೆ. ಸರ್ವೀಸ್ ರಸ್ತೆಗಳು ಇಲ್ಲದ ಕಾರಣ ಈ ಮಾರ್ಗದಲ್ಲಿ ಸಂಚಾರ ದಟ್ಟಣೆ ಮಾಮೂಲಿ ಎನ್ನುವಂತಾಗಿದೆ.ವಿವಿಧ ಕಾರಣಕ್ಕೆ 10 ಪಥದ ರಸ್ತೆ ಕಾಮಗಾರಿ 4 ವರ್ಷಗಳಿಂದ ಪ್ರಗತಿ ಕಂಡಿಲ್ಲ. ದಿನದಿಂದ ದಿನಕ್ಕೆ ರಸ್ತೆಯಲ್ಲಿ ವಾಹನಗಳ ಸಂಖ್ಯೆ ಏರಿಕೆಯಾಗುತ್ತಲೇ ಇದೆ. ಸಾಲು ಸಾಲು ರಜೆಗಳು ಬಂದರೆ ಸಂಚಾರ ದಟ್ಟಣೆಯಲ್ಲಿ ಸಿಲುಕಿ ವಾಹನ ಸವಾರರು ಪರದಾಡಬೇಕಿದೆ.

ಸಚಿವರು ಮಾರ್ಗದ ಪರಿಶೀಲನೆ ನಡೆಸಿ ಕೂಡಲೇ ಕಾಮಗಾರಿ ಆರಂಭಕ್ಕೆ ಸೂಚನೆ ಕೊಟ್ಟಿದ್ದರು. ಆದರೆ ಅಧಿಕಾರಿಗಳು ಬಳಿಕ ಇತ್ತ ತಲೆ ಹಾಕಿಲ್ಲ.ಸಚಿವ ವಿ. ಸೋಮಣ್ಣ ನೆಲಮಂಗಲ ಮತ್ತು ತುಮಕೂರು ನಡುವಿನ ದೇವರ ಹೊಸಹಳ್ಳಿ, ಹಿರೇಹಳ್ಳಿ, ಮಂಚಕಲ್ಲು ಕುಪ್ಪೆ ಹಾಗೂ ಕ್ಯಾತಸಂದ್ರ ಪ್ರದೇಶಗಳಲ್ಲಿ ಪ್ರಗತಿಯಲ್ಲಿರುವ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳನ್ನು ಪರಿಶೀಲಿಸಿದ್ದರು.

ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆಗಳನ್ನು ನೀಡಿದ್ದರು. ಆದರೆ ಯಾವುದೇ ಪ್ರಗತಿ ಕಂಡುಬಂದಿಲ್ಲ. 10 ಪಥದ ರಸ್ತೆ ಕಾಮಗಾರಿಯನ್ನು 844 ಕೋಟಿ ರೂ. ವೆಚ್ಚದಲ್ಲಿ 2022ರಲ್ಲಿ ಆರಂಭಿಸಲಾಗಿತ್ತು. 2025ರ ಆಗಸ್ಟ್‌ನಲ್ಲಿ ಪೂರ್ಣಗೊಳಿಸುವ ಗುರಿ ಇದೆ.

ಆಗಸ್ಟ್ 20, 2024ರ ತನಕ ಈ ಹೆದ್ದಾರಿಯಲ್ಲಿ 280 ರಸ್ತೆ ಅಪಘಾತಗಳು ನಡೆದಿವೆ, 85 ಜನರು ಸಾವನ್ನಪ್ಪಿದ್ದಾರೆ. 310ಕ್ಕೂ ಅಧಿಕ ಜನರು ಗಾಯಗೊಂಡಿದ್ದಾರೆ. ಈ ಮಾರ್ಗದಲ್ಲಿ ದೊಡ್ಡ ದೊಡ್ಡ ಲಾರಿಗಳು ಸಂಚಾರ ನಡೆಸುತ್ತವೆ. ಅವುಗಳು ರಸ್ತೆ ಬದಿ ನಿಂತು ಇರುವ ರಸ್ತೆಯನ್ನು ಅರ್ಧ ನುಂಗಿ ಹಾಕುತ್ತವೆ. 10 ಪಥದ ರಸ್ತೆ ನಿರ್ಮಾಣವಾದರೆ ನೆಲಮಂಗಲ–ತುಮಕೂರು ನಡುವಿನ ಸಂಚಾರ ಸುಲಭವಾಗಲಿದೆ. ಆದರೆ ಕಾಮಗಾರಿ ಯಾವಾಗ ಆರಂಭ ಎಂಬ ಪ್ರಶ್ನೆಗೆ ಅಧಿಕಾರಿಗಳೇ ಉತ್ತರಿಸಬೇಕು.



ಬಳ್ಳಾರಿ ಪ್ರವಾಸಕ್ಕೆ ಆಗಮಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜಿಂದಾಲ್ ವಿಮಾನ ನಿಲ್ದಾಣದಲ್ಲಿ ಗೌರವ ವಂದನೆ ಸ್ವೀಕರಿಸಿದ ಬಳಿಕ ರೈತರ ನಿಯೋಗದ ಅಹವಾಲು ಆಲಿಸಿ ಮನವಿ ಸ್ವೀಕರಿಸಿದರು. ಸಚಿವರಾದ ಕೆ.ಜೆ. ಜಾರ್ಜ್, ಕೆಕೆಆರ್‌ಡಿಬಿ ಅಧ್ಯಕ್ಷರಾದ ಅಜಯ್ ಸಿಂಗ್, ಮಾಜಿ ಸಚಿವ ನಾಗೇಂದ್ರ, ಶಾಸಕರಾದ ಕಂಪ್ಲಿ ಗಣೇಶ್, ನಾಗರಾಜ್ ಸಿರಗುಪ್ಪ, ಅನ್ನಪೂರ್ಣಮ್ಮ ಮೊದಲಾದವರು ಇದ್ದರು.

## ಕೆಯುಡಬ್ಲ್ಯೂಜೆ ಮತ್ತು ಪ್ರೆಸ್ ಕ್ಲಬ್‌ನಿಂದ ನ. 30ರಂದು ಯಕ್ಷಗಾನ ತಾಳಮದ್ದಲೆ

**ಬೆಂಗಳೂರು, ನ.27 :** ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ ಮತ್ತು ಪ್ರೆಸ್ ಕ್ಲಬ್‌ನ ಸಂಯುಕ್ತಾಶ್ರಯದಲ್ಲಿ ಬಹುರೂಪಿ ಫೌಂಡೇಷನ್ ಮತ್ತು ಯಕ್ಷಗಾನ ಅಕಾಡೆಮಿ ಸಹಕಾರದಲ್ಲಿ ನ.30ರಂದು ಸಂಜೆ 5.30 ಗಂಟೆಗೆ ಯಕ್ಷಗಾನ ತಾಳ ಮದ್ದಳೆ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿದೆ. ಸಾಂಸ್ಕೃತಿಕ ಸಂಜೆಯ ಈ ಕಾರ್ಯಕ್ರಮಕ್ಕೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಡಾ.ಪುರುಷೋತ್ತ ಬಿಳಿಮಲೆ ಅವರು ಮುಖ್ಯ ಅತಿಥಿಯಾಗಿ ಆಗಮಿಸಲಿದ್ದು, ಕೆಯುಡಬ್ಲ್ಯೂಜೆ ಅಧ್ಯಕ್ಷ ಶಿವಾನಂದ ತಗಡೂರು ಅವರು ಪ್ರಾಸ್ತಾವಿಕವಾಗಿ ಮಾತನಾಡಲಿದ್ದಾರೆ. ಪ್ರೆಸ್ ಕ್ಲಬ್ ಅಧ್ಯಕ್ಷ ಆರ್.ಶ್ರೀಧರ್ ಅವರು ಅಧ್ಯಕ್ಷತೆ ವಹಿಸುವರು. ಕೆಯುಡಬ್ಲ್ಯೂಜೆ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್ ಮತ್ತು ಪ್ರೆಸ್ ಕ್ಲಬ್ ಪ್ರಧಾನ ಕಾರ್ಯದರ್ಶಿ ಶಿವಕುಮಾರ ಬೆಳ್ಳಿತಟ್ಟೆ ಹಾಜರಿರುವರು.

ಪ್ರಖ್ಯಾತ ಯಕ್ಷಗಾನ ಕಲಾವಿದ ಜಬ್ಬಾರ್ ಸುಮೋ ಹಾಗೂ ಅವಿನಾಶ್ ಶೆಟ್ಟಿ ತಂಡದಿಂದ ಪಾರ್ತಿ ಸುಬ್ಬರ ಅಂಗದ ಸಂಧಾನ ಯಕ್ಷಗಾನ ತಾಳಮದ್ದಲೆ ಕಾರ್ಯಕ್ರಮ ನಡೆಯಲಿದೆ. ಹಿಮ್ಮೇಳದಲ್ಲಿ ದೀಪಕ್ ತುಳುಪುಳೆ, ಅಕ್ಷಯ ರಾವ್ ವಿಟ್ಲ, ಅವಿನಾಶ್ ಬೈಪಾಡಿತ್ತಾಯ ಭಾಗವಹಿಸುವರು.

**ರಿಷಿಕಾ ಕುಂದೇಶ್ವರಗೆ ಸನ್ಮಾನ:** ಇದೇ ಸಂದರ್ಭದಲ್ಲಿ ಜೀ ಕನ್ನಡ ಡ್ರಾಮ ಜೂನಿಯರ್ಸ್ 5ರ ಪ್ರಶಸ್ತಿ ವಿಜೇತಳಾದ ರಿಷಿಕಾ ಕುಂದೇಶ್ವರ ಅವರಿಗೆ ಸನ್ಮಾನ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದರು.

## ಬೆಂಗಳೂರಿನ ಸಂಚಾರ ದಟ್ಟಣೆ ತಪ್ಪಿಸಲು ಉಪನಗರ ರೈಲು ಯೋಜನೆ




**ಬೆಂಗಳೂರು, ನ.27 :** ಉದ್ಯಾನ ನಗರಿ ಬೆಂಗಳೂರಿನ ಸಂಚಾರ ದಟ್ಟಣೆ ತಪ್ಪಿಸಲು ಉಪನಗರ ರೈಲು ಯೋಜನೆ ಅನುಕೂಲ ಮಾಡಿಕೊಡಲಿದೆ ಎಂದು ಅಂದಾಜಿಸಲಾಗಿದೆ. ಬೆಂಗಳೂರು ಉಪನಗರ ರೈಲು ಯೋಜನೆಯನ್ನು ಕರ್ನಾಟಕ ಸರ್ಕಾರ ಕರ್ನಾಟಕ ರೈಲು ಮೂಲಸೌಲಭ್ಯ ಅಭಿವೃದ್ಧಿ ಕಂಪನಿ ನಿಯಮಿತ (ಕೆ–ರೈಡ್) ಮೂಲಕ ಅನುಷ್ಠಾನ ಮಾಡುತ್ತಿದೆ. 148 ಕಿ. ಮೀ. ಉದ್ದದ ಸಬ್ ಅರ್ಬನ್ ರೈಲು ಯೋಜನೆ ಒಟ್ಟು 4 ಕಾರಿಡಾರ್‌ಗಳನ್ನು ಒಳಗೊಂಡಿದೆ. ಮಲ್ಲಿಗೆ, ಕನಕ, ಪಾರಿಜಾತ ಮತ್ತು ಸಂಪಿಗೆ ಎಂದು ನಾಲ್ಕು ಕಾರಿಡಾರ್ಗಳನ್ನು ವಿಭಾಗ ಮಾಡಲಾಗಿದೆ.

ಎರಡು ಕಾರಿಡಾರ್‌ಗಳ ಕಾಮಗಾರಿ ಆರಂಭವಾಗಿದೆ. ಇನ್ನೆರಡು ಕಾರಿಡಾರ್ಗಳು ಟೆಂಡರ್ ಹಂತದಲ್ಲಿದೆ. ಈ ಪೈಕಿ ವೈಟ್‌ಫೀಲ್ಡ್–ಕೆಂಗೇರಿ ಸಂಪರ್ಕಿಸುವ 35 ಕಿ. ಮೀ. 'ಪಾರಿಜಾತ' ಕಾರಿಡಾರ್–3 ರದ್ದುಗೊಳಿಸಲಾಗುತ್ತದೆ ಎಂಬ ಸುದ್ದಿ ಹಬ್ಬಿತ್ತು. ಬಿಎಸ್‌ಆರ್‌ಪಿ ಜಾರಿಗೊಳಿಸುತ್ತಿರುವ ಕರ್ನಾಟಕ ರೈಲು ಮೂಲಸೌಲಭ್ಯ ಅಭಿವೃದ್ಧಿ ಕಂಪನಿ ನಿಯಮಿತ (ಕೆ–ರೈಡ್) ಈ ಕುರಿತು ಸ್ಪಷ್ಟನೆಯನ್ನು ನೀಡಿದೆ. ಕೇಂದ್ರ ಸರ್ಕಾರ ಒಪ್ಪಿಗೆ ನೀಡಿರುವ ಡಿಪಿಆರ್ ಪ್ರಕಾರವೇ ಕಾಮಗಾರಿ ನಡೆಯಲಿದೆ ಎಂದು ಹೇಳಿದೆ. ಆದ್ದರಿಂದ ಸಬ್ ಅರ್ಬನ್ ರೈಲು ಯೋಜನೆ 4 ಕಾರಿಡಾರ್ ನಿರ್ಮಾಣವಾಗುವುದು ಖಚಿತವಾಗಿದೆ.

**ಕೆ–ರೈಡ್ ಸ್ಪಷ್ಟನೆ:** ಸಾಮಾಜಿಕ ಜಾಲತಾಣದಲ್ಲಿ ಕೆ–ರೈಡ್ ಪೋಸ್ಟ್ ಹಾಕಿದ್ದು, ಬಿಎಸ್‌ಆರ್‌ಪಿ ಯೋಜನೆಯ ವಿನ್ಯಾಸಕ್ಕೆ ಒಪ್ಪಿಗೆ ಪಡೆದಿದ್ದರಲ್ಲಿ ಯಾವುದೇ ಬದಲಾವಣೆ ಇಲ್ಲ. ಕೇಂದ್ರದ ಒಪ್ಪಿಗೆ ಪಡೆದ ಡಿಪಿಆರ್‌ನಂತೆಯೇ ಯೋಜನೆ ಇರಲಿದೆ. ಯಾವುದೇ ತಪ್ಪು ಮಾಹಿತಿ ಹರಡಬೇಡಿ ಎಂದು ಸ್ಪಷ್ಟನೆಯನ್ನು ನೀಡಿದೆ.ಕೆಲವು ಇಂಗ್ಲಿಶ್ ಮಾಧ್ಯಮಗಳಲ್ಲಿ ಮಂಗಳವಾರ ವೈಟ್‌ಫೀಲ್ಡ್–ಕೆಂಗೇರಿ ಸಂಪರ್ಕಿಸುವ ಪಾರಿಜಾತ ಕಾರಿಡಾರ್–3 ವಿನ್ಯಾಸ ಬದಲಾವಣೆ ಮಾಡಲಾಗುತ್ತದೆ ಅಥವಾ ಕಾರಿಡಾರ್ ಜಾರಿಗೊಳಿಸುವ ಕುರಿತು ಪುನರ್ ಪರಿಶೀಲನೆ ನಡೆಸಲಾಗುತ್ತದೆ ಎಂದು ವರದಿ ಮಾಡಿದ್ದವು. ಆದ್ದರಿಂದ ಕೆ–ರೈಡ್ ಸ್ಪಷ್ಟನೆಯನ್ನು ಕೊಟ್ಟಿದೆ.'ಪಾರಿಜಾತ' ಕಾರಿಡಾರ್ ವಿನ್ಯಾಸವನ್ನು 43 ಕಿ. ಮೀ. ನೇರಳೆ ಮಾರ್ಗದ ನಮ್ಮ ಮೆಟ್ರೋ ಮಾರ್ಗದ ಹಿನ್ನಲೆಯಲ್ಲಿ ಬದಲಾವಣೆ ಮಾಡಲಾಗುತ್ತದೆ ಎಂಬ ಸುದ್ದಿ ಹಬ್ಬಿತ್ತು. ನೇರಳೆ ಮಾರ್ಗದ ನಮ್ಮ ಮೆಟ್ರೋ ರೈಲು ಚೆಲ್ಲಘಟ್ಟದಿಂದ ವೈಟ್‌ಫೀಲ್ಡ್‌ನ್ನು ಸಂಪರ್ಕಿಸುತ್ತದೆ.

ಕಾರಿಡಾರ್–3 ವಿನ್ಯಾಸ ಬದಲಿಸಿ ಅಥವಾ ರದ್ದುಗೊಳಿಸಿ ಚಿಕ್ಕಬಾಣಾವರ–ತುಮಕೂರು ವಯಾ ದಾಬಸ್‌ಪೇಟೆ, ಚಿಕ್ಕಬಾಣಾವರ–ಮಾಗಡಿ, ರಾಜನಕುಂಟೆ–ಗೌರಿಬಿದನೂರು ವಯಾ ದೊಡ್ಡಬಳ್ಳಾಪುರ ಪರ್ಯಾಯ ರೈಲು ಮಾರ್ಗ ನಿರ್ಮಾಣ ಮಾಡಲಾಗುತ್ತದೆ.

ಇದು ಉಪನಗರ ರೈಲು ಯೋಜನೆ ಸಂಪರ್ಕಿಸುವಂತೆಯೂ ಇರಲಿದೆ ಎಂದು ವರದಿಗಳು ಬಂದಿದ್ದವು.ಕೇಂದ್ರ ಸರ್ಕಾರ ಈಗಾಗಲೇ ಸಬ್ ಅರ್ಬನ್ ರೈಲು ಯೋಜನೆಯ ಡಿಪಿಆರ್‌ಗೆ ಒಪ್ಪಿಗೆಯನ್ನು ನೀಡಿದೆ. ಜೂನ್ 2022ರಲ್ಲಿ ಪ್ರಧಾನಿ ನರೇಂದ್ರ ಮೋದಿ ಬಿಎಸ್‌ಆರ್‌ಪಿ ಯೋಜನೆಗೆ ಶಂಕು ಸ್ಥಾಪನೆ ಮಾಡಿದ್ದಾರೆ. ಎರಡು ಕಾರಿಡಾರ್‌ನ ನಿರ್ಮಾಣ ಕಾರ್ಯಕ್ಕೆ ಈಗಾಗಲೇ ಚಾಲನೆಯನ್ನು ನೀಡಲಾಗಿದೆ. ಉಪ ನಗರ ರೈಲು ಯೋಜನೆಯಲ್ಲಿ ಪಾರಿಜಾತ ಕಾರಿಡಾರ್–3 ಆಗಿದೆ. ಈ ಯೋಜನೆ ಡಿಪಿಆರ್‌ಗೆ 21 ಅಕ್ಟೋಬರ್ 2020ರಲ್ಲಿ ಒಪ್ಪಿಗೆ ನೀಡಲಾಗಿದೆ. 35 ಕಿ. ಮೀ. ಮಾರ್ಗದ ಈ ಕಾರಿಡಾರ್ 13 ನಿಲ್ದಾಣಗಳನ್ನು ಹೊಂದಿದೆ. ಭವಿಷ್ಯದಲ್ಲಿ ರಾಮನಗರ, ಮೈಸೂರು, ಬಂಗಾರಪೇಟೆ, ಕೆಜಿಎಫ್ ತನಕ ಇದನ್ನು ವಿಸ್ತರಣೆ ಮಾಡುವಂತೆ ಮಾರ್ಗ ನಿರ್ಮಾಣ ಮಾಡಲಾಗುತ್ತಿದೆ.

ಈ ಕಾರಿಡಾರ್‌ನಲ್ಲಿ ಕೆಂಗೇರಿ, ಆರ್‌ವಿಸಿಇ, ಜ್ಞಾನಭಾರತಿ, ನಾಯಂಡಹಳ್ಳಿ, ಕೃಷ್ಣದೇವರಾಯ, ಜಗಜೀವನ್‌ರಾಮ್ ನಗರ, ಮೆಜೆಸ್ಟಿಕ್, ಕುಮಾರ ಪಾರ್ಕ್, ಕಂಟೋನ್ಮೆಂಟ್ ನಿಲ್ದಾಣಗಳು ಬರಲಿದ್ದು, ಕಂಟೋನ್ಮೆಂಟ್ ಮೂಲಕ ರೈಲು ವೈಟ್‌ಫೀಲ್ಡ್ ತನಕ ಸಂಚಾರವನ್ನು ಮುಂದುವರೆಸಲಿದೆ.

ಉಳಿದಂತೆ ಬಿಎಸ್‌ಆರ್‌ಪಿ ಯೋಜನೆಯಲ್ಲಿ ಬೈಯಪ್ಪನಹಳ್ಳಿ–ಚಿಕ್ಕಬಾಣಾವರ 24 ಕಿ. ಮೀ. ಮಲ್ಲಿಗೆ ಕಾರಿಡಾರ್, ಹೀಗಲಿಗೆ–ರಾಜನಕುಂಟೆ 46 ಕಿ. ಮೀ. ಕನಕ ಕಾರಿಡಾರ್, ಕೆಎಸ್‌ಆರ್ ಬೆಂಗಳೂರು–ದೇವನಹಳ್ಳಿ ವಯಾ ಯಲಹಂಕ 41 ಕಿ. ಮೀ. ಸಂಪಿಗೆ ಕಾರಿಡಾರ್ ನಿರ್ಮಾಣವಾಗುತ್ತಿದೆ.

## ಯತ್ನಾಳ್ ವಿರುದ್ಧ ಶಿಸ್ತುಕ್ರಮ: ಬಿಜೆಪಿ ವರಿಷ್ಠರಿಗೆ ಶಿಫಾರಸು

**ಬೆಂಗಳೂರು, ನ.27 :** ವಕ್ಫ ಭೂಮಿ ವಿವಾದದ ಹಿನ್ನೆಲೆಯಲ್ಲಿ ಪ್ರತ್ಯೇಕ ಯಾತ್ರೆ ಮಾಡುತ್ತಿರುವ ಪಕ್ಷದ ಭಿನ್ನರ ವಿರುದ್ಧ ಮುಗಿಬಿದ್ದಿರುವ ಪಕ್ಷ ನಿಷ್ಠರ ಪಡೆ, ಬಸನಗೌಡ ಪಾಟೀಲ್ ಯತ್ನಾಳ್ ಹಾಗೂ ಅವರ ತಂಡದ ವಿರುದ್ಧ ಕ್ರಮ ಕೈಗೊಳ್ಳುವಂತೆ ದೆಹಲಿ ವರಿಷ್ಠರ ಮೇಲೆ ಒತ್ತಡ ಹೇರಲು ಸಜ್ಜಾಗಿದೆ. ಇನ್ನೊಂದೆಡೆ, ಉಪಚುನಾವಣೆಯಲ್ಲಿ ತೀವ್ರ ಮುಖಭಂಗ ಅನುಭವಿಸಿದ ಹಿನ್ನೆಲೆಯಲ್ಲಿ ಬಿಜೆಪಿ ರಾಜ್ಯ ಘಟಕ, ರಾಜ್ಯ ಪದಾಧಿಕಾರಿಗಳ ಬದಲಾವಣೆ ಹಾಗೂ ಭಿನ್ನಮತೀಯ ನಾಯಕರನ್ನು ನಿಯಂತ್ರಿಸುವ ಕುರಿತು ದೆಹಲಿ ವರಿಷ್ಠರಿಗೆ ದೂರು ಸಲ್ಲಿಸಲು ಸಹ ಮುಂದಾಗಿದೆ ಎಂದು ತಿಳಿದು ಬಂದಿದೆ. ಈ ಬಗ್ಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಡಿಸೆಂಬರ್‌ನಲ್ಲಿ ಕೇಂದ್ರ ನಾಯಕರೊಂದಿಗೆ ಚರ್ಚೆ ನಡೆಸಲಿದ್ದಾರೆ ಎಂದು ಪಕ್ಷದ ಉನ್ನತ ಮೂಲಗಳು ತಿಳಿಸಿವೆ.

ಬಿಜೆಪಿ ಹಿರಿಯ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಪಕ್ಷದ ರಾಜ್ಯ ನಾಯಕತ್ವವನ್ನು ತೀವ್ರವಾಗಿ ಟೀಕಿಸುತ್ತಿದ್ದು, ಈ ಕುರಿತು ವಿಜಯೇಂದ್ರ ಕೇಂದ್ರ ನಾಯಕರಿಗೆ ದೂರು ನೀಡಲು ಮುಂದಾಗಿದ್ದಾರೆ ಎಂಬ ಮಾಹಿತಿ ಇದೆ. ಉಪಚುನಾವಣೆ ಮುಗಿದ ಬೆನ್ನಲ್ಲೇ ವಿಜಯೇಂದ್ರ ರಾಜೀನಾಮೆಗೆ ಯತ್ನಾಳ್ ಮಾಡಿರುವ ಆಗ್ರಹ, ವಕ್ಫ್ ಬಗ್ಗೆ ಯತ್ನಾಳ್ ಬಣ ನಡೆಸುತ್ತಿರುವ ಅಭಿಯಾನವೆಲ್ಲವೂ ವಿಜಯೇಂದ್ರ ಬಣವನ್ನು ತೀವ್ರವಾಗಿ ಕೆರಳಿಸಿದೆ. ಜೊತೆಗೆ, ಪಕ್ಷ ವಿರೋಧಿ ಚಟುವಟಿಕೆಯನ್ನು ಹೆಚ್ಚಿಸುತ್ತಿರುವುದರಿಂದ ಅವರನ್ನು ಹಣಿಯುವುದಕ್ಕಾಗಿ ವಿಜಯೇಂದ್ರ ವರಿಷ್ಠರ ಭೇಟಿಗೆ ನಿರ್ಧರಿಸಿದ್ದಾರೆಂದು ಮೂಲಗಳು ಹೇಳಿವೆ. ಇದರ ನಡುವೆ ವಿಜಯೇಂದ್ರ ಬಣದಲ್ಲಿ ಗುರುತಿಸಿಕೊ

ಮಾಜಿ ಸಚಿವ ಕಟ್ಟಾ ಸುಬ್ರಹ್ಮಣ್ಯ ನಾಯ್ಡು ಹಾಗೂ ಮಾಜಿ ಶಾಸಕ ಎಂ.ಪಿ. ರೇಣುಕಾಚಾರ್ಯ ನೇತೃತ್ವದ ನಿಯೋಗ ದೆಹಲಿಗೆ ತೆರಳಿ ಬಿಜೆಪಿ ಅಧ್ಯಕ್ಷ ಜೆ.ಪಿ.ನಡ್ಡಾ ಹಾಗೂ ಅಮಿತ್ ಶಾ ಅವರನ್ನು ಭೇಟಿ ಮಾಡಲು ನಿರ್ಧರಿಸಿದೆ. ಇತ್ತೀಚೆಗೆ ಮಾಜಿ ಸಚಿವ ಕಟ್ಟಾ ಸುಬ್ರಹ್ಮಣ್ಯ ನಾಯ್ಡು ನಿವಾಸದಲ್ಲಿ ಸಭೆ ಸೇರಿದ ಸುಮಾರು 20ಕ್ಕೂ ಹೆಚ್ಚು ಹಿರಿಯ ಮುಖಂಡರು ಈ ತೀರ್ಮಾನಕ್ಕೆ ಬಂದಿದ್ದಾರೆ. ವಕ್ಫ್ ಒತ್ತುವರಿ ತೆರವು ವಿರೋಧಿ ಹೋರಾಟದ ಹೆಸರಿನಲ್ಲಿ ಪಕ್ಷದ ಕೆಲವು ನಾಯಕರು ಅನಗತ್ಯವಾಗಿ ಗೊಂದಲ ಸೃಷ್ಟಿಸುತ್ತಿದ್ದಾರೆ. ಇದು ಪಕ್ಷ ಸಂಘಟನೆ ಮತ್ತು ಕಾರ್ಯಕರ್ತರ ಮೇಲೆ ಗಂಭೀರ ಪರಿಣಾಮ ಬೀರುತ್ತದೆ.

ಈ ಹಿನ್ನೆಲೆಯಲ್ಲಿ ಹೈಕಮಾಂಡ್ ತಕ್ಷಣವೇ ಮಧ್ಯಪ್ರವೇಶಿಸಿ ಎಲ್ಲ ಚಟುವಟಿಕೆಗಳಿಗೆ ಕಡಿವಾಣ ಹಾಕಬೇಕು ಎಂದು ಆಗ್ರಹಿಸಿದ್ದಾರೆ. ಪಕ್ಷದ ರಾಜ್ಯ ಘಟಕದ ಅಧ್ಯಕ್ಷರು ಮತ್ತು ಪ್ರತಿ ಪಕ್ಷ ನಾಯಕರನ್ನು ಹೈಕಮಾಂಡ್ ನೇಮಕ ಮಾಡಿದೆ. ಈ ವಿಷಯವಾಗಿ ಹೈಕಮಾಂಡ್ ತೀರ್ಮಾನಕ್ಕೆ ಎಲ್ಲರೂ ತಲೆಬಾಗಬೇಕು. ಆದರೆ, ಕೆಲವರು ಈ ನಾಯಕತ್ವ ಒಪ್ಪುವುದಿಲ್ಲ ಎಂದು ಹೈಕಮಾಂಡ್‌ಗೆ ಸೆಡ್ಡು ಹೊಡೆಯಲು ಮುಂದಾಗಿದ್ದಾರೆ. ಇಂಥವರನ್ನು ಯಾವುದೇ ಕಾರಣಕ್ಕೂ ಸಹಿಸಬಾರದು ಎಂದು ಹೈಕಮಾಂಡ್‌ಗೆ ಮನವರಿಕೆ ಮಾಡಿಕೊಡಲು ಸಭೆಯಲ್ಲಿ ತೀರ್ಮಾನಿಸಿದೆ. ಕೆಲವೇ ಕೆಲವು ಮಂದಿ ನಡೆಸುತ್ತಿರುವ ಚಟುವಟಿಕೆಗಳಿಂದ ಪಕ್ಷದಲ್ಲಿ ದೊಡ್ಡ ಪ್ರಮಾಣದ ಗೊಂದಲ ಸೃಷ್ಟಿಯಾಗುತ್ತದೆ. ಇದನ್ನು ತಪ್ಪಿಸಿ ಭಿನ್ನಮತೀಯರಿಗೆ ಎಚ್ಚರಿಕೆ ಸಂದೇಶ ರವಾನಿಸುವ ಅಗತ್ಯವಿದೆ ಎಂದು ತಿಳಿಸುವ ದೃಷ್ಟಿಯಿಂದ ನಿಯೋಗದಲ್ಲಿ ದೆಹಲಿಗೆ ತೆರಳಲು ಈ ಸಭೆ ತೀರ್ಮಾನಿಸಿದೆ ಎಂದು ಮೂಲಗಳು ತಿಳಿಸಿವೆ. ಮೂರು ಕ್ಷೇತ್ರಗಳ ಉಪಚುನಾವಣೆ ಸೋಲು, ಭಿನ್ನರ ನಡೆಗೆ ಬೇಸತ್ತ ಕಾರ್ಯಕರ್ತರಿಗೆ ಸ್ಪಷ್ಟ ಸಂದೇಶ ನೀಡಿ, ಉತ್ಸಾಹ ತುಂಬುವುದಕ್ಕಾಗಿ ರಾಜ್ಯ ಬಿಜೆಪಿ ಡಿಸೆಂಬರ್‌ನಲ್ಲಿ ಮೇಜರ್ ಸರ್ಜರಿಗೆ ಮುಂದಾಗಿದೆ. ಪಕ್ಷದ ರಾಜ್ಯಾಧ್ಯಕ್ಷರ ಬಗ್ಗೆ ತಗಾದೆ ಮುಂದುವರಿಸಿದರೆ ಸಮರ್ಥರಲ್ಲವೆಂದು ವರಿಷ್ಠರು ಬದಲಾಯಿಸಬಹುದು ಎಂಬ ತಂತ್ರಗಾರಿಕೆಯನ್ನು ಅತೃಪ್ತರ ಬಣ ಹೆಣೆದಿದ್ದರೆ, ಹೊಸ ತಂಡ ಕಟ್ಟಿ ಅತೃಪ್ತರನ್ನು ನಿವಾರಿಸಿಕೊಳ್ಳುವ ಪ್ರತಿತಂತ್ರವನ್ನು ಬಿ.ವೈ.ವಿಜಯೇಂದ್ರ ಹೆಣೆದಿದ್ದಾರೆ ಎಂದು ಹೇಳಲಾಗುತ್ತಿದೆ. ಡಿಸೆಂಬರ್‌ನಲ್ಲಿ ನಡೆಯಲಿರುವ ಸಂಘಟನಾ ಪರ್ವದ ಭಾಗವಾಗಿ ಬೂತ್, ಮಂಡಲ ಮತ್ತು ಜಿಲ್ಲಾ ಸಮಿತಿಗಳು ಮರು ರಚನೆಯಾಗಲಿವೆ.

ಎಲ್ಲ ಸಮುದಾಯಗಳಿಗೆ ನಾಯಕತ್ವ, ಎಲ್ಲರನ್ನೂ ಒಟ್ಟಿಗೆ ಕರೆದೊಯ್ದು ಸಂಘಟನೆ ಗಟ್ಟಿಗೊಳಿಸುವ ಚಿಂತನೆ ನಡೆಸಿದ್ದಾರೆ. ಬಸನಗೌಡ ಪಾಟೀಲ ಯತ್ನಾಳ್ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ವರಿಷ್ಠರಿಗೆ ಶಿಫಾರಸು ಮಾಡುವ ಮೂಲಕ ಅವರ ತಂಡದಲ್ಲಿರುವವರಿಗೆ ಪರೋಕ್ಷ ಎಚ್ಚರಿಕೆ ನೀಡುವ ತಂತ್ರ ರೂಪಿಸಿದ್ದಾರೆ. ಬಿಜೆಪಿ ಶಿಸ್ತಿನ ಪಕ್ಷ. ರಾಜ್ಯಾಧ್ಯಕ್ಷರು ರಾಜ್ಯ ಕೋರ್ ಕಮಿಟಿ ಜೊತೆ ಚರ್ಚಿಸಿ ನಿರ್ಧಾರಗಳನ್ನು ತೆಗೆದುಕೊಳ್ಳುತ್ತಾರೆ. ವೈಯಕ್ತಿಕ ಹಿತಾಸಕ್ತಿ ಇಟ್ಟುಕೊಂಡು, ಪಕ್ಷದ ನಿಯಮ–ಶಿಸ್ತನ್ನು ಉಲ್ಲಂಘಿಸಿ ಹೇಳಿಕೆ ಕೊಟ್ಟರೆ, ಹೋರಾಟ ಮಾಡಿದರೆ ಅದಕ್ಕೂ ಪಕ್ಷಕ್ಕೂ ಸಂಬಂಧ ಇಲ್ಲ ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ.ರಾಜೀವ್ ಹೇಳಿದ್ದಾರೆ."ಯತ್ನಾಳ್ ಮಾಡುವ ಹೋರಾಟಕ್ಕೆ ರಾಷ್ಟ್ರೀಯ ನಾಯಕರ ಅನುಮತಿ ಪಡೆದಿಲ್ಲ. ರಾಜ್ಯ ನಾಯಕರು, ಜಿಲ್ಲಾ ನಾಯಕರಿಂದಲೂ ಅನುಮತಿ ಪಡೆದಿಲ್ಲ. ಹಾಗಾಗಿ ಅದು ಪಕ್ಷದ ಹೋರಾಟ ಆಗುವುದಿಲ್ಲ. ಅದು ಪಕ್ಷದ ಅಶಿಸ್ತು ಆಗುತ್ತದೆ. ಯತ್ನಾಳ್ ಅವರ ಈ ಕ್ರಮದ ಕುರಿತು ರಾಷ್ಟ್ರನಾಯಕರ ಗಮನಕ್ಕೆ ತರುತ್ತೇವೆ. ಅವರ ವಿರುದ್ಧ ರಾಷ್ಟ್ರೀಯ ನಾಯಕರಿಗೆ ವರದಿ ಕೊಡುತ್ತೇವೆ ಎಂದು ಪಿ.ರಾಜೀವ್ ತಿಳಿಸಿದ್ದಾರೆ. ಸ್ವಪ್ರತಿಷ್ಠೆಯಿಂದ ಪ್ರತ್ಯೇಕ ಹೋರಾಟ ಆರಂಭಿಸಿರುವುದು ಬಸನಗೌಡ ಪಾಟೀಲ್ ಯತ್ನಾಳ್ ಹಾಗೂ ಅವರ ತಂಡಕ್ಕೆ ಶೋಭೆ ತರುವುದಿಲ್ಲ. ಈಗಲಾದರೂ ಅವರು ಜಾಗೃತರಾಗಿ ಪಕ್ಷ ಬಲಪಡಿಸಲು ಸಹಕಾರ ನೀಡಬೇಕೆಂದು ವಿನಂತಿ ಮಾಡುತ್ತೇನೆ. ನಾವು ಮನವಿ ಮಾಡುವುದನ್ನು ಮಾಡುತ್ತೇವೆ, ಉಳಿದಿದ್ದು ಅವರಿಗೆ, ಕೇಂದ್ರದ ನಾಯಕರಿಗೆ ಬಿಟ್ಟಿದ್ದು. ಇದೆಲ್ಲವೂ ಹೈಕಮಾಂಡ್ ಗಮನದಲ್ಲೂ ಇದೆ, ನೋಡೋಣ ಎಂದು ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಕೂಡ ಹೇಳಿದ್ದಾರೆ.



ವೇತನ ಪರಿಷ್ಕರಣೆ ಹಾಗೂ ಬಡ್ತಿಗೆ ಆಗ್ರಹಿಸಿ ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿತಿ ನೌಕರರ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು ಬುಧವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಧರಣಿ ನಡೆಸಿದರು.






# ನಾಲ್ಕು ಪಾಕಿಸ್ತಾನದಷ್ಟು ಆಸ್ತಿಗೆ ವಕ್ಫ್ ಬೇಡಿಕೆ ಇಟ್ಟಿದೆ: ಯತ್ನಾಳ್ ಕಿಡಿ

**ಕಲಬುರಗಿ, ನ.27–** ಭಾರತ ಸರ್ಕಾರದ ಲೆಕ್ಕಪತ್ರದಲ್ಲಿ 9 ಲಕ್ಷ 50 ಸಾವಿರ ಎಕರೆಗಳಷ್ಟು ವಕ್ಫ್ ಆಸ್ತಿ ಇದೆ. ಆದರೆ ಇದರಲ್ಲಿ 38 ಲಕ್ಷ ಎಕರೆ ವಕ್ಫ್ ಆಸ್ತಿ ಇದೆ ಅಂತಾ ಬೇಡಿಕೆ ಇಟ್ಟಿದ್ದಾರೆ. ನಾಲ್ಕು ಪಾಕಿಸ್ತಾನ ಆಗುವಷ್ಟು ಆಸ್ತಿಗೆ ಬೇಡಿಕೆ ಇಟ್ಟಿದ್ದಾರೆ. ಹಿಂದೂಗಳನ್ನೇ ಗುರಿಯಗಿಸಿಕೊಂಡು ದೇವಸ್ಥಾನ, ಮಠ ಮಂದಿರಗಳು ಮತ್ತು ಸಾರ್ವಜನಿಕರ ಆಸ್ತಿಪಾಸ್ತಿಗಳು ವಕ್ಫ್ ಆಸ್ತಿ ಎಂದು ದಾಖಲಿಸುವ ಮೂಲಕ ಲ್ಯಾಂಡ್ ಜಿಹಾದನಿಂದ ಹಿಂದೂಗಳನ್ನು ಕೊಳ್ಳೆ ಹೊಡೆಯಲಾಗುತ್ತಿದೆ. ಇದಕ್ಕೆ ಕಾಂಗ್ರೆಸ್ ಸರ್ಕಾರ ಕುಮ್ಮಕ್ಕು ನೀಡುತ್ತಿದೆ. ಆದ್ದರಿಂದ ವಕ್ಫ್ ಲ್ಯಾಂಡ್ ಜಿಹಾದ ವಿರುದ್ಧ ಹಳ್ಳಿ–ಹಳ್ಳಿಗೂ ಹೋಗಿ ಕರಾಳ ಶಾಸನದ ಬಗ್ಗೆ ಜನರಲ್ಲಿ ಜಾಗೃತಿ ಮಾಡುವ ಅವಶ್ಯಕತೆ ಇದೆ ಎಂದು ಯತ್ನಾಳ್ ಹೇಳಿದರು.

ಪ್ರತಿ ಜಿಲ್ಲೆಯಲ್ಲೂ ಪ್ರವಾಸ ಕೈಗೊಂಡು ಅಲ್ಲಿ ಬಾಧಿತರ ಬಗ್ಗೆ ಪಾರ್ಲಿಮೆಂಟರಿ ಬೋರ್ಡ್‌ಗೆ ಕೊಡೋಕೆ ಗಮನಕ್ಕೆ ತರುತ್ತೇವೆ. ಈ ಬಗ್ಗೆ ಮೊದಲ ಹಂತದಲ್ಲಿ



ಕಲಬುರಗಿ, ಯಾದಗಿರಿ, ರಾಯಚೂರು, ಬಾಗಲಕೋಟೆ, ಬೆಳಗಾವಿ ಜಿಲ್ಲೆಯಲ್ಲಿ ಹೋರಾಟ ಮಾಡ್ತೇವೆ. ನಾವು ಪ್ರತಿಷ್ಟೆಗಾಗಿ ಹೋರಾಟ ಮಾಡ್ತಿಲ್ಲ, ರೈತರಿಗಾಗಿ ಹೋರಾಡುತ್ತಿದ್ದೇವೆ ಎಂದರು.

ಪ್ರಧಾನಿ ಮೋದಿಯವರು ಕೂಡಾ ಸಂವಿಧಾನದಲ್ಲಿರುವುದನ್ನೇ ಇಂಪ್ಲಿಮೆಂಟ್ ಮಾಡ್ತೀವಿ ಎಂದು ಹೇಳಿದ್ದರು. ಆದರೆ ಈಗ ಪ್ರಧಾನಿ ಮೋದಿಯವರು ಕೈಕೊಂಡ ಐತಿಹಾಸಿಕ ನಿರ್ಣಯಕ್ಕೆ ಬೆಂಬಲವಾಗಿ ಪ್ರಧಾನಿಗಳ ಕೈ ಬಲಪಡಿಸಲು ನಮ್ಮ ತಂಡ ಹೋರಾಟ ಮಾಡುತ್ತಿದೆ. ಅದಕ್ಕಾಗಿ ಜನಬೆಂಬಲವೂ ಅಗತ್ಯವಿದ್ದು ಜನರಲ್ಲಿ ವಕ್ಫ್ ಕರಾಳತೆಯ ಕುರಿತು ಜಾಗೃತಿ ಮೂಡಿಸಲು ನಮ್ಮ ತಂಡ ಅಭಿಯಾನ ಕೈಕೊಂಡಿದೆ ಎಂದು ಹೇಳಿದರು.

ವಕ್ಫ್ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರು ಮೂರು ತಂಡಗಳನ್ನು ರಚನೆ ಮಾಡಿ ರಾಜ್ಯಾದ್ಯಂತ ಪ್ರತಿಭಟನೆ ನಡೆಸುವದಾಗಿ ಹೇಳಿದ್ದು, ಮತ್ತೊಂದೆಡೆ ರೆಬಲ್ಸ್ ನಾಯಕರ ತಂಡವು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ನೇತೃತ್ವದಲ್ಲಿ ಗಡಿ ಜಿಲ್ಲೆ ಬೀದರ್‌ನಿಂದ ಪ್ರತ್ಯೇಕ ಹೋರಾಟ ಆರಂಭಿಸಿ, ಇದೀಗ ಕಲಬುರಗಿಗೆ ಆಗಮಿಸಿ ಯಾದಗಿರಿಗೆ ತೆರಳುವ ಮುನ್ನ ಮಾಧ್ಯಮಗಳೊಂದಿಗೆ ಮಾತನಾಡಿ, ನಮ್ಮದು ರಾಜ್ಯ ಬಿಜೆಪಿ ವಿರುದ್ಧ ಅಲ್ಲ. ಕೇಂದ್ರ ಸರ್ಕಾರ ಕೈಕೊಂಡಿರುವ ನಿರ್ಣಯಕ್ಕೆ ಬೆಂಬಲವಾಗಿ ನಮ್ಮ ಹೋರಾಟ ನಡೆಯುತ್ತಿದೆ. ವಿಜಯಪುರದಲ್ಲಿ ನಡೆದ ಹೋರಾಟದಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಕೂಡ ಆಗಮಿಸಿ ಭಾಗವಹಿಸಿದ್ದರು. ಕೇಂದ್ರದ ವಕ್ಫ್ ಕುರಿತು ರಚಿಸಿರುವ ಪಾರ್ಲಿಮೆಂಟ್ ಜಂಟಿ ಸದನ ಸಮಿತಿ ಅರ್ದಯಕ್ಷ ಜಗದಾಂಬಿಕಾ ಪಾಲ್ ಅವರೂ ವಿಜಯಪುರಕ್ಕೆ ಭೇಟಿ ನೀಡಿ ವಿವರಗಳನ್ನು ಪಡೆದರು. ಇವರೆಲ್ಲ ಬಂದಿರುವಾಗ ನಮ್ಮದು ಪಕ್ಷ ವಿರೋಧಿ ಹೇಗಾಗುತ್ತದೆ? ಎಂದು ಪ್ರಶ್ನಿಸಿದರು.

ವಕ್ಫ್ ವಿರುದ್ಧ ರೆಬೆಲ್ ನಾಯಕರು ಆರಂಭದಿಂದಲೂ ವಿರೋಧ ವ್ಯಕ್ತಪಡಿಸುತ್ತಲೇ ಬಂದಿದ್ದಾರೆ. ಈ ಮಧ್ಯೆ ಇದೀಗ ವಕ್ಫ್ ಬಗ್ಗೆ ಹಳ್ಳಿ–ಹಳ್ಳಿಗೂ ದೇಶದಲ್ಲಿ ನೆಹರೂರಿಂದ ಮನಗೋಹನ್ ಸಿಂಗ್ ವರೆಗೂ ವಕ್ಫ್‌ಗೆ ಅಧಿಕಾರ ಮತ್ತು ಭೂಮಿ ಕೊಟ್ಟಿದ್ದಾರೆ. ಹೀಗಾಗಿ ದೇಶದಲ್ಲಿ ಒಂಭತ್ತು ಕ್ಷ ಎಕರೆ ವಕ್ಫ್ ಪ್ರಾಪರ್ಟಿ ಈಗಾಗಲೇ ದಾಖಲೆಯಲ್ಲಿದ್ದು, ತಮಿಳುನಾಡಿನಲ್ಲಿ ಸಆವಿರಾರು ವರ್ಷಗಳಿಂದ ಅಸ್ತಿತ್ವದಲ್ಲಿರುವ ಒಂದು ಪುರಾತನ ದೇವಸ್ಥಾನ ಸೇರಿದಂತೆ ಒಂದು ಇಡೀ ಊರು ವಕ್ಫ್ ಎಂದು ಘೋಷಣೆ ಮಾಡಿಕೊಂಡಿದೆ ಎಂದರೆ, ಇವರ ಮನಃಸ್ಥಿತಿ ಹೇಗಿದೆ. ಮುಂದಿನ ಇವರ ಲೆಕ್ಕಾಚಾರ ಎಂಥ ಕರಾಳವಾಗಿದೆ ಎಂಬ ಅರಿವಾಗುತ್ತದೆ ಎಂದರು.

# ಬೌದ್ಧರ ಧಾರ್ಮಿಕ ಹಕ್ಕಿಗಾಗಿ ಬೃಹತ್ ಹೋರಾಟ

**ಬೀದರ್, ನ.27–** ಬೌದ್ಧರ ಹಕ್ಕಿಗಾಗಿ ಹಾಗೂ ಬಿ.ಟಿ ಕಾಯ್ದೆ–1949 ರದ್ದುಗೊಳಿಸಿ ಬುದ್ಧಗಯಾದ ಮಹಾಬೋಧಿ ಮಹಾವಿಹಾರದ ಅಡಳಿತ ಸಂಪೂರ್ಣವಾಗಿ ಬೌದ್ಧರಿಗೆ ನೀಡಲು ದೇಶಾದ್ಯಂತ ಆಲ್ ಇಂಡಿಯಾ ಬುದ್ಧಿಷ್ಟ್ ಫೋರಮ್ ನೀಡಿದ ಕರೆಗೆ ಓಗೊಟ್ಟು ನಾಡಿನ ಗಡಿ ಜಿಲ್ಲೆ ಬೀದರ್‌ನಲ್ಲೂ ಪ್ರತಿಭಟನೆ ಹಮ್ಮಿಕೊಳ್ಳಲಾಯಿತು.

ಬೀದರ್ ಬುದ್ಧಿಷ್ಟ್ ವಿಹಾರದ ಸಂಸ್ಥಾಪಕ ಪೂಜ್ಯ ಭಂತೆ ಧಮ್ಮಾನಂದ ಮಹಾಥೆರೊ ಅಧ್ಯಕ್ಷ ಪೂಜ್ಯ ಭಂತೆ ಜ್ಞಾನಸಾಗರ ಕಾರ್ಯದರ್ಶಿ ಪೂಜ್ಯ ಭಂತೆ ಸಂಘರಖ್ಖೀತ, ಭಂತೆ ಧರ್ಮಪಾಲ ರೆಕುಳಗಿ ಮೌಂಟ್, ಭಂತೆ ನೌಪಾಲ ಭಾಲ್ಕಿ, ಹಾಗೂ ಭಿಕ್ಕು ಸಂಘ ಹಾಗೂ ವಿವಿಧ ಬೌದ್ಧ ಸಂಘಟನೆಗಳು, ದಲಿತ ಸಂಘಟನೆಗಳ ಮತ್ತು ಸಂವಿಧಾನ ಸಂರಕ್ಷಣಾ ಸಮಿತಿಯ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ಜರುಗಿತು.

ಮನವಿ ಪತ್ರವನ್ನು ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿ, ಪ್ರಧಾನ ಮಂತ್ರಿ ಮತ್ತು ರಾಜ್ಯದ ಮುಖ್ಯಮಂತ್ರಿಗಳಿಗೆ ಮತ್ತು ವಿಶೇಷವಾಗಿ ಬುದ್ಧ ಗಯಾ ಬಿಹಾರದಲ್ಲಿರುವ ಕಾರಣ ಅಲ್ಲಿಯ ರಾಜ್ಯಪಾಲರಿಗೆ, ಮುಖ್ಯ ಮಂತ್ರಿಗಳಿಗೆ ಹಾಗೂ ರಾಷ್ಟ್ರೀಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರಿಗೂ ಮನವಿ ಸಲ್ಲಿಸಲಾಯಿತು. ಪ್ರತಿಭಟನಾ ರ‍್ಯಾಲಿ ಬೀದರ್ ನಗರದ ಜನವಾಡ ರಸ್ತೆಯಲ್ಲಿರುವ ಅಂಬೇಡ್ಕರ್ ಭವನದಿಂದ ಪ್ರಾರಂಭವಾಗಿ ಅಂಬೇಡ್ಕರ್ ವೃತ್ತ, ಭಗತಸಿಂಗ್ ವೃತ್ತ, ತಹಶಿಲ್ ಕಚೇರಿ ಮಾರ್ಗವಾಗಿ ಬೀದರ್ ಜಿಲ್ಲಾಧಿಕಾರಿ ಕಚೇರಿಗೆ ತಲುಪಿ ಮನವಿ ಸಲ್ಲಿಸಲಾಯಿತು.



ಬೀದರ್‌ನಲ್ಲಿ ಆಲ್ ಇಂಡಿಯಾ ಬುದ್ಧಿಷ್ಟ ಫೋರಮ್ ವತಿಯಿಂದ ಬೌದ್ಧರ ಧಾರ್ಮಿಕ ಹಕ್ಕಿಗಾಗಿ ಬೃಹತ್ ಪ್ರತಿಭಟನಾ ರ‍್ಯಾಲಿ ಹಮ್ಮಿಕೊಂಡು ಬಳಿಕ ಮನವಿ ಸಲ್ಲಿಸಲಾಯಿತು.

### ಮುಡಾ ಹಗರಣಕ್ಕೆ ಮಹತ್ವದ ತಿರುವು

# ಮಾಲೀಕ ದೇವರಾಜು ವಿರುದ್ಧ ಜೆಎಂಎಫ್‌ಸಿ ನ್ಯಾಯಾಲಯದಲ್ಲಿ ಜಮುನಾ ದಾವೆ

**ಮೈಸೂರು, ನ.27–** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಉರುಳಾಗಿ ಪರಿಣಮಿಸಿರುವ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಹಗರಣ ಮತ್ತೊಂದು ತಿರುವು ಪಡೆದುಕೊಂಡಿದೆ.

ಜಮೀನು ಮಾಲೀಕ ದೇವರಾಜು ವಿರುದ್ಧ ಅಣ್ಣನ ಮಗಳು ಜಮುನಾ ಮೈಸೂರಿನ ಜೆಎಂಎಫ್‌ಸಿ ನ್ಯಾಯಾಲಯದಲ್ಲಿ ದಾವೆ ಹೂಡಿದ್ದಾರೆ. ಜಮುನಾ ಅವರು ದೇವಾರಜು ಅವರ ಅಣ್ಣ ಮೈಲಾರಯ್ಯ ಅವರ ಮಗಳು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿಯವರ ಹೆಸರಿನಲ್ಲಿರುವ ಜಮೀನು ದೇವರಾಜು ಅವರದ್ದು ಅಲ್ಲ, ಬದಲಿಗೆ ನಮ್ಮ ತಂದೆ ಮೈಲಾರಯ್ಯ ಅವರಿಗೆ ಸೇರಿದ್ದು ಎಂದು ಜಮುನಾ ದಾವೆ ಹೂಡಿದ್ದಾರೆ.

ನಮ್ಮ ಚಿಕ್ಕಪ್ಪ ದೇವರಾಜು ಮೋಸದಿಂದ ಜಮೀನು ಮಾರಾಟ ಮಾಡಿದ್ದಾರೆ. ಜಮೀನು ಮೊದಲು ನನ್ನ ತಂದೆ ಮೈಲಾರಯ್ಯ ಅವರ ಹೆಸರಿನಲ್ಲಿ ಇತ್ತು. ನಮ್ಮ ಹೆಸರಿಗೆ ಮಾಡಿಸಿಕೊಡುತ್ತೇನೆ ಎಂದು ನಮ್ಮ ಚಿಕ್ಕಪ್ಪ ದೇವರಾಜು ನನ್ನ ಹಾಗೂ ತಾಯಿ ಬಳಿ ಸಹಿ ಪಡೆದುಕೊಂಡರು. ನನ್ನ ರೀತಿ ನನ್ನ ಸಹೋದರಿ ಜಮುನಾಗು ಅನ್ಯಾಯವಾಗಿದೆ ಎಂದು ಅಳಲು ತೋಡಿಕೊಂಡರು.

ನನ್ನ ತಾತ ನಿಂಗ ಅಲಿಯಾಸ್ ಜವರ ಅವರಿಗೆ ಮಲ್ಲಯ್ಯ, ಮೈಲಾರಯ್ಯ ಹಾಗೂ ದೇವರಾಜು ಮೂರು ಜನ ಗಂಡು ಮಕ್ಕಳು. ಕೆಸರೆ ಸರ್ವೇ ನಂ 464ರ 3.16 ಎಕರೆ ಭೂಮಿ ನನ್ನ ತಂದೆ ಮೈಲಾರಯ್ಯ ಪಾಲಿಗೆ ಬಂದಿತ್ತು. ನಮ್ಮ ಹೆಸರಿಗೆ ಮಾಡಿಸಿಕೊಡುತ್ತೇನೆ ಎಂದು ನಮ್ಮ ಚಿಕ್ಕಪ್ಪ ದೇವರಾಜು ನನ್ನ ಹಾಗೂ ತಾಯಿ ಬಳಿ ಸಹಿ ಪಡೆದುಕೊಂಡು, ಮೋಸದಿಂದ ಮಾರಾಟ ಮಾಡಿದ್ದಾರೆ. ಜಮುನಾ ಅವರು ದಾವೆ ಹೂಡಿರುವ ಡಿಜಿಟಲ್ ಪ್ರತಿಯನ್ನು ದೂರುದಾರ ಸ್ನೇಹಮಯಿ ಕೃಷ್ಣ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ. ಈ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಸ್ನೇಹಮಯಿ ಕೃಷ್ಣ ಆರೋಪ ಮುಂದುವರೆದಿದೆ. ಸದ್ಯ ಮುಡಾ ಹಗರಣದ ತನಿಖೆಯನ್ನು ಲೋಕಾಯುಕ್ತ ಮತ್ತು ಇಡಿ ನಡೆಸುತ್ತಿದೆ.

### ವಿಜಯಪುರ ಮಹಾನಗರ ಪಾಲಿಕೆ ಉಪಚುನಾವಣೆ

# ಬಿಜೆಪಿ ಅಭ್ಯರ್ಥಿ ಭರ್ಜರಿ ಗೆಲುವು: ಶಾಸಕ ಯತ್ನಾಳ್ ಮೇಲುಗೈ

**ವಿಜಯಪುರ, ನ.27–** ಜಿಲ್ಲೆಯಲ್ಲಿ ಕಾಂಗ್ರೆಸ್ ಹಾಗೂ ಬಿಜೆಪಿ ಎರಡೂ ಪಕ್ಷಗಳಿಗೆ ಪ್ರತಿಷ್ಠೆಯ ಕಣ ಎನಿಸಿದ್ದ ವಿಜಯಪುರ ಮಹಾನಗರ ಪಾಲಿಕೆಯ ವಾರ್ಡ್ –29 ರ ಉಪಚುನಾವಣೆಯ ಫಲಿತಾಂಶ ಹೊರಬಿದ್ದಿದ್ದು, ಬಿಜೆಪಿಯ ಶಾಸಕ ಬಸನಗೌಡ ಪಾಟೀಲ್ ಯತ್ನಾಳ ಬೆಂಬಲಿತ ಅಭ್ಯರ್ಥಿ ಗಿರೀಶ ಪಾಟೀಲ (ಬಿರಾದಾರ) ದಿಗ್ವಿಜಯ ಸಾಧಿಸುವ ಮೂಲಕ ವಾರ್ಡ್ 29 ಮತ್ತೆ ಬಿಜೆಪಿ ತೆಕ್ಕೆಗೆ ಸೇರಿದೆ.

**ಬಿಜೆಪಿ ಸದಸ್ಯನ ನಿಧನದಿಂದ ಚುನಾವಣೆ:** ವಿಜಯಪುರ ಮಹಾನಗರ ಪಾಲಿಕೆಯ 29 ನೇ ವಾರ್ಡಿಗೆ ಸದಸ್ಯರಾಗಿದ್ದ ಬಿಜೆಪಿಯ ವಿಜಯಕುಮಾರ ಬಿರಾದಾರ ಅವರ ಅಕಾಲಿಕ ಮರಣದಿಂದ ತೆರವಾಗಿದ್ದ ಸ್ಥಾನಕ್ಕೆ ನ.23 ರಂದು ಉಪಚುನಾವಣೆ ಜರುಗಿತ್ತು. ಬಿಜೆಪಿಯಿಂದ ಹಿಂದಿನ ಸದಸ್ಯರಾಗಿದ್ದ ದಿ.ವಿಜಯಕುಮಾರ ಪಾಟೀಲ (ಬಿರಾದಾರ) ಅವರ ಪುತ್ರ ಗಿರೀಶ ಪಾಟೀಲ ಕಣಕ್ಕಿಳಿದರೆ, ಕಾಂಗ್ರೆಸ್‌ನಿಂದ ಹಿಂದೆ ಬಿಜೆಪಿಯಲ್ಲಿ ಗುರುತಿಸಿಕೊಂಡು ಉಪಚುನಾವಣೆ ವೇಳೆ ಕಾಂಗ್ರೆಸ್ ಸೇರ್ಪಡೆಯಾಗಿದ್ದ ಬಾಬು ಏಳಗಂಟಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದರು.

ಪಾಲಿಕೆಯ ಈ ಉಪಚುನಾವಣೆಯಲ್ಲಿ ಕಾಂಗ್ರೆಸ್ ಹಾಗೂ ಬಿಜೆಪಿ ಇಬ್ಬರೂ ಅಭ್ಯರ್ಥಿಗಳ ನಡುವೆ ನೇರಾನೇರ ಸ್ಪರ್ಧೆ ಏರ್ಪಟ್ಟಿತ್ತು. ತುರುಸಿನ ಪೈಪೋಟಿಯಲ್ಲಿ ಬಿಜೆಪಿ ಅಭ್ಯರ್ಥಿ ಗಿರೀಶ ವಿಜಯಕುಮಾರ ಬಿರಾದಾರ (ಪಾಟೀಲ) 2754 ಮತಗಳನ್ನು ಪಡೆದು ವಿಜಯ ಸಾಧಿಸಿದ್ದಾರೆ, ಎದುರಾಳಿ ಕಾಂಗ್ರೆಸ್ ಅಭ್ಯರ್ಥಿ ಭಾಗಪ್ಪ (ಬಾಬು) ಏಳಗಂಟಿ ಅವರು 1762 ಮತಗಳನ್ನು ಪಡೆದು ಪರಾಭವಗೊಂಡರು. ನ. 23 ರಂದು ವಿಜಯಪುರ ಮಹಾನಗರ ಪಾಲಿಕೆ ವಾರ್ಡ್ ನಂ.29 ಕ್ಕೆ ನಡೆದ ಉಪಚುನಾವಣೆಯಲ್ಲಿ ಒಟ್ಟು 9861 ಮತದಾರರ ಪೈಕಿ 4554 ಮತ ಚಲಾವಣೆಯಾಗುವ ಮೂಲಕ ಒಟ್ಟಾರೆ ಶೇ 46.18 ಮತದಾನವಾಗಿತ್ತು. ಈ ಪೈಕಿ ಅಂತಿಮ ಕಣದಲ್ಲಿ ಇಬ್ಬರೇ ಅಭ್ಯರ್ಥಿಗಳು ಉಳಿದು ವಿಜೇತ ಬಿಜೆಪಿ ಅಭ್ಯರ್ಥಿ ಗಿರೀಶ ಪಾಟೀಲ 2754 ಮತಗಳನ್ನು ಪಡೆದರೆ ಪರಾಜಿತ ಕಾಂಗ್ರೆಸ್ ಅಭ್ಯರ್ಥಿ ಭಾಗಪ್ಪ (ಬಾಬು) ಏಳಗಂಟಿ 1762 ಮತಗಳನ್ನು ಪಡೆದರು. 38 ನೋಟಾ ಮತಗಳಾಗಿದ್ದವು.




**ಸ್ವತಃ ಶಾಸಕ ಯತ್ನಾಳ ನಡೆದಿದ್ದ ಪ್ರಚಾರ:** ವಿಜಯಪುರ ಮಹಾನಗರ ಪಾಲಿಕೆಯಲ್ಲಿ ಹಾಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಈ ಉಪ ಚುನಾವಣೆಯನ್ನು ಪ್ರತಿಷ್ಠೆಯಾಗಿ ಸ್ವೀಕರಿಸಿ, ಪ್ರಚಾರ ನಡೆಸಿತ್ತು. ಸಚಿವ ಎಂ.ಬಿ.ಪಾಟೀಲರು ಹೆಚ್ಚಿನ ಮುತುವರ್ಜಿ ವಹಿಸಿ, ಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವಿಗೆ ತಂತ್ರ ರೂಪಿಸಿದ್ದರು. ಇತ್ತ ಬಿಜೆಪಿ ಅಭ್ಯರ್ಥಿಯ ಪರವಾಗಿ ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರೇ ಎರಡು ದಿನಗಳ ಕಾಲ ಪ್ರಚಾರ ನಡೆಸಿದ್ದರು. ವಾರ್ಡ್ ಅನ್ನು ವಶಕ್ಕೆ ಪಡೆದು ಪಾಲಿಕೆಯಲ್ಲಿ ತಮ್ಮ ಸಂಖ್ಯಾಬಲವನ್ನು ಹೆಚ್ಚಿಸಿಕೊಳ್ಳಲು ಉಭಯ ಪಕ್ಷಗಳು ಸಮಬಲದ ಹೋರಾಟ ನಡೆಸಿದ್ದವು.

**ಮೇಯರ್ ಚುನಾವಣೆ–** ವಿಜಯಪುರ ಮಹಾನಗರ ಪಾಲಿಕೆ 35 ಸ್ಥಾನಗಳ ಪೈಕಿ ಸದ್ಯ ಬಿಜೆಪಿ 17, ಕಾಂಗ್ರೆಸ್ 10, ಜೆಡಿಎಸ್ 1, ಎಐಎಂಐಎಂ 2 ಹಾಗೂ ಪಕ್ಷೇತರ 5 ಸದಸ್ಯರಿದ್ದಾರೆ. ಸದ್ಯ ಕಾಂಗ್ರೆಸ್ ಅಧಿಕಾರದ ಗದ್ದುಗೆಯಲ್ಲಿದೆ. ಜನವರಿಯಲ್ಲಿ ಹಾಲಿ ಮೇಯರ್, ಉಪ ಮೇಯರ್ ಅವಧಿ ಮುಗಿಯಲ್ಲಿದ್ದು, ಮುಂದಿನ ಅವಧಿಗೆ ಪಾಲಿಕೆ ಗದ್ದುಗೆ ಹಿಡಿಯಲು ಬಿಜೆಪಿ, ಕಾಂಗ್ರೆಸ್ ನಡುವೆ ಈಗಾಗಲೇ ತೆರೆಮರೆಯಲ್ಲಿ ಪ್ರಯತ್ನ ಆರಂಭವಾಗಿದೆ.

### ಭತ್ತ ಖರೀದಿ ಕೇಂದ್ರ ಪ್ರಾರಂಭಿಸಲು ಒತ್ತಾಯ

# ಕೃಷಿ ಇಲಾಖೆ ಕಚೇರಿಯ ಎದುರು ಅಹೋರಾತ್ರಿ ಧರಣಿ ಸತ್ಯಾಗ್ರಹ–ಎಂ.ಎಸ್.ಸೋಮಲಿಂಗಪ್ಪ

**ಬಳ್ಳಾರಿ, ನ.27–** ಸಿರುಗುಪ್ಪ ನಗರದಲ್ಲಿ ಕೃಷಿ ಇಲಾಖೆ ಕಚೇರಿಯ ಎದುರುಗಡೆ ಭತ್ತ ಖರೀದಿ ಕೇಂದ್ರ ಪ್ರಾರಂಭ ಮಾಡದೆ ಇರುವುದರಿಂದ ಹಾಗೂ ಮರಳು ಮತ್ತು ಮೂರಂ (ಗ್ರಾವಲ್) ಸರಳಿಕರಣಕ್ಕೆ ಒತ್ತಾಯಿಸಿ ಮಾಜಿ ಶಾಸಕರಾದ ಸೋಮಲಿಂಗಪ್ಪ ಅವರ ನೇತೃತ್ವದಲ್ಲಿ ಆಹೋರಾತ್ರಿ ಧರಣಿ ಸತ್ಯಾಗ್ರಹದಲ್ಲಿ ಭಾಗವಹಿಸಲಾಗಿತ್ತು.



ಮಂಡಲ ಅಧ್ಯಕ್ಷರಾದ ಮಲ್ಲಿಕಾರ್ಜುನ ಸ್ವಾಮಿ, ಯುವ ಮೋರ್ಚಾ ಜಿಲ್ಲಾಧ್ಯಕ್ಷರಾದ ಎಂ ಎಸ್ ಸಿದ್ದಪ್ಪ, ಮುಖಂಡರಾದ ದರಪ್ಪ ನಾಯಕ, ರೈತ ಮೋರ್ಚಾ ಅಧ್ಯಕ್ಷರಾದ ಶಿವರಾಮಗೌಡ, ಎಸ್ಟಿ ಮೋರ್ಚಾ ತಾಲೂಕು ಅಧ್ಯಕ್ಷರಾದ ಶಿವಪ್ಪ, ಮಾಜಿ ತಾಲೂಕ ಪಂಚಾ ಯತ್ ಸದಸ್ಯರಾದ ಶರಣಬಸವ, ಸಾಹುಕಾರ ಇಬ್ರಾಂಪುರ್ ಗಂಗಪ್ಪ, ಮೆಕಲ್ ವೀರೇಶ, ಪಟ್ಟಣ ಪಂಚಾಯತಿ ಸದಸ್ಯರಾದ ಕೋಮಾರಪ್ಪ ಮತ್ತು ಫಕ್ಕೆರಯ್ಯ, ಶ್ರೀಧರ, ನಾಗರಾಜ, ಗಂಗಪ್ಪ, ಗಣೇಶ, ಮಾಕಪ್ಪ, ಕೃಷ್ಣ ಉಪಸ್ಥಿತರಿದ್ದರು.

# ಮಹಿಳೆಯರ ವಿರುದ್ಧ ಅಪರಾಧ ತಡೆಗೆ ಜಾಗೃತಿ ಅಗತ್ಯ: ಜಿಲ್ಲಾಧಿಕಾರಿ ಶಿಲ್ಪಾ ಶರ್ಮ

**ಬೀದರ್, ನ.27–** ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ಮತ್ತು ಶೋಷಣೆಗಳು ಹಾಗೂ ಅಂಗಾಂಗಳ ಮಾರಾಟ ಇಂತಹ ಕೆಲಸಗಳು ನಡೆಯುತ್ತಿವೆ. ಜಿಲ್ಲಾ, ತಾಲೂಕು ಮತ್ತು ಗ್ರಾಮ ಮಟ್ಟಗಳಲ್ಲಿರುವ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆ ಸಮಿತಿ ಸಭೆಗಳನ್ನು ಪ್ರತಿ ತಿಂಗಳು ಹಮ್ಮಿ ಕೊಂಡು ಇದರ ಬಗ್ಗೆ ಪರಾಮರ್ಶಿ ಸಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಈ ಕುರಿತು ಜನ ಜಾಗೃತಿ ಮೂಡಿಸಬೇಕು ಇದರಲ್ಲಿ ಎಲ್ಲರ ಪಾತ್ರ ಹಿರಿದಾಗಿರುತ್ತದೆಂದು ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದರು.

ಎಲ್ಲ ಕ್ಷೇತ್ರಗಳಲ್ಲಿ ಸಾಧನೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬೀದರ, ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಒಡನಾಡಿ ಸೇವಾ ಸಂಸ್ಥೆ ಮೈಸೂರು, ಸಮೃದ್ಧಿ ಚಾರಿಟಬಲ್ ಟ್ರಸ್ಟ್, ಜಿಲ್ಲಾ ಸ್ವಯಂ ಸೇವಾ ಸಂಸ್ಥೆಗಳ ಒಕ್ಕೂಟ ಬೀದರ್ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಆಶ್ರಯದಲ್ಲಿ ಮಂಗಳವಾರ ಇಲ್ಲಿ ಹಮ್ಮಿಕೊಳ್ಳಲಾದ "ಮಾನವ ಕಳ್ಳ ಸಾಗಾಣಿಕೆ ತಡೆ" ಕುರಿತು



ಸಹಭಾಗೀ ದಾರ ಇಲಾಖೆ ಹಾಗೂ ಸ್ವಯಂ ಸೇವಾ ಸಂಸ್ಥೆಯ ಮುಖ್ಯಸ್ಥರುಗಳಿಗೆ ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಬೀದರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ ಎ. ಬನಸೋಡೆ ಮಾತನಾಡಿ, ಸಂವಿಧಾನದಲ್ಲಿ ಎಲ್ಲರಿಗೂ ಬದುಕುವ ಹಕ್ಕನ್ನು ಕೊಟ್ಟಿರುತ್ತದೆ. ಆದರೆ ಮಹಿಳೆಯರ ಮತ್ತು ಮಕ್ಕಳ ಬದುಕುವ ಹಕ್ಕನ್ನು ನಾವು ಕಸಿದುಕೊಂಡಿದ್ದೇವೆ. ಆದ್ದರಿಂದ ಮಹಿಳೆಯರು ಉನ್ನತ ಶಿಕ್ಷಣ ಪಡೆದುಕೊಂಡು ಎಲ್ಲಾ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿದ್ದಾರೆ. ಮಾನವ ಕಳ್ಳ ಸಾಗಾಣಿಕೆಗೆ ತುತ್ತಾಗುತ್ತಿರುವವರು ಮಹಿಳೆಯರು ಮತ್ತು ಮಕ್ಕಳೇ ಜಾಸ್ತಿಯಾಗಿದ್ದಾರೆ. ಹಾಗಾಗಿ ಮಹಿಳೆಯರಿಗೆ ಮತ್ತು ಮಕ್ಕಳಿಗೆ ನಾವು ಶಿಕ್ಷಣವಂತರನ್ನಾಗಿ ಮಾಡಬೇಕು ಹಾಗೂ ಅವರಿಗೆ ಕಾನೂನಿನ ಬಗ್ಗೆ ಅರಿವನ್ನು ನೀಡಬೇಕು ಅಂದಾಗ ಮಾತ್ರ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆಯನ್ನು ತಡೆಗಟ್ಟಲು ಸಾಧ್ಯ ಎಂದು ಹೇಳಿದರು.

ಮೈಸೂರು ಒಡನಾಡಿ ಸೇವಾ ಸಂಸ್ಥೆಯ ಕಾರ್ಯದರ್ಶಿ ಕೆ.ವಿ.ಸ್ಟ್ಯಾನಿ ಕೆ.ವಿ ಮಾತನಾಡಿ, ಮಾನವ ಕಳ್ಳ ಸಾಗಾಣಿಕೆ ಒಂದು ಅನಿಷ್ಠ ಪದ್ಧತಿಯಾಗಿದೆ. ನಮ್ಮ ದೇಶವು ಮುಂದುವರೆದ ರಾಷ್ಟ್ರವಾದರೂ ಕೂಡ ಇನ್ನೂ ಮಾನವ ಕಳ್ಳ ಸಾಗಾಣಿಕೆ ಕುರಿತು ಮಾತನಾಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಬೀದರ್ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಎಮ್.ಎಸ್. ಶ್ರೀಧರ್ ಮಾತನಾಡಿದರು. ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ ಎಂ.ಎಲ್. ಪರಶುರಾಮ ಮಾನವ ಕಳ್ಳ ಸಾಗಾಣಿಕೆ ಕುರಿತು ಸವಿಸ್ತಾರವಾದ ಮಾಹಿತಿ ನೀಡಿದರು.

# ಸಂವಿಧಾನದಿಂದ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯ: ಬಿ.ಆರ್.ಪಾಟೀಲ್

**ಕಲಬುರಗಿ, ನ.27–** ಸಂವಿಧಾನದಿಂದ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯವನ್ನು ಪಡೆದುಕೊಳ್ಳುವುದಾಗಿದೆ . 70 ವರ್ಷಗಳಾದರೆ ನಾವು ಸಂವಿಧಾನ ಬದಲಾಯಿಸಲು ಸಾಧ್ಯವಾಗಿಲ್ಲ. ಬೈಬಲ್, ಕುರಾನ ಮತ್ತು ಭಗವತ್ ಗೀತಾ ಇವುಗಳ ಮುಂದೆ ನಮಗೆ ಇರುವುದು ಒಂದೇ ಭಾರತದ ಸಂವಿಧಾನವೇ ನಮ್ಮ ಧರ್ಮಗ್ರಂಥ ಎಂದು ಮುಖ್ಯ ಮಂತ್ರಿಗಳ ವಿಶೇಷ ಸಲಹೆಗಾರರು ಹಾಗೂ ಶಾಸಕ ಬಿ. ಆರ್.ಪಾಟೀಲ್ ಹೇಳಿದರು.

ನಗರದಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ ಸಮಾಜ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಎಲ್ಲಾ ಇಲಾಖೆಗಳ ಸಹಯೋಗದಲ್ಲಿ ಸಂವಿಧಾನ ದಿನಾಚರಣೆಯನ್ನು ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ ರವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಮಾತನಾಡಿದರು. ಅವರು 1949 ನವೆಂಬರ್ 26 ರಂದು ನಮಷ್ಟಕ್ಕೆ ನಾವೇ ಸಮರ್ಪಣೆ ಮಾಡಿಕೊಂಡಿದ್ದೇವೆ. ಇದು ಐತಿಹಾಸಿಕ ದಿನವನ್ನಾಗಿ ಸಂಭ್ರಮದಂತೆ ಆಚರಣೆ ಮಾಡುತ್ತೇವೆ. ಎಂದರು.

76ನೇ ತಿದ್ದುಪಡಿಯನ್ನು ನ್ಯಾಯಾಂಗ ನಮ್ಮ ಸಂವಿಧಾನದ ರಕ್ಷಣೆ ಮಾಡುತ್ತಿದೆ. ನ್ಯಾಯಾಂಗ ಒಂದೇ ಈಗ ಎಲ್ಲರೂ ಅದರ ಮೇಲೆ ನಂಬಿಕೆ ಇಟ್ಟುಕೊಂಡಿದ್ದಾರೆ. ಮೊದಲು ಜಡ್ಜಗಳ ಬಗ್ಗೆ ಯಾರೂ ಮಾತನಾಡುತಿರಲಿಲ್ಲ. ಆದರೆ ಜನರು ಅವರ ಬಗ್ಗೆ ಮಾತನಾಡುತ್ತಿದ್ದಾರೆ ಎಂದರು.

ಆಡಳಿತಕ್ಕೆ ಸಂವಿಧಾನ ಬೇಕಾಗಿತ್ತು. ಅದರ ನೇತೃತ್ವವನ್ನು ಬಾಬಾ ಸಾಹೇಬ್ ಅವರಿಗೆ ಒಪ್ಪಿಸಿದ್ದಾಗ ಅವರು ಎಲ್ಲ ದೇಶ ಸುತ್ತಾಡಿ ನಂತರ ಎಲ್ಲ ದೇಶದ ಸಂವಿಧಾನವನ್ನು ಓದಿ ಅರ್ಥಮಾಡಿಕೊಂಡು ನಂತರ ನಮ್ಮ ಸಂವಿಧಾನವನ್ನು ರಚಿಸಿದ್ದಾರೆ ಎಂದು ನಾನು ಅರ್ಥಮಾಡಿಕೊಂಡಿದ್ದು, ಬಲಿಷ್ಠವಾದ ಸಂವಿಧಾನ ಯಾರಿಂದ ಕೂಡಾ ಅಲ್ಲಗೆಳೆಯಲು ಅಥವಾ ಬದಲಾಯಿಸಲು ಸಾಧ್ಯವಿಲ್ಲದ ಮಾತು ಎಂದು ಅವರು ಹೆಮ್ಮೆಯಿಂದ ಹೇಳುತ್ತೇನೆ ಎಂದರು.

ಶಾಸಕರಾದ ಎಂ.ವೈ ಪಾಟೀಲ್ ಮಾತನಾಡಿ, ಅಂಬೇಡ್ಕರ್ ಅವರು ಯಾವುದೇ ಜಾತಿ, ಧರ್ಮ ಮತ್ತು ಲಿಂಗದ ಆಧಾರದ ಮೇಲೆ ಸಂವಿಧಾನವನ್ನು ರಚನೆ ಮಾಡಿಲ್ಲ ಎಂದರು. ಮಹಾನಗರ ಪಾಲಿಕೆಯ ಮಹಾಪೌರರಾದ ಯಲ್ಲಪ್ಪ ನಾಯ್ಕೋಡಿ, ಮಕ್ಕಳಿಗೆ ಸಂವಿಧಾನ ಪ್ರತಿದಿನ ಬೋಧಿಸಬೇಕು ಎಂದು ಮನವಿ ಮಾಡಿಕೊಂಡರು.

ಶಾಸಕಾಂಗ, ಕಾರ್ಯಾಂಗ ಮತ್ತು ನ್ಯಾಯಾಂಗ ಹಾಗೂ ಪತ್ರಿಕಾಂಗಗಳು ನಮ್ಮ ಸಂವಿಧಾನದ ಮೂಲಕ ನಡೆಯುತ್ತಿದೆ. ಸಂವಿಧಾನವನ್ನು ನಾವು ಭದ್ರವಾಗಿ ಕಾಪಾಡಿಕೊಂಡು ಹೋಗಬೇಕು ಎಂದರು. ವಿಧಾನ ಪರಿಷತ್ ಸದಸ್ಯರಾದ ತಿಪ್ಪಣ ಕಮಕನೂರ ಅವರು ಮಾತನಾಡಿ, ಭಾರತದೇಶ ಎಂದರೆ ಸಂವಿಧಾನ ಎಂದರೆ ಭಾರತದೇಶ ಹೇಳಿ ಎಂದರು.

ಡೀನರು ಕಲಾ ವಿಭಾಗ ಹಾಗೂ ಪ್ರಾಧ್ಯಾಪಕರ ಡಾ. ವಿಜಯಕುಮಾರ ಹೆಚ್.ಸಾಲಿಮನಿ ಅವರು ವಿಶೇಷ ಉಪನ್ಯಾಸ ನೀಡಿ ಮಾತನಾಡಿ, ಬಾಬಾ ಸಾಹೇಬ್ ಅವರು ಸಂವಿಧಾನದಲ್ಲಿ ಬರೆದಿರುವ ಒಂದೊಂದು ಅಕ್ಷರಗಳಲ್ಲಿ ಅವರ ಆತ್ಮವನ್ನು ಅಡಗಿದೆ ಹಾಗೂ ಅವರು ಬರೆದಿರುವ ಸಂವಿಧಾನ ಮಾತ್ರ ಒಂದು ಸಂವಿಧಾನವಲ್ಲ ಅವರು ಅನುಭವಿಸಿದ ಕಷ್ಟಗಳು, ನೋವುಗಳಿಗೆ ಪ್ರೇರಕವಾಗಿದೆ. ಎಂದು ಅವರು ಹೇಳಿದರು.




ಕಲಬುರಗಿ ನಗರದಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ ಸಮಾಜ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಎಲ್ಲಾ ಇಲಾಖೆಗಳ ಸಹಯೋಗದಲ್ಲಿ ಸಂವಿಧಾನ ದಿನಾಚರಣೆಯನ್ನು ಶಾಸಕ ಬಿ.ಆರ್.ಪಾಟೀಲ್ ಉದ್ಘಾಟಿಸಿದರು.

# ನಮ್ಮ ಜಮೀನು ಜಮೀರ್ ಅಪ್ಪನ ಮನೆಯ ಆಸ್ತಿಯಲ್ಲ; ಯತ್ನಾಳ್ ಗುಡುಗು




**ಯಾದಗಿರಿ, ನ.27–** ಗುಡಿ ಗುಮಡಾರ, ಮಠ ಮತ್ತು ರೈತರ ಭೂಮಿಗಳ ಪಹಣಿಯಲ್ಲಿ ವಕ್ಫ್ ಆಸ್ತಿ ಎಂದು ದಾಖಲಿಸಲು ಜಮೀರ ಅಹ್ಮದ್ ಅಪ್ಪನ ಆಸ್ತಿಲ್ಲ. ನಮ್ಮ ಪೂರ್ವಜರಿಂದ ಉಳಿಸಿಕೊಂಡು ಉಳುಮೆ ಮಾಡುತ್ತ ಬಂದಿರುವ ಆಸ್ತಿಯ ಮೇಲೆ ಹಕ್ಕು ಸಾದಿಸಲು ಇವರಪ್ಪನದೇ? ಹೀಗಾಗಲ ಎಂದೂ ಬಿಡುವದಿಲ್ಲ. ಅವರಪ್ಪ(ಜಮೀರ್) ಬಂದರೂ ಏನೂ ಮಾಡಲಾಗುವದಿಲ್ಲ. ವಕ್ಫ್‌ಗೆ ನಾವು ರೈತರೇ ಕಡಿವಾಣ ಹಾಕುತ್ತೇವೆ. ದಾಖಲೆಗಳಲ್ಲಿ ವಕ್ಫ್ ಎಂದು ದಾಖಲಿಸಿದರೆ ಹೊಡೆದೋಡಿಸ ಬೇಕಾಗುತ್ತದೆ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಎಚ್ಚರಿಕೆ ನೀಡಿದರು.

ರಾಜ್ಯದಲ್ಲಿ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮತ್ತು ಟೀಂ ಕರೆಕೊಟ್ಟಿರುವ ವಕ್ಫ್ ಹಠಾವೋ, ಭಾರತ್ ಬಚಾವೋ ಜಾಗೃತಿ ಕಾರ್ಯಕ್ರಮ ಮೂರನೇ ದಿನಕ್ಕೆ ಕಾಲಿಟ್ಟಿದೆ. ಯಾದಗಿರಿ ಜಿಲ್ಲೆಗೆ ಯತ್ನಾಳ್, ರಮೇಶ್ ಜಾರಕಿಹೊಳಿ, ಮಾಜಿ ಸಚಿವರಾದ ಅರವಿಂದ ಲಿಂಬಾವಳಿ, ಮಾಜಿ ಸಚಿವ ಕುಮಾರ್ ಬಂಗಾರಪ್ಪ, ಮಾಜಿ ಸಂಸದ ಬಿ.ವಿ ನಾಯಕ್ ಆಗಮಿಸಿದ್ದಾರೆ. ಶಹಪುರ ತಾಲ್ಲೂಕಿನ ಕೊಂಗಂಡಿ ಗ್ರಾಮ ಸರ್ವೆ ನಂಬರ್ 50ರ ಜಮೀನು ವಕ್ಫ್ ಆಸ್ತಿ ಎಂದು ಘೋಷಣೆಮಾಡಿದ್ದು, ರೈತರನ್ನು ಭೇಟಿ ಮಾಡಿ, ಸಮಸ್ಯೆ ಆಲಿಸಿದ ನಂತರ ಸುದ್ದಿಗಾರರೊಂದಿಗೆ, ಜಮೀನಿಗೆ ತೆರಳಿದ ಯತ್ನಾಳ್ ಮತ್ತು ತಂಡ ಪರಿಶೀಲನೆ ನಡೆಸಿ, ಕೊಂಗಂಡಿ ಗ್ರಾಮದ ರೈತರು ವಕ್ಫ್ ಜಮೀನಿನ ಸಾದಕ ಬಾಧಕಗಳ ಬಗ್ಗೆ ಮಾಹಿತಿ ನೀಡಿದರು. ಈ ವೇಳೆ ರೈತ ಮುಖಂಡರು ಒಂದು ನಿರ್ಧಿಷ್ಟ ದಿನಾಂಕ ನೀಡಿದರೆ ಬೃಹತ್ ಹೋರಾಟ ಮಾಡೋಣ ಎಂದು ಮನವಿ ಮಾಡಿದ್ರು.

ಇದು ವಕ್ಫ್ ಆಸ್ತಿ ಅಂತ ಹೇಳಲು ಅವರಲ್ಲಿ ಯಾವುದೇ ಆಧಾರ ಇಲ್ಲ. ನಿಜಾಮರು ಯಾವುದಾದ್ರೂ ಬರೆದುಕೊಟ್ಟ ತಾಮ್ರದ ತಗಡು ಇದೆಯಾ ಯಾವುದೇ ರೈತ ತಮ್ಮ ಜಮೀನು, ದೇವಸ್ಥಾನ ಉಳಿಸಿಕೊಳ್ಳಲು ಹೈಕೋರ್ಟ್‌ಗೆ ಹೋಗಬೇಕು, ವಕ್ಫ್‌ಗೆ ಅಲ್ಲ ಅನ್ನೋದು ನಮ್ಮ ಬೇಡಿಕೆ. ವಿಜಾಪುರದಲ್ಲಿ 16 ಸಾವಿರ ಎಕರೆ ಉಳಿಸಲು ಹೋರಾಟ ಮಾಡ್ತಿದ್ದೇನೆ. ಎಲ್ಲೆಡೆ ಡಿಸಿ ಕಚೇರಿಯಲ್ಲಿ ಮುಂದೆ ಏನು ಮಾಡಬೇಕು ಅಂತ ಪ್ಲಾನ್ ಮಾಡಿದ್ದಾರೆ. ಜಮೀರ್ ಅವರು ಬೋರ್ಡ್ ಮಾಡಿದ್ದಾರೆ. ವಕ್ಪ್ ಆಸ್ತಿ ಬಿಡೋದಿಲ್ಲ ಅಂತಿದ್ದಾರೆ. ಇದು ಅವರಪ್ಪನ ಮನೆಯ ಆಸ್ತಿ ಅಲ್ಲ ಎಂದು ಗುಡುಗಿದ್ರು. ಎಲ್ಲವೂ ಸರ್ಕಾರದ ಆಸ್ತಿ, ಕರ್ನಾಟಕದ ತಂಡವಾಗಿ ಜಮೀನು ಉಳಿಸಲು ಹೋರಾಟ ಮಾಡ್ತಿದ್ದೇವೆ. ಕಾಂಗ್ರೆಸ್‌ನವರಿಗೆ, ಮಮತಾ ಬ್ಯಾನರ್ಜಿಯವರಿಗೆ ವಕ್ಫ್ ಕಾನೂನು ಕರಾಳ ಇದೆ ಅಂತ ತಿಳಿಸಲು ಪ್ರವಾಸ ಮಾಡ್ತಿದ್ದೇವೆ. ಯಡಿಯೂರಪ್ಪ, ಬೊಮ್ಮಾಯಿ, ಶೆಟ್ಟರ್, ಸದಾನಂದ ಗೌಡ ಯಾವುದೇ ಸರ್ಕಾರ ಇರಲಿ ನಾವು ಸಮರ್ಥನೆ ಮಾಡಲು ಬಂದಿಲ್ಲ. ವಕ್ಫ್ ಬಗ್ಗೆ ಸಮಸ್ಯೆ ಆಲಿಸಲು ಬಂದಿದ್ದೇವೆ. ಪ್ರಧಾನಿ ಮೋದಿ ಅವರು ಹೇಳಿದ್ದಾರೆ ದೇಶ ಅಂಬೇಡ್ಕರ್ ಅವರ ಸಂವಿಧಾನದ ಮೇಲೆ ನಡೆಯುತ್ತಿದೆ. ಅದರ ಮೇಲೆಯೇ ಎಲ್ಲಾ ನಿರ್ಧಾರ ಆಗಲಿದೆ ಅಂತ ಹೇಳಿದ್ದಾರೆ ಎಂದರು.

ಇದೇ ವೇಳೆ ಮಾತನಾಡಿದ ಮಾಜಿ ಸಚಿವ ಅರವಿಂದ ಲಿಂಬಾವಳಿ, ವಕ್ಫ್ ಬಾದಿತ ಪ್ರದೇಶಕ್ಕೆ ಭೇಟಿ ನೀಡುತ್ತಿದ್ದೇವೆ. ಈಗ ಶಹಪುರ ಕೊಂಗಂಡಿ ಗ್ರಾಮದಲ್ಲಿದ್ದೇವೆ. ನಾವಿರೋ ಜಾಗ ರೈತರ ಜಾಗ. ಈ ಜಾಗವನ್ನ ಸರ್ಕಾರ ವಶಪಡಿಸಿಕೊಂಡು ಪರಿಹಾರ ನೀಡುವ ಸಂದರ್ಭದಲ್ಲಿ ವಕ್ಫ್ ಬೋರ್ಡ್ ಮಧ್ಯ ಬಂದಿದೆ. ಇದರಿಂದ ರೈತರಿಗೆ ಸಮಸ್ಯೆ ಆಗಿದ್ದು, ಬೀದರ್, ಕಲ್ಬುರ್ಗಿ, ಯಾದಗಿರಿ ಎಲ್ಲೆಡೆ ನಾವು ಸುತ್ತಿ ಬಂದಿದ್ದೇವೆ. ಎಲ್ಲೆಡೆ ಇದೇ ರೀತಿ ಸಮಸ್ಯೆ ಇದೆ. ಜಗದಾಂಬಿಕಾ ಪಾಲ್ ಅವರ ಜಂಟಿ ಸಂಸದೀಯ ಸಮಿತಿ ಬಂದು ವಿಜಯಪುರಕ್ಕೆ ಭೇಟಿ ನೀಡಿ ಸಮಸ್ಯೆ ಆಲಿಸಿದೆ. ವಕ್ಫ್‌ಬೋರ್ಡ್ ಎಲ್ಲಾ ಆಸ್ತಿ ಕಬಳಿಸುತ್ತಿದೆ. ಜಮೀನು ವಶಪಡಿಸಿಕೊಳ್ಳಲು ಬಿಜೆಪಿ ಬಿಡೋದಿಲ್ಲ ಎಂದರು.

ನ.30ರಂದು ಬಾಗಲಕೋಟೆ ತೇರದಾಳದಲ್ಲಿ, ಡಿಸೆಂಬರ್ 1ರಂದು ಬೆಳಗಾವಿಯಲ್ಲಿ ವಕ್ಫ್ ಬಾದಿತರ ಸಮಾವೇಶ ಮಾಡಲಿದ್ದೇವೆ. ಸಿಎಂ ಸಿದ್ದರಾಮಯ್ಯ, ಸಚಿವ ಜಮೀರ್ ಅಹ್ಮದ್ ಖಾನ್ ಸಮಸ್ಯೆ ಮಾಡುತ್ತಿದ್ದಾರೆ. ನಮ್ಮ ತಂಡ ದೆಹಲಿಗೆ ತೆರಳಿ ಜೆಪಿಸಿ ಅಧ್ಯಕ್ಷ ಜಗದಾಂಬಿಕಾ ಪಾಲ್ ಅವರಿಗೆ ಮನವಿ ನೀಡಲಿದ್ದೇವೆ. ರೈತರ ಜಮೀನು, ದೇವಸ್ಥಾನ, ಮಠ ಉಳಿಸಲು ಕೇಂದ್ರದ ಮೋದಿ ಸರ್ಕಾರ ಕಾನೂನು ತರ್ತಿದೆ. ಅದನ್ನ ನಾವೆಲ್ಲಾ ಬೆಂಬಲಿಸಬೇಕಿದೆ ಎಂದರು.



ಬೆಂಗಳೂರಿನ ಟೌನ್ ಹಾಲ್‌ನಲ್ಲಿ ಬುಧವಾರ ನಡೆದ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಯುವ ಕಲಾವಿದರು ಆಗಮಿಸಿದರು.

# ಹೆಸ್ಕಾಂ ಅಧ್ಯಕ್ಷರಾಗಿ ಅಜ್ಜಂಪೀರ್ ಖಾದ್ರಿ ನೇಮಕ: ಸರ್ಕಾರದ ಆದೇಶ



**ಧಾರವಾಡ, ನ.27–** ಶಿಗ್ಗಾಂವಿ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಯಾಸಿರ್ ಅಹ್ಮದ್ ಖಾನ್ ಪಠಾಣ್ ಗೆಲುವು ಸಾಧಿಸಿದ ಬೆನ್ನಲ್ಲೆ, ಮಾಜಿ ಶಾಸಕ ಅಜ್ಜಂಪೀರ್ ಖಾದ್ರಿ ಅವರನ್ನು ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪೆನಿ(ಹೆಸ್ಕಾಂ) ನಿಯಮಿತದ ಅಧ್ಯಕ್ಷರನ್ನಾಗಿ ನೇಮಕ ಮಾಡಿ ರಾಜ್ಯ ಸರಕಾರ ಆದೇಶ ಹೊರಡಿಸಿದೆ.

ರಾಜ್ಯದ ಮೂರು ಕ್ಷೇತ್ರಗಳಿಗೆ ಉಪ ಚುನಾವಣೆ ಘೋಷಣೆಯಾದ ಸಂದರ್ಭದಲ್ಲಿ ಅಜ್ಜಂಪೀರ್ ಖಾದ್ರಿ, ಶಿಗ್ಗಾವಿ ಕ್ಷೇತ್ರದ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿಯಾಗಿದ್ದರು. ಆದರೆ, ಕಾಂಗ್ರೆಸ್ ಹೈಕಮಾಂಡ್ ಯಾಸೀರ್ ಅಹ್ಮದ್ ಖಾನ್ ಅವರಿಗೆ ಟಿಕೆಟ್ ನೀಡಿತ್ತು. ಇದರಿಂದ ಬೇಸರಗೊಂಡ ಅಜ್ಜಂಪೀರ್ ಖಾದ್ರಿ, ಬಂಡಾಯ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಕೆ ಮಾಡಿದ್ದರು. ಈ ಬೆಳವಣಿಗೆ ಬಳಿಕ ತಕ್ಷಣ ಅಜ್ಜಂಪೀರ್ ಖಾದ್ರಿಯನ್ನು ಬೆಂಗಳೂರಿಗೆ ಕರೆ ತಂದ ಜ಼ಮೀರ್ ಅಹ್ಮದ್ ಖಾನ್, ಸಿದ್ದರಾಮಯ್ಯ ಹಾಗೂ ಉಪ ಡಿ.ಕೆ.ಶಿವಕುಮಾರ್ ಭೇಟಿ ಮಾಡಿಸಿ ಬಂಡಾಯ ಶಮನಕ್ಕೆ ಯತ್ನಿಸಿದರು.

ಮುಖ್ಯಮಂತ್ರಿ ನೀಡಿದ ಭರವಸೆಯಿಂದಾಗಿ ಅಜ್ಜಂಪೀರ್ ಖಾದ್ರಿ ತಮ್ಮ ನಾಮಪತ್ರ ಹಿಂಪಡೆದು, ಯಾಸೀರ್ ಅಹ್ಮದ್ ಖಾನ್ ಪರವಾಗಿ ಶಿಗ್ಗಾವಿಯಲ್ಲಿ ಮತಯಾಚನೆ ನಡೆಸಿದ್ದರು. ಶಿಗ್ಗಾವಿಯಲ್ಲಿ ಕಾಂಗ್ರೆಸ್ ಗೆಲುವು ಸಾಧಿಸುತ್ತಿದ್ದಂತೆ ಅಜ್ಜಂಪೀರ್ ಖಾದ್ರಿಗೆ ರಾಜ್ಯ ಸರಕಾರ ಹೆಸ್ಕಾಂ ಅಧ್ಯಕ್ಷರನ್ನಾಗಿ ನೇಮಕ ಮಾಡಿದೆ.

# ಕನಿಷ್ಠ ವೇತನ ನೀಡುವಂತೆ ಡಿಸಿ ಕಚೇರಿ ಆವರಣದಲ್ಲಿ ಪ್ರತಿಭಟನೆ



**ಬಳ್ಳಾರಿ ನ27–** ಕಳೆದ ಎಂಟು ವರ್ಷಗಳಿಂದ ದುಡಿಯುತ್ತಿರುವ ನಮಗೂ ಕನಿಷ್ಠ ವೇತನ ನೀಡಿ ಎಂದು ಗ್ರಾಮ ಪಂಚಾಯ್ತಿ ಮಟ್ಟದ ಸ್ಥಳೀಯ ಸಮುದಾಯ ಸಂಪನ್ಮೂಲ ವ್ಯಕ್ತಿಗಳು ಡಿಸಿ ಕಚೇರಿ ಆವರಣದಲ್ಲಿ ಪ್ರತಿಭಟನೆ ನಡೆಸಿ ಜಿಪಂ ಸಿಇಓ ಅವರಿಗೆ ಮನವಿ ಸಲ್ಲಿಸಿದರು. ಗ್ರಾಮ ಪಂಚಾಯ್ತಿ ಮಟ್ಟದಲ್ಲಿ ರಚನೆಯಾಗಿರುವ ಸಂಜೀವಿನಿ ಮಹಿಳಾ ಒಕ್ಕೂಟದ ಕಾರ್ಯಕರ್ತರಿಗೆ ಕೇಂದ್ರ ಸರ್ಕಾರದಿಂದ ಪಶು ಸಖಿಗೆ ಎರಡೂವರೆ ಸಾವಿರ, ಕೃಷಿಸಖಿಗೆ ಮೂರು ಸಾವಿರ ರೂ ಗೌರವ ಧನ ನೀಡಲಾಗುತ್ತಿದೆ. ಇದು ಸಹ ಆರು ತಿಂಗಳಿಗೊಮ್ಮೆ ಬರುತ್ತೆ. ಗೌರವ ವೇತನ ಪಡೆಯಲು ಒಕ್ಕೂಟದ ಪದಾಧಿಕಾರಿಗಳಿಂದ ಸಹಿ ಪಡೆಯಬೇಕಾಗಿದೆ. ಅಲ್ಲದೆ ನಮಗೆ ಐಡಿ ಕಾರ್ಡು ಸಹ ನೀಡಿಲ್ಲ ಎಂದು ಆರೋಪಿಸಿದರು.

# ವೀರಶೈವ ಮಹಾ ವಿದ್ಯಾಲಯದಲ್ಲಿ ಭಾರತದ ಸಂವಿಧಾನ ದಿನಾಚರಣೆ–ದರೂರು ಶಾಂತನಗೌಡ




**ಬಳ್ಳಾರಿ, ನ.27–** ನಗರದ ಪ್ರತಿಷ್ಠಿತ ವೀರಶೈವ ಮಹಾ ವಿದ್ಯಾಲಯದಲ್ಲಿ ದಿ.26.11.2024ರಂದು ಭಾರತದ ಸಂವಿಧಾನ ದಿನಾಚರಣೆಯ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಮಹಾ ವಿದ್ಯಾಲಯದ ಆಡಳಿತ ಮಂಡಳಿಯ ಅಧ್ಯಕ್ಷರಾದ ದರೂರು ಶಾಂತನ ಗೌಡಅವರು ಕಾರ್ಯಕ್ರಮದ ಅಧ್ಯಕ್ಷ ಸ್ಥಾನವನ್ನು ವಹಿಸಿದ್ದರು. ಬಿ.ಚಂದ್ರಶೇಖರ, ಮುಖ್ಯ ಪೇದೆ, ಮಹಿಳಾ ಪೋಲೀಸ್ ಠಾಣೆ, ಬಳ್ಳಾರಿ ಇವರು ಮುಖ್ಯ ಭಾಷಣಕಾರರಾಗಿ ಆಗಮಿಸಿ "ಭಾರತದ ಸಂವಿಧಾನ ದಿನ" ವಿಷಯ ಕುರಿತು ಮಾತನಾಡಿದರು.

ಭಾರತದ ಸಂವಿಧಾನದ ಬಗ್ಗೆ ನಾವೆಲ್ಲರೂ ಹೆಮ್ಮೆಯಿಂದ ಸ್ಮರಿಸಬೇಕಾದ ದಿನವಿದು. 1949ರಲ್ಲಿ ಸಂವಿಧಾನ ಸಭೆಯು ಭಾರತದ ಸಂವಿಧಾನವನ್ನು ಅಂಗೀಕರಿಸಿದ ನೆನಪಿಗಾಗಿ ಇಂದು ಸಂವಿಧಾನ ದಿನ ಆಚರಿಸಲಾಗುತ್ತಿದೆ. ಇದನ್ನು ಸಂವಿಧಾನ ದಿನ ಎಂದು ಕರೆಯಲಾಗುತ್ತದೆ. ಸಂವಿಧಾನ ಎಂದಾಗ ಸಂವಿಧಾನವು ನಮಗೆ ನೀಡಿರುವ ಕೆಲವು ಮೂಲ ತತ್ವಗಳು, ಹಕ್ಕುಗಳ ಕುರಿತು ತಿಳಿದುಕೊಳ್ಳುವುದು ಅತ್ಯಂತ ಅಗತ್ಯವಾಗಿದೆ. ಭಾರತವು ಸ್ವತಂತ್ರ, ಸಾರ್ವಭೌಮ, ಗಣರಾಜ್ಯ, ಕಾನೂನಿಗೆ ಎಲ್ಲರೂ ಸಮಾನರು ಹಾಗೂ ಯಾವುದೇ ಲಿಂಗ, ಧರ್ಮ, ಜನಾಂಗ, ಹುಟ್ಟಿದ ಸ್ಥಳ ಇವುಗಳ ಆಧಾರದಿಂದ ಯಾರಿಗೂ ನೌಕರಿಯಲ್ಲಿ ಸಮಾನತೆಯ ಅವಕಾಶದಿಂದ ವಂಚಿತರನ್ನಾಗಿಸುವ ಅಧಿಕಾರವಿಲ್ಲ. ಶೋಷಣೆಯ ವಿರುದ್ಧದ ಹಕ್ಕು, ಧಾರ್ಮಿಕ ಸ್ವಾತಂತ್ರ್ಯದ ಹಕ್ಕು, ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಸೇರಿದಂತೆ ಹಲವು ಹಕ್ಕುಗಳನ್ನು ನಮ್ಮ ಸಂವಿಧಾನ ನೀಡಿದೆ ಅವುಗಳ ಸದುಪಯೋಗ ಪಡಿಸಿಕೊಳ್ಳಬೇಕೆಂದು ತಿಳಿಸಿದರು. ಕೆ.ಲಿಂಗಪ್ಪ, ಉಪನ್ಯಾಸಕರು, ರಾಜ್ಯಶಾಸ್ತ್ರ ವಿಭಾಗ ಇವರು ವಿದ್ಯಾರ್ಥಿಗಳಿಗೆ, ಸಂವಿಧಾನ ಪ್ರಸ್ತಾವನೆಯನ್ನು ಬೋಧಿಸಿದರು.

## ಕಲಬುರಗಿ ಪೊಲೀಸ್ ತರಬೇತಿ ಕೇಂದ್ರ

# ಪೊಲೀಸ್ ವೃತ್ತಿ ಪ್ಯಾಶನ್ ಆಗಿ ಆಯ್ದುಕೊಳ್ಳಿ, ಸೇವೆಯೇ ಮುಖ್ಯ: ಎಡಿಜಿಪಿ ಅಲೋಕ್ ಕುಮಾರ



**ಕಲಬುರಗಿ, ನ.27–** ಪೊಲೀಸ್ ಕೆಲಸ ಇತರೆ ಇಲಾಖೆಯಂತೆ ಸರ್ಕಾರಿ ನೌಕರಿ ಎಂದು ಭಾವಿಸಬೇಡಿ. ಇದು ನಾಡಿನ ಜನರ ರಕ್ಷಣೆ ಮಾಡುವ ಪುಣ್ಯದ ಕೆಲಸ. ಪೊಲೀಸ್ ವೃತ್ತಿಯನ್ನು ಪ್ಯಾಶನ್ ಆಗಿ ಆಯ್ದುಕೊಳ್ಳಿ, ಇಲ್ಲಿ ಸೇವಾ ಮನೋಭಾವನೆಯೇ ಮುಖ್ಯವಾಗಿದೆ ಎಂದು ನಿರ್ಗಮಿತ ಪ್ರಶಿಕ್ಷಣಾರ್ಥಿಗಳಿಗೆ ರಾಜ್ಯದ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ (ತರಬೇತಿ) ಅಲೋಕ ಕುಮಾರ ಕರೆ ನೀಡಿದರು.

ಕಲಬುರಗಿ ಹೊರವಲಯದ ನಾಗನಹಳ್ಳಿ ಪೊಲೀಸ್ ತರಬೇತಿ ಮಹಾವಿದ್ಯಾಲಯದಲ್ಲಿ ಜರುಗಿದ 4ನೇ ಮತ್ತು 5ನೇ ತಂಡದ ಪಿ.ಎಸ್.ಐ (ಕೆ.ಎಸ್.ಐ.ಎಸ್.ಎಫ್), 10ನೇ ಮತ್ತು 11ನೇ ತಂಡದ ಆರ್.ಎಸ್.ಐ./ಸ್ಪೆಷಲ್ ಆರ್.ಎಸ್.ಐ. ಪ್ರಶಿಕ್ಷಣಾರ್ಥಿಗಳ ನಿರ್ಗಮನ ಪಥಸಂಚಲನ ಕಾರ್ಯಕ್ರಮದಲ್ಲಿ ಪರೇಡ್ ಕಮಾಂಡರ್ ಆರ್.ಎಸ್.ಐ. ಮಲ್ಲಿಕಾರ್ಜುನ ಬಿ. ಕಲ್ಲೊಳ್ಳಿ ಮತ್ತು ಸಹಾಯಕ ಪರೇಡ್ ಕಮಾಂಡರ್ ಪಿ.ಎಸ್.ಐ.(ಕೆ.ಎಸ್.ಐ.ಎಸ್.ಎಫ್) 4ನೇ ತಂಡದ ಸ್ಮಿತಾ ನಾರಾಯಣ ಕೋಡಿಯಾ ಅವರ ನೇತೃತ್ವದ ತುಕಡಿಗಳಿಂದ ಗೌರವ ವಂದನೆ ಸ್ವೀಕರಿಸಿ ಮಾತನಾಡಿದ ಅವರು, ಸಾರ್ವಜನಿಕ ಆಡಳಿತದಲ್ಲಿ ಉತ್ಕೃಷ್ಟ ಸೇವೆ ನಿಮ್ಮ ಗುರಿಯಾಗಬೇಕಿದೆ ಎಂದು ಕಿವಿಮಾತು ಹೇಳಿದರು.

15–20 ವರ್ಷಗಳ ಹಿಂದೆ ಕಳ್ಳತನ, ಗ್ಯಾಂಗಸ್ಟರ್, ದರೋಡೆಗಳನ್ನು ಮಟ್ಟ ಹಾಕುವುದೇ ಮುಖ್ಯವಾಗಿತ್ತು. ಕಾಲ ಕ್ರಮೇಣ ಸವಾಲುಗಳು ಬದಲಾಗಿವೆ. ಇಂದಿನ ಪರಿಸ್ಥಿತಿಯಲ್ಲಿ ಆನ್‌ಲೈನ್ ವಂಚನೆ, ಸೈಬರ್ ಕ್ರೈಮ್ ದಿನದಿಂದ ದಿನಕ್ಕೆ ಹೆಚ್ಚಳವಾಗುತ್ತಿದೆ. ಜನರು ಇದರಿಂದ ಮೋಸ ಹೋಗುತ್ತಿದ್ದಾರೆ. ಇಂತಹ ಹೊಸ ಸವಾಲುಗಳನ್ನು ತಂತ್ರಜ್ಞಾನದಿಂದ ನಿಯಂತ್ರಿಸಬೇಕಿದೆ. ಇದಕ್ಕಾಗಿ ಪೊಲೀಸರು ವೃತ್ತಿ ಕೌಶಲ್ಯ ಹೆಚ್ಚಿಸಿಕೊಳ್ಳಲು ಕಲಿಕೆ ಅಭ್ಯಾಸವನ್ನು ನಿರಂತರವಾಗಿರಿಸಿಕೊಳ್ಳಬೇಕಿದೆ ಎಂದು ನಿರ್ಗಮಿತ ಪ್ರಶಿಕ್ಷಣಾರ್ಥಿಗಳಿಗೆ ಅಲೋಕ ಕುಮಾರ ಕರೆ ನೀಡಿದರು.

ಇತ್ತೀಚೆಗೆ ಅಪರಾಧ ಕೃತ್ಯಗಳ ಜೊತೆಗೆ ಪ್ರವಾಹ, ನೆರೆ ಹಾವಳಿ, ನೈಸರ್ಗಿಕ ಆಪತ್ತು ನಮಗೆ ದೊಡ್ಡ ಸವಾಲಾಗಿವೆ. ಶಿರೂರ್ ಭೂಕುಸಿತ, ವಯನಾಡ್ ದುರಂತ ನಮ್ಮ ಕಣ್ಮುಂದಿದೆ. ಹಿಂದೆ ಇಲ್ಲಿಯೇ ಭೀಮಾ, ಕಾಗಿಣಾ ತುಂಬಿ ನೆರೆ ಹಾವಳಿ ಪರಿಸ್ಥಿತಿ ಉಂಟಾಗಿರುವ ಉದಾಹರಣೆಗಳಿವೆ. ನೈಸರ್ಗಿಕ ವಿಕೋಪದಂತಹ ರಕ್ಷಣಾ ಕಾರ್ಯದಲ್ಲಿ ಆರ್.ಎಸ್.ಐ. ಪೊಲೀಸರ ಜವಾಬ್ದಾರಿ ಹೆಚ್ಚಿದೆ. ವೀರಪ್ಪನ್ ಕಾಯಾಚರಣೆಯಲ್ಲಿ ಆರ್.ಎಸ್.ಐ. ಪೊಲೀಸರು ಇದ್ದರು ಎಂಬುದನ್ನು ಸ್ಮರಿಸಿದ ಅವರು ವಿ.ವಿ.ಐ.ಪಿ ಭದ್ರತೆ ಜವಾಬ್ದಾರಿ ಕೆ.ಎಸ್.ಐ.ಎಸ್.ಎಫ್ ಪೋಲಿಸರದ್ದಾಗಿದೆ. ಇಂದಿಲ್ಲಿ 11 ತಿಂಗಳ ಕಠಿಣ ತರಬೇತಿ ಪಡೆದು ವೃತ್ತಿ ಜೀವನಕ್ಕೆ ಕಾಲಿಡುತ್ತಿದ್ದು, ಇಂದಿಲ್ಲಿ ಪ್ರತಿಜ್ಞೆ ಮಾಡಿದಂತೆ ಯಾವುದೇ ಜಾತಿ, ಧರ್ಮವಿಲ್ಲದ ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸಿ ಎಂದು ಪ್ರಶಿಕ್ಷಣಾರ್ಥಿಗಳಿಗೆ ಹೇಳಿದರು.

# ಭತ್ತ ಬೆಳೆಗಾರರಿಂದ ಡಿ.2ರಂದು ಬೃಹತ್ ಪ್ರತಿಭಟನಾ ರ್‍ಯಾಲಿ




**ಬಳ್ಳಾರಿ, ನ. 27–** ಎಐಕೆಕೆಎಂಎಸ್ ರೈತ ಸಂಘಟನೆ ವತಿಯಿಂದ ನಗರದ ಮುಂಡ್ಲೂರು ರಾಮಪ್ಪ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿಯನ್ನು ನಡೆಸಲಾಯಿತು. ಈ ಪತ್ರಿಕಾ ಗೋಷ್ಠಿಯನ್ನು ಸಂಘದ ಜಿಲ್ಲಾ ಅಧ್ಯಕ್ಷರು ಮತ್ತು ರಾಜ್ಯ ಕಾರ್ಯದರ್ಶಿ ಮಂಡಳಿ ಸದಸ್ಯರಾಗಿರುವಂತಹ ಗೋವಿಂದ್ ಅವರು ನಡೆಸಿಕೊಟ್ಟರು.

ಈ ಸಂದರ್ಭದಲಿ, ಭತ್ತಕ್ಕೆ ಕ್ವಿಂಟಲ್ ಗೆ 3,500 ಬೆಂಬಲ ಬೆಲೆ ನಿಗದಿ, ಹಾಗೂ ಡಿಸೆಂಬರ್ ಮೊದಲ ವಾರದಿಂದಲೇ ಖರೀದಿ ಕೇಂದ್ರದ ಮೂಲಕ ಭತ್ತ ಖರೀದಿ ಪ್ರಾರಂಭಿಸಲು ಆಗ್ರಹಿಸಿ ಈ ಪ್ರತಿಭಟನೆ ನಡೆಯುತ್ತಿದೆ.


ಏನೇ ಕಷ್ಟಗಳು ಬಂದರೂ, ಎಂತದ್ದೇ ಪರಿಸ್ಥಿತಿ ಎದುರಾದರೂ ಅವುಗಳನ್ನೆಲ್ಲ ನುಂಗಿ, ಈ ಸಮಾಜಕ್ಕೆ ಪ್ರತಿವರ್ಷ ಭತ್ತ ಬೆಳೆದು ಅನ್ನ ನೀಡುವುದು ನಮ್ಮ ರೈತ. ಈ ರೈತನ ಪರಿಸ್ಥಿತಿ ಇಂದು ಚಿಂತಾಜನಿಕವಾಗುದೆ. ಈಗಷ್ಟೇ ಮುಗಿದಿರುವ ನಮ್ಮ ರಾಜ್ಯದ ಉಪ ಚುನಾವಣೆ ಸೇರಿದಂತೆ ಇತರ ರಾಜ್ಯಗಳ ಚುನಾವಣೆಯಲ್ಲಿ ಕೋಟ್ಯಂತರ ರೂಪಾಯಿ ಹೊಳೆ ಹರಿಸುವ ಮತ್ತು ಈ ದೇಶದ ಉದ್ಯಮಿಗಳ ಲಕ್ಷಾನು ಕೋಟಿ ರೂಪಾಯಿ ಮನ್ನಾ ಮಾಡುವ ಈ ಅಡಳಿತಗಾರರಿಗೆ ರೈತರ ಸಮಸ್ಯೆಗಳು ಕಣ್ಣಿಗೆ ಕಾಣುತ್ತಿಲ್ಲ. ಹಾಗಾದರೆ ರೈತರ ಈಗ ಏನು ಮಾಡಬೇಕು.

ಇನ್ನೊಂದು ಕಡೆ ಕೈ ಸೇರಿರುವ ಭತ್ತಕ್ಕೆ ಬೆಲೆಯು ಸಂಪೂರ್ಣವಾಗಿ ಕುಸಿದಿದೆ. ಇದು ರೈತರಿಗೆ ಗಾಯದ ಮೇಲೆ ಬರೆ ಎಳೆದಂತಾಗಿದೆ. ಕಳೆದ ವರ್ಷ ಇದೆ ಬತ್ತವನ್ನು ಹೆಚ್ಚುಕಡಿಮೆ 3,300 ರೂ ಗಳಂತೆ ಮಾರಾಟ ಮಾಡಲಾಗಿತ್ತು, ಈ ವರ್ಷ ದರ ಕಡಿಮೆ ಯಾಗಿರುವುದರಿಂದ ರೈತರಲ್ಲಿ ಆತಂಕ ಉಂಟಾಗಿದೆ. ಜೊತೆಗೆ ನಿರಂತರವಾಗಿ ಸುರಿದ ಮಳೆಯಿಂದಾಗಿ ಬೆಳೆದ ಒಂದು ಎಕರೆ ಭತ್ತದಲ್ಲಿ ಸುಮಾರು ಏಳು ರಿಂದ ಎಂಟು ಕ್ವಿಂಟಲ್ ಬತ್ತ ನಷ್ಟವಾಗುವಂತಹ ಸನ್ನಿವೇಶ ಉಂಟಾಗಿದೆ. ಹಾಗಾಗಿ ಈ ರೀತಿ ನಷ್ಟಕ್ಕೀಡಾದ ರೈತರಿಗೆ ಮೇಲಿನ ಬೆಲೆಯಂತೆ ನಷ್ಟ ಪರಿಹಾರ ಕೊಡಬೇಕಾಗಿದೆ. ಆದರೆ ಈ ರೀತಿ ಮಳೆಯಿಂದ ಉಂಟಾದ ನಷ್ಟದ ಪ್ರಮಾಣವನ್ನು ಸಮೀಕ್ಷೆ ಮಾಡಲು ಗ್ರಾಮಗಳಿಗೆ ಬರುವ ಅಧಿಕಾರಿಗಳು ನೆಲಕ್ಕಚ್ಚಿದ ಭತ್ತವು ಮೊಳಕೆ ಬಂದಿದ್ದರೆ ಮಾತ್ರ ಪರಿಹಾರ ಸಿಗುತ್ತೆ ಎಂಬಂತಹ ಮಾತುಗಳನ್ನಾಡುತ್ತಿರುವುದನ್ನು ನಾವೆಲ್ಲ ಖಂಡಿಸಬೇಕಾಗಿದೆ.

ಈ ವರ್ಷ ಬೆಳೆ ಬೆಳೆಯಲು ಆಗಿರುವ ವೆಚ್ಚ –ಇನ್ನೊಂದೆಡೆ, ಈ ವರ್ಷ ಭತ್ತ ಬೆಳೆ ಬೆಳೆಯಲು ಖರ್ಚಿನ ಪ್ರಮಾಣ ಸಾಕಷ್ಟು ಹೆಚ್ಚಾಗಿದೆ. ಪ್ರಾರಂಭದ ಬೀಜ ಮತ್ತು ಸಸಿಯಿಂದ ಹಿಡಿದು ಗೊಬ್ಬರ–ಕೀಟನಾಶಕ ಸೇರಿದಂತೆ ಇನ್ನಿತರ ಖರ್ಚುಗಳು ಕಳೆದ ವರ್ಷಕ್ಕಿಂತ ಈ ವರ್ಷ ಅಂದಾಜು 15,000 ರೂ, ಕ್ಕಿಂತ ಹೆಚ್ಚಾಗಿದೆ. ಇಷ್ಟೇ ಅಲ್ಲ ನೆಲಕ್ಕಚ್ಚಿ ನಷ್ಟವಾದ ಸುಮಾರು 7 ಕ್ವಿಂಟಲ್‌ನ ಮೊತ್ತ ಅಂದಾಜು 21,000 ರೂ ಮತ್ತು ನೆಲಕ್ಕಚ್ಚಿದ ಭತ್ತದ ಕಟಾವಿನ ವೆಚ್ಚವೂ ಸಹ ಹೆಚ್ಚಾಗುತ್ತದೆ. ಇಂತಹ ಸಂದರ್ಭದಲ್ಲಿ ಭತ್ತಕ್ಕೆ 3,500 ಬೆಲೆ ನಿಗದಿ ಮಾಡುವುದು ಸೂಕ್ತವಾದದ್ದಾಗಿದೆ.

ಇದು ಗಮನಕ್ಕಿದ್ದು, ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ಜನವರಿ ಒಂದರಿಂದ ಖರಿಧಿ ಕೇಂದ್ರದ ಮೂಲಕ ಭತ್ತ ಖರೀದಿ ಪ್ರಾರಂಭ ಮಾಡುತ್ತೇವೆ ಎಂದು ಹೇಳುವುದು ದಲ್ಲಾಳಿಗಳು ಮತ್ತು ಈ ಆಡಳಿತಗಾರರ ಮದ್ಯೆ ಏನೋ ಒಂದು ರೀತಿಯ ಒಪ್ಪಂದವಾದಂತೆ ತೋರಿಸುತ್ತಿದೆ. ಅಂದರೆ ಮೊದಲು ನೀವು ಕಡಿಮೆ ನೀವು ಕಡಿಮೆ ಬೆಲೆಗೆ ಖರೀದಿಸಿ, ನಂತರ ನಾವು ಕಾಟಾಚಾರಕ್ಕೆ ಖರೀದಿ ಕೇಂದ್ರ ತೆರೆಯುತ್ತೇವೆ ಎಂಬುದು ತೆರೆದ ಸತ್ಯವಾಗಿದೆ. ಈ ಅವಕಾಶವನ್ನು ಚೆನ್ನಾಗಿ ಬಳಸಿಕೊಳ್ಳುತ್ತಿರುವ ದಲ್ಲಾಳಿಗಳು ಅತೀ ಕಡಿಮೆ ಬೆಲೆಗೆ ಭತ್ತವನ್ನು ಖರೀದಿಸುತ್ತಿದ್ದಾರೆ, ಅಲ್ಲಿ, ಇಲ್ಲಿ ಕೈ ಸಾಲ ತಂದು, ಈಗ ಅದು ಬಡ್ಡಿ ಹೆಚ್ಚಾಗಿ, ಉತ್ಪಾದನಾ ವೆಚ್ಚ ಹೆಚ್ಚಾಗಿ, ಸರ್ಕಾರ ಸದ್ಯ ಅವರ ಬೆಲೆ ಖರೀದಿಸದಿರುವ ಸಂಧರ್ಭದಲ್ಲಿ ಅನಿವಾರ್ಯವಾಗಿ ರೈತರು ದಲ್ಲಾಳಿಗಳಿಗೆ ಅತೀ ಕಡಿಮೆ ಬೆಲೆಗೆ ತಮ್ಮ ಬೆಳೆಯನ್ನು ಮಾರುವಂತಾಗಿದೆ.

# ಬೀದರ್ ಜಿಲ್ಲೆಯಲ್ಲಿ ಲಘು ಭೂಕಂಪ: ರಿಕ್ಟರ್ ಮಾಪಕದಲ್ಲಿ 2.6ರಷ್ಟು ತೀವ್ರತೆ ದಾಖಲು



**ಬೀದರ್, ನ. 27:** ಜಿಲ್ಲೆಯಲ್ಲಿ ಮುಂಜಾನೆ 2.3 ತೀವ್ರತೆಯ ಲಘು ಭೂಕಂಪನ ಸಂಭವಿಸಿದೆ. ಕಡಿಮೆ ತೀವ್ರತೆ ಮತ್ತು ಕನಿಷ್ಠ ಭೂಕಂಪನ ವಾಗಿರುವ ಕಾರಣ ಯಾವುದೇ ರೀತಿ ಹಾನಿಯಾಗಿಲ್ಲ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಬೆಳಗಿನ ಜಾವ 4:11 ಕ್ಕೆ 2.3 ತೀವ್ರತೆಯ ಭೂಕಂಪ ಸಂಭವಿಸಿದೆ ಎಂದು ಕರ್ನಾಟಕ ರಾಜ್ಯ ನೈಸರ್ಗಿಕ ವಿಪತ್ತು ಮೇಲ್ವಿಚಾರಣಾ ಕೇಂದ್ರ ದೃಢಪಡಿಸಿದೆ.

ಜಿಲ್ಲೆಯ ಚಿಟಗುಪ್ಪ ತಾಲೂಕಿನ ತಾಳಮಡಗಿ ಗ್ರಾಮ ಪಂಚಾಯಿತಿ ಯಿಂದ ಉತ್ತರಕ್ಕೆ 0.8 ಕಿಲೋಮೀಟರ್ ದೂರದಲ್ಲಿ ಭೂಕಂಪದ ಕೇಂದ್ರ ಬಿಂದುವಾಗಿದೆ. ಇದು 17.77ಲಿಓ ಅಕ್ಷಾಂಶ ಮತ್ತು 77.28ಲಿ ಇರ್ ೀ ಖಾಂಶ ದ್ ೊಂದಿಗ್ ನಿರ್ದೇಶಾಂಕಗಳೊಂದಿಗೆ ಮೇಲ್ಮೈ ಕೆಳಗೆ 5 ಕಿಲೋಮೀಟರ್‌ಗಳಷ್ಟು ಆಳದಲ್ಲಿ ಸಂಭವಿಸಿದೆ.

ಭೂಕಂಪನವಾದ ಸ್ಥಳಗಳು : ಹುಮನಾಬಾದ್ ತಾಲೂಕಿನ ಸೀತಾಳಗೇರಾ ಗ್ರಾಮ ಪಂಚಾಯಿತಿ ಯಿಂದ ದಕ್ಷಿಣಕ್ಕೆ 2.7 ಕಿ.ಮೀ. ಚಿತ್ತಗುಪ್ಪ ತಾಲೂಕಿನ ಮಂಗಲಗಿ ಗ್ರಾಮ ಪಂಚಾಯಿತಿಯಿಂದ ವಾಯುವ್ಯಕ್ಕೆ 3.3 ಕಿ.ಮೀ. ಚಿತ್ತಗುಪ್ಪಾ ತಾಲೂಕು ಕೇಂದ್ರ ಕಛೇರಿಯಿಂದ ಈಶಾನ್ಯಕ್ಕೆ 10.4 ಕಿ.ಮೀ. ಕಡಿಮೆ ತೀವ್ರತೆ, ಯಾವುದೇ ಹಾನಿ ಇಲ್ಲ. ಭೂಕಂಪನದ ತೀವ್ರತೆಯು ಕಡಿಮೆಯಾಗಿದೆ, ಭೂಕಂಪನವು ಅಧಿಕೇಂದ್ರದಿಂದ 20–30 ಕಿಲೋಮೀಟರ್ ತ್ರಿಜ್ಯದವರೆಗೆ ಸಂಭವಿಸಬಹುದು. ಅಂತಹ ಭೂಕಂಪಗಳು ಸಾಮಾನ್ಯವಾಗಿ ಸ್ವಲ್ಪ ಅಲುಗಾಡುವಿಕೆಗೆ ಕಾರಣವಾಗುತ್ತವೆ. ಸಮುದಾಯ ಅಥವಾ ಮೂಲಸೌಕರ್ಯಕ್ಕೆ ಯಾವುದೇ ಅಪಾಯವನ್ನು ಉಂಟುಮಾಡುವುದಿಲ್ಲ. ಕೇಂದ್ರವು ಭೂಕಂಪನ ವಲಯದಲ್ಲಿದೆ. ಅಲ್ಲಿ ಭೂಕಂಪಗಳಿಂದ ಹಾನಿಯಾಗುವ ಸಾಧ್ಯತೆ ಕಡಿಮೆಯಾಗಿದೆ. ಹೆಚ್ಚುವರಿಯಾಗಿ, ಟೆಕ್ಟೋನಿಕ್ ನಕ್ಷೆಯಿಂದ ದೃಢೀಕರಿಸಲ್ಪಟ್ಟಂತೆ ಪ್ರದೇಶವು ರಚನಾತ್ಮಕ ಸ್ಥಗಿತಗಳನ್ನು ಹೊಂದಿಲ್ಲ ಎಂದು ಏಖಓಆಒಅಯ ನಿರ್ದೇಶಕರು ತಿಳಿಸಿದ್ದಾರೆ.

ಈ ರೀತಿಯ ಕಡಿಮೆ ತೀವ್ರತೆಯ ಕಂಪನಗಳು ನೈಸರ್ಗಿಕ ಸಮಸ್ಯೆ ಉಂಟು ಮಾಡುವುದಿಲ್ಲ. ಹೀಗಾಗಿ ಭಯಪಡುವ ಅಗತ್ಯವಿಲ್ಲ ಎಂದು ಜನರಿಗೆ ಭರವಸೆ ನೀಡಿದ್ದಾರೆ. ಏಖಓಆಒಅ ಈ ಪ್ರದೇಶದಲ್ಲಿ ಭೂಕಂಪನ ಚಟುವಟಿಕೆಯನ್ನು ಮೇಲ್ವಿಚಾರಣೆ ಮಾಡುವುದನ್ನು ಮುಂದುವರೆಸಿದೆ ಮತ್ತು ಸಾರ್ವಜನಿಕ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಬದ್ಧವಾಗಿದೆ. ಕಡಿಮೆ ಭೂಕಂಪನ ಚಟುವಟಿಕೆಯಿರುವ ಪ್ರದೇಶಗಳಲ್ಲಿ ಇಂತಹ ಸಣ್ಣ ಘಟನೆಗಳು ಸಾಮಾನ್ಯವಾಗಿರುವುದರಿಂದ ನಿವಾಸಿಗಳು ತಿಳುವಳಿಕೆಯಿಂದಿರಲು ಸೂಚನೆ ನೀಡಲಾಗಿದೆ. ಹೆಚ್ಚಿನ ಮಾಹಿತಿ ಅಥವಾ ಕಾಳಜಿಗಾಗಿ, ನಿವಾಸಿಗಳು ಬೆಂಗಳೂರಿನ ಯಲಹಂಕದ ಮೇಜರ್ ಸಂದೀಪ್ ಉನ್ನಿಕೃಷ್ಣನ್ ರಸ್ತೆಯಲ್ಲಿರುವ ಕೆ ಎಸ್ ಎನ್ ಡಿ ಎಂ ಸಿ ಯ ನ್ನು ಸಂಪರ್ಕಿಸಬಹುದು.

## ಪತ್ರಿಕಾ ಸಾಂಸ್ಕೃತಿಕ ಭವನದಲ್ಲಿ ಪತ್ರಕರ್ತರಿಗೆ ಸನ್ಮಾನ

# ಗ್ರಾಮೀಣ ಸಮಸ್ಯೆಗಳ ಮೇಲೆ ಮಾಧ್ಯಮಗಳು ಬೆಳಕು ಚೆಲ್ಲಲಿ: ಬಿ.ಆರ್.ಪಾಟೀಲ್




ಕಲಬುರಗಿ ಪತ್ರಿಕಾ ಭವನದ ಸಾಂಸ್ಕೃತಿಕ ಭವನದಲ್ಲಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಟಿಎಸ್‌ಆರ್, ರಾಜ್ಯೋತ್ಸವ ಪ್ರಶಸ್ತಿ ಸೇರಿ ವಿವಿಧ ಪ್ರಶಸ್ತಿಗಳಿಗೆ ಭಾಜನರಾದ ಪತ್ರಕರ್ತರಿಗೆ ಸಿಎಂ ಸಲಹೆಗಾರ ಬಿ.ಆರ್. ಪಾಟೀಲ್ ಅಭಿನಂದಿಸಿದರು.

**ಕಲಬುರಗಿ, ನ. 27–** ಗ್ರಾಮೀಣ ಭಾಗದ ಸಮಸ್ಯೆಗಳು ಮಾಧ್ಯಮಗಳಲ್ಲಿ ಹೆಚ್ಚು ಪ್ರಸಾರವಾಗಬೇಕು. ಚುರುಕಿನ ತನಿಖಾ ವರದಿಗಾರಿಕೆ ಕೈಗೊಂಡಾಗ ಮಾತ್ರ ಭ್ರಷ್ಟಾಚಾರ, ಅಕ್ರಮಗಳು ಹೊರಬರಲು ಸಾಧ್ಯ ಎಂದು ಮುಖ್ಯಮಂತ್ರಿಗಳ ಸಲಹೆಗಾರ, ಶಾಸಕ ಬಿ.ಆರ್. ಪಾಟೀಲ್ ಕಳಕಳಿ ವ್ಯಕ್ತಪಡಿಸಿದರು.

ಪತ್ರಕರ್ತರ ಸಾಂಸ್ಕೃತಿಕ ಭವನದಲ್ಲಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಿಂದ ಹಮ್ಮಿಕೊಂಡಿದ್ದ ಪತ್ರಕರ್ತರ ಅಭಿನಂದನಾ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪತ್ರಕರ್ತರು, ಮಾಧ್ಯಮಗಳಿಗೆ ಇರುವಷ್ಟು ಸ್ವಾತಂತ್ರ್ಯ ಮತ್ಯಾರಿಗೂ ಇಲ್ಲ, ಪತ್ರಿಕಾ ಸ್ವಾತಂತ್ರ್ಯದ ಅವಕಾಶ ಸದ್ವಿನಿಯೋಗಿಸಿಕೊಂಡು ಸಮಾಜದ ಸ್ವಾಸ್ಥ್ಯ ಕಾಪಾಡಬೇಕು ಎಂದು ತಿಳಿಹೇಳಿ, ಪತ್ರಕರ್ತರ ಕ್ಷೇಮಾಭಿವೃದ್ಧಿ ನಿಧಿ ಸದುಪಯೋಗಪಡಿಸಿಕೊಳ್ಳೀಕು.

ಜಿಲ್ಲೆಗೆ ಪತ್ರಿಕೋದ್ಯಮ ಕ್ಷೇತ್ರದಿಂದ ಗರಿ ಬಂದಿದ್ದು, ಇದು ಹೆಮ್ಮೆಯ ವಿಷಯ. ಇತ್ತೀಚೆಗೆ ವಾತಾವರಣ ಬದಲಾಗಿದ್ದು, ಇನ್ನೂ ಪ್ರತಿಭಾವಂತರನ್ನು ಸರ್ಕಾರ ಗುರುತಿಸುವ ಕೆಲಸ ಸರ್ಕಾರ ಮಾಡಬೇಕು. ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ ಮಾತನಾಡಿ, ಪ್ರಶಸ್ತಿ ಪುರಸ್ಕೃತರಿಗೆ ಪ್ರಶಸ್ತಿಗಳಿಂದ ಜವಾಬ್ದಾರಿ ಹೆಚ್ಚಳವಾಗಲಿದ್ದು, ಮತ್ತಷ್ಟು ಪ್ರೇರೆಪಿಸಿದಂತಾಗಲಿದೆ ಎಂದರು. ವೇದಿಕೆಯಲ್ಲಿ ಶಾಸಕ ಅಲ್ಲಮಪ್ರಭು ಪಾಟೀಲ್, ಎಂಎಲ್‌ಸಿ ತಿಪ್ಪಣ್ಣಪ್ಪ ಕಮಕನೂರ, ರಾಜ್ಯ ಸಂಘದ ಉಪಾಧ್ಯಕ್ಷ ಭವಾನಿ ಸಿಂಗ್ ಠಾಕೂರ ಮತ್ತಿತರರಿದ್ದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸಂಘದ ಜಿಲ್ಲಾಧ್ಯಕ್ಷ ಬಾಬುರಾವ ಯಡ್ರಾಮಿ, ಡಿಸೆಂಬರ್ ಕೊನೆ ವಾರದಲ್ಲಿ ಯಡ್ರಾಮಿಯಲ್ಲಿ ಜಿಲ್ಲಾ ಪತ್ರಕರ್ತರ ಪ್ರಥಮ ಸಮ್ಮೇಳನ ಮತ್ತು ಫೆಬ್ರವರಿ ತಿಂಗಳ ಎರಡನೇ ವಾರದಲ್ಲಿ ಕಲ್ಯಾಣ ಕರ್ನಾಟಕ ಪತ್ರಕರ್ತರ ಸಮ್ಮೇಳನ ಆಯೋಜಿಸಲು ಚಿಂತಿಸಲಾಗಿದೆ. ಪತ್ರಕರ್ತರ ಕುಟುಂಬದ ಸಮ್ಮಿಲನ ನಡೆಸಲಾಗುವುದು. ಮುಂದಿನ ದಿನಗಳಲ್ಲಿ ಕಲಬುರಗಿಯಲ್ಲಿ ರಾಜ್ಯ ಮಟ್ಟದ ಪತ್ರಕರ್ತರ ಕ್ರಿಕೆಟ್ ಟೂರ್ನಿ ಆಯೋಜಿಸುವಂತೆ ರಾಜ್ಯ ಸಂಘವು ತಾತ್ವಿಕ ಒಪ್ಪಿಗೆ ಸೂಚಿಸಿದೆ. ಜಿಲ್ಲಾ ಸಂಘದಿಂದ ಸದ್ಯ 1.50 ಲಕ್ಷ ರೂ. ಬ್ಯಾಂಕ್‌ನಲ್ಲಿ ಠೇವಣಿ ಇಡಲಾಗಿದೆ. ಮುಂದಿನ ದಿನಗಳಲ್ಲಿ ಮತ್ತೊಂದು ಲಕ್ಷ ರೂ.ಠೇವಣಿ ಇಡಲಾಗುವುದು ಎಂದರು. ಸಚಿವ ಪ್ರಿಯಾಂಕ ಖರ್ಗೆ ಅವರು ತಮ್ಮ ಸಂದೇಶದಲ್ಲಿ ಸರ್ಕಾರಿ ಜಾಗದಲ್ಲಿ ಪತ್ರಕರ್ತರಿಗೆ ನಿವೇಶನ ಮಂಜೂರು ಮಾಡಿ ಮನೆ ನಿರ್ಮಿಸುವ ಕೊಡುವ ಭರವಸೆ ನೀಡಿದ್ದಾರೆ.

ನಿವೃತ್ತ ಪತ್ರಕರ್ತರಿಗೆ 3 ಸಾವಿರದಿಂದ 12 ಸಾವಿರ ರೂ. ವರೆಗೆ ಮಾಸಾಶನ ಹೆಚ್ಚಿಸಲು ಸಂಘವು ಸಫಲವಾಗಿದೆ. ಮಾಸಾಶನ ಪಡೆಯಲು ಇರುವ ಷರತ್ತು ಸಡಿಲಗೊಳಿಸುವಂತೆ ಸರ್ಕಾರದ ಮಟ್ಟದಲ್ಲಿ ಮನವರಿಕೆ ಮಾಡಿ ಕೊಡಲಾಗಿದೆ. ನಿವೃತ್ತಿ ಜೀವನಕ್ಕೆ ಮಾಸಾಶನ ಆರೋಗ್ಯ, ವೈದ್ಯಕೀಯ ಸೇವೆ ಪಡೆಯಲು ಉಪಯುಕ್ತವಾಗಲಿದೆ. ಪತ್ರಕರ್ತರ ಶ್ರೇಯೋಭಿವೃದ್ಧಿಗಾಗಿ ಸಂಘ ಅವಿರತವಾಗಿ ಶ್ರಮವಹಿಸುತ್ತಿದೆ.

**–ಶಿವಾನಂದ ತಗಡೂರು, ರಾಜ್ಯಾಧ್ಯಕ್ಷ, ಕಾರ್ಯನಿರತ ಪತ್ರಕರ್ತರ ಸಂಘ.**

ಟಿಎಸ್‌ಆರ್ ಪ್ರಶಸ್ತಿ ಪುರಸ್ಕೃತ, ನಿವೃತ್ತ ಪತ್ರಕರ್ತ ಎಸ್ ಆರ್ ಮಣೂರು ಮಾತನಾಡಿ, ತವರಿನ ಸನ್ಮಾನ ದೊಡ್ಡದು. ನಿಜವಾಗಿಯೂ ತುಂಬಾ ಖುಷಿ ತಂದುಕೊಟ್ಟಿದೆ. ಬೆಂಗಳೂರು ಹೊರತುಪಡಿಸಿ ಉಳಿದ ಭಾಗದ ಪತ್ರಕರ್ತರನ್ನು ಗುರುತಿಸುವ ಕೆಲಸ ಮಾಡಿದ್ದು ನಿಜಕ್ಕೂ ಶ್ಲಾಘನೀಯ ಎಂದರು.

# ಹಿಜ್ಬುಲ್ಲಾ ಬೆನ್ನಲ್ಲೇ ಕದನ ವಿರಾಮಕ್ಕೆ ಸಿದ್ಧ ಎಂದ ಹಮಾಸ್



**ನವದೆಹಲಿ, ನ.27 :** ಇಸ್ರೇಲ್ ಮತ್ತು ಲೆಬನಾನ್ನ ಹಿಜ್ಬುಲ್ಲಾ ನಡುವೆ ಕದನ ವಿರಾಮ ಘೋಷಣೆಯಾದ ಬಳಿಕ, ನಾವೂ ಕದನ ವಿರಾಮಕ್ಕೆ ಸಿದ್ಧ ಎಂದು ಗಾಝಾದ ಹಮಾಸ್ ಹೇಳಿರುವುದಾಗಿ ವರದಿಯಾಗಿದೆ. ನಾವು ಕದನ ವಿರಾಮಕ್ಕೆ ಮತ್ತು ಒತ್ತೆಯಾಳುಗಳ ಬಿಡುಗಡೆಗೆ ಸಿದ್ಧ ಎಂದು ಮಧ್ಯವರ್ತಿಗಳಾದ ಈಜಿಪ್ಟ್, ಕತಾರ್ ಮತ್ತು ತುರ್ಕಿಗೆ ಹಮಾಸ್ ಹೇಳಿರುವುದಾಗಿ ಅದರ ಮುಖ್ಯಸ್ಥರನ್ನು ಉಲ್ಲೇಖಿಸಿ ಎಎಫ್‌ಪಿ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಗಾಝಾದ ಮೇಲಿನ ಆಕ್ರಮಣವನ್ನು ಇಸ್ರೇಲ್ ನಿಲ್ಲಿಸಬೇಕು ಎಂಬುವುದು ಹಮಾಸ್‌ನ ಆಗ್ರವಾದರೆ, ಒತ್ತೆಯಾಳುಗಳನ್ನು ಬಿಡುಗಡೆ ಮಾಡಬೇಕು ಎಂಬುವುದು ಇಸ್ರೇಲ್ ಬೇಡಿಕೆಯಾಗಿದೆ. ಈ ವಿಷಯದಲ್ಲಿ ಒಮ್ಮತಕ್ಕೆ ಬಂದು, ಕಳೆದ ಒಂದು ವರ್ಷದ ಅವಧಿಯಲ್ಲಿ ಒಮ್ಮೆ ಹಮಾಸ್ ಮತ್ತು ಇಸ್ರೇಲ್ ನಡುವೆ ಕದನ ವಿರಾಮ ಘೋಷಣೆಯಾಗಿತ್ತು. ಆದರೆ ಮತ್ತೆ ಆಕ್ರಮಣ ಮುಂದುವರೆದಿದೆ. ಕಳೆದ 13 ತಿಂಗಳ ಇಸ್ರೇಲ್ ಆಕ್ರಮಣದಲ್ಲಿ ಬಲಿಯಾದ ಗಾಝಾ ನಾಗರಿಕರ ಸಂಖ್ಯೆ ನ. 26ರವೇಳೆಗೆ 44,249ಕ್ಕೆ ತಲುಪಿದೆ. 104,746 ಜನ ಗಾಯಗೊಂಡಿದ್ದಾರೆ ಎಂದು ಹಮಾಸ್ ಆರೋಗ್ಯ ಇಲಾಖೆ ಹೇಳಿದೆ.

ಇಸ್ರೇಲ್ ಮತ್ತು ಹಿಜ್ಬುಲ್ಲಾ ನಡುವೆ ಕದನ ವಿರಾಮ ಘೋಷಣೆಯಾಗಿರುವ ಹಿನ್ನೆಲೆ ಲೆಬನಾನ್‌ನಲ್ಲಿ ಸಂಭ್ರಮ ಮನೆ ಮಾಡಿದೆ. ಮನೆಗಳನ್ನು ತೊರೆದು ದೂರ ಹೋಗಿದ್ದ ಜನರು ವಾಹನಗಳಲ್ಲಿ ದಕ್ಷಿಣ ಲೆಬನಾನ್‌ನತ್ತ ಆಗಮಿಸುತ್ತಿದ್ದಾರೆ ಎಂದು ಅಂತಾರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿವೆ. ಬೈರೂತ್ ನಗರದಲ್ಲಿ ಜನರು ಗುಂಪುಗೂಡಿ, ಹಾಡು ಹಾಡಿ ಸಂಭ್ರಮಾಚರಣೆ ಮಾಡಿರುವ ವಿಡಿಯೋಗಳು ಹರಿದಾಡುತ್ತಿವೆ.

ಆದರೆ, ಇಸ್ರೇಲ್ ಸೇನೆ ನಾವಿರುವ ಪ್ರದೇಶಗಳಿಗೆ ಈಗ ಬರಬೇಡಿ ಎಂಬ ಎಚ್ಚರಿಕೆಯನ್ನು ನೀಡಿದೆ. ಮತ್ತೊಂದೆಡೆ ಇಸ್ರೇಲ್ ಸೇನೆ ಹೋದ ಬಳಿಕ, ನಾವು ತಂಡಗಳನ್ನು ನಿಯೋಜನೆ ಮಾಡುತ್ತೇವೆ ಎಂದು ಹಿಜ್ಬುಲ್ಲಾ ಹೇಳಿಕೊಂಡಿದೆ. ಇಸ್ರೇಲ್ ಮತ್ತು ಹಿಜ್ಬುಲ್ಲಾ ನಡುವಿನ ಕದನ ವಿರಾಮವನ್ನು ವಿಶ್ವ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್, ಇರಾನ್, ಈಜಿಪ್ಟ್, ಚೀನಾ, ಬ್ರಿಟನ್ ದೇಶಗಳು ಸೇರಿದಂತೆ ಹಲವರು ಸ್ವಾಗತಿಸಿದ್ದಾರೆ.

ಕದನ ವಿರಾಮದ ಕುರಿತು ಇಸ್ರೇಲ್ ಮತ್ತು ಹಿಜ್ಬುಲ್ಲಾ ಕಡೆಯಿಂದ ಪ್ರತಿಕ್ರಿಯೆ ಬಂದಿದೆ. ಹಿಜ್ಬುಲ್ಲಾ ತಾತ್ವಿಕವಾಗಿ ಕದನ ವಿರಾಮ ಒಪ್ಪಂದವನ್ನು ಒಪ್ಪಿಕೊಂಡಿದ್ದರೂ, ಅದು ಇನ್ನೂ ಅಂತಿಮ ಒಪ್ಪಂದವನ್ನು ಪರಿಶೀಲಿಸಬೇಕಾಗಿದೆ. ಲೆಬನಾನ್‌ನ ಸಾರ್ವಭೌಮತ್ವ ಉಲ್ಲಂಘಿಸುವ ಯಾವುದೇ ಅಂಶ ಒಪ್ಪಂದದಲ್ಲಿ ಇದ್ದರೂ, ನಾವು ಅದನ್ನು ಒಪ್ಪಿಕೊಳ್ಳುವುದಿಲ್ಲ ಎಂದು ಹಿಜ್ಬುಲ್ಲಾದ ಹಿರಿಯ ಅಧಿಕಾರಿ ಮಹಮೂದ್ ಕಮಾತಿ ಹೇಳಿದ್ದಾರೆ.

ಇತ್ತೀಚಿನ ವರದಿಗಳ ಪ್ರಕಾರ, ಕದನ ವಿರಾಮ ಘೋಷಣೆಯಾದರೂ, ಹಿಜ್ಬುಲ್ಲಾ ಉತ್ತರ ಇಸ್ರೇಲ್ ಮೇಲೆ ರಾಕೆಟ್ ದಾಳಿ ಮುಂದುವರೆಸಿದೆ. ಉತ್ತರ ಇಸ್ರೇಲ್‌ನಲ್ಲಿ ವಾಯುದಾಳಿಯ ಸೈರನ್ ಮೊಳಗುತ್ತಿದೆ. ಕದನ ವಿರಾಮದ ಸುದ್ದಿಯ ನಡುವೆ ಉದ್ವಿಗ್ನತೆ ಉಲ್ಬಣಗೊಂಡಿದೆ. ಮತ್ತೊಂದಡೆ, ಹಿಜ್ಬುಲ್ಲಾ ಕದನ ವಿರಾಮವನ್ನು ಉಲ್ಲಂಘಿಸಿದರೆ ಮಿಲಿಟರಿ ಕಾರ್ಯಾಚರಣೆ ಪುನರಾರಂಭಿಸಲಾಗುವುದು ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಎಚ್ಚರಿಸಿದ್ದಾರೆ. ಹಿಜ್ಬುಲ್ಲಾ ಶಸ್ತ್ರಾಸ್ತ್ರ, ಮದ್ದುಗುಡ್ಡು, ರಾಕೆಟ್ ಬಳಸಿದರೆ ತಕ್ಕ ಉತ್ತರ ನೀಡುತ್ತೇವೆ ಎಂದಿದ್ದಾರೆ. ಇತ್ತೀಚಿನ ವರದಿಯ ಪ್ರಕಾರ, ಕದನ ವಿರಾಮದ ನಡುವೆಯೂ ಇಸ್ರೇಲ್ ದಾಳಿ ಮುಂದುವರೆಸಿದೆ. ದಕ್ಷಿಣ ಬೈರುತ್ನ ದಹಿಯೆಹ್ ಪ್ರದೇಶ 20 ಹಿಜ್ಬುಲ್ಲಾ ನೆಲೆಗಳನ್ನು ಗುರಿಯಾಗಿಸಿ ರಾಕೆಟ್ ದಾಳಿ ನಡೆಸಿದೆ.



ಇಸ್ರೇಲ್–ಲೆಬನಾನ್ ಕದನ ವಿರಾಮ ಎಂದು ಘೋಚಣೆಯಾಗಿದೆ ಇದರ ಹಿನ್ನೆಲೆ, ಒಪ್ಪಂದವನ್ನು ಕ್ಯಾಬಿನೆಟ್ ಅನುಮೋದಿಸಿದೆ ಮತ್ತು ಸ್ಥಳೀಯ ಕಾಲಮಾನ ಬುಧವಾರ 10:00 ಗಂಟೆಗೆ ಜಾರಿಗೆ ಬರಲಿದೆ ಎಂದು ಇಸ್ರೇಲಿ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರು ಬುಧವಾರ ರಾತ್ರಿ ಮಾಧ್ಯಮಗಳಿಗೆ ವರದಿ ನೀಡಿದರು.

# ಬಾಂಗ್ಲಾದಲ್ಲಿ ಹಿಂದೂ ಮುಖಂಡನ ಬಂಧನ: ವಿಶ್ವಸಂಸ್ಥೆ ಮಧ್ಯಪ್ರವೇಶಕ್ಕೆ ಭಾರತ ಆಗ್ರಹ

**ನವದೆಹಲಿ, ನ.27 :** ಬಾಂಗ್ಲಾದೇಶದಲ್ಲಿ ಹಿಂದೂ ಸಂಘಟನೆಯ ಮುಖಂಡ ಚಿನ್ಮಯಿ ಕೃಷ್ಣದಾಸ್ ಬ್ರಹ್ಮಚಾರಿ ಅವರನ್ನು ಬಂಧಿಸಿರುವುದಕ್ಕೆ ಕೇಂದ್ರ ಸಚಿವ ಗಿರಿರಾಜ್ ಸಿಂಗ್ ಕಿಡಿಕಾರಿದ್ದಾರೆ. ಚಿನ್ಮಯಿ ಅವರ ಬಂಧನವು ಮಾನವೀಯತೆ ಮೇಲೆ ನಡೆಸಿದ ದಾಳಿ ಎಂದು ಕಟುವಾಗಿ ಹೇಳಿದ್ದಾರೆ. ಬಾಂಗ್ಲಾದೇಶದ ಮಧ್ಯಂತರ ಸರ್ಕಾರದ ಅವಧಿಯಲ್ಲಿ ಹಿಂದೂಗಳ ಮೇಲೆ ನಡೆಯುತ್ತಿರುವ ದಾಳಿಯು, ಆ ದೇಶವು ಮೂಲಭೂತವಾದಿಗಳ ಹಿಡಿತದಲ್ಲಿ ಸಿಲುಕಿದೆ ಎಂಬುದನ್ನು ಪ್ರತಿಬಿಂಬಿಸುತ್ತಿದೆ. ಈ ವಿಚಾರದಲ್ಲಿ ವಿಶ್ವಸಂಸ್ಥೆ ಮಧ್ಯ ಪ್ರವೇಶಿಸಬೇಕು ಎಂದು ಒತ್ತಾಯಿಸಿದ್ದಾರೆ. ಸಂಸತ್ತಿನ ಆವರಣದಲ್ಲಿ ಮಾಧ್ಯಮದವರೊಂದಿಗೆ



ಮಾತನಾಡಿರುವ ಸಿಂಗ್, ಬಾಂಗ್ಲಾದೇಶದ ಉಸ್ತುವಾರಿ ಪ್ರಧಾನಿಯು ಮೂಲಭೂತವಾದಿಗಳ ಹಿಡಿತದಲ್ಲಿ ಸಿಲುಕಿದ್ದಾರೆ. ಹಿಂದೂಗಳ ಮೇಲಿನ ದಾಳಿಯು ಮಾನವೀಯತೆ ಮೇಲಿನ ದಾಳಿಯಾಗಿದೆ. ವಿಶ್ವಸಂಸ್ಥೆಯು ಈ ವಿಚಾರದಲ್ಲಿ ಮಧ್ಯ ಪ್ರವೇಶಿಸಬೇಕು' ಎಂದು ಹೇಳಿದ್ದಾರೆ.

ಬಾಂಗ್ಲಾ ಮಧ್ಯಂತರ ಸರ್ಕಾರವನ್ನು ಮುಹಮ್ಮದ್ ಯೂನುಸ್ ಅವರು ಮುನ್ನಡೆಸುತ್ತಿದ್ದಾರೆ.

ಬಾಂಗ್ಲಾದೇಶದ ರಾಷ್ಟ್ರಧ್ವಜಕ್ಕೆ ಅಗೌರವ ತೋರಿದ್ದಕ್ಕಾಗಿ ದೇಶದ್ರೋಹದ ಆರೋಪ ಎದುರಿಸುತ್ತಿರುವ 'ಸಮ್ಮಿಲಿಶ್ ಸನಾತನಿ ಜಾಗರಣ ಜೊತೆ' ಎಂಬ ಹಿಂದೂ ಸಂಘಟನೆಯ ಮುಖಂಡ ಕೃಷ್ಣದಾಸ್ ಅವರು ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಬಾಂಗ್ಲಾದೇಶದ ನ್ಯಾಯಾಲಯ ವಜಾಗೊಳಿಸಿದೆ. ಇದರ ಬೆನ್ನಲ್ಲೇ ಅವರನ್ನು ಜೈಲಿಗೆ ಕಳುಹಿಸಲಾಗಿದೆ. ಚಿತ್ತಗಾಂಗ್‌ನ ಆರನೇ ಮೆಟ್ರೊಪಾಲಿಟನ್ ಮ್ಯಾಜಿಸ್ಟ್ರೇಟ್ ಖಾಜಿ ಷರೀಫುಲ್ ಇಸ್ಲಾಂ ಅವರು ಜಾಮೀನು ಅರ್ಜಿ ವಜಾ ಮಾಡಿದ್ದಾರೆ. ಎಂದು ಸ್ಥಳೀಯ ಮಾಧ್ಯಮಗಳು ಮಂಗಳವಾರ ವರದಿ ಮಾಡಿವೆ. ದಾಸ್ ಅವರನ್ನು ಢಾಕಾದ ವಿಮಾನ ನಿಲ್ದಾಣದಲ್ಲಿ ಸೋಮವಾರ ಬಂಧಿಸಲಾಗಿತ್ತು.

ಭರಗಾವ್ ನ್ಯಾಯಾಲಯಕ್ಕೆ ಭಾರಿ ಬಂದೋಬಸ್‌ನಲ್ಲಿ ಮಂಗಳವಾರ ಕರೆತರಲಾಗಿತ್ತು. ಬಂಧನದ ಸುದ್ದಿ ತಿಳಿಯುತ್ತಿದ್ದಂತೆಯೇ ಬಾಂಗ್ಲಾದೇಶದ ಹಲವಡ ಹಿಂದೂ ಸಮುದಾಯದವರು ಪ್ರತಿಭಟನೆ ನಡೆಸಿದ್ದರು. ನ್ಯಾಯಾಲಯಕ್ಕೆ, ಹಾಜರಾದ ವೇಳೆ, ಅಲ್ಲಿ ಜಮಾಯಿಸಿದ್ದ ಹಿಂದೂ ಸಮುದಾಯದವರಿಗೆ ನಮಸ್ಕರಿಸಿದ್ದ ಸ್ವಪ್ನದಾಸ್, ಧಾರ್ಮಿಕ ಘೋಷಣೆಗಳನ್ನು ತೂಗದಂತೆ ಮನವಿ ಮಾಡಿದ್ದರು.

# ಏರ್ ಇಂಡಿಯಾ ಕಾರ್ಯಾಚರಣೆ ಸ್ಥಗಿತಗೊಳಿಸಿ ಅಮೆರಿಕ–ಬ್ರಿಟನ್‌ಗೆ ಪನ್ನೂನ್ ಬೆದರಿಕೆ

**ವಾಷಿಂಗ್ಟನ್, ನ.27 :** ಬ್ರಿಟನ್ ಮತ್ತು ಆಸ್ಟ್ರೇಲಿಯಾದಲ್ಲಿ ಏರಿಂಡಿಯಾ ಕಾರ್ಯನಿರ್ವಹಣೆಯನ್ನು ಜನವರಿ 26ರ ಒಳಗೆ ಮುಚ್ಚುವಂತೆ ಖಾಲಿಸ್ತಾನ್ ನಾಯಕ ಗುರುಪತ್ವಂತ್ ಸಿಂಗ್ ಪನ್ನೂನ್ ಬೆದರಿಕೆ ಒಡ್ಡಿರುವುದಾಗಿ ಆರೋಪ ಕೇಳಿ ಬಂದಿದೆ. ಭಾರತೀಯ ಆರ್ಥಿಕತೆಯನ್ನು ಕೊಲ್ಲಲು ರಕ್ತರಹಿತ ಯುದ್ಧವನ್ನು ಪ್ರಾರಂಭಿಸಲು ಯೋಜಿಸಲಾಗಿದ್ದು ಅಮೆರಿಕನ್ನರು ಭಾರತೀಯ ಕೈಗಾರಿಕೆಗಳಿಗೆ ಅವಕಾಶ ನೀಡಬಾರದು. ತಡೆಯುವುದು ಮತ್ತು ನಿಷೇಧಿಸುವುದು.


ಉದ್ಯೋಗಗಳನ್ನು ಸೃಷ್ಟಿಸುವುದು ಹಾಗೂ ಭಾರತೀಯ ಕೈಗಾರಿಕೆಗಳನ್ನು ಅಮೆರಿಕದ ಕೈಗಾರಿಕೆಗಳನ್ನು ಬಲಪಡಿಸುವ ಏಕೈಕ ಮಾರ್ಗವೆಂದರೆ ಗುರುಪತ್ವಂತ್‌ಸಿಂಗ್ ಮುಖ್ಯಸ್ಥ ಪನ್ನೂನ್ ಹೇಳಿರುವುದಾಗಿ ವರದಿಯಾಗಿದೆ. ಖಾಲಿಸ್ತಾನ್ ಪ್ರತ್ಯೇಕತಾವಾದಿ ಗುಂಪು ಸಿಖ್ ಭಾರತದ ಆರ್ಥಿಕತೆಯನ್ನು ಕೊಲ್ಲಲು ರಕ್ತರಹಿತ ಯುದ್ಧವನ್ನು ಪ್ರಾರಂಭಿಸಲಿದ್ದೇವೆ' ಎಂದು ಎಚ್ಚರಿಕೆ ನೀಡಿದ್ದಾರೆ..

# ವಿಶ್ವ ವೇಟ್‌ಲಿಫ್ಟಿಂಗ್: ಹಿಂದೆಸರಿದ ಮೀರಾ



**ನವದೆಹಲಿ, ನ.27 :** ಒಲಿಂಪಿಯನ್ ವೇಟ್‌ಲಿಫ್ಟರ್ ಮೀರಾಬಾಯಿ ಚಾನು ಅವರು ಮುಂದಿನ ವಾರ ಮನಾಮದಲ್ಲಿ ನಡೆಯಲಿರುವ ವಿಶ್ವ ವೇಟ್‌ಲಿಫ್ಟಿಂಗ್ ಚಾಂಪಿಯನ್‌ಶೀಪ್‌ನಲ್ಲಿ ಸ್ಪರ್ಧಿಸುತ್ತಿಲ್ಲ. ಅವರು ತಮ್ಮ ಗಾಯಕ್ಕೆ ಆರೈಕೆ ಪಡೆಯುತ್ತಿರುವುದರಿಂದ ವಿಶ್ವ ಸ್ಪರ್ಧೆಯಿಂದ ಹಿಂದೆ ಸರಿದಿದ್ದಾರೆ. ಕಳೆದ ಆಗಸ್ಟ್‌ನಲ್ಲಿ ಮೀರಾಬಾಯಿ ಅವರು ಪ್ಯಾರಿಸ್ ಒಲಿಂಪಿಕ್ ಕೂಟದಲ್ಲಿ ನಡೆದಿದ್ದ ಮಹಿಳೆಯರ 49 ಕೆ.ಜಿ. ವಿಭಾಗದಲ್ಲಿ ನಾಲ್ಕನೇ ಸ್ಥಾನ ಪಡೆದಿದ್ದರು. ಅದರ ನಂತರ ಅವರು ಬೇರೆ ಯಾವುದೇ ಸ್ಪರ್ಧೆಗಳಲ್ಲಿಯೂ ಭಾಗವಹಿಸಿಲ್ಲ. ಪ್ಯಾರಿಸ್ ಒಲಿಂಪಿಕ್ಸ್ ನಂತರ ಮೀರಾ ಅವರು ಗಾಯದ ಚಿಕಿತ್ಸೆ ಮತ್ತು ಆರೈಕೆಯಲ್ಲಿದ್ದಾರೆ. ಅದರಿಂದಾಗಿ ಅವರು ವಿಶ್ವ ಚಾಂಪಿಯನ್‌ಶಿಪ್‌ನಲ್ಲಿ ಭಾಗವಹಿಸುತ್ತಿಲ್ಲ ಎಂದು ರಾಷ್ಟ್ರೀಯ ಮುಖ್ಯ ಕೋಚ್ ವಿಜಯ್ ಶರ್ಮಾ ತಿಳಿಸಿದ್ದಾರೆ. ಮೀರಾ ಅವರ ಗೈರು ಹಾಜರಿಯಲ್ಲಿ ಜ್ಞಾನೇಶ್ವರಿ ಯಾದವ್ ಅವರು ವಿಶ್ವ ಚಾಂಪಿಯನ್ ಶೀಪ್‌ನಲ್ಲಿ ಭಾರತ ತಂಡದ ನಾಯಕತ್ವ ವಹಿಸುವರು. 21 ವರ್ಷದ ಜ್ಞಾನೇಶ್ವರಿ 49 ಕೆ.ಜಿ. ವಿಭಾಗದಲ್ಲಿ ಸ್ಪರ್ಧಿಸಲಿದ್ದಾರೆ. ಕಾಮನ್ವೆಲ್ತ್ ಕೂಟದ ಬೆಳ್ಳಿ ಪದಕ ವಿಜೇತೆ ಬಿಂದ್ಯಾರಾಣಿ ದೇವಿ (55 ಕೆ.ಜಿ) ಮತ್ತು ಖೇಲೋ ಇಂಡಿಯಾ ವೇಟ್ಲಿಫ್ಟಿಂಗ್ ಚಿನ್ನದ ಪದಕ ವಿಜೇತೆ ಡಿಟಿಮೋನಿ ಸೊನೊವಾಲ್ (64ಕೆಜಿ) ಕೂಡ ಭಾಗವಹಿಸಲಿದ್ದಾರೆ.

# ಸೈಯದ್ ಮೋದಿ ಸೂಪರ್ ಬ್ಯಾಡ್ಮಿಂಟನ್ ಸಿಂಧು, ಲಕ್ಷ್ಯ ಸೇನ್ ಶುಭಾರಂಭ



**ಲಖನೌ, ನ.27:** ಅಗ್ರ ಶ್ರೇಯಾಂಕದ ಪಿ.ವಿ.ಸಿಂಧು ಮತ್ತು ಲಕ್ಷ ಸೇನ್ ಅವರು ಬುಧವಾರ ನೇರ ಗೇಮ್‌ಗಳ ಗೆಲುವಿನೊಡನೆ, ಸೈಯದ್ ಮೋದಿ ಅಂತರರಾಷ್ಟ್ರೀಯ ಸೂಪರ್ 300 ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಕ್ರಮವಾಗಿ ಮಹಿಳಾ ಮತ್ತು ಪುರುಷರ ಸಿಂಗಲ್ಸ್ ಎರಡನೇ ಸುತ್ತಿನಲ್ಲಿ ತಲುಪಿದರು. ಎರಡು ಬಾರಿಯ ಒಲಿಂಪಿಕ್ ಪದಕ ವಿಜೇತೆ ಸಿಂಧು ಮೊದಲ ಸುತ್ತಿನ 21–17, 21–15 ರಿಂದ ಸ್ವದೇಶದ ಉದಯೋನ್ಮುಖ ಆಟಗಾರ್ತಿ ಅನ್ಮೋಲ್ ಖಾರ್ಬ್ ಅವರನ್ನು ಸೋಲಿಸಿದರು.

2021ರ ವಿಶ್ವ ಚಾಂಪಿಯನ್ಷಿಪ್ ಕಂಚಿನ ಪದಕ ವಿಜೇತ ಲಕ್ಷ ಪುರುಷರ ಸಿಂಗಲ್ಸ್‌ನಲ್ಲಿ 21–12, 21–12ರಲ್ಲಿ ಮಲೇಷ್ಯಾದ ಕ್ಯಾಲಿಫೈಯರ್ ಶೋಲೇ ಐದಿಲ್ ಅವರನ್ನು ಹಿಮ್ಮೆಟ್ಟಿಸಿದರು. ಸಿಂಧು ಎರಡನೇ ಸುತ್ತಿನಲ್ಲಿ ಸ್ವದೇಶದವರೇ ಆದ ಇರಾ ಶರ್ಮಾ ಅವರನ್ನು ಎದುರಿಸಲಿದ್ದಾರೆ. ಇರಾ ಇನ್ನೊಂದು ಪಂದ್ಯದಲ್ಲಿ 21–13, 21–19 ರಿಂದ ದೀಪ್ತಿಕಾ ಸಿಂಗ್ ಅವರನ್ನು ಮಣಿಸಿದರು.

ಮಹಿಳೆಯರ ಸಿಂಗಲ್ಸ್ ನಲ್ಲಿ ಎರಡನೇ ಶ್ರೇಯಾಂಕದ ಮಾಳವಿಕಾ ಬನ್ಸೋಡ್, ಐದನೇ ಶ್ರೇಯಾಂಕದ ಅನುಪಮಾ ಉಪಾಧ್ಯಾಯ, ಇಶಾರಾಣಿ ಬರೂವಾ, ದೇವಿಕಾ ಸಿಹಾಗ್, ಉನ್ನತಿ ಹೂಡ ಮತ್ತು ಶ್ರೀಯಾಂಶಿ ವಲಿಶೆಟ್ಟಿ ಅವರೂ ಮುನ್ನಡೆದರು. ಮಾಳವಿಕಾ 21–16, 21–17 ರಿಂದ ವಿಕ್ಟೋರಿಯಾ ದಾಬಿನ್ಸ್ಕಾ ಅವರನ್ನು, ಅನುಪಮಾ 19–21, 22–20, 21–15 ರಿಂದ ಅಜರ್‌ಬೈಜಾನ್‌ನ ಕೀಶಾ ಫಾತಿಮಾ ಅಝಾರಾ ಅವರನ್ನು, ಉನ್ನತಿ 21–12, 21–16 ರಿಂದ ಥಾಯ್ಲೆಂಡ್ ಥಮೋನ್ನಾನ್ ನಿಥಿಟಿಕೈ ಅವರನ್ನು ಪರಾಭವಗೊಳಿಸಿದರು.

ಪುರುಷರ ವಿಭಾಗ ಸಿಂಗಲ್ಸ್ ಮೊದಲ ಸುತ್ತಿನಲ್ಲಿ ಕಿರಣ್ ಜಾರ್ಜ್ 21–12, 23–21ರಲ್ಲಿ ಅಲಾಪ್ ಮಿಶ್ರಾ ಅವರನ್ನು, ಆಯುಷ್ ಶೆಟ್ಟಿ 21–18, 15–21, 21–16 ರಿಂದ ರಘು ಮರಿಸ್ವಾಮಿ ಅವರನ್ನು, ಮೀರಬಾ ಲುವಾಂಗ್ ಮೈಸ್ನಮ್ 14–21, 21–19, 21–10 ರಿಂದ ಥಾಯ್ಲೆಂಡ್‌ನ ಸರನ್ ಜಮ್ಸಿ ಅವರನ್ನು ಸೋಲಿಸಿದರು.

# ಪಾಕ್‌ನಲ್ಲಿ ನಾಲ್ವರ ಸಾವು: ಪ್ರತಿಭಟನೆ ಕೈಬಿಟ್ಟ ಇಮ್ರಾನ್ ಬೆಂಬಲಿಗರು



**ಇಸ್ಲಾಮಾಬಾದ್, ನ.27 :** ಹಿಂಸಾಚಾರದಿಂದಾಗಿ ಸಾವು ನೋವು ಹೆಚ್ಚಿದ್ದರಿಂದ, ಮಾಜಿ ಪ್ರಧಾನಿ ಇಮ್ರಾನ್ ಖಾನ್ ನೇತೃತ್ವದ ಪಾಕಿಸ್ತಾನ್ ತೆಹ್–ಎ– ಇನ್ಸಾಫ್ (ಪಿಟಿಐ) ಪಕ್ಷವು ತನ್ನ ಪ್ರತಿಭಟನೆಯನ್ನು ಬುಧವಾರ ಹಿಂಪಡೆದಿದೆ. ಮಧ್ಯರಾತ್ರಿಯಲ್ಲಿ ಅಧಿಕಾರಿಗಳು ನಡೆಸಿದ ದೌರ್ಜನ್ಯದಿಂದ ಕನಿಷ್ಠ ನಾಲ್ವರ ಹತ್ಯೆಯಾಗಿದ್ದು, 50ಕ್ಕೂ ಹೆಚ್ಚು ಕಾರ್ಯಕರ್ತರು ಗಾಯಗೊಂಡಿದ್ದಾರೆ ಎಂದು ಪಿಟಿಐ ಹೇಳಿಕೊಂಡಿದೆ. ಆದರೆ, ಭದ್ರತಾ ಸಿಬ್ಬಂದಿಯೊಂದಿಗೆ ನಡೆದ ಹಿಂಸಾತ್ಮಕ ಘರ್ಷಣೆಯಲ್ಲಿ 'ನೂರಾರು' ಜನರು ಮೃತಪಟ್ಟಿದ್ದಾರೆ ಎನ್ನಲಾಗಿದೆ.

ಮಾಜಿ ಪ್ರಧಾನಿಯ ಪತ್ನಿ ಬುಶ್ರಾ ಬೀಬಿ ಮತ್ತು ಖೈಬರ್ ಪಂಖ್ತುಖ್ವಾ ಪ್ರಾಂತ್ಯದ ಮುಖ್ಯಮಂತ್ರಿ ಅಲ್ಲಿ ಅಮೀನ್ ಗಂಡಾಪುರ ಅವರು ಇಸ್ಲಾಮಾಬಾದ್‌ನತ್ತ ಕಾರ್ಯಕರ್ತರೊಂದಿಗೆ ಪ್ರತಿಭಟನಾ ರಾಲಿಯನ್ನು ಮುನ್ನಡೆಸುತ್ತಿದ್ದಾರೆ ಎಂಬ ಸುದ್ದಿಯನ್ನು ಪಿಟಿಐ ಅಲ್ಲಗಳೆದಿದೆ. 450ಕ್ಕೂ ಹೆಚ್ಚು ಪ್ರತಿಭಟನಕಾರರನ್ನು ಬಂಧಿಸಲಾಗಿದೆ ಎಂದು ಪೊಲೀಸ್–ಪಿಟಿಐ ಕಾರ್ಯಕರ್ತರ ಪ್ರತಿಭಟನೆಯಿಂದಾಗಿ ಎಂಟು ವಿಮಾನಗಳ ಸಂಬಾರ ರಾದರೆ, 17 ವಿಮಾನಗಳ ಸಂಚಾರದಲ್ಲಿ ವಿಳಂಬವಾಯಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪ್ರತಿಭಟನೆ ಸ್ಥಗಿತಗೊಂಡ ಬಳಿಕ ರಸ್ತೆಗಳು ಸಂಚಾರಕ್ಕೆ ಮುಕ್ತವಾಗಿವೆ.

# ವಿಶ್ವ ಚದುರಂಗದಾಟ ಗುಕೇಶ್‌ಗೆ ಗೆಲುವು



**ಸಿಂಗಪುರ, ನ.27 :** ವಿಶ್ವ ಚೆಸ್ ಚಾಂಪಿಯನ್ಷಿಪ್‌ನಲ್ಲಿ ಬುಧವಾರ ನಡೆದ ಮೂರನೇ ಸುತ್ತಿನಲ್ಲಿ ಭಾರತದ ಗ್ರಾಂಡ್ ಮಾಸ್ಟರ್ ಗುಕೇಶ್ ಗೆಲುವು ಸಾಧಿಸಿದ್ದಾರೆ. ಆ ಮೂಲಕ ಹಾಲಿ ಚಾಂಪಿಯನ್ ಡಿಂಗ್ ಲಿರೆನ್‌ಗೆ ತಿರುಗೇಟು ನೀಡಿದ್ದಾರೆ. ಗುಕೇಶ್ ಮೊದಲ ಪಂದ್ಯದಲ್ಲಿ ಸೋಲು ಕಂಡಿದ್ದರೆ ಮಂಗಳವಾರ ನಡೆದ ಎರಡನೇ ಪಂದ್ಯದಲ್ಲಿ ಡ್ರಾ ಫಲಿತಾಂಶಕ್ಕೆ ತೃಪ್ತಿಪಟ್ಟುಕೊಂಡಿದ್ದರು.

ಪಂದ್ಯದ 37ನೇ ನಡೆಯ ನಂತರ ಚೀನಾದ ಆಟಗಾರನ ವಿರುದ್ಧ ಗುಕೇಶ್ ಮೇಲುಗೈ ಸಾಧಿಸಿದ್ದಾರೆ. ಅಲ್ಲದೆ ಟೂರ್ನಿಯಲ್ಲಿ ಮೊದಲ ಗೆಲುವು ದಾಖಲಿಸಿದ್ದಾರೆ. ಇದರೊಂದಿಗೆ 1.5–1.5 ಅಂಕಗಳ ಸಮಬಲ ಸಾಧಿಸಿದ್ದಾರೆ. 21 ಕೋಟಿ ಬಹುಮಾನ ಮೊತ್ತ ಹೊಂದಿರುವ ಈ ಚಾಂಪಿಯನ್‌ಶಿಪ್ ಫೈನಲ್ ಪಂದ್ಯ 14 ಆಟಗಳನ್ನು ಹೊಂದಿದೆ. ಮೊದಲು 7.5 ಅಂಕ ತಲುಪುವ ಆಟಗಾರ ವಿಶ್ವ ಚಾಂಪಿಯನ್ ಪಟ್ಟಕ್ಕೇರಲಿದ್ದಾರೆ.

18 ವರ್ಷದ ಗುಕೇಶ್, ವಿಶ್ವನಾಥನ್ ಆನಂದ್ ನಂತರ ಭಾರತದ ಎರಡನೇ ವಿಶ್ವ ಚಾಂಪಿಯನ್ ಆಗುವ ಯತ್ನದಲ್ಲಿದ್ದಾರೆ. ಆನಂದ್ ಐದು ಬಾರಿ (2000–2013 ಅವಧಿಯಲ್ಲಿ) ವಿಶ್ವ ಚಾಂಪಿಯನ್ ಆಗಿದ್ದರು ವಿಶ್ವ ಚೆಸ್ ಚಾಂಪಿಯನ್‌ಶಿಪ್ ಫೈನಲ್ ಗುಕೇಶ್‌ಗೆ ಕೈಕೊಟ್ಟ ಪ್ರಯೋಗ.

# ಒಲಿಂಪಿಕ್ಸ್ ಪದಕ ವಿಜೇತ ಕುಸ್ತಿಪಟು ಬಜರಂಗ್ ಪುನಿಯಾಗೆ ನಿಷೇಧ

**ನವದೆಹಲಿ, ನ. 27:** ರಾಷ್ಟ್ರೀಯ ಉದ್ದೀಪನ ಮದ್ದು ತಡೆ ಸಂಸ್ಥೆ ಕುಸ್ತಿಪಟು ಬಜರಂಗ್ ಪುನಿಯಾ ಅವರನ್ನ ನಾಲ್ಕು ವರ್ಷಗಳ ಕಾಲ ಬ್ಯಾನ್ ಮಾಡಿದೆ. ಮಾರ್ಚ್ 10 ರಂದು ಸೋನೆಪತ್ನಲ್ಲಿ ನಡೆದ ರಾಷ್ಟ್ರೀಯ ತಂಡದ ಆಯ್ಕೆಗೆ ನಡೆದ ಟ್ರಯಲ್ಸ್ನಲ್ಲಿ ಆಯ್ಕೆಯಾದ ನಂತರ ಪುನಿಯಾ ಮೂತ್ರದ ಮಾದರಿಯನ್ನು ಪರೀಕ್ಷೆಗೆ ನೀಡಲಿ ನಿರಾಕರಿಸಿದರು. ಇದನ್ನು ನಿಯಮ ಬಾಹಿರ ಎಂದು ಪರಿಗಣಿಸಿರುವ ನಾಡಾ ಪೂನಿಯಾರನ್ನ ನಾಲ್ಕು ವರ್ಷಗಳ ಕಾಲ ಬ್ಯಾನ್ ಮಾಡಿದೆ. ಕಳೆದ ಏಪ್ರಿಲ್ 23ರಂದು ಪುನಿಯಾರನ್ನ ನಾಡಾ ಮೊದಲಬಾರಿಗೆ ಅಮಾನತುಗೊಳಿಸಿತ್ತು. ನಂತರ ವಿಶ್ವ ಕುಸ್ತಿ ಆಡಳಿತ ಮಂಡಳಿ ಸಹ ಅವರನ್ನ ಅಮಾನತುಗೊಳಿಸಿತ್ತು. ಇದರ ವಿರುದ್ಧ ಪುನಿಯಾ ಮೇಲ್ಮನವಿ ಸಲ್ಲಿಸಿದ್ದರು. ಆದ್ರೆ ನಾಡಾದ ಆಂಟಿ–ಡಿಸಿಪ್ಲಿನರಿ ಡೋಪಿಂಗ್ ಪ್ಯಾನೆಲ್ ಮುಂದಿನ ಸೂಚನೆ ನೀಡುವವರೆಗೆ ಮೇಲ್ಮನವಿಯನ್ನು ರದ್ದುಗೊಳಿಸಿತ್ತು. ನಾಡಾಗೆ ಮೂತ್ರ ಮಾದರಿಯನ್ನು ನೀಡದೇ ಇದ್ದದ್ದು ಯಾಕೆ? ಎಂದು ಜೂನ್ 23 ರಂದು ಕುಸ್ತಿಪಟುಗೆ ನೋಟಿಸ್ ನೀಡಿತ್ತು. ಸೆಪ್ಟೆಂಬರ್ 20 ಮತ್ತು ಅಕ್ಟೋಬರ್ 4 ರಂದು ವಿಚಾರಣೆ ನಡೆಸಲಾಗಿತ್ತು. ಇದೀಗ ಆದೇಶ ಪ್ರಕಟಿಸಿರುವ ಎಡಿಡಿಪಿ, ಕಲಂ 10.3.1 ರ ಅಡಿಯಲ್ಲಿ ನಿರ್ಬಂಧಗಳಿಗೆ ಅಥ್ಲೀಟ್ ಹೊಣೆಗಾರನಾಗಿರುತ್ತಾನೆ ಮತ್ತು 4 ವರ್ಷಗಳ ಅವಧಿಗೆ ಅನರ್ಹತೆಗೆ ಹೊಣೆಗಾರನಾಗಿರುತ್ತಾನೆ ಎಂದು ಹೇಳಿದೆ. ಈ ಸಂದರ್ಭದಲ್ಲಿ ಬಜರಂಗ್ ಪುನಿಯಾ ಸ್ಪರ್ಧಾತ್ಮಕ ಕುಸ್ತಿಗೆ ಮರಳಲು ಮತ್ತು ವಿದೇಶದಲ್ಲಿ ಕೋಚಿಂಗ್ ಕೆಲಸಕ್ಕೆ ಅರ್ಜಿ ಸಲ್ಲಿಸಲು ಸಾಧ್ಯವಾಗುವುದಿಲ್ಲ ಎಂದು ಸಹ ತನ್ನ ಆದೇಶದಲ್ಲಿ ತಿಳಿದಿದೆ. ಕೆಲ ದಿನಗಳ ಹಿಂದೆಯಷ್ಟೇ ವಿನೇಶ್ ಫೋಗಟ್, ಬಜರಂಗ್ ಪುನಿಯಾ ಕಾಂಗ್ರೆಸ್ ಸೇರ್ಪಡೆಯಾದರು. ಆನಂತರ ಪೂನಿಯಾ ಅವರನ್ನ ಅಖಿಲ ಭಾರತ ಕಿಸಾನ್ ಕಾಂಗ್ರೆಸ್ನ ಕಾರ್ಯಾಧ್ಯಕ್ಷರನ್ನಾಗಿ ನೇಮಿಸಲಾಯಿತು. ಇದಕ್ಕೂ ಮುನ್ನ ಅವರು ರೈಲ್ವೆ ಉದ್ಯೋಗಕ್ಕೆ ರಾಜೀನಾಮೆ ನೀಡಿದ್ದರು.



ಮಂಗಳವಾರದಂದು ಜರ್ಮನಿಯ ಮ್ಯೂನಿಚ್‌ನಲ್ಲಿ ನಡೆದ UEFA ಚಾಂಪಿಯನ್ಸ್ ಲೀಗ್‌ನಲ್ಲಿ ಬೇಯರ್ನ್ ಮ್ಯೂನಿಚ್ ಮತ್ತು ಪ್ಯಾರಿಸ್ ಸೇಂಟ್–ಜರ್ಮೈನ್ ನಡುವಿನ ಲೀಗ್ ಹಂತದ ಪಂದ್ಯದ ಸಂದರ್ಭದಲ್ಲಿ ಬೇಯರ್ನ್ ಮ್ಯೂನಿಚ್‌ನ ಹ್ಯಾರಿ ಕೇನ್ ಪ್ಯಾರಿಸ್ ಸೇಂಟ್–ಜರ್ಮೈನ್‌ನ ಮಾರ್ಕ್ವಿನೋಸ್‌ನೊಂದಿಗೆ ಸ್ಪರ್ಧಿಸಿದರು.

# ಬಿಜೆಪಿ ಸೇರಿದರೆ ಅಮಾನತು ತೆರವಾಗಬಹುದು: ಪುನಿಯಾ



**ನವದೆಹಲಿ, ನ. 27:** ಒಂದು ವೇಳೆ ಬಿಜೆಪಿಗೆ ಸೇರಿದರೆ ನನ್ನ ಮೇಲಿನ ಅಮಾನತು ತೆರವುಗೊಳ್ಳಲಿದೆ ಎಂದು ಒಲಿಂಪಿಕ್ ಪದಕ ವಿಜೇತ ಭಾರತೀಯ ಕುಸ್ತಿಪಟು ಬಜರಂಗ್ ಪುನಿಯಾ ಹೇಳಿದ್ದಾರೆ. ಉದ್ದೀಪನ ಮದ್ದು ಪರೀಕ್ಷೆಗೆ (ಡೋಪ್ ಟೆಸ್ಟ್) ಮಾದರಿ ನೀಡಲು ನಿರಾಕರಿಸಿದ ಕಾರಣಕ್ಕೆ ನಾಲ್ಕು ವರ್ಷಗಳ ಅವಧಿಗೆ ಮಾನತುಗೊಂಡ ಬಳಿಕ ಅವರು ಈ ಪ್ರತಿಕ್ರಿಯೆ ನೀಡಿದ್ದಾರೆ.

ಮಾರ್ಚ್ 10ರಂದು ರಾಷ್ಟ್ರೀಯ ತಂಡಕ್ಕೆ ಆಯ್ಕೆ ಟ್ರಯಲ್ಸ್ ಸಂದರ್ಭದಲ್ಲಿ ಮಾದರಿ ನೀಡಲು ನಿರಾಕರಿಸುವ ಮೂಲಕ ಬಜರಂಗ್ ನಿಯಮಗಳನ್ನು ಉಲ್ಲಂಘಿಸಿದ್ದಾರೆ ಎಂದು ರಾಷ್ಟ್ರೀಯ ಉದ್ದೀಪನ ಮದ್ದು ತಡೆ ಘಟಕ (ನಾಡಾ) ಹೇಳಿದೆ. ಇದೇ ಆರೋಪದಲ್ಲಿ ಏಪ್ರಿಲ್ 23ರಂದು ಬಜರಂಗ್ ಅವರನ್ನು ನಾಡಾ ಅಮಾನತು ಮಾಡಿತ್ತು. ಅದರಂತೆ ವಿಶ್ವ ಕುಸ್ತಿ ಒಕ್ಕೂಟವೂ (ಯುಡಬ್ಲ್ಯುಡಬ್ಲ್ಯು) ಅಮಾನತು ಮಾಡಿತ್ತು. ನನಗೆ ಆಘಾತವಾಗಿಲ್ಲ. ಕಳೆದ ಒಂದು ವರ್ಷದಿಂದ ವಿವಾದದ ಕುರಿತು ಚರ್ಚೆ ನಡೆಯುತ್ತಿದೆ. ನಾಡಾಗೆ ಮಾದರಿ ನೀಡಲು ನಾನು ನಿರಾಕರಿಸಿಲ್ಲ ಎಂದು ಹಿಂದೆಯೂ ಸ್ಪಷ್ಟಪಡಿಸಿದ್ದೇನೆ. ಉದ್ದೀಪನ ಮದ್ದು ಪರೀಕ್ಷೆ ನಡೆಸಲು ಅವಧಿ ಮುಗಿದ ಕಿಟ್ನೊಂದಿಗೆ (2023, ಡಿಸೆಂಬರ್) ನನ್ನ ಮನೆಗೆ ಭೇಟಿ ನೀಡಿದ್ದರು. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲೂ ನಾನು ಪೋಸ್ಟ್ ಹಂಚಿದ್ದೇನೆ ಎಂದು ಅವರು ಹೇಳಿದ್ದಾರೆ.

ಅವಧಿ ಮುಗಿದ ಕಿಟ್ ಆಟಗಾರನಿಗೆ ನೀಡುವಂತಿಲ್ಲ. ನನ್ನ ತಂಡದ ಗಮನಕ್ಕೂ ಬಂದಿದೆ. 2020, 2021, 2022ರ ಅವಧಿ ಮುಗಿದ ಕಿಟ್ ನೀಡಲಾಗಿತ್ತು. ನಾನು ಪರೀಕ್ಷೆಗೆ ಮೂತ್ರದ ಮಾದರಿಯನ್ನು ನೀಡಿದ್ದೇನೆ. ಆದರೆ, ನನ್ನ ತಂಡವು ಕಿಟ್ ಪರಿಶೀಲಿಸಿದಾಗ ಅವಧಿ ಮುಗಿದಿದೆ ಎಂದು ವಿಚಾರ ತಿಳಿದು ಬಂದಿದೆ. ಆದ್ದರಿಂದ ಕಿಟ್‌ನ ವಿಡಿಯೋ ಮಾಡಿ ನಾಡಾಗೆ ಮೇಲ್ ಮಾಡಿದ್ದೇವೆ. ಅವರ ತಪ್ಪಿನ ಬಗ್ಗೆ ಮಾಹಿತಿ ನೀಡಿದ್ದೇವೆ. ಆದರೆ, ತಪ್ಪು ಒಪ್ಪಿಕೊಳ್ಳಲು ಅವರು ಸಿದ್ಧರಿರಲಿಲ್ಲ. ಮಹಿಳಾ ಕುಸ್ತಿಪಟುಗಳ ಪ್ರತಿಭಟನೆಗೆ ನಾವು ಬೆಂಬಲ ನೀಡಿದ್ದರಿಂದ ಸರ್ಕಾರ ನನ್ನ ಮೇಲೆ ಸೇಡು ತೀರಿಸಲು ಯತ್ನಿಸುತ್ತಿದೆ? ಎಂದು ಪುನಿಯಾ ಆರೋಪ ಮಾಡಿದ್ದಾರೆ. ನಾನು ಕಳೆದ 10–12 ವರ್ಷಗಳಿಂದ ಸ್ಪರ್ಧಿಸುತ್ತಿದ್ದೇನೆ. ಎಲ್ಲಾ ಪಂದ್ಯಾವಳಿಗಳಿಗೂ ಮುನ್ನ ಮಾದರಿಯನ್ನು ನೀಡಿದ್ದೇನೆ. ಆದರೆ, ಸರ್ಕಾರದ ಉದ್ದೇಶವು ನಮ್ಮನ್ನು ಒಡೆಯುವುದು, ಅವರಿಗೆ ತಲೆ ಬಾಗುವಂತೆ ಮಾಡುವುದು. ನಾನು ಬಿಜೆಪಿಗೆ ಸೇರಿದರೆ ನನ್ನ ವಿರುದ್ಧದ ಎಲ್ಲಾ ಅಮಾನತು ಆದೇಶವನ್ನು ತೆಗೆದು ಹಾಕಬಹುದು ಎಂಬುದಾಗಿ ಭಾವಿಸುತ್ತೇನೆ ಎಂದು ಬಜರಂಗ್ ಪುನಿಯಾ ಹೇಳಿದ್ದಾರೆ.

ಅಮಾನತು ಆದೇಶದಂತೆ ಬಜರಂಗ್ ಪುನಿಯಾ 2028ರ ಏಪ್ರಿಲ್ವರೆಗೆ ಸ್ಪರ್ಧಾತ್ಮಕ ಕುಸ್ತಿಗೆ ಮರಳುವಂತಿಲ್ಲ. ಅಲ್ಲದೆ ವಿದೇಶದಲ್ಲಿ ತರಬೇತುದಾರ ಕೆಲಸ ವಹಿಸಲು ಸಾಧ್ಯವಿಲ್ಲ ಎಂದು ವರದಿಯಾಗಿದೆ. ಕುಸ್ತಿಪಟುಗಳಾದ ಸಾಕ್ಷಿ ಮಲಿಕ್, ಬಜರಂಗ್ ಪುನಿಯಾ ಮತ್ತು ವಿನೇಶ್ ಫೋಗಟ್ ಕಳೆದ ವರ್ಷ ಮಹಿಳಾ ಕುಸ್ತಿಪಟುಗಳ ಮೇಲಿನ ಲೈಂಗಿಕ ದೌರ್ಜನ್ಯ ಖಂಡಿಸಿ ದೊಡ್ಡಮಟ್ಟದ ಹೋರಾಟ ನಡೆಸಿದ್ದರು. ಭಾರತೀಯ ಕುಸ್ತಿ ಫೆಡರೇಶನ್ನಿನ (ಡಬ್ಲ್ಯುಎಫ್‌ಐ) ಮಾಜಿ ಅಧ್ಯಕ್ಷ ಹಾಗೂ ಬಿಜೆಪಿ ನಾಯಕ ಬ್ರಿಜ್‌ಭೂಷಣ್ ಸಿಂಗ್ ವಿರುದ್ಧ ಅವರು ಲೈಂಗಿಕ ಕಿರುಕುಳದ ಆರೋಪ ಮಾಡಿದ್ದರು. ಆ ಬಳಿಕ ಅವರು ಬಿಜೆಪಿಯ ಕೆಂಗಣ್ಣಿಗೆ ಗುರಿಯಾಗಿದ್ದಾರೆ.

ತಿಂಗಳ ಹಿಂದೆ ನಡೆದ ಹರಿಯಾಣ ವಿಧಾನಸಭೆ ಚುನಾವಣೆಗೂ ಮುನ್ನ ವಿನೇಶ್ ಫೋಗಟ್ ಮತ್ತು ಬಜರಂಗ್ ಪುನಿಯಾ ಕಾಂಗ್ರೆಸ್ ಸೇರಿದ್ದಾರೆ. ವಿನೇಶ್ ಫೋಗಟ್ ಚುನಾವಣೆಗೆ ಸ್ಪರ್ಧಿಸಿ ಗೆಲುವು ಸಾಧಿಸುವ ಮೂಲಕ ಶಾಸಕಿಯಾಗಿದ್ದಾರೆ. ಬಜರಂಗ್ ಪುನಿಯಾ ಈಗ ಅಮಾನತುಗೊಂಡಿದ್ದಾರೆ. ಮತ್ತೊಬ್ಬರು ಕುಸ್ತಿಪಟು ಸಾಕ್ಷಿ ಮಲಿಕ್ ಕುಸ್ತಿಗೆ ರಾಜೀನಾಮೆ ನೀಡಿದ್ದಾರೆ.